ಸಂಪುಟ: 05 ಸಂಚಿಕೆ: 19 ಪುಟಗಳು: 08 ಗುರುವಾರ 03 ಏಪ್ರಿಲ್ 2025
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ನಿಮ್ಮ ಮೊದಲ ಗೆಲುವಿನ ಬಳಿಕ ವಿಶ್ರಾಂತಿ ತೆಗೆದುಕೊಳ್ಳಬೇಡಿ. ಏಕೆಂದರೆ, ಒಂದೊಮ್ಮೆ ನೀವು ಎರಡನೇ ಪ್ರಯತ್ನದಲ್ಲಿ ವಿಫಲರಾದರೆ ನಿಮ್ಮ ಮೊದಲ ಗೆಲುವು ಕೇವಲ ಅದೃಷ್ಟ ಎಂದು ಹೇಳಲು ಹೆಚ್ಚಿನ ತುಟಿಗಳು ಕಾಯುತ್ತಿರುತ್ತವೆ.

# ಸಂಸತ್ ಗದ್ದಲ ನಮೋಗೆ ಬೆಂಬಲ

• ಉದಯವಾಹಿನಿ, ನವದೆಹಲಿ

ವಿಪಕ್ಷಗಳ ವಿರೋಧದ ನಡುವೆಯು ವಕ್ಫ್ ತಿದ್ದುಪಡಿ ಮಸೂದೆಯನ್ನು ಬುಧವಾರ ಲೋಕಸಭೆಯಲ್ಲಿ ಮಂಡಿಸಲಾಯಿತು. ಕೇಂದ್ರ ಸಂಸದೀಯ ವ್ಯವಹಾರ ಮತ್ತು ಅಲ್ಪಸಂಖ್ಯಾತ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಅವರು ಮಸೂದೆಯನ್ನು ಮಂಡಿಸಿದ್ದಾರೆ.
ಮಸೂದೆ ಮಂಡಿಸಿ ಮಾತನಾಡಿ ರಿಜಿಜು, 1995ರಲ್ಲಿ ಈ ಮಸೂದೆಯನ್ನು ಪರಿಚಯಿಸಿದಾಗ ಯಾರು ವಿರೋಧಿಸಿರಲಿಲ್ಲ. ಈ ಹಿಂದೆಯೂ ಹಲವು ಬಾರಿ ತಿದ್ದುಪಡಿಯಾಗಿದ್ದು ವಿರೋಧಗಳು ಬಂದಿರಲಿಲ್ಲ. ಈಗ ನಾವು ತಿದ್ದುಪಡಿ ಮಾಡಿದಾಕ್ಷಣ ಅಸಂವಿಧಾನಿಕ ಎಂದು ಅರಚುತ್ತಿದ್ದಾರೆ' ಎಂದರು.
ಈ ವಿಚಾರವಾಗಿ 25 ರಾಜ್ಯಗಳ ವಕ್ಫ್ ಬೋರ್ಡ್‌ಗಳ ಅಭಿಪ್ರಾಯ ಕೇಳಲಾಗಿದೆ. ಮಸೂದೆ ಕುರಿತು 96ಕ್ಕೂ ಹೆಚ್ಚು ಅರ್ಜಿಗಳನ್ನು ಸ್ವೀಕರಿಸಿದ್ದೇವೆ. ಈ ಮಸೂದೆ ಬಗ್ಗೆ ನಡೆದಷ್ಟು ಚರ್ಚೆ ಯಾವುದರಲ್ಲಿಯೂ ನಡೆದಿಲ್ಲ.
ಸಂಸದೀಯ ಜಂಟಿ ಸಮಿತಿಯಲ್ಲೂ ವಿಧೇಯಕದ ಬಗ್ಗೆ ಹೆಚ್ಚು ಚರ್ಚೆ ನಡೆದಿದೆ' ಎಂದು ಹೇಳಿದರು.
ಮುಸ್ಲಿಂ ಸಂಘಟನೆಗಳು ಹಾಗೂ ವಿರೋಧ ಪಕ್ಷಗಳು ಈ ಮಸೂದೆ ಮಂಡನೆಗೆ ಭಾರೀ ವಿರೋಧ ವ್ಯಕ್ತಪಡಿಸಿವೆ. ಈ ಮಸೂದೆಗೆ ಅನುಮೋದನೆ ಪಡೆಯುವ ಮುನ್ನವೇ ಲೋಕಸಭೆಯಲ್ಲಿ ಪರ–ವಿರೋಧ ಚರ್ಚೆಗಳನ್ನ ಮಾಡಲಾಯಿತು. ಸದನದಲ್ಲಿನ ಸಂಖ್ಯಾಬಲದ ಆಟದಿಂದ, ಸರ್ಕಾರ ಅದನ್ನು ಅಂಗೀಕರಿಸುತ್ತದೆ ಎಂದು ತೋರುತ್ತದೆ.
ಆದರೆ, ಪ್ರತಿಪಕ್ಷಗಳು ತಮ್ಮ ಒಗ್ಗಟ್ಟನ್ನು ಅವಲಂಬಿಸಿ ವಿಫಲಗೊಳಿಸುವುದಾಗಿ ಹೇಳಿಕೊಳ್ಳುತ್ತಿವೆ. ವಿರೋಧ ಪಕ್ಷವು ಇದನ್ನು ಅಂಗೀಕಾರವಾಗದಂತೆ ತಡೆಯುತ್ತದೆ ಎಂಬ ಭರವಸೆ ವ್ಯಕ್ತಪಡಿಸಿದೆ.

1. ಲೋಕಸಭೆಯಲ್ಲಿ ವಕ್ಫ್ ಕಾಯ್ದೆ ತಿದ್ದುಪಡಿ ಮಸೂದೆ ಮಂಡನೆ
2. ವಕ್ಫ್ ತಿದ್ದುಪಡಿ ಮಸೂದೆ ಮಂಡಿಸಿದ ಕೇಂದ್ರ ಸಚಿವ ಕಿರಣ್ ರಿಜಿಜು
3. ವಕ್ಫ್ ತಿದ್ದುಪಡಿಗೆ ಅಖಿಲ ಭಾರತ ಮುಸ್ಲಿಂ ವೈಯಕ್ತಿಕ ಕಾನೂನು ಮಂಡಳಿ ವಿರೋಧ
4. ಮಸೂದೆ ಅಂಗೀಕಾರವಾದರೆ ರಾಷ್ಟ್ರವ್ಯಾಪಿ ಚಳುವಳಿಯ ಎಚ್ಚರಿಕೆ





ಒಂದು ಬಾರಿ ವಕ್ಫ್ ಆಸ್ತಿ ಎಂದು ಘೋಷಿಸಲ್ಪಟ್ಟರೆ ಆ ಆಸ್ತಿ ಎಂದೆಂದಿಗೂ ವಕ್ಫ್ ಎಂಬ ಸಿದ್ಧಾಂತವು ಇದುವರೆಗೆ ಇತ್ತು. ಯಾವುದೇ

**ವಕ್ಫ್ ಆಸ್ತಿಗಳನ್ನು ವರ್ಗಾಯಿಸಲು ಸಾಧ್ಯವಿಲ್ಲ**

ಆಸ್ತಿಯನ್ನು ವಕ್ಫ್ ಆಸ್ತಿ ಎಂದು ಘೋಷಿಸುವ ಅಧಿಕಾರ ಈ ವಕ್ಫ್ ಬೋರ್ಡ್‌ಗೆ ಇತ್ತು. ಹಾಗೂ ಇದನ್ನು ಯಾವುದೇ ಕಾನೂನು ನ್ಯಾಯಾಲಯಗಳಲ್ಲಿ ವಿಚಾರಣೆ ಮಾಡುವ ಅಧಿಕಾರ ಯಾರಿಗೂ ಇರಲಿಲ್ಲ, ಇದರಿಂದ ಕಾನೂನುಬಾಹಿರ ಆಸ್ತಿ ಆಕ್ರಮಣಗಳು ಹೆಚ್ಚಾದವು. ವಕ್ಫ್ ನ್ಯಾಯಮಂಡಳಿಯ ತೀರ್ಮಾನಗಳನ್ನು ಉಚ್ಚ ನ್ಯಾಯಾಲಯಗಳಲ್ಲಿ ವಿಚಾರಣೆ ಮಾಡಲು ಸಾಧ್ಯವಿಲ್ಲ. ಇದರಿಂದ ಯಾವುದೇ ಆಸ್ತಿಯನ್ನು ಅವರು ವಕ್ಫ್ ಆಸ್ತಿ ಎಂದು ಘೋಷಿಸಿದರೆ ಆಸ್ತಿ ಮಾಲೀಕ ಅದನ್ನು ಕೋರ್ಟ್‌ನಲ್ಲಿ ಪ್ರಶ್ನಿಸುವಂತಿರಲಿಲ್ಲ.

**ಮೋದಿ ಜೀಗೆ ಧನ್ಯವಾದ ಎಂದ್ರು**

ನಗರದ ವಿವಿಧ ಮುಸ್ಲಿಂ ಸಮುದಾಯಗಳು ಮಸೂದೆಯನ್ನು ಬೆಂಬಲಿಸಿ ರ್‍ಯಾಲಿಗಳನ್ನು ನಡೆಸಿದ್ರು. ಮಹಿಳೆಯರ ಜೊತೆಗೆ ಪುರುಷರು ಕೂಡ ಹೆಚ್ಚಿನ ಸಂಖ್ಯೆಯಲ್ಲಿ ಬಂದು ಜಾಥಾ ನಡೆಸಿ ಬೆಂಬಲ ಸೂಚಿಸಿದ್ದಾರೆ. ಧನ್ಯವಾದಗಳು, ಮೋದಿ ಜಿ ಎಂದು ಬರೆದ ಪೋಸ್ಟರ್‌ಗಳನ್ನು ಹಿಡಿದಿದ್ದರು. ಪ್ರಧಾನಿ ನರೇಂದ್ರ ಮೋದಿಗೆ ಜೈಕಾರ ಕೂಗಿದ್ರು. ಕೆಂಪು ಗುಲಾಬಿಗಳನ್ನು ಹಿಡಿದು ತಮ್ಮ ಬೆಂಬಲವನ್ನು ವ್ಯಕ್ತಪಡಿಸಿದ್ರು.





**ವಕ್ಫ್ ತಿದ್ದುಪಡಿ ಮಸೂದೆ**

**ಸಂಸತ್‌ನಲ್ಲಿ ವಕ್ಫ್ ತಿದ್ದುಪಡಿ ಮಸೂದೆ ಮಂಡನೆ; ಗದ್ದಲ**

**ಲೋಕಸಭೆಯಲ್ಲಿ ವಕ್ಫ್ ತಿದ್ದುಪಡಿ ಮಸೂದೆ ಮಂಡಿಸಿದ ಸಚಿವ ಕಿರಣ್ ರಿಜಿಜು**

**ಮೋದಿ ಜೀಗೆ ಧನ್ಯವಾದ, ವಕ್ಫ್ ತಿದ್ದುಪಡಿ ಮಸೂದೆಗೆ ಮುಸ್ಲಿಂ ಮಹಿಳೆಯರಿಂದ ಅಚ್ಚರಿಯ ಬೆಂಬಲ!**

**ವಕ್ ಮಸೂದೆ ಮಂಡಿಸಿದ ರಿಜಿಜು**

ಜಂಟಿ ಸಂಸದೀಯ ಸಮಿತಿ ಪ್ರಸ್ತಾವಿತ ವಕ್ಫ್ (ತಿದ್ದುಪಡಿ) ಮಸೂದೆ, 2025 ಅನ್ನು ಇಂದು ಕೇಂದ್ರ ಅಲ್ಪಸಂಖ್ಯಾತ ಖಾತೆ ಸಚಿವ ಕಿರಣ್ ರಿಜಿಜು ಅವರು ಲೋಕಸಭೆಯಲ್ಲಿ ಮಂಡಿಸಿದ್ದಾರೆ.ಬಳಿಕ ಮಾತನಾಡಿದ ರಿಜಿಜು, ವಕ್ಫ್ (ತಿದ್ದುಪಡಿ) ಮಸೂದೆ ವಿಚಾರವಾಗಿ ಜಂಟಿ ಸಂಸದೀಯ ಸಮಿತಿ (ಜೆಪಿಸಿ) ನಡೆಸಿದ ವಿಸ್ತೃತ ಸಮಾಲೋಚನಾ ಪ್ರಕ್ರಿಯೆ ದೇಶದ ಪ್ರಜಾಪ್ರಭುತ್ವ ಇತಿಹಾಸದಲ್ಲೇ ನಡೆದ ಅತಿದೊಡ್ಡ ಸಮಾಲೋಚನಾ ಪ್ರಕ್ರಿಯೆ ಎಂದರು.ಈ ಕುರಿತು ಜೆಪಿಸಿ ವೈಯಕ್ತಿಕವಾಗಿ ಮತ್ತು ಆನ್‌ಲೈನ್ ಮೂಲಕ 97.27 ಲಕ್ಷ ಅರ್ಜಿಗಳು ಮತ್ತು ಜ್ಞಾಪನಾ ಪತ್ರಗಳನ್ನು ಸ್ವೀಕರಿಸಿದೆ. ಪ್ರತಿಯೊಂದನ್ನೂ ಜೆಪಿಸಿ ತನ್ನ ಅಂತಿಮ ವರದಿಗೂ ಮುನ್ನ ಪರಿಶೀಲಿಸಿದೆ ಎಂದು ತಿಳಿಸಿದರು.25 ರಾಜ್ಯ ಮತ್ತು ಕೇಂದ್ರಾಡಳಿತ ಪ್ರದೇಶಗಳ ವಕ್ಫ್ ಮಂಡಳಿಗಳು, 284 ನಿಯೋಗಗಳು ಮಸೂದೆಯ ಕುರಿತು ತಮ್ಮ ಅಭಿಪ್ರಾಯಗಳನ್ನು ಸಲ್ಲಿಸಿವೆ. ಕಾನೂನು ತಜ್ಞರು, ದತ್ತಿ ಸಂಸ್ಥೆಗಳು, ಶೈಕ್ಷಣಿಕ ತಜ್ಞರು ಮತ್ತು ಧಾರ್ಮಿಕ ಮುಖಂಡರು ಸೇರಿದಂತೆ ಸಾಕಷ್ಟು ಮಂದಿ ತಮ್ಮ ಅಭಿಪ್ರಾಯಗಳನ್ನು ಸಲ್ಲಿಸಿದ್ದಾರೆ ಎಂದರು.ಕೇಂದ್ರ ಸರ್ಕಾರ ಯಾವುದೇ ಧಾರ್ಮಿಕ ಸಂಸ್ಥೆಯ ನಡುವೆ ಹಸ್ತಕ್ಷೇಪ ಮಾಡುವುದಿಲ್ಲ. ಯುಪಿಎ ಸರ್ಕಾರ ನಡೆಸಿದ್ದ ವಕ್ಫ್ ಕಾನೂನಿನ ಬದಲಾವಣೆಗಳು ಇತರ ಕಾನೂನುಗಳಿಗಿಂತ ಹೆಚ್ಚು ಪರಿಣಾಮ ಬೀರಿದವು. ಈ ಹಿನ್ನೆಲೆಯಲ್ಲಿ ಹೊಸ ತಿದ್ದುಪಡಿಗಳು ಅಗತ್ಯವಾಗಿವೆ ಎಂದು ತಿಳಿಸಿದರು.



**ವಕ್ಫ್ ಮಸೂದೆಯ ಪರ–ವಿರೋಧ ಯಾರು..:** ಪ್ರಧಾನಿ ಮೋದಿ ಸರ್ಕಾರ ಲೋಕಸಭೆಯಲ್ಲಿ ವಕ್ಫ್ ತಿದ್ದುಪಡಿ ಮಸೂದೆಯನ್ನ ಮಂಡಿಸಲಾಗಿದೆ.ಇಡೀ ಮೋದಿ ಸರ್ಕಾರ ಅದನ್ನು ಅಂಗೀಕರಿಸಲು ಒಗ್ಗಟ್ಟಾಗಿದೆ. ಬಿಹಾರದ ಎನ್‌ಡಿಎ ಕೂಡ ಈಗ ಈ ಮಸೂದೆಯನ್ನು ಬೆಂಬಲಿಸುವುದಾಗಿ ಘೋಷಿಸಿದೆ. ಬಿಜೆಪಿ ಮತ್ತು ಎನ್‌ಡಿಎ ಮಿತ್ರಪಕ್ಷಗಳಾದ ಜೆಡಿಯು ಮತ್ತು ಟಿಡಿಪಿಗಳು ಮಸೂದೆಯನ್ನು ಬೆಂಬಲಿಸುತ್ತಿವೆ. ಇನ್ನೂ ಕಾಂಗ್ರೆಸ್ ನೇತೃತ್ವದ ವಿರೋಧ ಪಕ್ಷವು ಈ ಮಸೂದೆಯನ್ನು ವಿರೋಧಿಸುತ್ತಿದೆ. ಈ ಕುರಿತು ವಿರೋಧ ಪಕ್ಷವು ಸಭೆ ಕರೆದು ಲೋಕಸಭೆಯಲ್ಲಿ ಅದರ ವಿರುದ್ಧ ಮತ ಚಲಾಯಿಸುವುದಾಗಿ ಪ್ರತಿಜ್ಞೆ ಮಾಡಿತು. ಕಾಂಗ್ರೆಸ್, ಆರ್‌ಜೆಡಿ, ಟಿಎಂಸಿ, ಡಿಎಂಕೆ, ಎಐಎಂಐಎಂ, ಎಸ್‌ಪಿ ಮತ್ತು ಅಖಿಲ ಭಾರತ ಮುಸ್ಲಿಂ ವೈಯಕ್ತಿಕ ಕಾನೂನು ಮಂಡಳಿ (ಎಐಎಂಪಿಎಲ್‌ಬಿ) ಇದನ್ನು ವಿರೋಧಿಸುತ್ತಿವೆ. ಇನ್ನೂ ಲೋಕಸಭೆಯಲ್ಲಿ 293 ಸಂಸದರ ಬಹುಮತವನ್ನು ಹೊಂದಿದೆ. ವಿರೋಧ ಪಕ್ಷವಾದ ಇಂಡಿಯಾ ಬ್ಲಾಕ್ ಲೋಕಸಭೆಯಲ್ಲಿ 233 ಸಂಸದರನ್ನು ಹೊಂದಿದೆ.

**ವಕ್ಫ್ ಮಸೂದೆಯನ್ನ ಯಾಕೆ ವಿರೋಧಿಸುತ್ತಿವೆ.. :** ವಕ್ಫ್ ಮಸೂದೆ ಬಗ್ಗೆ ಇಂಡಿಯಾ ಮೈತ್ರಿ ಕೂಟ ಧ್ವನಿ ಎತ್ತಿದೆ. ವಿರೋಧ ಪಕ್ಷಗಳು ಮತ್ತು ಮುಸ್ಲಿಂ ಸಂಘಟನೆಗಳು ಇದನ್ನು ಧಾರ್ಮಿಕ ಸ್ವಾತಂತ್ರ್ಯದ ಮೇಲಿನ ದಾಳಿ ಎಂದು ಪರಿಗಣಿಸುತ್ತವೆ. ಈ ಮಸೂದೆಯು ವಕ್ಫ್ ಆಸ್ತಿಗಳನ್ನು ದುರ್ಬಲಗೊಳಿಸುತ್ತದೆ ಮತ್ತು ಸರ್ಕಾರದ ಹಸ್ತಕ್ಷೇಪವನ್ನು ಹೆಚ್ಚಿಸುತ್ತದೆ ಎಂದು ಹೇಳಿಕೊಳ್ಳುತ್ತಾರೆ. ಈ ಮಸೂದೆಯನ್ನು ವಿರೋಧಿಸುವಂತೆ ಅಖಿಲ ಭಾರತ ಮುಸ್ಲಿಂ ವೈಯಕ್ತಿಕ ಮಂಡಳಿಯು ವಿರೋಧ ಪಕ್ಷಗಳು ಮತ್ತು ಎನ್‌ಡಿಎ ಮಿತ್ರಪಕ್ಷಗಳಿಗೆ ಮನವಿ ಮಾಡಿದೆ. ಈ ವಕ್ಫ್ ಮಂಡಳಿಯ ಮಸೂದೆಯು ತಾರತಮ್ಯದಿಂದ ಕೂಡಿದ್ದು, ಸಂವಿಧಾನದ 14, 25 ಮತ್ತು 26 ನೇ ವಿಧಿಗಳ ಅಡಿಯಲ್ಲಿ ಮೂಲಭೂತ ಹಕ್ಕುಗಳ ನಿಬಂಧನೆಗಳನ್ನು ಉಲ್ಲಂಘಿಸುತ್ತದೆ ಎಂದು ಅಖಿಲ ಭಾರತ ಮುಸ್ಲಿಂ ವೈಯಕ್ತಿಕ ಮಂಡಳಿ ವಾದಿಸುತ್ತದೆ.

## ಸರ್ವರಿಗೂ ಸೂರು ಯೋಜನೆ 42 ಸಾವಿರ ಮನೆ ಹಂಚಿಕೆ

• ಉದಯವಾಹಿನಿ, ಬೆಂಗಳೂರು

ಕೊಳಗೇರಿ ಅಭಿವೃದ್ಧಿ ಮಂಡಳಿ ವತಿಯಿಂದ ಬಡ ಕುಟುಂಬಗಳಿಗೆ 'ಸರ್ವರಿಗೂ ಸೂರು' ಯೋಜನೆಯಡಿ ನಿರ್ಮಿಸಲಾಗುತ್ತಿರುವ 1.82 ಲಕ್ಷ ಮನೆಗಳ ಪೈಕಿ ಎರಡನೇ ಹಂತದಲ್ಲಿ 42345 ಮನೆಗಳನ್ನು ಇದೇ ತಿಂಗಳು ಹಂಚಿಕೆ ಮಾಡಲಾಗುವುದು ಎಂದು ವಸತಿ ಸಚಿವ ಜಮೀರ್ ಅಹಮದ್ ಖಾನ್ ತಿಳಿಸಿದ್ದಾರೆ. ಕೊಳಗೇರಿ ಅಭಿವೃದ್ಧಿ ಮಂಡಳಿ ಸಭಾಂಗಣ ದಲ್ಲಿ ಈ ಸಂಬಂಧ ಪೂರ್ವಭಾವಿ ಸಭೆ ನಡೆಸಿದ ನಂತರ ಮಾತನಾಡಿದ ಸಚಿವರು, ಮೊದಲ ಹಂತದಲ್ಲಿ ಕಳೆದ ವರ್ಷ ಫೆಬ್ರವರಿಯಲ್ಲಿ 36,789 ಮನೆ ಹಂಚಿಕೆ ಮಾಡಲಾಗಿತ್ತು. ಇದೀಗ ಎರಡನೇ ಹಂತದಲ್ಲಿ ಏಪ್ರಿಲ್ 27 ರಂದು ಹುಬ್ಬಳ್ಳಿ ಯಲ್ಲಿ ನಡೆಯಲಿರುವ ಕಾರ್ಯಕ್ರಮ ದಲ್ಲಿ 42,345 ಮನೆ ಗಳನ್ನು ಹಂಚಿಕೆ ಮಾಡಲಾಗುವುದು ಎಂದು ಹೇಳಿದರು. ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್, ಕೊಳಗೇರಿ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಪ್ರಸಾದ್ ಅಬ್ಬಯ್ಯ ಸೇರಿದಂತೆ ಹಲವು ಸಚಿವರು, ಶಾಸಕರು ಕಾರ್ಯಕ್ರಮ ದಲ್ಲಿ ಭಾಗಿಯಾಗಲಿದ್ದಾರೆ ಎಂದು ತಿಳಿಸಿದರು. ಮುಖ್ಯಮಂತ್ರಿ ಯವರು ಹಂಚಿಕೆ ಮಾಡಲಿರುವ ಮನೆಗಳನ್ನು ಮೂಲಭೂತ ಸೌಕರ್ಯ ಸಹಿತ ಒಂದು ವಾರದಲ್ಲಿ ಪೂರ್ಣ ಗೊಳಿಸಬೇಕು ಎಂದು ಸೂಚನೆ ನೀಡಲಾಗಿದೆ ಎಂದು ತಿಳಿಸಿದರು. 2013 ರಿಂದ 2023 ರವರೆಗೆ ಬಡ ಕುಟುಂಬಗಳಿಗೆ 1.82 ಲಕ್ಷ ಮನೆ ನಿರ್ಮಾಣ ಯೋಜನೆ ರೂಪಿಸಲಾಗಿತ್ತು. ಫಲಾನುಭವಿಗಳ ವಂತಿಗೆ ಪಾವತಿ ಕಷ್ಟವಾಗಿ ಮನೆಗಳು ಅರ್ಧಕ್ಕೆ ನಿಂತಿತ್ತು. ಮುಖ್ಯಮಂತ್ರಿ ಯವರಿಗೆ ಸಮಸ್ಯೆ ಮನವರಿಕೆ ಮಾಡಿಕೊಟ್ಟು ಫಲಾನುಭವಿಗಳ ವಂತಿಗೆ ತಲಾ ನಾಲ್ಕು ಲಕ್ಷ ರೂ. ಸರ್ಕಾರವೇ ಭರಿಸುವ ತೀರ್ಮಾನ ಕೈಗೊಂಡು ಮನೆ ಪೂರ್ಣ ಗೊಳಿಸಲಾಗುತ್ತಿದೆ ಎಂದು ಹೇಳಿದರು.

## ಡೀಸೆಲ್, ಹಾಲು, ವಿದ್ಯುತ್, ಕಸದ ಸೆಸ್, ಈಗ ನೀರಿನ ದರವೂ ಏರಿಕೆ!

• ಉದಯವಾಹಿನಿ, ಬೆಂಗಳೂರು

ಡೀಸೆಲ್, ಹಾಲು, ವಿದ್ಯುತ್, ಕಸದ ಸೆಸ್, ಮೆಟ್ರೊ ಪ್ರಯಾಣ ದರ ಏರಿಕೆ ಬೆನ್ನಲ್ಲೇ ರಾಜಧಾನಿ ಬೆಂಗಳೂರಿನಲ್ಲಿ ಕುಡಿಯುವ ನೀರಿನ ದರ ಹೆಚ್ಚಳದ ತೀರ್ಮಾನವನ್ನು ಡಿಸಿಎಂ ಡಿಕೆ ಶಿವಕುಮಾರ್ ಪ್ರಕಟಿಸಿದ್ದಾರೆ. ಬೆಂಗಳೂರಿನಲ್ಲಿ ಕುಡಿಯುವ ನೀರಿನ ಬೆಲೆಯನ್ನು ಪ್ರತಿ ಲೀಟರ್‌ಗೆ ಕನಿಷ್ಠ 1 ಪೈಸೆಯಷ್ಟು ಏರಿಕೆ ಮಾಡಲೇಬೇಕಾಗಿದೆ. ಬಡವರಿಗೆ ಹೊರೆಯಾಗದಂತೆ ನೀರಿನ ದರ ಹೆಚ್ಚಳಕ್ಕೆ ಸೂಚನೆ ನೀಡಲಾಗಿದೆ ಎಂದು ತಿಳಿಸಿದರು. ಜಲಮಂಡಳಿ ವಾರ್ಷಿಕ 1 ಸಾವಿರ ಕೋಟಿ ರೂ. ನಷ್ಟ ಅನುಭವಿಸುತ್ತಿದ್ದು, ಮುಂದಿನ ಹಂತಗಳ ಯೋಜನೆ ಕೈಗೆತ್ತಿಗೊಳ್ಳಬೇಕಾದರೆ ಜೈಕಾ ನೆರವು ಪಡೆಯುವುದು ಸೇರಿದಂತೆ ಎಲ್ಲಾ ಉದ್ದೇಶದಿಂದಲೂ ನೀರಿನ ದರ ಏರಿಕೆ ಅನಿವಾರ್ಯವಾಗಿದೆ. ನೀರಿನ ಮಿತ ಬಳಕೆಗೆ ಜನರನ್ನು ಅಣಿಗೊಳಿಸಬೇಕಿದೆ, ಎಂದು ಹೇಳಿದರು. ಜನರ ಕಷ್ಟ ಅರ್ಥವಾಗುತ್ತದೆ. ಆದರೆ, ಸರಕಾರದ ಸಂಸ್ಥೆಗಳೂ ನಡೆಯಬೇಕಲ್ಲವೇ ಎಂದರು.

## ಲೋಕಾಯುಕ್ತದ ಭೀತಿ! ಬೆಂಗಳೂರಿನ ಪಿಎಸ್‌ಐ ಪರಾರಿ!

• ಉದಯವಾಹಿನಿ, ಬೆಂಗಳೂರು

ವಿಶಿಷ್ಟ ಹಾಗೂ ಸಾರ್ಥಕ ಸೇವೆಗಾಗಿ ಮುಖ್ಯಮಂತ್ರಿಗಳ ಪದಕದ ಗೌರವಕ್ಕೆ ಭಾಜನರಾಗಿರುವ ಅನ್ನಪೂರ್ಣೇಶ್ವರಿನಗರ ಪೊಲೀಸ್ ಠಾಣೆಯ ಇನ್‌ಸ್ಪೆಕ್ಟರ್ ಎ.ವಿ.ಕುಮಾರ್ ಅವರು ಭ್ರಷ್ಟಾಚಾರ ಪ್ರಕರಣದಲ್ಲಿ ಸಿಕ್ಕಿಬಿದ್ದಿದ್ದು, ಬಂಧನ ಭೀತಿಯಲ್ಲಿಪದಕ ಸ್ವೀಕರಿಸದೆ ತಲೆಮರೆಸಿಕೊಂಡಿದ್ದಾರೆ. ಸಿವಿಲ್ ಗುತ್ತಿಗೆದಾರ ಚನ್ನೇಗೌಡ ಎಂಬುವರ ಪತ್ನಿ ಅನುಷಾ ವಿರುದ್ಧ ಅನ್ನಪೂರ್ಣೇಶ್ವರಿನಗರ ಠಾಣೆಯಲ್ಲಿಈ ಹಿಂದೆ ಸುಳ್ಳು ಪ್ರಕರಣವೊಂದು ದಾಖಲಾಗಿತ್ತು. ಈ ಪ್ರಕರಣ ಸಂಬಂಧ ಬಿ ರಿಪೋರ್ಟ್ ಸಲ್ಲಿಸುವುದಕ್ಕೆ ಪ್ರತಿಯಾಗಿ ಚನ್ನೇಗೌಡರ ಒಡೆತನದ 4 ಕೋಟಿ ರೂ. ಮೌಲ್ಯದ ಮನೆಯನ್ನು ಕಡಿಮೆ ಮೊತ್ತಕ್ಕೆ ಮಾರಾಟ ಮಾಡುವಂತೆ ಕುಮಾರ್ ಒತ್ತಡ ಹಾಕಿದ್ದಾರೆ ಎಂಬ ಆರೋಪ ಕೇಳಿ ಬಂದಿದೆ. ಅನುಷಾ, ಸರಕಾರಿ ಉದ್ಯೋಗದಲ್ಲಿದ್ದಾರೆ. ಚನ್ನೇಗೌಡರಿಗೆ ಸೇರಿದ ಮನೆಯನ್ನು ಕಡಿಮೆ ಮೊತ್ತಕ್ಕೆ ನೋಂದಣಿ ಮಾಡಿಕೊಡುವಂತೆ ಇನ್‌ಸ್ಪೆಕ್ಟರ್ ಕುಮಾರ್ ಕಿರುಕುಳ ನೀಡುತ್ತಿದ್ದರು. ಅಲ್ಲದೆ, ಚನ್ನೇಗೌಡರ ಮನೆಗೆ ಕೆಲ ಪುಂಡರನ್ನು ನುಗ್ಗಿಸಿ ದಾಂದಲೆ ಮಾಡಿಸಿದ್ದರು. ಇದನ್ನು ಚನ್ನೇಗೌಡ, ಮೊಬೈಲ್‌ನಲ್ಲಿವಿಡಿಯೊ ಮಾಡಿಕೊಂಡಿದ್ದರು. ಕುಮಾರ್, ಚನ್ನೇಗೌಡರನ್ನು ಠಾಣೆಗೆ ಕರೆಸಿಕೊಂಡು ಮನೆಗೆ ಸಂಬಂಧಿಸಿದ ದಾಖಲೆಪತ್ರಗಳಿಗೆ ಒತ್ತಾಯಪೂರ್ವಕವಾಗಿ ಸಹಿ ಮಾಡಿಸಿಕೊಂಡಿದ್ದರಲ್ಲದೆ ಲಂಚವಾಗಿ ಆನ್‌ಲೈನ್ ಮೂಲಕ 4 ಲಕ್ಷ ರೂ. ಹಾಕಿಸಿಕೊಂಡಿದ್ದರು. ಈ ಸಂಬಂಧ ಚನ್ನೇಗೌಡ ದೂರು ಕೊಟ್ಟಿದ್ದರು ಎಂದು ಲೋಕಾಯುಕ್ತ ಅಧಿಕಾರಿಗಳು ತಿಳಿಸಿದ್ದಾರೆ. ಕುಮಾರ್ ತಮ್ಮ ಸಂಬಂಧಿಗಳಾದ ಗವಿಗೌಡ ಮತ್ತು ದಿವ್ಯಾ ಎಂಬುವರ ಹೆಸರಿಗೆ ಮನೆ ನೋಂದಣಿ ಮಾಡಿಕೊಡುವಂತೆ ಚನ್ನೇಗೌಡರಿಗೆ ಒತ್ತಡ ಹೇರಿದ್ದರು. ಸಂಜೆ ಕರಾರು ಪತ್ರಕ್ಕೆ ಸಹಿ ಹಾಕಿಸಲು ನಾಗರಬಾವಿಯ ಹೋಟೆಲ್‌ಗೆ ಅನುಷಾರನ್ನು ಕರೆಸಿಕೊಂಡಿದ್ದರು. ಈ ವೇಳೆ ದಾಳಿ ನಡೆಸಿ ಕಾನ್‌ಸ್ಟೆಬಲ್‌ಗಳಾದ ಉಮೇಶ್, ಅನಂತ್ ಸೋಮಶೇಖರ್ ಆರಾಧ್ಯ, ಖರೀದಿದಾರ ಗವಿಗೌಡ, ದಿನೇಶ್ ಸೇರಿದಂತೆ ಐದು ಮಂದಿಯನ್ನು ಬಂಧಿಸಲಾಗಿದೆ ಎಂದು ಅಧಿಕಾರಿಗಳು ಹೇಳಿದ್ದಾರೆ.

# ಕರ್ನಾಟಕದ ಮತ್ತೊಂದು ಜಿಲ್ಲೆಯಲ್ಲಿ ವಿಮಾನ ನಿಲ್ದಾಣ ನಿರ್ಮಾಣ

• ಉದಯವಾಹಿನಿ, ಬೆಂಗಳೂರು

**ಕೇಂದ್ರ ಸರ್ಕಾರ ಗ್ರೀನ್ ಸಿಗ್ನಲ್**



ರಾಯಚೂರಿನಲ್ಲಿ ನಿರ್ಮಿಸಲಾಗುತ್ತಿರುವ ಗ್ರೀನ್ ಫೀಲ್ಡ್ ವಿಮಾನ ನಿಲ್ದಾಣಕ್ಕೆ ಕೇಂದ್ರ ಪರಿಸರ ಮಂತ್ರಾಲಯ ಅನುಮತಿ ನೀಡಿದೆ. ಈ ಬಗ್ಗೆ ಸಣ್ಣ ನೀರಾವರಿ ಮತ್ತು ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ ಸಚಿವ ಎನ್ ಎಸ್ ಬೋಸರಾಜು ಮಾಹಿತಿ ಹಂಚಿಕೊಂಡಿದ್ದಾರೆ. ರಾಯಚೂರು ನಗರದಲ್ಲಿ ಗ್ರೀನ್ ಫೀಲ್ಡ್ ವಿಮಾನ ನಿಲ್ದಾಣವನ್ನ ನಿರ್ಮಿಸಬೇಕು, ಈ ಮೂಲಕ ಕಲ್ಯಾಣ ಕರ್ನಾಟಕದ ಅಭಿವೃದ್ಧಿಗೆ ಇಂಬು ನೀಡಬೇಕು ಎನ್ನುವುದು ನಮ್ಮ ಸರಕಾರದ ಆಶಯವಾಗಿದೆ. ಈ ನಿಟ್ಟಿನಲ್ಲಿ ಹೊಸ ಸರಕಾರ ಅಧಿಕಾರಕ್ಕೆ ಬಂದ ನಂತರ ವಿಮಾನ ನಿಲ್ದಾಣ ನಿರ್ಮಾಣ ಕಾರ್ಯವನ್ನು ಚುರುಕು ಗೊಳಿಸಲಾಗಿತ್ತು. ಕಲ್ಯಾಣ ಕರ್ನಾಟಕದ ಹೆಬ್ಬಾಗಿಲು ಆಗಿರುವ ರಾಯಚೂರು ಜಿಲ್ಲೆಯಲ್ಲಿ ವಿಮಾನ ನಿಲ್ದಾಣದ ಕನಸು ನನಸಾಗುವ ಕಾಲ ಮತ್ತಷ್ಟು ಸಂಹಿತವಾಗಿದೆ ಎಂದಿದ್ದಾರೆ.

**ಕಾಂಗ್ರೆಸ್ ಸರ್ಕಾರ ವಿಶೇಷ ಒತ್ತು:** ನಮ್ಮ ಕಾಂಗ್ರೆಸ್ ಸರ್ಕಾರ ರಾಯಚೂರಿನಲ್ಲಿ ನೂತನ ಗ್ರೀನ್ ಫೀಲ್ಡ್ ಏರ್‌ಪೋರ್ಟ್ ಮಾಡಲು ಬಹಳ ಪ್ರಯತ್ನ ಮಾಡಿತ್ತು. ಅಲ್ಲದೇ, ಆಯವ್ಯಯದಲ್ಲೂ ಈ ಬಗ್ಗೆ ಪ್ರಸ್ತಾಪಿಸಲಾಗಿತ್ತು. ಈ ಬಗ್ಗೆ ಸಿಎಂ ಸಿದ್ದರಾಮಯ್ಯ ವಿಶೇಷ ಕಾಳಜಿ ವಹಿಸಿ ಕೇಂದ್ರ ಸರ್ಕಾರದೊಂದಿಗೆ ಸಮನ್ವಯ ಮಾಡಿದ್ದರು. ರಾಯಚೂರು ನಗರದಲ್ಲಿ ವಿಮಾನ ನಿಲ್ದಾಣ ನಿರ್ಮಾಣಕ್ಕೆ ಅಗತ್ಯವಿರುವ ಎಲ್ಲಾ ಸಹಕಾರವನ್ನು ಸರ್ಕಾರ ನೀಡುವುದಾಗಿಯೂ ಭರವಸೆ ನೀಡಿದ್ದರು. ಇದರ ಬೆನ್ನಲ್ಲೇ, ಕರ್ನಾಟಕ ರಾಜ್ಯ ಕೈಗಾರಿಕಾ ಮತ್ತು ಮೂಲಸೌಕರ್ಯ ಅಭಿವೃದ್ಧಿ ನಿಗಮದ ವತಿಯಿಂದ ಅಗತ್ಯ ಪ್ರಸ್ತಾವನೆ ಸಲ್ಲಿಸಲಾಗಿತ್ತು. ಇದರ ಬಗ್ಗೆ ಕೈಗಾರಿಕೆ ಮತ್ತು ಮೂಲಸೌಕರ್ಯ ಸಚಿವ ಎಂ.ಬಿ ಪಾಟೀಲ್ ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವ ಡಾ. ಶರಣಪ್ರಕಾಶ್ ಪಾಟೀಲ್ ಅವರು ಕೂಡಾ ವಿಶೇಷ ಒತ್ತು ನೀಡಿದ್ದರು.

**ಕೇಂದ್ರ ಸರ್ಕಾರಕ್ಕೆ ಅಭಿನಂದನೆ**

ರಾಯಚೂರು ಸಂಸದ ಜಿ ಕುಮಾರ ನಾಯ್ಕ್ ಹಾಗು ರವಿ ಭೋಸರಾಜು ಅವರು ಇತ್ತೀಚಿಗೆ ಕೇಂದ್ರ ವಿಮಾನಯಾನ ಸಚಿವ ರಾಮ್ ಮೋಹನ್ ಅವರನ್ನು ಭೇಟಿ ಮಾಡಿ ಮನವಿ ಸಲ್ಲಿಸಿದ್ದರು. ಇದಕ್ಕೆ ಸಕಾರಾತ್ಮಕವಾಗಿ ಸ್ಪಂದಿಸಿರುವ ಕೇಂದ್ರ ವಿಮಾನಯಾನ ಸಚಿವರು, ಅಗತ್ಯ ಅನುಮತಿಯನ್ನು ನೀಡಿ ರಾಜ್ಯ ಸರ್ಕಾರಕ್ಕೆ ಪತ್ರ ಬರೆದಿದ್ದಾರೆ. ರಾಯಚೂರಿನಲ್ಲಿ ವಿಮಾನ ನಿಲ್ದಾಣ ನಿರ್ಮಾಣದಿಂದ ಕಲ್ಯಾಣ ಕರ್ನಾಟಕದ ಪ್ರಮುಖ ಜಿಲ್ಲೆಗೆ ಉತ್ತಮ ಸಂಪರ್ಕ ದೊರೆತು, ಸರ್ವತೋಮುಖ ಅಭಿವೃದ್ದಿಗೆ ಅನುಕೂಲವಾಗಲಿದೆ. ತ್ವರಿತಗತಿಯಲ್ಲಿ ಕೇಂದ್ರ ಪರಿಸರ ಮಂತ್ರಾಲಯ ದಿಂದ ಅನುಮತಿ ದೊರೆತಿರುವುದು ಉತ್ತಮ ಬೆಳವಣಿಗೆಯಾಗಿದೆ. ಇದಕ್ಕೆ ಕೇಂದ್ರ ಸರ್ಕಾರ ಹಾಗೂ ಕೇಂದ್ರ ವಿಮಾನಯಾನ ಸಚಿವರಿಗೆ ಅಭಿನಂದನೆ ಸಲ್ಲಿಸಿದ್ದಾರೆ.

# ರಾಜ್ಯ ಸರ್ಕಾರದ ವಿರುದ್ಧ ಬಿಜೆಪಿ ಚಾರ್ಜ್‌ಶೀಟ್ ಬಿಡುಗಡೆ

## ಕಾಂಗ್ರೆಸ್ ಸರ್ಕಾರದ ಬೆಲೆ ಏರಿಕೆ ನೀತಿ ಖಂಡಿಸಿ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಬಿಜೆಪಿ ಪ್ರತಿಭಟನೆ

• ಉದಯವಾಹಿನಿ, ಬೆಂಗಳೂರು

ರಾಜ್ಯ ಸರ್ಕಾರದ ವಿರುದ್ಧ ಬಿಜೆಪಿ ಚಾರ್ಜ್ ಶೀಟ್ ಬಿಡುಗಡೆ ಮಾಡಿದೆ. 8 ಪ್ರಮುಖ ಆರೋಪಗಳನ್ನು ಹೊರಿಸಿ ಸರ್ಕಾರ ಹಗಲು ದರೋಡೆ ಮಾಡುತ್ತಿದೆ ಎಂದು ಆರೋಪಪಟ್ಟಿಯನ್ನು ಬಿಡುಗಡೆ ಮಾಡಿದೆ. ಅಹೋರಾತ್ರಿ ಧರಣಿಯಲ್ಲಿ ವಿಪಕ್ಷ ನಾಯಕ ಆರ್ ಅಶೋಕ್ ಹಾಗೂ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಈ ಆರೋಪಪಟ್ಟಿಯನ್ನು ಬಿಡುಗಡೆ ಮಾಡಿದರು.

**ಹಣಕಾಸು ಇಲಾಖೆಯಿಂದ ಲೂಟಿ:** ಜೂನ್ 24 ರಂದು ಪೆಟ್ರೋಲ್ 3ರೂ ಮತ್ತು ಡೀಸೆಲ್ ಗೆ ರೂ3.50ಪೈಸೆ ಪ್ರತಿ ಲೀಟರ್ ಗೆ ಬೆಲೆ ಏರಿಕೆ ಮಾಡಿದರು. ಬಿಜೆಪಿ ಆಡಳಿತವಿರುವ ಗುಜರಾತ್ ಯುಪಿ ಗೋವಾ ಮುಂತಾದ ಸರ್ಕಾರಗಳು ಇಂಧನ ಬೆಲೆ ಇಳಿಸಿದ್ದರೆ ನಮ್ಮ ರಾಜ್ಯದಲ್ಲಿ ಇಂಧನ ಬೆಲೆಯು ಗಗನಕ್ಕೇರಿಸಿದರು.

**ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ಐಪಿಡಿ ಶುಲ್ಕವನ್ನು ಶೇ.10-30 ಹೆಚ್ಚಳ:** ಸರ್ಕಾರ ಆದಾಯ ಹೆಚ್ಚಳ ಮಾಡಲು ಎಷ್ಟು ಬರಗೆಟ್ಟಿದೆಯೆಂದರೆ ಬಡ ರೋಗಿಗಳು ಚಿಕಿತ್ಸೆಗೆ ಬರುವ ಸರ್ಕಾರಿ ಆಸ್ಪತ್ರೆಯನ್ನು ಸುಲಿಗೆ ಕೇಂದ್ರವನ್ನಾಗಿ ಮಾಡಿಕೊಂಡಿದೆ. ಉಚಿತ ಚಿಕಿತ್ಸೆ ನೀಡಬೇಕಾದ ಸರ್ಕಾರ ಬಡವರ ಹಣವನ್ನು ತನ್ನ ಆದಾಯ ಹೆಚ್ಚಳದ ಮೂಲವಾಗಿ ಕಾಣುತ್ತಿರುವುದು ಸರ್ಕಾರದ ಬಡ ಜನರ ವಿರೋಧಿ ನೀತಿಗೆ ಸಾಕ್ಷಿಯಾಗಿದೆ. ಪ್ರಮುಖ ಸರ್ಕಾರಿ ಆಸ್ಪತ್ರೆಗಳಲ್ಲಿ ಒಪಿಡಿ ಮತ್ತು ಐಪಿಡಿ ಶುಲ್ಕವನ್ನು ಶೇ. 10-30 ರಷ್ಟು ಹೆಚ್ಚಿಸಿದೆ. ನವೀಕರಿಸಿದ ಶುಲ್ಕಗಳು ಬಡವರಿಗೆ ಹೊರೆಯಲ್ಲ ಎಂದು ಆರೋಗ್ಯ ಸಚಿವರು ವಾದಿಸುವ ಮೂಲಕ ತಮ್ಮಭಂಡತನ ಪ್ರದರ್ಶನ ಮಾಡಿದ್ದಾರೆ.




**ಸರ್ಕಾರದ ಬಡ ಜನರ ವಿರೋಧಿ ನೀತಿ**

**ಜನನ ಮರಣ ಪ್ರಮಾಣ ಪತ್ರದ ದರ ಏರಿಕೆ**

ಜನನ ಪ್ರಮಾಣ ಪತ್ರ ಮರಣ ಪ್ರಮಾಣ ಪತ್ರದ ದರವನ್ನು ಶೇಕಡಾ 100 ರಷ್ಟು ಹೆಚ್ಚಿಸಿದ್ದಾರೆ. ಈಗ ಮನೆಯಲ್ಲಿ ಸಂಗ್ರಹವಾಗುವ ಕಸದ ಮೇಲೂ ನೂರಾರು ರೂಪಾಯಿ ಸೆಸ್ ವಿಧಿಸಲಾಗಿದೆ. ಕಸದಲ್ಲೂ ಆದಾಯ ಗಳಿಸಲು ಮುಂದಾಗಿರುವ ಬರೆಗೆಟ್ಟಸರ್ಕಾರವಿದು. ದೌರ್ಭಾಗ್ಯವೆಂದರೆ ತಮ್ಮ ಬೆಲೆಯೇರಿಕೆಯನ್ನು ಸಮರ್ಥಿಸಿಕೊಳ್ಳಲು ರೈತ ಸಮುದಾಯವನ್ನು ಗುರಾಣಿಯ ಹಾಗೆ ಬಳಸಿಕೊಳ್ಳುತ್ತಿರುವುದು ಶೋಚನೀಯ. ಸರ್ಕಾರ ಹೆಚ್ಚಳ ಮಾಡಿರುವ ದರವನ್ನು ರೈತರಿಗೆ ವರ್ಗಾಯಿಸಲಾಗುವುದು ಎಂಬ ದಾರಿ ತಪ್ಪಿಸುವ ಮಾತನ್ನು ಆಡುತ್ತಿದ್ದಾರೆ. ಕಳೆದ ಎರಡು ವರ್ಷದಲ್ಲಿ ಹಾಲು ದರವನ್ನು ಹೆಚ್ಚಳ ಮಾಡಿದಾಗಲೂ ಹಣವನ್ನು ರೈತರಿಗೆ ನೀಡುತ್ತೇವೆ ಎಂದು ಹೇಳಿದರೆ ವಿನಹ ಹಣವನ್ನು ವರ್ಗ ಮಾಡಲೇ ಇಲ್ಲ. ಸ್ಟಾಂಪ್ ಡ್ಯೂಟಿ ದರವನ್ನು 4 ಪಟ್ಟು ಹೆಚ್ಚಳ ಮಾಡಿದ್ದಾರೆ. ಈಗ ಭೂ ಪತ್ರ ಪಡೆಯಲು ದುಪ್ಪಟ್ಟು ಹಣ ಪಾವತಿಸುವ ಅನಿವಾರ್ಯತೆಯಾಗಿದೆ. ಬಡ ರೈತರಿಗೆ ಇದು ದೊಡ್ಡ ಹೊಡೆತವಾಗಿದೆ. ಕೃಷಿ ಭೂಮಿ ಮಾರ್ಗಸೂಚಿ ಮೌಲ್ಯವು ಶೇಕಡಾ 50ರಷ್ಟು ಏರಿಕೆಯಾಗಿದ್ದರೆ, ನಿವೇಶನಗಳ ಹೆಚ್ಚಳವು ಶೇಕಡಾ 30ರಷ್ಟು ಹೆಚ್ಚಾಗಿದೆ. ಹಾಗೆಯೇ ಅಪಾರ್ಟ್ ಮೆಂಟ್ ಮಾರ್ಗಸೂಚಿ ಮೌಲ್ಯವನ್ನು ಶೇಕಡಾ 5 ರಿಂದ ಶೇಕಡಾ 20 ರಷ್ಟು ಏರಿಕೆಯಾಗಿದೆ.

**ಇಂಧನ ಇಲಾಖೆಯಿಂದ ವಿದ್ಯುತ್ ದರವನ್ನು ಹೆಚ್ಚಳ:** ವಿದ್ಯುತ್ ದರವನ್ನು ಹೆಚ್ಚಳ ಮಾಡಿ ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳಿಗೆ ಮಾರಣಾಂತಿಕ ಪೆಟ್ಟನ್ನು ನೀಡಿದ್ದಾರೆ. ವಿದ್ಯುತ್ ಇಲಾಖೆಯ ನೌಕರರಿಗೆ ಪಿಂಚಣಿ ಕೊಡಲು ಹಣವಿಲ್ಲದೆ ದಿವಾಳಿಯಾಗಿರುವ ಸರ್ಕಾರ ವಿದ್ಯುತ್ ಗ್ರಾಹಕರಿಂದ ಯೂನಿಟ್ ಗೆ 0.35 ಪೈಸೆ ಹೆಚ್ಚಳ ಮಾಡಿ ಜನರ ಸುಲಿಗೆ ಮಾಡುತ್ತಿದೆ.

**ಕೃಷಿ ಇಲಾಖೆಯಿಂದ ಬಿತ್ತನೆ ಬೀಜದ ಬೆಲೆ ಏರಿಕೆ:** ರೈತರಿಗೆ ಅತ್ಯಾವಶ್ಯಕವಾಗಿ ಬೇಕಾದ ಬಿತ್ತನೆ ಬೀಜದ ಬೆಲೆಯಲ್ಲಿ ಶೇಕಡಾ 50 ರಿಂದ 100 ರಷ್ಟು ಏರಿಕೆಯಾಗಿದೆ. ರೈತರು ತಮ್ಮ ಜಮೀನಿನಲ್ಲಿ ಟ್ರಾನ್ಸಫಾರ್ಮರ್ ಅಳವಡಿಸುವ ಶುಲ್ಕವನ್ನು 25,000 ದಿಂದ 2,50,000 ದಿಂದ 3,00,000 ಕ್ಕೆ ಹೆಚ್ಚಳ ಮಾಡಿ ರೈತರ ತಲೆಯ ಮೇಲೆ ಹೊರಲಾರ ಹೊರೆ ಹೊರೆಸಿದ್ದಾರೆ.

**ಸಾರಿಗೆ ಇಲಾಖೆಯಿಂದ ಬಸ್ ದರ ಏರಿಕೆ:** ಸಾರಿಗೆ ಬಸ್ ದರವನ್ನು ಶೇಕಡಾ 15 ರಿಂದ 20 ರಷ್ಟು ಹೆಚ್ಚಳವನ್ನು ಮಾಡಲಾಗಿದೆ. ಸಾರಿಗೆ ಸಂಸ್ಥೆಯು ಸಂಬಳ ನೀಡಲು ಪರದಾಡುವ ಸ್ಥಿತಿಗೆ ತಂದು ನಿಲ್ಲಿಸಿದ್ದಾರೆ. ಬೆಂಗಳೂರು ಮೆಟ್ರೊ ಪ್ರಯಾಣ ದರವು ಶೇಕಡಾ 100 ರಷ್ಟು ಹೆಚ್ಚಳ ಮಾಡಿ ದೇಶದಲ್ಲೆ ಹೊಸ ಇತಿಹಾಸ ಬರೆದ ಅಪಕೀರ್ತಿ ಸರ್ಕಾರಕ್ಕೆ ಸಲ್ಲುತ್ತದೆ. ವಿದ್ಯುತ್ ಕಾರು ಖರೀದಿಯನ್ನು ಉತ್ತೇಜಿಸುವ ಬದಲು ಶೇಕಡಾ 10ರಷ್ಟು ಜೀವಿತಾವಧಿ ತೆರಿಗೆಯನ್ನು ಹೆಚ್ಚಳ ಮಾಡಿದ್ದಾರೆ. ಹೊಸ ವಾಹನ ಖರೀದಿ ಮಾಡಿದಾಗ 500 ರಿಂದ 1000 ವರೆಗೆ ಸೆಸ್ ವಿಧಿಸಲಾಗಿದೆ.

**ಪಶುಸಂಗೋಪನಾ ಇಲಾಖೆ ಹಾಲಿನ ದರ 3 ಬಾರಿ ಏರಿಕೆ:** ಹಾಲಿನ ದರವನ್ನು ಕಳೆದ ಎರಡು ವರ್ಷದಲ್ಲಿ ಮೂರು ಬಾರಿ ಒಟ್ಟು 9/- ರೂ ಹೆಚ್ಚಳ ಮಾಡಿ ಬಡವರ ಮತ್ತು ಮಧ್ಯಮ ವರ್ಗದವರ ಮಗ್ಗಲು ಮುರಿಯುವ ಕೆಲಸ ಮಾಡಿದ್ದಾರೆ.

**ಈ ದಿನದ ದರ** ಪೆಟ್ರೋಲ್: 103.50 ₹/L | ಡೀಸೆಲ್ : 90.99 ₹/L | ಬಂಗಾರ: ₹9,284/Gram24ct ₹8,510/Gram22ct | ಬೆಳ್ಳಿ: ₹105.00/Gram

# ಸೈಬರ್ ಅಪರಾಧಕ್ಕೆ ಅಂಕುಶ ಹಾಕಲು ಸಿಎಂ ಕರೆ


## ಕೆಎಸ್‌ಆರ್‌ಪಿ ಪೆರೇಡ್ ಮೈದಾನದಲ್ಲಿ ನಡೆದ ಪೊಲೀಸ್ ಧ್ವಜ ದಿನಾಚರಣೆ ಮುಖ್ಯಮಂತ್ರಿಯವರ ಪದಕ ಪ್ರದಾನ ಸಮಾರಂಭ

• ಉದಯವಾಹಿನಿ, ಬೆಂಗಳೂರು

ತಂತ್ರಜ್ಞಾನದ ಬೆಳವಣಿಗೆಯಿಂದ ಸೈಬರ್ ಅಪರಾಧಗಳು ಹೆಚ್ಚುತ್ತಿವೆ ಎಂದು ಕಳವಳ ವ್ಯಕ್ತಪಡಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ, ಅತ್ಯಾಧುನಿಕ ತಂತ್ರಜ್ಞಾನವನ್ನು ಬಳಸಿಕೊಂಡು ಹೆಚ್ಚುತ್ತಿರುವ ಸೈಬರ್ ಅಪರಾಧಗಳನ್ನು ಹತ್ತಿಕ್ಕಬೇಕು ಎಂದು ಅವರು ಕರೆ ನೀಡಿದ್ದಾರೆ.

ನಗರದ ಕೋರಮಂಗಲ ಕವಾಯತು ಮೈದಾನದಲ್ಲಿ ನಡೆದ ಪೊಲೀಸ್ ಧ್ವಜ ದಿನಾಚರಣೆಯಲ್ಲಿ ಮುಖ್ಯಮಂತ್ರಿಗಳ ಪದಕ ಪುರಸ್ಕೃತರಿಗೆ ಪದಕಗಳನ್ನು ಪ್ರದಾನ ಮಾಡಿ ಮಾತನಾಡಿದರು.

ತಂತ್ರಜ್ಞಾನದ ಬೆಳವಣಿಗೆಯಿಂದ ಸೈಬರ್ ಅಪರಾಧಗಳು ವ್ಯಾಪಕವಾಗಿ ಹೆಚ್ಚುತ್ತಿವೆ, ಅದೇ ತಂತ್ರಜ್ಞಾನದ ಸಾಧ್ಯತೆಗಳನ್ನು ಬಳಸಿಕೊಂಡು ಸೈಬರ್ ಅಪರಾಧಗಳನ್ನು ನಿಗ್ರಹಿಸಬೇಕು ಎಂದು ಹೇಳಿದರು. ಮಾದಕ ವಸ್ತು ಮುಕ್ತ ರಾಜ್ಯ ಮಾಡುವುದು ನನ್ನ ಗುರಿ. ಇದಕ್ಕಾಗಿ ಬಹಳಷ್ಟು ಶ್ರಮಿಸಬೇಕಿರುವುದು ಮುಖ್ಯ, ಪೊಲೀಸರು ಮಾದಕ ವಸ್ತು ಜಾಲವನ್ನು ಬೇರು ಸಮೇತ ಕಿತ್ತಾಕಲು ಪಣ ತೊಡಬೇಕು ಎಂದು ಕರೆ ನೀಡಿದರು. ಕಳೆದ ಎರಡು ವರ್ಷಗಳಲ್ಲಿ ರಾಜ್ಯದಲ್ಲಿ ಅಪರಾಧಗಳ ಸಂಖ್ಯೆ ಇಳಿಮುಖ ಆಗುತ್ತಿದೆ. ಇದು ಇನ್ನಷ್ಟು ಕಡಿಮೆ ಆಗಬೇಕು ಎಂದರು. ಗೂಂಡಾಗಿರಿ, ರೌಡಿಸಂ ಪೂರ್ಣ ಮಟ್ಟ ಹಾಕಿ. ಅಗತ್ಯ ಸಹಕಾರ, ಸವಲತ್ತುಗಳನ್ನು ಕೊಡಲು ಸರ್ಕಾರ ಸಿದ್ದವಿದೆ. ಮೊನ್ನೆಯ ಬಜೆಟ್‌ನಲ್ಲಿ ಇಲಾಖೆ ಮತ್ತು ಸಿಬ್ಬಂದಿಯ ಅನುಕೂಲಕ್ಕೆ ಘೋಷಿಸಿರುವ ಎಲ್ಲವನ್ನೂ ಜಾರಿ ಮಾಡಲಾಗುವುದು ಎಂದರು.



ಉದಯವಾಹಿನಿ ಚಿತ್ರ

ಡಾ. ಜಿ. ಪರಮೇಶ್ವರ ಹೇಳಿಕೆ

ಕಾನೂನು ಸುವ್ಯವಸ್ಥೆ ಮತ್ತು ಬಂಡವಾಳ ಹೂಡಿಕೆ ಹಾಗೂ ಅಭಿವೃದ್ಧಿ ಮತ್ತು ಉದ್ಯೋಗ ಸೃಷ್ಟಿ ಒಂದಕ್ಕೊಂದು ನೇರ ಸಂಬಂಧವಿದೆ ನಿರುದ್ಯೋಗವು ಬಹಳ ದೊಡ್ಡ ಸಮಸ್ಯೆ ಆಗಲಿದೆ. ಇದನ್ನು ನಿರ್ವಹಿಸಬೇಕಾದರೆ ಕಾನೂನು ಸುವ್ಯವಸ್ಥೆ ಶಾಂತಿ ಪಾಲನೆ ಉತ್ತಮವಾಗಿರಬೇಕು ಎಂದು ಹೇಳಿದರು. ಮೂರು ವರ್ಷಗಳಿಂದ ಬಾಕಿ ಉಳಿದಿದ್ದ ಮುಖ್ಯಮಂತ್ರಿಗಳ ಪದಕವನ್ನು ಈ ಬಾರಿ ಒಟ್ಟಾಗಿ ವಿತರಿಸಿದ್ದೇವೆ. ಎಲ್ಲಾ ಪದಕ ಪುರಸ್ಕೃತರಿಗೂ ಅಭಿನಂದನೆಗಳು ಎಂದು ಅಭಿನಂದಿಸಿದರು.

ಪದಕಗಳನ್ನು ಪಡೆದವರು ಬೇರೆಯವರಿಗೆ ಪ್ರೇರಣೆ ಆಗಬೇಕು. ಮುಖ್ಯಮಂತ್ರಿಗಳ ಪದಕ ಪಡೆಯಲು ದಕ್ಷತೆ, ಪ್ರಾಮಾಣಿಕತೆಯಿಂದ ವೃತ್ತಿಪರತೆ ತೋರಿಸಬೇಕು ಎಂದರು.

ಜರ್ಮನಿ ದೇಶದ ಪ್ರಧಾನಿಗಳು, ಪ್ರತಿನಿಧಿಗಳು ರಾಜ್ಯದ ಪೊಲೀಸ್ ಕೌಶಲ್ಯ ಮತ್ತು ವೃತ್ತಿಪರತೆಯನ್ನು ಶ್ಲಾಘಿಸಿದ್ದಾರೆ. ಇದು ಅಪಾರ ಮೆಚ್ಚುಗೆಯ ವಿಷಯ ಎಂದರು. ಪೊಲೀಸರ ಅಗತ್ಯ ಮತ್ತು ಬೇಡಿಕೆಗಳನ್ನು ಈಡೇರಿಸಲು ನಮ್ಮ ಸರ್ಕಾರ ಸದಾ ಸಿದ್ದ ಇದೆ. ನಾವು ನಿರಂತರವಾಗಿ ನಿಮ್ಮ ಜೊತೆಗಿರುತ್ತವೆ. ಆದರೆ ಕರ್ತವ್ಯಲೋಪವನ್ನು ಮಾತ್ರ ಸಹಿಸುವುದಿಲ್ಲ. ಪೊಲೀಸ್ ಬೀಟ್ ವ್ಯವಸ್ಥೆಯನ್ನು ಇನ್ನಷ್ಟು ಪರಿಣಾಮಕಾರಿಯಾಗಿ ನಿರ್ವಹಿಸಿ ಎಂದರು. ಕಾರ್ಯಕ್ರಮದಲ್ಲಿ ಗೃಹ ಸಚಿವ ಜಿ.ಪರಮೇಶ್ವರ್, ಗೃಹ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಉಮಾಶಂಕರ್, ರಾಜ್ಯ ಪೊಲೀಸ್ ಮಹಾನಿರ್ದೇಶಕ ಅಲೋಕ್ ಮೋಹನ್, ಮುಖ್ಯಮಂತ್ರಿಗಳ ಅಪರ ಮುಖ್ಯ ಕಾರ್ಯದರ್ಶಿ ಎಲ್. ಕೆ.ಅತೀಕ್, ನಗರ ಪೊಲೀಸ್ ಆಯುಕ್ತ ದಯಾನಂದ, ಎಡಿಜಿಪಿ ಶರತ್ ಚಂದ್ರ ಸೇರಿ ಹಿರಿಯ ಪೊಲೀಸ್ ಅಧಿಕಾರಿಗಳು ಪಾಲ್ಗೊಂಡಿದ್ದರು.


### ಡ್ರಗ್ಸ್ ಮಾಫಿಯಾಕ್ಕೆ ಕಡಿವಾಣ ಹಾಕಿ: ಪರಂ

**ರಾಜ್ಯದಲ್ಲಿ ಅಪರಾಧ ಹಾಗೂ ಮಾದಕ ದ್ರವ್ಯ ಚಟುವಟಿಕೆಯನ್ನು ಸಂಪೂರ್ಣವಾಗಿ ಮಟ್ಟ ಹಾಕುವುದು ಸೇರಿದಂತೆ ಮಹಿಳೆಯರ ಸುರಕ್ಷತೆಗೆ ಮತ್ತಷ್ಟು ಹೆಚ್ಚಿನ ಒತ್ತು ನೀಡಬೇಕು ಎಂದು ಗೃಹ ಸಚಿವ ಡಾ. ಜಿ.ಪರಮೇಶ್ವರ ಅವರು ಹೇಳಿದರು. ನಗರದ ಕೋರಮಂಗಲದ ಕೆಎಸ್‌ಆರ್‌ಪಿ ಪೆರೇಡ್ ಮೈದಾನದಲ್ಲಿ ನಡೆದ ಪೊಲೀಸ್ ಧ್ವಜ ದಿನಾಚರಣೆ ಹಾಗೂ ಮುಖ್ಯಮಂತ್ರಿಯವರ ಪದಕ ಪ್ರದಾನ ಸಮಾರಂಭದಲ್ಲಿ ಭಾಗವಹಿಸಿ ಅವರು ಮಾತನಾಡಿದರು. ಬೆಂಗಳೂರು ನಗರದಲ್ಲಿ ಶಾಂತಿ ನೆಲೆಸಬೇಕು. ಇದರ ಪರಿಣಾಮ ರಾಜ್ಯಕ್ಕೆ ಹೆಚ್ಚು ಬಂಡಾವಾಳ ಹರಿದು ಬರಲಿದೆ. ಆರ್ಥಿಕ ಸ್ಥಿತಿ ಉತ್ತಮವಾಗಿ, ಉದ್ಯೋಗಗಳು ಹೆಚ್ಚಾಗಲಿವೆ ಎಂದರು. ರಾಜ್ಯದಲ್ಲಿ ಶಾಂತಿ ಸುವ್ಯವಸ್ಥೆಯನ್ನು ಕಾಪಾಡುವುದರ ಜೊತೆಗೆ ಜನರ ನೆಮ್ಮದಿಯನ್ನ ಕಾಪಾಡಲಾಗಿದೆ. ಕೋಮು ಪ್ರಚೋದನೆ ಮಾಡುವವರು ಅಡಗಿದ್ದಾರೆ. ದಕ್ಷತೆ ಮತ್ತು ಪ್ರಾಮಾಣಿಕತೆಯಲ್ಲಿ ರಾಜ್ಯ ಪೊಲೀಸ್ ಇಲಾಖೆಯು ದೇಶದಲ್ಲಿ ಮೊದಲ ಸ್ಥಾನಕ್ಕೆ ಬರಬೇಕು ಎಂದು ತಿಳಿಸಿದರು.**

# ಭರತನಾಟ್ಯ ಪ್ರದರ್ಶನ

• ಉದಯವಾಹಿನಿ, ಬೆಂಗಳೂರು

ಜಯನಗರ 5ನೇ ಬಡಾವಣೆಯ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮಪೂಜ್ಯ ಶ್ರೀ 1008 ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶದಂತೆ ಶ್ರೀಮಠದ ಹಿರಿಯ ವ್ಯವಸ್ಥಾಪಕರಾದ ಶ್ರೀ ಆರ್. ಕೆ. ವಾದೀಂದ್ರಾಚಾರ್ಯರ ನೇತೃತ್ವದಲ್ಲಿ ಏಪ್ರಿಲ್ 3, ಗುರುವಾರ ಸಂಜೆ 5-30ಕ್ಕೆ ಗುರು.ಡಾ|| ಸೌಂದರ್ಯ ಶ್ರೀವತ್ಸ ಅವರ ನಿರ್ದೇಶನದಲ್ಲಿ ನರ್ತನ ಕೀರ್ತನ ಸಂಸ್ಥೆಯ ವಿದ್ಯಾರ್ಥಿಗಳಿಂದ ಭರತನಾಟ್ಯ ಪ್ರದರ್ಶನ ಕಾರ್ಯಕ್ರಮ ಏರ್ಪಡಿಸಲಾಗಿದೆ ಎಂದು ಶ್ರೀ ನಂದಕಿಶೋರ್ ಆಚಾರ್ಯರು ತಿಳಿಸಿದ್ದಾರೆ. ಸ್ಥಳ : ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠ, 11ನೇ ಮುಖ್ಯರಸ್ತೆ, 45ನೇ ಅಡ್ಡರಸ್ತೆ, ಜಯನಗರ 5ನೇ ಬಡಾವಣೆ, ಬೆಂಗಳೂರು-41



# ಉದ್ಯಮಿಗೆ ಹನಿಟ್ರ್ಯಾಪ್; ಶಿಕ್ಷಕಿ, ರೌಡಿ ಸಹಿತ ಮೂವರ ಬಂಧನ

• ಉದಯವಾಹಿನಿ, ಬೆಂಗಳೂರು


ಉದ್ಯಮಿಯೊಬ್ಬರನ್ನು ಹನಿಟ್ರ್ಯಾಪ್‌ಗೆ ಬೀಳಿಸಿ ಅವರಿಂದ ಲಕ್ಷಾಂತರ ರೂ. ಸುಲಿಗೆ ಮಾಡಿದ್ದ ಆರೋಪದಡಿ ಶಿಕ್ಷಕಿ ಹಾಗೂ ರೌಡಿಶೀಟರ್ ಸಹಿತ ಮೂವರನ್ನು ಸಿಸಿಬಿ ಪೊಲೀಸರು ಬಂಧಿಸಿದ್ದಾರೆ. ಶಿಕ್ಷಕಿ ಶ್ರೀದೇವಿ ರೂಡಗಿ (25), ಆಕೆಯ ಪ್ರಿಯಕರ ಸಾಗರ್ ಮೋರೆ (28) ಹಾಗೂ ರೌಡಿ ಶೀಟರ್ ಗಣೇಶ್ ಕಾಳೆ (38) ಎಂಬವನನ್ನು ಬಂಧಿಸಲಾಗಿದ್ದು ಮೂವರು ಆರೋಪಿಗಳು ವಿಜಯಪುರ ಮೂಲದವರು ಎಂದು ತಿಳಿದುಬಂದಿದೆ. ಸುಲಿಗೆ ಸಂಬಂಧ 34 ವರ್ಷದ ಉದ್ಯಮಿ ರಾಜೇಶ್ ನೀಡಿದ್ದ ದೂರಿನನ್ವಯ ಆರೋಪಿಗಳನ್ನು ಬಂಧಿಸಲಾಗಿದೆ. ಬಂಧಿತ ಆರೋಪಿ ರೌಡಿ ಗಣೇಶ್ ಕಾಳೆಯ ವಿರುದ್ಧ ವಿವಿಧ ಠಾಣೆಗಳಲ್ಲಿ ಸುಲಿಗೆ, ಕೊಲೆಯತ್ನ ಸಹಿತ 9 ಪ್ರಕರಣಗಳು ದಾಖಲಾಗಿವೆ ಎಂದು ತಿಳಿದುಬಂದಿದೆ.

# ಬಿಜೆಪಿಗರು ರೈತ ವಿರೋಧಿಗಳು ಡಿ.ಕೆ. ಶಿವಕುಮಾರ್ ಕಿಡಿ

• ಉದಯವಾಹಿನಿ, ಬೆಂಗಳೂರು

ರೈತರಿಗೆ ನೆರವಾಗಲು ರಾಜ್ಯ ಸರ್ಕಾರ ಹಾಲಿನ ದರ ಏರಿಕೆ ಮಾಡಿದೆ. ಹಾಲಿನ ದರ ಏರಿಕೆ ವಿರುದ್ಧ ಪ್ರತಿಭಟನೆ ಮಾಡುತ್ತಿರುವ ಬಿಜೆಪಿಗರು ರೈತ ವಿರೋಧಿಗಳು ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಟೀಕಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹಾಲಿನ ದರ ಏರಿಕೆ ಖಂಡಿಸಿ ಹೋರಾಟ ಮಾಡುತ್ತಿರುವ ಬಿಜೆಪಿಯವರು ಜನರ ಬಗ್ಗೆ ಕಾಳಜಿ ಇದ್ದರೆ ಪೆಟ್ರೋಲ್, ಡೀಸೆಲ್, ಜಾನುವಾರುಗಳಿಗೆ ಹಾಕುವ ಬೂಸಾ, ಮೇವು ದರಗಳನ್ನು ಕಡಿಮೆ ಮಾಡಲಿ ಎಂದು ಸವಾಲು ಹಾಕಿದರು. ಕೇಂದ್ರ ಸಚಿವ ಕುಮಾರಸ್ವಾಮಿಯವರು ಅವರ ಸಹೋದರರೆ ಹಾಸನ ಹಾಲು ಒಕ್ಕೂಟದ ಅಧ್ಯಕ್ಷರಾಗಿದ್ದಾರೆ. ಅವರಿಗೆ ಬೆಲೆ ಕಡಿಮೆ ಮಾಡುವ ಅವಕಾಶ ಇದೆ. ಹಾಸನದಲ್ಲಿ ಅವರು ಹಾಲಿನ ಬೆಲೆಯನ್ನು 4 ರೂಪಾಯಿ ಕಡಿಮೆ ಮಾಡಲಿ, ನೋಡೋಣ ಎಂದು ಹೇಳಿದರು. ರೈತರು ಹಾಗೂ ಸ್ಥಳೀಯ ಸಂಸ್ಥೆಗಳಿಗೆ ಶಕ್ತಿ ನೀಡಲು ಹಾಲಿನ ದರವನ್ನು ಏರಿಸಿದ್ದೇವೆ ಎಂದು ಅವರು ಹಾಲಿನ ದರ ಏರಿಕೆಯನ್ನು ಸಮರ್ಥಿಸಿಕೊಂಡ ಅವರು, ಬೇರೆ ರಾಜ್ಯಗಳಿಗೆ ಹೋಲಿಸಿದರೆ ನಮ್ಮ ರಾಜ್ಯದಲ್ಲಿ ಹಾಲು-ಮೊಸರಿನ ಬೆಲೆ ಕಡಿಮೆ ಇದೆ ಎಂದರು.



ವಿದ್ಯುತ್ ದರ ಏರಿಕೆ ವಿರುದ್ಧ ಹೋರಾಟ ನಡೆಸುತ್ತಿರುವ ಬಿಜೆಪಿಯವರು ನಾವು ವಿದ್ಯುತ್ ದರ ಕಡಿಮೆ ಮಾಡಿದಾಗ ಏಕೆ ಮಾತನಾಡಲಿಲ್ಲ. ಬೆಲೆ ಏರಿಕೆಯ ವಿರುದ್ದದ ಇವರ ಹೋರಾಟದ ಕೇವಲ ರಾಜಕಾರಣಕ್ಕಾಗಿ ಮಾತ್ರ ಎಂದು ಟೀಕಿಸಿದರು. ಕಸ ಸಂಗ್ರಹಣೆಗೆ ಸೆಸ್ ವಿಧಿಸುತ್ತಿರುವ ಬಗ್ಗೆ ಪ್ರತಿಕ್ರಿಯಿಸಿದ ಅವರು, ಕೇಂದ್ರ ಬಿಜೆಪಿ ಸರ್ಕಾರ ಈ ಕಾನೂನು ಮಾಡಿದ್ದು, 2022ರಲ್ಲೇ ದುಬಾರಿ ಸೆಸ್ ವಿಧಿಸಿದ್ದರು. ನಾವು ಅದನ್ನು ಕಡಿಮೆ ಮಾಡುತ್ತಿದ್ದೇವೆ. ಈ ವಿಚಾರವಾಗಿ ಜಾಹೀರಾತು ಹಾಗೂ ಪತ್ರಿಕಾ ಪ್ರಕಟಣೆ ಹೊರಡಿಸಿ ಎಂದು ಅಧಿಕಾರಿಗಳಿಗೆ ಸೂಚಿಸಿದ್ದೇನೆ ಎಂದರು.

### ನೀರಿನ ದರ ಏರಿಕೆ ಅನಿವಾರ್ಯ

**ಬೆಂಗಳೂರಿನಲ್ಲಿ ಕುಡಿಯುವ ನೀರಿನ ಬೆಲೆಯನ್ನು ಪ್ರತಿ ಲೀಟರ್‌ಗೆ ಕನಿಷ್ಠ 1 ಪೈಸೆಯಷ್ಟು ಏರಿಕೆ ಮಾಡಲೇಬೇಕಿದೆ. ಬಡವರಿಗೆ ಹೊರೆಯಾಗದಂತೆ ನೀರಿನ ದರ ಹೆಚ್ಚಳಕ್ಕೆ ಸೂಚನೆ ನೀಡಲಾಗಿದೆ. ಜಲಮಂಡಳಿ ವಾರ್ಷಿಕವಾಗಿ 1 ಸಾವಿರ ಕೋಟಿ ರೂಪಾಯಿ ನಷ್ಟ ಅನುಭವಿಸುತ್ತಿದೆ. ಮುಂದಿನ ದಿನಗಳಲ್ಲಿ ಕುಡಿಯುವ ನೀರಿನ ಯೋಜನೆಗಳನ್ನು ಕೈಗೆತ್ತಿಕೊಳ್ಳಬೇಕಾದರೆ ದರ ಏರಿಕೆ ಅನಿವಾರ್ಯ ಎಂದರು.**

# 6 ವಾರಗಳಲ್ಲಿ ಬೈಕ್ ಟ್ಯಾಕ್ಸಿ ಸೇವೆ ರದ್ದುಗೊಳಿಸಿ

• ಉದಯವಾಹಿನಿ, ಬೆಂಗಳೂರು

ಬೈಕ್ ಟ್ಯಾಕ್ಸಿ ಕಾರ್ಯಾಚರಣೆಯನ್ನು ನಿಲ್ಲಿಸಲು ಕರ್ನಾಟಕ ಹೈಕೋರ್ಟ್ ಓಲಾ, ಉಬರ್ ಮತ್ತು ರ್ಯಾಪಿಡೊಗಳಿಗೆ ಆರು ವಾರಗಳ ಕಾಲಾವಕಾಶ ನೀಡಿದೆ. ಆರು ವಾರಗಳ ನಂತರ, ಬೈಕ್ ಟ್ಯಾಕ್ಸಿ ಕಾರ್ಯಾಚರಣೆ ರದ್ದಾಗಿರುವುದನ್ನು ಖಚಿತಪಡಿಸಿಕೊಳ್ಳಬೇಕು ಎಂದು ರಾಜ್ಯ ಸರ್ಕಾರಕ್ಕೆ ಹೈಕೋರ್ಟ್ ನಿರ್ದೇಶನ ನೀಡಿದೆ.

ಮೋಟಾರ್ ಸೈಕಲ್‌ಗಳನ್ನು ಸಾರಿಗೆ ವಾಹನಗಳಾಗಿ ನೋಂದಾಯಿಸಲು 2022ರಲ್ಲಿ ಸಲ್ಲಿಸಿದ ಅರ್ಜಿಗಳನ್ನು ಪರಿಗಣಿಸುವಂತೆ ರಾಜ್ಯ ಸರ್ಕಾರಕ್ಕೆ ನಿರ್ದೇಶನ ಕೋರಿ ಉಬರ್ ಇಂಡಿಯಾ ಸಿಸ್ಟಮ್ಸ್ ಪ್ರೈವೇಟ್ ಲಿಮಿಟೆಡ್, ಎಎನ್‌ಐ ಟೆಕ್ನಾಲಜೀಸ್ ಪ್ರೈವೇಟ್ ಲಿಮಿಟೆಡ್ ಮತ್ತು ಇತರರು ಸಲ್ಲಿಸಿದ ಅರ್ಜಿಗಳ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಬಿ ಎಂ ಶ್ಯಾಮ್ ಪ್ರಸಾದ್ ಅವರು ಬುಧವಾರ ಈ ಆದೇಶ ಹೊರಡಿಸಿದ್ದಾರೆ. ಮೋಟಾರು ವಾಹನ ಕಾಯ್ದೆ, 1988 ರ ಸೆಕ್ಷನ್ 93 ಮತ್ತು ಅದರ ಅಡಿಯಲ್ಲಿರುವ ನಿಯಮಗಳ ಬಗ್ಗೆ ರಾಜ್ಯ ಸರ್ಕಾರ ಮಾರ್ಗಸೂಚಿಗಳನ್ನು ಹೊರಡಿಸಿದ ಹೊರತು, ಅರ್ಜಿದಾರರು ಬೈಕ್ ಟ್ಯಾಕ್ಸಿ ಸೇವೆ ನೀಡಲು ಸಾಧ್ಯವಿಲ್ಲ ಮತ್ತು ಈ ಸಂಬಂಧ ಕರ್ನಾಟಕ ಸಾರಿಗೆ ಇಲಾಖೆಗೆ ಮೋಟಾರ್ ಸೈಕಲ್‌ಗಳನ್ನು ಸಾರಿಗೆ ವಾಹನಗಳಾಗಿ ನೋಂದಾಯಿಸಲು ನಿರ್ದೇಶನ ನೀಡಲಾಗುವುದಿಲ್ಲ ಎಂದು ನ್ಯಾಯಾಲಯ ಹೇಳಿದೆ. ಈ ಅರ್ಜಿಗಳ ವಿಚಾರಣೆಯ ಸಮಯದಲ್ಲಿ ನ್ಯಾಯಾಲಯ ನೀಡಿದ ಮಧ್ಯಂತರ ಆದೇಶದ ಆಧಾರದ ಮೇಲೆ ಓಲಾ, ಉಬರ್ ಮತ್ತು ರ್ಯಾಪಿಡೋ ಬೈಕ್ ಟ್ಯಾಕ್ಸಿಗಳು ಕಾರ್ಯನಿರ್ವಹಿಸುತ್ತಿವೆ ಎಂಬ ಅಂಶದ ಬಗ್ಗೆ ನ್ಯಾಯಾಲಯದ ಗಮನ ಸೆಳೆದಾಗ, ನ್ಯಾಯಾಲಯವು ಇಂದಿನಿಂದ ಆರು ವಾರಗಳ ಕಾಲ ಕಾರ್ಯನಿರ್ವಹಿಸಲು ಅವರಿಗೆ ಅನುಮತಿ ನೀಡಿದೆ 6ವಾರಗಳ ನಂತರ ತಮ್ಮ ಕಾರ್ಯಾಚರಣೆಯನ್ನು ನಿಲ್ಲಿಸಬೇಕು ಎಂದು ಹೇಳಿದೆ.



ಉದಯವಾಹಿನಿ ಚಿತ್ರ

# ಜ್ಯೂಸ್ ಎಂದು ಕ್ರಿಮಿನಾಶಕ ಸೇವಿಸಿದ ವಿದ್ಯಾರ್ಥಿನಿ ಸಾವು

• ಉದಯವಾಹಿನಿ, ಬೆಂಗಳೂರು

ಆಲೋವೆರಾ ಜ್ಯೂಸ್ ಎಂದು ಬಾಲಕಿಯೊಬ್ಬಳು ಕ್ರಿಮಿನಾಶಕ ಸೇವಿಸಿದ್ದು, ಪೋಷಕರ ನಿರ್ಲಕ್ಷ್ಯಕ್ಕೆ ಬಲಿಯಾಗಿರುವ ಘಟನೆ ಮೈಸೂರು ರಸ್ತೆಯ ಬ್ಯಾಟರಾಯನಪುರದಲ್ಲಿ ನಡೆದಿದೆ. 9ನೇ ತರಗತಿ ವಿದ್ಯಾರ್ಥಿನಿ ನಿಧಿ ಕೃಷ್ಣ(14) ಮೃತ ಬಾಲಕಿ. ಬಾಲಕಿಯು ಆರೋಗ್ಯ ಕಾಪಾಡಿಕೊಳ್ಳಲು ಪ್ರತಿನಿತ್ಯ ಆಲೋವೆರಾ ಜ್ಯೂಸ್ ಕುಡಿಯುತ್ತಿದ್ದಳು. ಆದರೆ ಆಲೋವೆರಾ ಡಬ್ಬದಲ್ಲಿ ಗಿಡಗಳಿಗೆ ಬಳಸುವ ಹರ್ಬಿಸೈಡ್ ಔಷಧವನ್ನು ಮನೆಯವರು ತುಂಬಿಟ್ಟಿದ್ದರು. ಮಾ. 18ರಂದು ಬಾಲಕಿ ಜ್ಯೂಸ್ ಎಂದು ಕ್ರಿಮಿನಾಶಕ ಸೇವಿಸಿದ್ದಳು. ಬಳಿಕ ಅನಾರೋಗ್ಯದ ಹಿನ್ನಲೆ ಆಕೆಯನ್ನು ಕಿಮ್ಸ್ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಚಿಕಿತ್ಸೆ ಫಲಕಾರಿಯಾಗದೇ ಮಾ. 31ರಂದು ಬಾಲಕ ಸಾವನ್ನಪ್ಪಿದ್ದಾಳೆ.

# ವಿಧಾನಸೌಧ ಮುಂದೆ ಆತ್ಮಹತ್ಯೆಗೆ ಯತ್ನಿಸಿದ ಯುವಕ

• ಉದಯವಾಹಿನಿ, ಬೆಂಗಳೂರು

ಚನ್ನರಾಯಪಟ್ಟಣ ಠಾಣೆ ಪೊಲೀಸರು ಹೊಡೆದು, ಕಿರುಕುಳ ನೀಡಿದ್ದು, ತನಗೆ ನ್ಯಾಯ ಒದಗಿಸುವಂತೆ ಆಗ್ರಹಿಸಿವಿಧಾನಸೌಧ ಮುಂದೆ ವಿಷ ಸೇವಿಸಲು ಯತ್ನಿಸಿದ ಯುವಕನನ್ನು ಪೊಲೀಸರು ವಶಕ್ಕೆ ಪಡೆದುಕೊಂಡಿದ್ದಾರೆ.



ಉದಯವಾಹಿನಿ ಚಿತ್ರ

ಹಾಸನ ಜಿಲ್ಲೆಯ ಚನ್ನರಾಯಪಟ್ಟಣ ಮೂಲದ ಸಂಜಯ್ ಎಂಬಾತ ನನಗೆ ನ್ಯಾಯಬೇಕೆಂದು ವಿಧಾನಸಸೌಧದ ಮುಂದೆ ವಿಷ ಸೇವಿಸಿ ಆತ್ಮಹತ್ಯೆಗೆ ಯತ್ನಿಸಿದ್ದಾನೆ.
ಪ್ರಧಾನಿ ಮೋದಿಯಿಂದ ಇಂದ್ರಾಳಿ ರೈಲ್ವೆ ಮೇಲೇತುವೆ ಉದ್ಘಾಟನೆ ಕೂಡಲೇ ಪೊಲೀಸರು ತಡೆದು ಆಸ್ಪತ್ರೆಗೆ ಕರೆದೊಯ್ದು ಚಿಕಿತ್ಸೆ ಕೊಡಿಸಿದ್ದು, ಬಳಿಕ ಸಂಜಯ್‌ನನ್ನು ವಿಧಾನಸೌಧ ಪೊಲೀಸರು ವಶಕ್ಕೆ ಪಡೆದುಕೊಂಡಿದ್ದಾರೆ. ಚನ್ನರಾಯಪಟ್ಟಣ ಠಾಣೆ ಪೊಲೀಸರು ಹೊಡೆದು ಕಿರುಕುಳ ನೀಡಿದ್ದು ನನಗೆ ನ್ಯಾಯಬೇಕೆಂದು ಸಂಜಯ್ ಆತ್ಮಹತ್ಯೆಗೆ ಯತ್ನಿಸಿದ್ದಾನೆ ಎಂದು ತಿಳಿದುಬಂದಿದೆ.

# ತಿಂಗಳಲ್ಲಿ 398 ಕೇಸ್-324 ಮಂದಿ ಬಂಧನ, ಪುಂಡರಿಂದ 1 ಲಕ್ಷ ರೂ. ಶೂರಿಟಿ ಪಡೆಯಲು ನಿರ್ಧಾರ

• ಉದಯವಾಹಿನಿ, ಬೆಂಗಳೂರು

ರಸ್ತೆ ಸುರಕ್ಷತಾ ನಿಯಮಗಳನ್ನು ಉಲ್ಲಂಘಿಸಿ, ವ್ಹೀಲಿಂಗ್‌ನಲ್ಲಿ ಭಾಗಿಯಾಗುವವರ ವಿರುದ್ಧ ನಗರದ ಸಂಚಾರಿ ಪೊಲೀಸರು ಸಮರ ಸಾರಿದ್ದು, ಒಂದೇ ತಿಂಗಳಲ್ಲಿ 398 ಪ್ರಕರಣಗಳನ್ನು ದಾಖಲಿಸಿಕೊಂಡಿದ್ದಾರೆ.

ಮಾರ್ಚ್ 1ರಿಂದ 31ರವರೆಗೆ ನಗರದ ವಿವಿಧ ಸಂಚಾರ ಠಾಣೆಗಳ ವ್ಯಾಪ್ತಿಗಳಲ್ಲಿ ಕಾರ್ಯಾಚರಣೆ ಕೈಗೊಳ್ಳಲಾಗಿದ್ದು, ಒಂದೇ ತಿಂಗಳಲ್ಲಿ 398 ಪ್ರಕರಣಗಳು ದಾಖಲಾಗಿವೆ. ಅಲ್ಲದೆ, 324 ಮಂದಿಯನ್ನು ಬಂಧನಕ್ಕೊಳಪಡಿಸಿದ್ದು, 397 ವಾಹನಗಳನ್ನು ಜಪ್ತಿ ಮಾಡಿದ್ದಾರೆ. ಬಂಧಿತ 324 ಜನರ ಪೈಕಿ 82 ಮಂದಿ ಅಪ್ರಾಪ್ತವಯಸ್ಕರಾಗಿದ್ದು, ಪೊಲೀಸರು 197 ನೋಂದಣಿ ಪ್ರಮಾಣಪತ್ರಗಳನ್ನು (ಆರ್‌ಸಿ) ರದ್ದುಗೊಳಿಸಲು ಮತ್ತು 40 ಚಾಲನಾ ಪರವಾನಗಿಗಳನ್ನು (ಡಿಎಲ್) ಅಮಾನತುಗೊಳಿಸಲು ಶಿಫಾರಸು ಮಾಡಿದ್ದಾರೆ. ಅಲ್ಲದೆ, ನಿಯಮ ಉಲ್ಲಂಘಿಸಿದ ಪುಂಡರಿಂದ ರೂ.1 ಲಕ್ಷ ಶ್ಯೂರಿಟಿ ಬಾಂಡ್ ಪಡೆಯಲು ನಿರ್ಧರಿಸಲಾಗಿದೆ ಎಂದು ಜಂಟಿ ಪೊಲೀಸ್ ಆಯುಕ್ತ (ಸಂಚಾರ) ಎಂ.ಎನ್. ಅನುಚೇತ್ ಅವರು ತಿಳಿಸಿದ್ದಾರೆ.

ವ್ಹೀಲಿಂಗ್‌ನಲ್ಲಿ ಭಾಗಿಯಾಗುವವರ ವಿರುದ್ಧ ಕಳೆದ ಮೂರು ತಿಂಗಳಿನಲ್ಲಿ 500ಕ್ಕೂ ಹೆಚ್ಚು ಪ್ರಕರಣಗಳನ್ನು ದಾಖಲಿಸಿಕೊಳ್ಳಲಾಗಿದೆ. ಅಲ್ಲದೆ, ಭಾರತೀಯ ನಾಗರಿಕ ಸುರಕ್ಷತಾ ಸಂಹಿತೆ (ಬಿಎನ್‌ಎಸ್‌ಎಸ್) ಅಡಿಯಲ್ಲಿ 1 ಲಕ್ಷ ರೂಪಾಯಿಯ ಮುಚ್ಚಳಿಕೆ ಬರೆಸಿಕೊಳ್ಳಲಾಗುತ್ತಿದೆ.

2ನೇ ಬಾರಿ ವ್ಹೀಲಿಂಗ್‌ನಲ್ಲಿ ತೊಡಗಿದರೆ ಮುಚ್ಚಳಿಕೆ ಪ್ರಕಾರ, ವಾಹನ ಮುಟ್ಟುಗೋಲು ಪ್ರಕ್ರಿಯೆ ಜರುಗಿಸಲಾಗುತ್ತದೆ ಎಂದು ತಿಳಿಸಿದ್ದಾರೆ. ವ್ಹೀಲಿಂಗ್‌ನಲ್ಲಿ ಭಾಗಿಯಾದ ಆರೋಪಿಗಳನ್ನು ತಪಾಸಣೆಗೊಳಪಡಿಸಲಾಗುತ್ತಿದೆ. ಕೆಲವು ಪ್ರಕರಣಗಳಲ್ಲಿ ಆರೋಪಿಗಳು ಮಾದಕ ವಸ್ತು ಸೇವನೆ ಮಾಡಿರುವುದು ಮತ್ತು ಆಯುಧಗಳನ್ನಿಟ್ಟುಕೊಂಡಿರುವುದು ಕಂಡುಬಂದಿದೆ.

ವಿಜಯನಗರ, ಕಾಮಾಕ್ಷಿಪಾಳ್ಯ, ಕೆ.ಜಿ.ಹಳ್ಳಿ, ಮಡಿವಾಳ, ಅಶೋಕನಗರ ವ್ಯಾಪ್ತಿಯಲ್ಲಿ ಅಂತಹ ಪ್ರಕರಣಗಳು ವರದಿಯಾಗಿವೆ. ಆ ಸಂದರ್ಭಗಳಲ್ಲಿ ಆರೋಪಿಗಳ ವಿರುದ್ಧ ಎನ್‌ಡಿಪಿಎಸ್ ಕಾಯ್ದೆ, ಶಸ್ತ್ರಾಸ್ತ್ರ ಕಾಯ್ದೆಗಳಲ್ಲಿಯೂ ಪ್ರಕರಣ ದಾಖಲಿಸಿಕೊಳ್ಳಲಾಗಿದೆ ಎಂದು ಮಾಹಿತಿ ನೀಡಿದರು.



ಉದಯವಾಹಿನಿ ಚಿತ್ರ

ವ್ಹೀಲಿಂಗ್ ವಿರುದ್ಧ ಟ್ರಾಫಿಕ್ ಪೊಲೀಸರ ಸಮರ

**ವ್ಯಕ್ತಿ ವ್ಹೀಲಿಂಗ್ ಮಾಡುವಾಗ ಸಿಕ್ಕಿಬಿದ್ದರೆ, ಅವರ ವಿರುದ್ಧ ಕಾನೂನು ಮತ್ತು ಸುವ್ಯವಸ್ಥೆ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಿಸಲಾಗುತ್ತದೆ. ನಂತರ, ಆರೋಪಪಟ್ಟಿ ಸಲ್ಲಿಸಲಾಗುತ್ತದೆ. ಎರಡನೇ ಬಾರಿ ಸಿಕ್ಕಿಬಿದ್ದರೆ, 1 ಲಕ್ಷ ರೂ.ಗಳ ಶ್ಯೂರಿಟಿ ಬಾಂಡ್ ನೀಡಬೇಕಾಗುತ್ತದೆ. ಬಾಂಡ್ ನೀಡಲು ವಿಫಲರಾದವರನ್ನು ಜೈಲಿಗೆ ಕಳುಹಿಸಲಾಗುತ್ತದೆ ಎಂದು ಸಂಚಾರ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.**

# ಎಚ್‌ಡಿಕೆ, ಕುಟುಂಬಸ್ಥರಿಂದ ಸರಕಾರಿ ಜಮೀನು ಒತ್ತುವರಿ ಆರೋಪ

• ಉದಯವಾಹಿನಿ, ಬೆಂಗಳೂರು

ರಾಮನಗರ ಜಿಲ್ಲೆಯ ಬಿಡದಿಯ ಕೇತಗಾನಹಳ್ಳಿ ಬಳಿ ಸರಕಾರಿ ಜಮೀನು ಒತ್ತುವರಿ ಪ್ರಕರಣಕ್ಕೆ ಸಂಬಂಧಿಸಿ ಎಚ್‌ಡಿಕೆ ಹಾಗೂ ಕುಟುಂಬಸ್ಥರ ವಿರುದ್ಧ ಬಲವಂತದ ಕ್ರಮ ತೆಗೆದುಕೊಳ್ಳದಂತೆ ನೀಡಿದ್ದ ರಿಲೀಫ್ ಅನ್ನು ಹೈಕೋರ್ಟ್ ಮತ್ತೆ ಮುಂದುವರಿಸಿದೆ. 6 ಎಕರೆ ಒತ್ತುವರಿ ತೆರವಿಗೆ ತಹಶೀಲ್ದಾರ್ ನೋಟಿಸ್ ಪ್ರಶ್ನಿಸಿ ಎಚ್.ಡಿ.ಕುಮಾರಸ್ವಾಮಿ ಸಲ್ಲಿಸಿದ್ದ ಅರ್ಜಿಯನ್ನು ನ್ಯಾ.ಎನ್.ಎಸ್. ಸಂಜಯಗೌಡ ಅವರಿದ್ದ ಪೀಠದಲ್ಲಿ ವಿಚಾರಣೆ ನಡೆಯಿತು. ಈ ವೇಳೆ ತಹಶೀಲ್ದಾರ್ ವಿಚಾರಣೆ ನಡೆಸದೇ ವರದಿ ಸಲ್ಲಿಸಿದ್ದಾರೆ. ಹೀಗಾಗಿ ರಿಟ್ ಅರ್ಜಿಗೆ ಕೆಲವು ತಿದ್ದುಪಡಿ ಮಾಡಲು ಎಚ್ ಡಿಕೆ ಪರ ವಕೀಲರು ಮನವಿ ಮಾಡಿದರು.

ಹೆಚ್ಚುವರಿ ಆಕ್ಷೇಪಗಳಿದ್ದರೆ ಸಲ್ಲಿಸಲು ಸರಕಾರಕ್ಕೆ ಹೈಕೋರ್ಟ್ ಸೂಚನೆ ನೀಡಿ ವಿಚಾರಣೆಯನ್ನು ಏ.4 ಕ್ಕೆ ಮುಂದೂಡಿದೆ. ಅಲ್ಲಿಯವರೆಗೂ ಮಧ್ಯಂತರ ರಿಲೀಫ್ ವಿಸ್ತರಿಸಿ ಹೈಕೋರ್ಟ್ ಆದೇಶಿಸಿದೆ.

# 8 ಜಿಲ್ಲೆಗಳಲ್ಲಿ ಸರ್ಕಾರಿ ಕಚೇರಿ ಸಮಯ ಬದಲಾವಣೆ


• ಉದಯವಾಹಿನಿ, ಬೆಂಗಳೂರು

ಬಿಸಿಲಿನ ತಾಪಮಾನದ ಕಾರಣಕ್ಕಾಗಿ ಕಿತ್ತೂರು ಕರ್ನಾಟಕದ ಎರಡು ಜಿಲ್ಲೆಗಳು, ಕಲ್ಯಾಣ ಕರ್ನಾಟಕದ 6 ಜಿಲ್ಲೆಗಳಲ್ಲಿ ಸರ್ಕಾರಿ ಕಚೇರಿ ಕೆಲಸದ ಸಮಯ ಬದಲಾವಣೆ ಮಾಡಲಾಗಿದೆ.

ಕಲಬುರಗಿ ವಿಭಾಗದ 6 ಜಿಲ್ಲೆಗಳು, ಬೆಳಗಾವಿ ವಿಭಾಗದ ಎರಡು ಜಿಲ್ಲೆಗಳಲ್ಲಿ ಸರ್ಕಾರಿ ಕೆಲಸದ ಸಮಯ ಬದಲಾವಣೆ ಮಾಡಿ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ. ಬೆಳಗ್ಗೆ 8ರಿಂದ ಮಧ್ಯಾಹ್ನ 1:30ರ ತನಕ ಸರ್ಕಾರಿ ಕಚೇರಿಗಳ ಕೆಲಸದ ಸಮಯ ನಿಗದಿ ಮಾಡಿದ್ದು, ಏಪ್ರಿಲ್, ಮೇ ತಿಂಗಳ ಅಂತ್ಯದ ತನಕವೂ ಸರ್ಕಾರಿ ಕಚೇರಿ ಸಮಯ ಬದಲಾವಣೆ ಜಾರಿಯಲ್ಲಿ ಇರಲಿದೆ ಕಲಬುರಗಿ, ಬೀದರ್, ಬಳ್ಳಾರಿ, ವಿಜಯನಗರ, ಕೊಪ್ಪಳ, ರಾಯಚೂರು, ವಿಜಯಪುರ, ಬಾಗಲಕೋಟೆ ಜಿಲ್ಲೆಗಳಲ್ಲಿ ಸರ್ಕಾರಿ ಕಚೇರಿ ಸಮಯ ಬದಲಾವಣೆ ಆಗಲಿದೆ.

ರಾಜ್ಯ ಸರ್ಕಾರಿ ನೌಕರರ ಸಂಘದ ಮನವಿ ಮೇರೆಗೆ ಸರ್ಕಾರದ ಆದೇಶ ಹೊರಬಿದ್ದಿದೆ.

8 ಜಿಲ್ಲೆಗಳಲ್ಲಿ ಸರ್ಕಾರಿ ನೌಕರರು ಬದಲಾದ ಸಮಯದಲ್ಲಿ ತಮ್ಮ ಕರ್ತವ್ಯವನ್ನು ಎಂದಿನಂತೆ ಯಾವುದೇ ಲೋಪ/ಅಡೆತಡೆಯಿಲ್ಲದೆ ಕರ್ತವ್ಯ ನಿರ್ವಹಿಸತಕ್ಕದ್ದು. ಸಾರ್ವಜನಿಕರಿಗೆ ಯಾವುದೇ ರೀತಿ ಅನಾನುಕೂಲ ಆಗದಂತೆ ಮತ್ತು ಜಿಲ್ಲಾಧಿಕಾರಿಗಳು/ಜಿಲ್ಲಾ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು ತುರ್ತು ಸಂದರ್ಭದಲ್ಲಿ ಯಾವುದೇ ಕಾರ್ಯವನ್ನು ನಿರ್ವಹಿಸಲು ನಿರ್ದೇಶಿಸಿದಲ್ಲಿ ಕರ್ತವ್ಯ ನಿರ್ವಹಿಸತಕ್ಕದ್ದು ಎಂಬ ಷರತ್ತನ್ನು ಸಹ ಹಾಕಲಾಗಿದೆ



ಉದಯವಾಹಿನಿ ಚಿತ್ರ

# ಪಾರ್ಕಿಂಗ್, ಕಸದ ಶುಲ್ಕ ಜನರಿಗೆ ಹೊರೆಯಾಗಲ್ಲ

• ಉದಯವಾಹಿನಿ, ಬೆಂಗಳೂರು

ಹೊಸ ಪಾರ್ಕಿಂಗ್ ಶುಲ್ಕ ಹಾಗೂ ಕಸಕ್ಕೆ ತೆರಿಗೆ ವಿಧಿಸಲು ನಿರ್ಧರಿಸಿರುವ ನಮ ನಿರ್ಧಾರ ಸಾರ್ವಜನಿಕರಿಗೆ ಹೊರೆಯಾಗುವುದಿಲ್ಲ ಎಂದು ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ಸ್ಪಷ್ಟನೆ ನೀಡಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತ ನಾಡಿದ ಅವರು, ಕಾಂಪೌಂಡ್ ಒಳಗೆ ವಾಹನಗಳ ಪಾರ್ಕಿಂಗ್ ಗೆ ತೆರಿಗೆ ವಿಚಾರ, ವಾಹನಗಳ ತೆರಿಗೆ ಬಗ್ಗೆ ಸ್ಪಷ್ಟನೆ ನೀಡಿದರು.ಈ ಹಿಂದೆ ಪಾರ್ಕಿಂಗ್ ಶುಲ್ಕ ಅಂತ ಶೇ.50 ರಷ್ಟು ಹಣ ಕಟ್ಟಲಾಗ್ತಿತ್ತು. ಈಗ ಅದು ಜಾಸ್ತಿಯಿದೆ ಅಂತಾ ಆಕ್ಷೇಪಗಳು ಕೇಳಿಬಂದಿವೆ. ಹಿಂದೆ ಜೋನ್‌ಗಳ ಆಧಾರದ ಮೇಲೆ ಶುಲ್ಕ ನಿಗದಿಯಾಗಿತ್ತು ಆಗ ನಮಗೆ 211 ಕೋಟಿ ರೂ.ಗಳ ಆದಾಯ ಬರುತ್ತಿತ್ತು. ಆದರೆ, ಹೊಸ ಪದ್ದತಿಯಿಂದ 43 ಕೋಟಿ ಅಷ್ಟು ಆದಾಯ ಕಡಿಮೆಯಾಗ್ತಿದೆ ಎಂದು ಅವರು ಮಾಹಿತಿ ನೀಡಿದರು.

ನಮಗೆ ಕೋಟಿ ಕೋಟಿ ಹೊರೆಯಾದರೂ ಕೂಡ ಜನರಿಗೆ ಸಹಾಯವಾಗಲಿ ಅಂತಾ ಹೊಸ ವ್ಯವಸ್ಥೆ ಮಾಡಿದ್ದೇವೆ ಇದರಿಂದ ಸಾರ್ವಜನಿಕರಿಗೆ ತೊಂದರೆಯಾಗುವುದಿಲ್ಲ ಎಂದು ಅವರು ಸ್ಪಷ್ಟನೆ ನೀಡಿದರು. ಅದೇ ರೀತಿ ಕಸ ಸಂಗ್ರಹ ತೆರಿಗೆ ವಿಚಾರವಾಗಿ ಸಾಕಷ್ಟು ಚರ್ಚೆಯಾಗ್ತಿದೆ. 1986ರ ಪರಿಸರ ಸಂರಕ್ಷಣೆ ಕಾಯ್ದೆಯಲ್ಲಿ ಬೈಲಾ ಇದೆ. ಬಿಬಿಎಂಪಿಯಲ್ಲಿ 2020ರಲ್ಲಿ ಬೈಲಾ ಮಾಡಿ, ತ್ಯಾಜ್ಯ ಉತ್ಪತ್ತಿಯ ಮೇಲೆ ರೇಟ್ ನಿಗದಿ ಮಾಡಿದ್ದೇವೆ ಎಂದು ಅವರು ಹೇಳಿದರು.

2020ರಲ್ಲಿ ಜನಪ್ರತಿನಿಧಿಗಳು ಇದ್ದಾಗಲೇ ಇದು ರೆಡಿಯಾಗಿತ್ತು. ಜನಸಾಮಾನ್ಯರ ಮೇಲೆ ಯಾವ ರೀತಿ ತೆರಿಗೆ ಹಾಕಬೇಕು ಪ್ಲಾನ್ ಆಗಿತ್ತು. ಈಗಾಗಲೇ ಬೇರೆ ಬೇರೆ ರಾಜ್ಯ, ಲೋಕಲ್ ಆಡಳಿತದಲ್ಲೂ ಈ ಪದ್ಧತಿ ಜಾರಿಯಿದೆ ಎಂದು ಅವರು ಸಮಜಾಯಿಷಿ ನೀಡಿದರು. ಪುಣೆ, ಮುಂಬೈ ಸೇರಿ ಹಲವೆಡೆ ಈಗಾಗಲೇ ಕಸಕ್ಕೆ ತೆರಿಗೆ ವಿಧಿಸುವ ಪದ್ಧತಿ ಚಾಲ್ತಿಯಲ್ಲಿದೆ.

**ಆದ್ರೆ ಬೈಲಾಗಿಂತ ಶೇ.50 ರಷ್ಟು ಕಡಿಮೆ ತೆರಿಗೆ ವಸೂಲಿಗೆ ಜಾರಿ ಮಾಡುತ್ತಿದ್ದೇವೆ. ಕಮರ್ಷಿಯಲ್, ಬಲ್ಕ ತ್ಯಾಜ್ಯ ಉತ್ಪಾದಕರಿಂದ ಚಾರ್ಜ್ ಮಾಡಿದ್ದೇವೆ. ರೂಲ್?ಸ ಮಾಡೋದು 2020ರಲ್ಲೇ ಆಗಿತ್ತು, ಜಾರಿಯಾಗಿರಲಿಲ್ಲ. ಈಗ ಬೈಲಾ ಇದ್ದಿದ್ದರಿಂದ ಜಾರಿ ಮಾಡಿದ್ದೇವೆ. ಈಗ ಸಂಗ್ರಹವಾಗೋ ಹಣದಿಂದ ಕಸ ವಿಲೇವಾರಿ ನಿರ್ವಹಣೆ ಖರ್ಚು ನಿಭಾಯಿಸ್ತೀವೆ ಎಂದು ಅವರು ತಿಳಿಸಿದರು.**



2020ರಲ್ಲಿ ಕೋವಿಡ್ ಬಂದ ಹಿನ್ನೆಲೆ ನಾವು ಜಾರಿ ಮಾಡೋಕೆ ಆಗಿರಲಿಲ್ಲ ಈಗ ಸರ್ಕಾರದ ಅನುಮತಿ ಪಡೆದು ಜಾರಿ ಮಾಡುತ್ತಿದ್ದೇವೆ ಎಂದು ಆಯುಕ್ತರು ವಿವರಿಸಿದರು.

# ಹಾವೇರಿಯಲ್ಲಿ ವಂದೇ ಭಾರತ್ ರೈಲು ನಿಲುಗಡೆ

• ಉದಯವಾಹಿನಿ, ಬೆಂಗಳೂರು

ಭಾರತೀಯ ರೈಲ್ವೆ ಇಲಾಖೆ ವತಿಯಿಂದ ಕರ್ನಾಟಕದ ರೈಲು ಪ್ರಯಾಣಿಕರಿಗೆ ಸಂತಸದ ಸುದ್ದಿ ಬಂದಿದೆ.ಬೆಂಗಳೂರು-ಧಾರವಾಡ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲಿನ ನಿಲುಗಡೆಗೆ ಸಂಬಂಧಿಸಿದಂತೆ ಮಹತ್ವದ ಆದೇಶ ಹೊರಡಿಸಲಾಗಿದೆ, ಅದನ್ನು ಹಾವೇರಿಯಲ್ಲಿ ನಿಲುಗಡೆ ಮಾಡಲು ನಿರ್ದೇಶಿಸಲಾಗಿದೆ. ಮಾಜಿ ಮುಖ್ಯಮಂತ್ರಿ, ಸಂಸದ ಬಸವರಾಜ ಬೊಮ್ಮಾಯಿ ಅವರು ಹಾವೇರಿಯಲ್ಲಿ ನಿಲುಗಡೆಗೆ ಸೂಚಿಸುವಂತೆ ರೈಲ್ವೆ ಇಲಾಖೆಯನ್ನು ಕೋರಿದ್ದರು. ಇದನ್ನು ಒಪ್ಪಿಕೊಂಡು ರೈಲ್ವೆ ಇಲಾಖೆ ಈಗ ಆದೇಶ ಹೊರಡಿಸಿದೆ.

**ರೈಲ್ವೆ ಇಲಾಖೆಯ ಆದೇಶದಲ್ಲಿ ಏನಿದೆ:** ಬೆಂಗಳೂರು-ಧಾರವಾಡ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲಿಗೆ ಹಾವೇರಿ ನಿಲ್ದಾಣದಲ್ಲಿ ತಕ್ಷಣದಿಂದಲೇ ಪ್ರಾಯೋಗಿಕ ನಿಲುಗಡೆ ನೀಡಬೇಕು. ಟಿಕೆಟ್ ವಿತರಣೆಯ ಮೇಲೆ ನಿಗಾ ಇಡಬೇಕು ಮತ್ತು ಹಾವೇರಿಯಲ್ಲಿ ನಿಲುಗಡೆ ಬಗ್ಗೆ ಹೆಚ್ಚಿನ ಜನರಿಗೆ ಮಾಹಿತಿ ನೀಡಬೇಕು ಎಂದು ರೈಲ್ವೆ ಇಲಾಖೆಯ ಆದೇಶದಲ್ಲಿ ತಿಳಿಸಲಾಗಿದೆ.

ತಮ್ಮ ಕೋರಿಕೆಯ ಮೇರೆಗೆ ಬೆಂಗಳೂರು-ಧಾರವಾಡ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲಿಗೆ ಹಾವೇರಿಯಲ್ಲಿ ನಿಲುಗಡೆ ನೀಡಿದ ಕೇಂದ್ರ ಸರ್ಕಾರ ಮತ್ತು ರೈಲ್ವೆ ಇಲಾಖೆಗೆ ಬಸವರಾಜ ಬೊಮ್ಮಾಯಿ ಧನ್ಯವಾದ ಅರ್ಪಿಸಿದ್ದಾರೆ. ಸಾಮಾಜಿಕ ಮಾಧ್ಯಮದಲ್ಲಿ ಸಂದೇಶವೊಂದನ್ನು ಬಿಡುಗಡೆ ಮಾಡಿರುವ ಅವರು, ಧಾರವಾಡ ಮತ್ತು ಬೆಂಗಳೂರು ನಡುವೆ ಚಲಿಸುವ ವಂದೇ ಭಾರತ್ ರೈಲನ್ನು ಹಾವೇರಿಯಲ್ಲಿ ನಿಲ್ಲಿಸಲು ಆದೇಶಿಸಿದ್ದಕ್ಕಾಗಿ ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಮತ್ತು ರೈಲ್ವೆ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ ಅವರಿಗೆ ಧನ್ಯವಾದಗಳನ್ನು ಅರ್ಪಿಸುತ್ತೇನೆ ಎಂದು ಹೇಳಿದ್ದಾರೆ.

# 136 ಕಳ್ಳರು, ಅಭಿವೃದ್ಧಿಗೆ ಹಣ ಇಲ್ಲ, ಅದಕ್ಕೆ ಬೆಲೆ ಏರಿಕೆ

## ಐದು ಗ್ಯಾರಂಟಿಗಾಗಿ ಕರ್ನಾಟಕದ ಮನೆ ಮನೆ ಲೂಟಿ ಆಗ್ತಿದೆ: ಆರ್ ಅಶೋಕ್ ಆರೋಪ

• ಉದಯವಾಹಿನಿ, ಬೆಂಗಳೂರು

ಕಾಂಗ್ರೆಸ್ ಚುನಾವಣೆಗೆ ಮುನ್ನ ಬೆಲೆ ಏರಿಕೆ ಮಾಡಲ್ಲ, ಐದು ಗ್ಯಾರಂಟಿ ಕೊಡುತ್ತೇವೆ ಎಂದಿತ್ತು. ಆದರೆ ಎರಡು ವರ್ಷಗಳಲ್ಲಿ ಹಾಲಿನ ದರ ಮೂರು ಬಾರಿ ಏರಿಕೆ ಮಾಡಲಾಗಿದೆ. ಸರ್ಕಾರದಲ್ಲಿ 136 ಜನ ಕಳ್ಳರು ಇದ್ದಾರೆ. ಸರ್ಕಾರದ ಬಳಿ ಅಭಿವೃದ್ಧಿಗೆ ಹಣ ಇಲ್ಲ. ಅದಕ್ಕಾಗಿ ಬೆಲೆ ಏರಿಕೆ ಮೂಲಕ ಲೂಟಿ ಮಾಡಲಾಗುತ್ತಿದೆ ಎಂದು ವಿರೋಧ ಪಕ್ಷದ ನಾಯಕ ಆರ್ ಅಶೋಕ್ ವಾಗ್ದಾಳಿ ನಡೆಸಿದರು.

ನಗರದ ಫ್ರೀಡಂ ಪಾರ್ಕ್‌ನಲ್ಲಿ ನಡೆದ ಅಹೋರಾತ್ರಿ ಧರಣಿಯಲ್ಲಿ ಭಾಗಿಯಾಗಿ ಮಾತನಾಡಿದ ಅವರು, ಬಜೆಟ್‌ನಲ್ಲಿ ಯಾವುದೇ ತೆರಿಗೆ ತೋರಿಸದೆ ಇದೀಗ ಬೆಲೆ ಏರಿಕೆ ಮಾಡಲಾಗ್ತಿದೆ. ಐದು ಗ್ಯಾರಂಟಿಗಾಗಿ ಕರ್ನಾಟಕದ ಮನೆ ಮನೆ ಲೂಟಿ ಆಗ್ತಿದೆ ಎಂದು ಆರೋಪಿಸಿದರು.



ಉದಯವಾಹಿನಿ ಚಿತ್ರ

### ಕಾಂಗ್ರೆಸ್‌ನಲ್ಲಿ ಕಲೆಕ್ಷನ್ ಜಗಳ

**ಕಾಂಗ್ರೆಸ್‌ನಲ್ಲಿ ಕಲೆಕ್ಷನ್ ಜಗಳ ಜೋರಾಗಿದೆ ಎಂದು ವಿಧಾನಪರಿಷತ್ ಬಿಜೆಪಿ ಸದಸ್ಯ ಸಿಟಿ ರವಿ ವಾಗ್ದಾಳಿ ನಡೆಸಿದರು. ಸರ್ಕಾರ ಜನ ವಿರೋಧಿ ಸರ್ಕಾರವಾಗಿದೆ. ಇದನ್ನು ತೊಲಗಿಸಿಬೇಕು. ಕಾಕಾ ಪಾಟೀಲ್‌ಗೆ ಹಾಗೂ ಮಹದೇವವಪ್ಪಗೆ ಬರೆ ಜಮೀರ್ ಅಹ್ಮದ್ ಬೆಣ್ಣೆ ಕೊಡಲಾಗಿದೆ. ಮತಾಧಾರಿತ ಮೀಸಲಾತಿಯನ್ನು ಡಾ. ಬಿ ಆರ್ ಅಂಬೇಡ್ಕರ್ ಒಪ್ಪಿಲ್ಲ. ಆದರೆ ಸಂವಿಧಾನ ಬದಲಾವಣೆ ಮಾಡುತ್ತೇವೆ ಎಂದು ಡಿಸಿಎಂ ಡಿಕೆ ಶಿವಕುಮಾರ್ ಹೇಳಿದ್ದಾರೆ. ಆದರೆ, ಕಾಂಗ್ರೆಸ್ ನ್ನು ಪಾಕಿಸ್ತಾನಕ್ಕೆ ಓಡಿಸಿಯಾದರೂ ಸಂವಿಧಾನ ಉಳಿಸುತ್ತೇವೆ ಎಂದು ಎಚ್ಚರಿಕೆ ನೀಡಿದರು.ಅನ್ಯಾಯದ ವಿರುದ್ಧ ಜನ ಆಕ್ರೋಶ ಸ್ಫೋಟಗೊಳ್ಳಬೇಕು. ಹಾಗಾದರೆ ಮಾತ್ರ 33 ತಲೆಯ ರಾವಣ ಭಸ್ಮವಾಗುತ್ತಾನೆ ಎಂದು ವಾಗ್ದಾಳಿ ನಡೆಸಿದರು.**

ಸಚಿವರು ಅಂಗಡಿ ತೆರೆದಿದ್ದಾರೆ.

40% ಆರೋಪಕ್ಕೆ ಸಾಕ್ಷಿ ಇಲ್ಲ. ಆದರೆ ಕಾಂಗ್ರೆಸ್ ಸರ್ಕಾರ 60% ಕಮಿಷನ್ ಪಡೆದುಕೊಳ್ಳುತ್ತಿದೆ. ಸ್ಮಾರ್ಟ್ ಮೀಟರ್‌ನಲ್ಲಿ 15,000 ಹಗರಣ ನಡೆದಿದೆ.

ಸಿದ್ದರಾಮಯ್ಯ ಹೆಸರಿಗಷ್ಟೇ ಸಿಎಂ. ಸರ್ಕಾರದ ಗಾಲಿ ಕುರ್ಚಿಯಲ್ಲಿದೆ ಎಂದು ಕಿಡಿಕಾರಿದರು.

# ಕೆಎಸ್‌ಐಸಿ ಹೊರಗುತ್ತಿಗೆ ನೌಕರರಿಂದ ಪ್ರತಿಭಟನೆ

• ಉದಯವಾಹಿನಿ, ಮೈಸೂರು

ಕೆಎಸ್‌ಐಸಿಯ ಸುಮಾರು 750ಕ್ಕೂ ಹೆಚ್ಚು ಹೊರ ಗುತ್ತಿಗೆ ನೌಕರರಿಗೆ ನಿಯಮಬಾಹಿರವಾಗಿ ಕೆಲಸ ನಿರಾಕರಿಸುವುದನ್ನು ಖಂಡಿಸಿ ಕೆಎಸ್‌ಐಸಿ ಹೊರಗುತ್ತಿಗೆ ಮತ್ತು ಇತರೆ ನೌಕರರ ಸಂಘದ ವತಿಯಿಂದ ಕೆಎಸ್‌ಐಸಿ ಮುಂಭಾಗ ಪ್ರತಿಭಟನೆ ನಡೆಸಲಾಯಿತು. ಕೆಎಸ್‌ಐಸಿಯ ವಿವಿಧ ಘಟಕಗಳಲ್ಲಿ 815ಕ್ಕೂ ಹೆಚ್ಚು ಕಾರ್ಮಿಕರು ಹೊರಗುತ್ತಿಗೆ ಅಡಿಯಲ್ಲಿ ಕಾರ್ಯ ನಿರ್ವಹಿಸುತ್ತಿದ್ದು ಗುತ್ತಿಗೆ ಏಜೆನ್ಸಿ, ಕೆಎಸ್‌ಐಸಿ ಆಡಳಿತ ಮಂಡಳಿ ಶಾಸನಾತ್ಮಕ ಸೌಲಭ್ಯಗಳಾದ ಕನಿಷ್ಠ ಕೂಲಿ, ಗಳಿಕೆ ರಜಾ, ಒಟಿ ಕೆಲಸಕ್ಕೆ ದುಪ್ಪಟ್ಟು ಕೂಲಿ ನೀಡದೆ ವಂಚಿಸುತ್ತಿದೆ. ಈ ಸಂಬಂಧ ಮೈಸೂರಿನ ರೇಷ್ಮೆ ನೇಯ್ಗೆ ಕಾರ್ಖಾನೆ ಘಟಕದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಲ್ಕ್ ವೀವಿಂಗ್ ಫ್ಯಾಕ್ಟರಿ ಎಂಪ್ಲಾಯೀಸ್ ಯೂನಿಯನ್ (ಐಎನ್‌ಟಿಯುಸಿ) 2023ರ ಡಿ.4ರಂದು ಸಹಾಯಕ ಕಾರ್ಮಿಕ ಆಯುಕ್ತರಿಗೆ ಲಿಖಿತ ದೂರು ನೀಡಿತ್ತು. ದೂರಿನ ಸಂಬಂಧ ಹಿರಿಯ ಕಾರ್ಮಿಕ ನಿರೀಕ್ಷಕರು ಡಿ.7ರಂದು ಕಾರ್ಖಾನೆಗೆ ಭೇಟಿ ನೀಡಿ, ಸೂಕ್ತ ನಡೆಸಿ ಸಹಾಯಕ ಕಾರ್ಮಿಕ ಆಯುಕ್ತರಿಗೆ ನಿರೀಕ್ಷಣಾ ಟಿಪ್ಪಣೆ ನೀಡಿದ್ದರು. ಬಳಿಕ ಆಡಳಿತ ಮಂಡಳಿಯವರಿಗೆ ಕಾರ್ಮಿಕ ಕಾಯ್ದೆಗಳ ಉಲ್ಲಂಘನೆ ಸಂಬಂಧ ನೋಟೀಸ್ ಜಾರಿಗೊಳಿಸಿದ್ದರೂ ಆಡಳಿತ ಮಂಡಳಿ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಕಿಡಿ ಕಾರಿದರು.

**ಯಾವುದೇ ಕ್ರಮ ಕೈಗೊಂಡಿಲ್ಲ**


ಉದಯವಾಹಿನಿ ಚಿತ್ರ

ಸಿಎಂ ಸಿದ್ದರಾಮಯ್ಯ ಸೂಚನೆಯಾನುಸಾರ ರಾಜ್ಯ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಹಾಲಿಗುತ್ತಿಗೆ, ಹೊರ ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ನಿವೃತ್ತ ಸರ್ಕಾರಿ ಅಧಿಕಾರಿ, ನೌಕರರನ್ನು ಕೂಡಲೇ ಸೇವೆಯಿಂದ ಬಿಡುಗಡೆಗೊಳಿಸುವಂತೆ ಸೂಚಿಸಿರುವ ಹೊರತಾಗಿಯೂ ಕೆಎಸ್‌ಐಸಿಯಲ್ಲಿ 50ಕ್ಕೂ ಹೆಚ್ಚಿನ ಅಧಿಕಾರಿಗಳನ್ನು ಸೇವೆಯಲ್ಲಿ ಮುಂದುವರೆಸಲಾಗಿದೆ. ಖಾಲಿ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳುವಂತೆ ಅನುಮತಿ ನೀಡಿದ್ದರೂ ನೇಮಕ ಮಾಡಿಕೊಂಡಿಲ್ಲ.

ಇಂತಹ ಸಮಯದಲ್ಲಿ ಆಡಳಿತ ಮಂಡಳಿ ಯಾವುದೇ ನೋಟೀಸ್ ನೀಡದೆ ನಿಯಮಬಾಹಿರವಾಗಿ ಏ.1ರಂದು 700ಕ್ಕೂ ಹೆಚ್ಚು ಹೊರಗುತ್ತಿಗೆ ನೌಕರರಿಗೆ ಕೆಲಸ ನಿರಾಕರಿಸುತ್ತಿರುವುದು ಸಂಸ್ಥೆಯನ್ನು ವ್ಯವಸ್ಥಿತವಾಗಿ ಮುಗಿಸುವ ಹುನ್ನಾರವಾಗಿದೆ. ಹೀಗಾಗಿ ಕಾನೂನುಬಾಹಿರ ಕ್ರಮ ತಡೆಗಟ್ಟಿ ಪಾರಂಪರಿಕ ಸಂಸ್ಥೆಯಾದ ಕೆಎಸ್‌ಐಸಿಯನ್ನು ಉಳಿಸಿ, ತಪ್ಪಿತಸ್ಥ ಅಧಿಕಾರಿಗಳ ಮೇಲೆ ಸೂಕ್ತ ಕ್ರಮವಹಿಸಬೇಕು ಎಂದು ಒತ್ತಾಯಿಸಿದರು.

**ಮೈಸೂರು ಸಿಲ್ಕ್ ಸೀರೆಗಳಿಗೆ ಬೇಡಿಕೆ**

**ಹೈ ಕೋರ್ಟ್ ಆದೇಶದ ಅನುಸಾರ 815ಕ್ಕೂ ಹೆಚ್ಚು ಹುದ್ದೆಗಳಿಗೆ ಹೊಸದಾಗಿ ಟೆಂಡರ್ ಪ್ರಕ್ರಿಯೆ ಕೈಗೊಳ್ಳುವಂತೆ ಆದೇಶಿಸಿದ್ದರು ಕೆಎಸ್‌ಐಸಿ ಆಡಳಿತ ಮಂಡಳಿಯವರು ಈ ಸಂಬಂಧ ಯಾವುದೇ ಕ್ರಮವನ್ನು ಕೈಗೊಂಡಿಲ್ಲ ಎಂದು ದೂರಿದರು. ಹಾಲಿ ಕೆಎಸ್‌ಐಸಿ ಮೈಸೂರು ಸಿಲ್ಕ್ ಸೀರೆಗಳಿಗೆ ಸಾಕಷ್ಟು ಬೇಡಿಕೆ ಇದೆ.**

# ಬೆಂಗಳೂರು-ಮೈಸೂರು ರಾಷ್ಟ್ರೀಯ ಹೆದ್ದಾರಿ ಟೋಲ್ ಹೆಚ್ಚಳ

• ಉದಯವಾಹಿನಿ, ರಾಮನಗರ

ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಬೆಂಗಳೂರು ಮೈಸೂರು ರಾಷ್ಟ್ರೀಯ ಹೆದ್ದಾರಿ-275ರಲ್ಲಿ ಶೇ 5ರಿಂದ ಶೇ 10ರವರೆಗೆ ಟೋಲ್ ಹೆಚ್ಚಳ ಮಾಡಿದೆ. ಪರಿಷ್ಕೃತ ದರ ಮಂಗಳವಾರದಿಂದಲೇ (ಏಪ್ರಿಲ್ 1) ಜಾರಿಗೆ ಬಂದಿದೆ. ಬೆಂಗಳೂರು ನಗರ ಜಿಲ್ಲೆಯ ಕಣಿಮಿಣಿಕೆ ಹಾಗೂ ರಾಮನಗರ ಜಿಲ್ಲೆಯ ಶೇಷಗಿರಿಹಳ್ಳಿ ಟೋಲ್ ಪ್ಲಾಜಾದಿಂದ ನಿಡಘಟ್ಟವರೆಗೆ ಶೇ 9ರಷ್ಟು ಹಾಗೂ ಮಂಡ್ಯ ಜಿಲ್ಲೆಯ ನಿಡಘಟ್ಟದಿಂದ ಶ್ರೀರಂಗಪಟ್ಟಣದ ಗಣಂಗೂರು ಟೋಲ್ ಪ್ಲಾಜಾವರೆಗೆ (ಮೈಸೂರುವರೆಗೆ) ಶೇ 5ರಷ್ಟು ಪರಿಷ್ಕರಿಸಲಾಗಿದೆ. ಕಾರು, ವ್ಯಾನ್, ಜೀಪು, ಲಘು ವಾಹನ, ಮಿನಿ ಬಸ್, ಟ್ರಕ್, ಬಸ್, 2 ಆ್ಯಕ್ಸಲ್ ವಾಹನ, ಮೂರು ಆ್ಯಕ್ಸಲ್ ವಾಣಿಜ್ಯ ವಾಹನ, ಕಟ್ಟಡ ನಿರ್ಮಾಣ ಭಾರಿ ವಾಹನ (4-6 ಆಕ್ಸಲ್), 7 ಅಥವಾ ಅದಕ್ಕಿಂತ ಹೆಚ್ಚಿನ ಆ್ಯಕ್ಸಲ್ ವಾಹನದ ಟೋಲ್ ಪರಿಷ್ಕರಣೆಯಾಗಿದೆ. ತಿಂಗಳ 50 ಏಕಮುಖ ಸಂಚಾರ ಪಾಸ್ ದರವೂ ಏರಿಕೆಯಾಗಿದೆ. ಕಾರು, ವ್ಯಾನ್ ಹಾಗೂ ಜೀಪುಗಳ ಸ್ಥಳೀಯ ಮಾಸಿಕ ಬಸ್ ದರದಲ್ಲಿ ಯಾವುದೇ ಬದಲಾವಣೆಯಾಗಿಲ್ಲ. ಹಣ ಪಾವತಿಸಿದ ಸಮಯದಿಂದ ಎಲ್ಲಾ ಮಾದರಿಯ ವಾಹನಗಳು 24 ತಾಸಿನೊಳಗೆ ಮರಳಿ ಸಂಚಾರ ಮಾಡಿದರೆ ಶೇ 25ರಷ್ಟು ಹಾಗೂ ಹಣ ಪಾವತಿಸಿದ ಸಮಯದಿಂದ ಒಂದು ತಿಂಗಳಲ್ಲಿ 50 ಸಲ ಪ್ರಯಾಣಿಸಿದಲ್ಲಿ ಶೇ 33ರಷ್ಟು ರಿಯಾಯಿತಿ ಸಿಗಲಿದೆ ಎಂದು ಪ್ರಾಧಿಕಾರ ಪ್ರಕಟಣೆಯಲ್ಲಿ ತಿಳಿಸಿದೆ. 2023ರ ಏಪ್ರಿಲ್ 1ರಿಂದ ಹೆದ್ದಾರಿಯಲ್ಲಿ ಟೋಲ್ ಸಂಗ್ರಹ ಆರಂಭಿಸಿದ್ದ ಪ್ರಾಧಿಕಾರ, ಅದಾದ ಎರಡೇ ತಿಂಗಳಲ್ಲಿ (2023 ಜೂನ್ 1) ಏಕಾಏಕಿಯಾಗಿ ಶೇ 22ರಷ್ಟು ಹೆಚ್ಚಿಸಿತ್ತು.

**ಪ್ರಯಾಣ ಮತ್ತೆ ದುಬಾರಿ**

ಈ ಕುರಿತು ಸಾರ್ವಜನಿಕರಿಂದ ಆಕ್ರೋಶ ವ್ಯಕ್ತವಾಗುತ್ತಿದ್ದಂತೆ ಹೆಚ್ಚಳ ನಿರ್ಧಾರ ಹಿಂದಕ್ಕೆ ಪಡೆದಿತ್ತು. ನಂತರ ಪ್ರತಿ ವರ್ಷ ಏಪ್ರಿಲ್ 1ರಿಂದ ವಾರ್ಷಿಕ ಶೇ 5ರಷ್ಟು ಟೋಲ್ ಹೆಚ್ಚಳ ಮಾಡುವುದಾಗಿ ಹೇಳಿತ್ತು. ಬೆಂಗಳೂರು ನಗರ ಜಿಲ್ಲೆಯ ಕುಂಬಳಗೋಡಿನಿಂದ ಆರಂಭವಾಗುವ 118 ಕಿ.ಮೀ. ಉದ್ದದ ಹೆದ್ದಾರಿಯು ರಾಮನಗರ ಜಿಲ್ಲೆಯಲ್ಲಿ 55 ಕಿ.ಮೀ., ಮಂಡ್ಯದಲ್ಲಿ 58 ಕಿ.ಮೀ. ಮೈಸೂರು ಜಿಲ್ಲೆಯಲ್ಲಿ 5 ಕಿ.ಮೀ. ವ್ಯಾಪ್ತಿ ಹೊಂದಿದೆ.

# ಮದ್ಯ ಅಕ್ರಮ ಮಾರಾಟಕ್ಕೆ 1 ಲಕ್ಷ ದಂಡ

## ಕದ್ದುಮುಚ್ಚಿ ಮದ್ಯ ಮಾರಾಟ ಮಾಡುತ್ತಿರುವವರ ಬಗ್ಗೆ ಮಾಹಿತಿ ನೀಡಿದವರಿಗೆ 10.000 ಬಹುಮಾನ


• ಉದಯವಾಹಿನಿ, ಚಾಮರಾಜನಗರ

ಮದ್ಯ ಅಕ್ರಮವಾಗಿ ಮಾರಾಟ ಮಾಡಿದರೆ 1 ಲಕ್ಷ ದಂಡ, ಮದ್ಯ ಮಾರಾಟ ಮಾಡಿ ಸಿಕ್ಕಿಬಿದ್ದ ಆರೋಪಿಗಳ ಪರವಾಗಿ ನಿಂತವರಿಗೆ 2 ಲಕ್ಷ ದಂಡ, ಕದ್ದುಮುಚ್ಚಿ ಮದ್ಯ ಮಾರಾಟ ಮಾಡುತ್ತಿರುವವರ ಬಗ್ಗೆ ಮಾಹಿತಿ ನೀಡಿದವರಿಗೆ 10.000 ಬಹುಮಾನ. ಈ ಕಾನೂನುಗಳನ್ನು ಜಾರಿ ಮಾಡಿರುವುದು ಸರ್ಕಾರವಲ್ಲ; ಬದಲಾಗಿ ಚಾಮರಾಜನಗರ ತಾಲ್ಲೂಕಿನ ಬ್ಯಾಡಮೂಡ್ಲು ಗ್ರಾಮಸ್ಥರು. ಗ್ರಾಮದ ಯುವಕರು, ವಯಸ್ಕರು ಮದ್ಯವ್ಯಸನಕ್ಕೆ ಬಲಿಯಾಗುತ್ತಿರುವುದನ್ನು ತಪ್ಪಿಸುವ ಉದ್ದೇಶದಿಂದ ಗ್ರಾಮದ ಮುಖಂಡರು, ಕುಲಸ್ಥರು, ವಿವಿಧ ಕೋಮುಗಳ ಯಜಮಾನರು ಯುಗಾದಿ ಹಬ್ಬದ ದಿನ ಸಭೆ ಸೇರಿ ಮುಂದೆ ಗ್ರಾಮದಲ್ಲಿ ಯಾರೂ ಮದ್ಯ ಅಕ್ರಮ ಮಾರಾಟ ಮಾಡದಂತೆ ನಿರ್ಣಯ ತೆಗೆದುಕೊಂಡಿದ್ದಾರೆ. ನಿಯಮ ಉಲ್ಲಂಘಿಸಿದರೆ ದಂಡ ವಿಧಿಸುವ ಎಚ್ಚರಿಕೆಯನ್ನೂ ನೀಡಿದ್ದಾರೆ.

**ಮದ್ಯ ಮಾರಾಟಕ್ಕೆ ಬ್ರೇಕ್:** ಊರಿನ ಪ್ರಮುಖರ ನಿರ್ಧಾರಕ್ಕೆ ಇಡೀ ಗ್ರಾಮಸ್ಥರು ಬೆಂಬಲ ನೀಡಿದ್ದಾರೆ. ಕಳೆದೆರಡು ದಿನಗಳಿಂದ ಗ್ರಾಮದಲ್ಲಿ ಮದ್ಯ ಅಕ್ರಮ ಮಾರಾಟ ಕಂಡುಬಂದಿಲ್ಲ. ಊರಿನಲ್ಲಿ ಸೌಹಾರ್ದಯುತ ವಾತಾವರಣ ನಿರ್ಮಾಣವಾಗಿದೆ' ಎನ್ನುತ್ತಾರೆ ದೊಡ್ಡಮೋಳೆ ಗ್ರಾಮ ಪಂಚಾಯಿತಿ ಸದಸ್ಯರಾದ ಮರಿಸ್ವಾಮಿ.

**ಕಾರ್ಯರೂಪಕ್ಕೆ ಬಂದಿದ್ದು ಹೇಗೆ:** ಬ್ಯಾಡಮೂಡ್ಲು ಗ್ರಾಮದಲ್ಲಿ 2,000ಕ್ಕೂ ಹೆಚ್ಚು ಕುಟುಂಬಗಳಿದ್ದು ಬಹುಪಾಲು ಉಪ್ಪಾರ ಸಮುದಾಯದವರು ಇದ್ದಾರೆ. ಉಳಿದಂತೆ ಪರಿಶಿಷ್ಟ ಜಾತಿ, ಪಂಗಡ ಹಾಗೂ ಹಿಂದುಳಿದ ವರ್ಗಗಳಿಗೆ ಸೇರಿದವರು ನೆಲೆಸಿದ್ದಾರೆ. ಕೃಷಿ, ಕೂಲಿ ಹಾಗೂ ಹೈನುಗಾರಿಕೆ ಇಲ್ಲಿನ ಜನರ ಪ್ರಮುಖ ಆದಾಯದ ಮೂಲ. ಗ್ರಾಮಸ್ಥರು ದುಡಿದ ಬಹುಪಾಲು ಹಣವನ್ನು ಮದ್ಯವ್ಯಸನಕ್ಕೆ ವ್ಯಯಿಸುತ್ತಿರುವುದು, ವಿಪರೀತ ಕುಡಿತದಿಂದ ಸಾಲ ಮಾಡಿಕೊಂಡಿರುವುದು ಗಮನಕ್ಕೆ ಬಂದಿತ್ತು. ಹಾಗಾಗಿ, ಗ್ರಾಮದ ಹಿತದೃಷ್ಟಿಯಿಂದ ಮದ್ಯ ಮಾರಾಟಕ್ಕೆ ನಿರ್ಬಂಧ ಹೇರಲಾಯಿತು ಎಂದು ಮುಖಂಡ ಮರಿಸ್ವಾಮಿ ತಿಳಿಸಿದರು. ಬ್ಯಾಡಮೂಡ್ಲು ಗ್ರಾಮದಲ್ಲಿ ಪರವಾನಗಿ ಪಡೆದಿರುವ ಮದ್ಯದಂಗಡಿ ಇಲ್ಲ. ಆದರೂ ನಾಲ್ಕೈದು ಕಿ.ಮೀ ದೂರದಲ್ಲಿರುವ ಬಾರ್‌ನಿಂದ ಗ್ರಾಮದ ಕೆಲವು ಚಿಲ್ಲರೆ ಅಂಗಡಿ ಮಾಲೀಕರು ಸಗಟು ರೂಪದಲ್ಲಿ ಮದ್ಯ ಖರೀದಿಸಿ ಗ್ರಾಮದೊಳಗೆ ಅಕ್ರಮವಾಗಿ ಮಾರಾಟ ಮಾಡುತ್ತಿದ್ದರು. ಬೆಳಗಿನ ಜಾವ, ಮಧ್ಯರಾತ್ರಿ ಹೋದರೂ ಮದ್ಯ ದೊರೆಯುವ ಸ್ಥಿತಿ ನಿರ್ಮಾಣವಾಗಿತ್ತು. ಎಲ್ಲೆಂದರಲ್ಲಿ, ಯಾವಾಗ ಬೇಕಾದರೂ ಸುಲಭವಾಗಿ ಸಿಗುತ್ತಿದ್ದ ಮದ್ಯ ಯುವಜನತೆಯನ್ನು ಹಾಳು ಮಾಡುತ್ತಿತ್ತು.

'ಮುಂದಾಗುವ ಅಪಾಯ ಅರಿತು ಮುಖಂಡರು, ಕುಲಸ್ಥರೆಲ್ಲ ಸಭೆ ಸೇರಿ ಸಮಸ್ತ ಗ್ರಾಮಸ್ಥರ ಸಮ್ಮುಖದಲ್ಲಿ ಮದ್ಯ ಮಾರಾಟ ನಿರ್ಬಂಧ ನಿರ್ಣಯ ತೆಗೆದುಕೊಂಡು ಲಿಖಿತವಾಗಿ ಬರೆಸಲಾಗಿದೆ. ನಿಯಮ ಬಾಹಿರವಾಗಿ ಮದ್ಯ ಮಾರಾಟ ಮಾಡುತ್ತಿದ್ದವರಿಗೂ ತಿಳಿ ಹೇಳಲಾಗಿದೆ' ಎಂದು ಮಾಹಿತಿ ನೀಡಿದರು ಮರಿಸ್ವಾಮಿ. ಗ್ರಾಮಗಳಲ್ಲಿ ಇಂದಿಗೂ ಕುಲಸ್ಥರು, ಯಜಮಾನರು ತೆಗೆದುಕೊಂಡ ನಿರ್ಣಯಗಳನ್ನು ಮೀರುವುದಿಲ್ಲ. ಸರ್ಕಾರದ ಕಾನೂನುಗಳಿಗೆ ನೀಡುವ ಗೌರವವನ್ನು ಯಜಮಾನರು ತೆಗೆದುಕೊಳ್ಳುವ ನಿರ್ಧಾರಗಳಿಗೂ ನೀಡಲಾಗುತ್ತದೆ. ಬ್ಯಾಡಮೂಡ್ಲು ಗ್ರಾಮ ಮದ್ಯ ಮಾರಾಟ ಮುಕ್ತವಾಗುವ ಸಂಪೂರ್ಣ ವಿಶ್ವಾಸ ಇದೆ ಎನ್ನುತ್ತಾರೆ ಅವರು.


ಉದಯವಾಹಿನಿ ಚಿತ್ರ

**ಕಿರಾಣಿ ಅಂಗಡಿಗಳಲ್ಲಿ ಮದ್ಯ**

**ನಗರ ಪ್ರದೇಶಗಳಲ್ಲಿ ಬಾರ್ ಅಂಡ್ ರೆಸ್ಟೋರೆಂಟ್‌ಗಳಲ್ಲಿ ಮದ್ಯ ಮಾರಾಟ ನಡೆದರೆ ಹಳ್ಳಿಗಳಲ್ಲಿ ಕಿರಾಣಿ ಅಂಗಡಿಗಳಲ್ಲಿ ಮನೆಗಳಲ್ಲಿ ಎಗ್ಗಿಲ್ಲದೆ ಅಕ್ರಮವಾಗಿ ಮದ್ಯ ಮಾರಾಟ ನಡೆಯುತ್ತಿದೆ. ಸುಲಭವಾಗಿ ಮದ್ಯ ಸಿಗುವುದರಿಂದ ಕುಡಿತದ ಚಟಕ್ಕೆ ಬೀಳುತ್ತಿರುವವರ ಸಂಖ್ಯೆ ಹೆಚ್ಚುತ್ತಿದೆ. ಅತಿಯಾದ ಮದ್ಯದ ಗೀಳಿನಿಂದ ಸಾಲ ಮಾಡಿಕೊಂಡು ಆಸ್ತಿ ಮಾರಾಟ ಮಾಡುತ್ತಿದ್ದಾರೆ. ಕುಟುಂಬಗಳಲ್ಲಿ ನೆಮ್ಮದಿ ಇಲ್ಲದಂತಾಗಿದೆ. ಪೊಲೀಸ್ ಇಲಾಖೆ ಅಕ್ರಮ ಮದ್ಯ ಮಾರಾಟಕ್ಕೆ ತಡೆಯೊಡ್ಡಬೇಕು' ಎಂದು ಒತ್ತಾಯಿಸುತ್ತಾರೆ ಬ್ಯಾಡಮೂಡ್ಲು ಗ್ರಾಮಸ್ಥರು.**

**ಬ್ಯಾಡಮೂಡ್ಲು ಗ್ರಾಮದಲ್ಲಿ ಗಸ್ತು ಹೆಚ್ಚಿಸುವಂತೆ ಅಕ್ರಮ ಮದ್ಯ ಮಾರಾಟದ ಮೇಲೆ ನಿಗಾ ವಹಿಸುವಂತೆ ಗ್ರಾಮಸ್ಥರೆಲ್ಲರೂ ಪೊಲೀಸ್ ಠಾಣೆಗೆ ಮನವಿ ನೀಡಲು ನಿರ್ಧರಿಸಿದ್ದೇವೆ**

**-ಮರಿಸ್ವಾಮಿ, ಸದಸ್ಯ ಗ್ರಾಮ ಪಂಚಾಯಿತಿ**

# ಶಿಡ್ಲಘಟ್ಟಕ್ಕೆ ಬಂದಿವೆ ಆಸ್ಟ್ರೇಲಿಯನ್ ವೈಟ್ ಕುರಿಗಳು

**ಶಿಡ್ಲಘಟ್ಟ:** ಮಾಂಸಕ್ಕಾಗಿಯೇ ಆಸ್ಟ್ರೇಲಿಯಾದಲ್ಲಿ ವಿಶಿಷ್ಟವಾದ ಕುರಿ ತಳಿಯನ್ನು ಅಭಿವೃದ್ಧಿಪಡಿಸಿದ್ದು, ಅದಕ್ಕೆ 'ಆಸ್ಟ್ರೇಲಿಯನ್ ವೈಟ್ ಎಂದು ಹೆಸರಿಟ್ಟಿದ್ದಾರೆ. ಈ ವಿಶಿಷ್ಟವಾದ ಕುರಿಗಳನ್ನು ತಾಲ್ಲೂಕಿನ ಆನೂರು ಗ್ರಾಮದ ಕುರಿ ಸಾಕಾಣಿಕೆದಾರ ವೀರಕೆಂಪಣ್ಣ ಅವರು ಅಸ್ಟ್ರೇಲಿಯಾದಿಂದ ಆಮದು ಮಾಡಿಕೊಂಡಿದ್ದಾರೆ. ಆಸ್ಟ್ರೇಲಿಯನ್ ವೈಟ್ ಎಂಬ ಹೆಸರಿನ ಈ ಹೊಸ ತಳಿಯ 41 ಕುರಿಗಳನ್ನು (21 ಹೆಣ್ಣು, 20 ಗಂಡು) ಆಮದು ಮಾಡಿಕೊಂಡಿರುವ ಅವರು, ಸ್ಥಳೀಯ ರ‍್ಯಾಂಬುಲೇಟ್ ತಳಿಗಳೊಂದಿಗೆ ಸಂತಾನೋತ್ಪತ್ತಿ ಮಾಡಿಸುವುದು, ಶುದ್ಧ ತಳಿಯನ್ನೂ ಉಳಿಸಿಕೊಳ್ಳುವ ಉದ್ದೇಶ ಹೊಂದಿದ್ದಾರೆ.

ಆಸ್ಟ್ರೇಲಿಯನ್ ವೈಟ್ ಎಂಬುದು ಆಸ್ಟ್ರೇಲಿಯಾದ ಮಾಂಸದ ಕುರಿಗಳ ತಳಿಯಾಗಿದೆ. ಇದು ವೈಟ್ ಡಾರ್ಪರ್, ವ್ಯಾನ್ ರೂಯ್, ಪೋಲ್ ಡಾರ್ಸೆಟ್ ಮತ್ತು ಟೆಕ್ಸೆಲ್ ಕುರಿಗಳ ಆಯ್ದ ಸಂತಾನೋತ್ಪತ್ತಿಯಿಂದ ಹುಟ್ಟಿಕೊಂಡಿದೆ. ಸ್ವಯಂ ಕೂದಲು ಉದುರುವ ಈ ತಳಿಯ ಮಾಂಸದಲ್ಲಿ ಅತ್ಯಂತ ಉಪಯುಕ್ತ ಒಮೆಗಾ 3 ಫ್ಯಾಟಿ ಆಸಿಡ್ ಇದೆ. ಅಲ್ಲದೆ ದೇಶಿ ತಳಿಗಳಿಗಳಿಗಿಂತ ಅತಿ ವೇಗವಾಗಿ ತನ್ನ ತೂಕವನ್ನು ಹೆಚ್ಚಿಸಿಕೊಳ್ಳಬಲ್ಲ ಈ ತಳಿ 150 ಕೆ.ಜಿ. ವರೆಗೂ ತೂಗುತ್ತದೆ.


ಉದಯವಾಹಿನಿ ಚಿತ್ರ

ಉತ್ತಮ ಗುಣಮಟ್ಟದ ಮಾಂಸ ಮತ್ತು ಕಡಿಮೆ ನಿರ್ವಹಣಾ ವೆಚ್ಚಕ್ಕಾಗಿ ಇದು ಪ್ರಸಿದ್ಧವಾಗಿದೆ. ಈ ತಳಿಯ ಕುರಿಗಳು ಹೆಚ್ಚು ಮಾಂಸ ನೀಡುವುದಲ್ಲದೆ ಕಡಿಮೆ ಕೊಬ್ಬಿನ ಪ್ರಮಾಣವನ್ನು ಹೊಂದಿರುತ್ತವೆ. ಉಷ್ಣ ಮತ್ತು ಶೀತ ವಾತಾವರಣಗಳಿಗೂ ಇವು ಹೊಂದಿಕೊಳ್ಳಬಲ್ಲವು. ಬೇರೆ ತಳಿಗಳಿಗಿಂತ ವೇಗವಾಗಿ ಬೆಳೆಯುವ ಗುಣವಿದೆ. ಉದ್ದನೆಯ ಕೂದಲುಗಳಿರುವ ಹೊರಚರ್ಮ ಇಲ್ಲದ ಕಾರಣ ಹಾಗೂ ಕೂದಲು ಉದುರುವುದರಿಂದ ಉಣ್ಣೆ ತೆಗೆಯುವ ಅಗತ್ಯವಿಲ್ಲ. ರೋಗಪ್ರತಿರೋಧಕ ಶಕ್ತಿ ಹೆಚ್ಚು, ಆರೋಗ್ಯ ಸಮಸ್ಯೆಗಳ ಪ್ರಮಾಣ ತೀರಾ ಕಡಿಮೆ. ಕಡಿಮೆ ನಿರ್ವಹಣಾ ವೆಚ್ಚ ಮತ್ತು ಬೇರೆ ತಳಿಗಳೊಂದಿಗೆ ಮಿಶ್ರ ಸಂಕರ ತಳಿಗಳನ್ನು ಅಭಿವೃದ್ಧಿಪಡಿಸಲು ಇದನ್ನು ಬಳಸಬಹುದು' ಎಂದು ಕುರಿ ಸಾಕಣಿಕೆದಾರ ಆನೂರು ವೀರಕೆಂಪಣ್ಣ ತಿಳಿಸಿದರು.

ಆನೂರಿನ ವೀರಕೆಂಪಣ್ಣ ಅವರು 1995 ರಲ್ಲಿಯೇ ಭಾರತ ಸರ್ಕಾರದ ಬೆಸ್ಟ್ ಶೀಪ್ ಬ್ರೀಡರ್ ಪ್ರಮಾಣಪತ್ರ ಗಳಿಸಿರುವರು. ಆಂಧ್ರ ಸರ್ಕಾರದ ತಳಿವರ್ಧಕ ರೈತ ಪ್ರಮಾಣ ಪತ್ರ, ರಾಜ್ಯ ಸರ್ಕಾರದ 2007ರ ಕೃಷಿ ಪಂಡಿತ್ ಪ್ರಶಸ್ತಿ, 2008ರಲ್ಲಿ ಜಗಜೀವನರಾಂ ಕಿಸಾನ್ ಪುರಸ್ಕಾರ ಇವರ ಸಾಧನೆಗೆ ಸಂದಿವೆ.

**ಮನೆಯಲ್ಲಿ ಕುರಿ, ಮೇಕೆಗಳಿದ್ದರೆ ಎಟಿಎಂ ಇದ್ದಂತೆ. ವಿದ್ಯಾವಂತ ಯುವಜನರು ಕೈಗೊಳ್ಳಬಹುದಾದ ಲಾಭದಾಯಕ ಉದ್ದಿಮೆಯಿದು. ರೈತರು ತಮ್ಮ ಶಕ್ತಾನುಸಾರ ಕುರಿ ಸಾಕುವುದರಿಂದ ಅವರ ಆರ್ಥಿಕ ಸ್ಥಿತಿ ಸುಧಾರಿಸುತ್ತದೆ**

**- ಹಿತ್ತಲಹಳ್ಳಿ ಎಚ್.ಜಿ.ಗೋಪಾಲಗೌಡ. ಪ್ರಗತಿಪರ ರೈತ**

# ವೈರಮುಡಿ ಜಾತ್ರಾ ಮಹೋತ್ಸವ

• ಉದಯವಾಹಿನಿ, ಮೇಲುಕೋಟೆ

ವೈರಮುಡಿ ಬ್ರಹ್ಮೋತ್ಸವಕ್ಕೆ ಪೂರ್ವಭಾವಿಯಾಗಿ ಇಲ್ಲಿನ ಪಂಚಕಲ್ಯಾಣಿಯಲ್ಲಿ ತೆಪ್ಪೋತ್ಸವ ಸಂಭ್ರಮದಿಂದ ನೆರವೇರಿತು. ಭವ್ಯವಾಗಿ ಅಲಂಕೃತವಾದ ಮಂಟಪದಲ್ಲಿ ನಡೆದ ಚೆಲುವನಾರಾಯಣಸ್ವಾಮಿಯ ಜಲವಿಹಾರದ ವೈಭವವನ್ನು ನೂರಾರು ಭಕ್ತರು ಕಣ್ತುಂಬಿ ಕೊಂಡರು. ಪಾಂಡವಪುರ ಖಜಾನೆಯಿಂದ ತಂದ ಮುತ್ತುಮುಡಿ, ಮುತ್ತುಗಳ ಹಾರಗಳೊಂದಿಗೆ ಚೆಲು ವನಾರಾಯಣ ಸ್ವಾಮಿಯನ್ನು ಅಲಂಕರಿಸಿ ವೈಭವದ ಉತ್ಸವ ನೆರವೇರಿಸಲಾಯಿತು. ಮಹೂರ್ತ ಪಠಣದ ನಂತರ ತೆಪ್ಪ ಮಂಟಪದಲ್ಲಿ ಚೆಲುವನಾರಾಯಣಸ್ವಾಮಿ ಮತ್ತು ರಾಮಾನುಜಾಚಾರ್ಯರನ್ನು ಪ್ರತಿಷ್ಠಾಪಿಸಿ ತೆಪ್ಪೋತ್ಸವಕ್ಕೆ ಚಾಲನೆ ನೀಡಲಾಯಿತು. ಕಲ್ಯಾಣಿಯಲ್ಲಿ ಮೂರು ಪ್ರದಕ್ಷಿಣೆಯೊಂದಿಗೆ ಪ್ರಥಮ ತೆಪ್ಪೋತ್ಸವ ರಾತ್ರಿ 8ಕ್ಕೆ ಮುಕ್ತಾಯವಾಯಿತು.

ಚೆಲುವನಾರಾಯಣಸ್ವಾಮಿ ವೈರಮುಡಿ ಜಾತ್ರಾ ಮಹೋತ್ಸವದ ಎಲ್ಲಾ ಉತ್ಸವ ಮತ್ತು ವಾಹನೋತ್ಸವಗಳಿಗೆ ವಿಶೇಷ ವಾದ್ಯ ತಂಡಗಳ ನಿಯೋಜನೆ ಮಾಡುವ ಸಂಬಂಧ ಕನ್ನಡ ಸಂಸ್ಕೃತಿ ಇಲಾಖೆ ಪ್ರಾಯೋಜಕತ್ವದಲ್ಲಿ ದಶಕಗಳ ಹಿಂದೆ ಆರಂಭಗೊಂಡ ವಿಶೇಷ ಮಂಗಳವಾದ್ಯ ಕೈಂಕರ್ಯ ನಾದೋಪಾಸನ ಸೇವೆ 10ನೇ ವರ್ಷಕ್ಕೆ ಪದಾರ್ಪಣೆ ಮಾಡಿದ್ದು, ತೆಪ್ಪೋತ್ಸವದ ದಿವಸ ವಿದ್ವಾನ್ ಆನಂದ್ ತಂಡ ನಾದಸ್ವರ ನುಡಿಸಿ ಉತ್ಸವಕ್ಕೆ ಮೆರಗು ನೀಡಿದರು.


ಉದಯವಾಹಿನಿ ಚಿತ್ರ

ತೆಪ್ಪೋತ್ಸವದ ಅಂಗವಾಗಿ ಕಲ್ಯಾಣಿಯಲ್ಲಿ ಅಚ್ಚುಕಟ್ಟಾಗಿ ಶುಚಿತ್ವ ಕಾಪಾಡುವುದರ ಜೊತೆಗೆ ಸರಳ ದೀಪಾಲಂಕಾರ ಮಾಡಲಾಗಿತ್ತು. ಏಪ್ರಿಲ್ 2ರಿಂದ 14ರವರೆಗೆ ನಡೆಯುವ ವೈರಮುಡಿ ಜಾತ್ರಾ ಮಹೋತ್ಸವದ ವೈವಿಧ್ಯಮಯ ವಿಶೇಷ ಉತ್ಸವಗಳಲ್ಲಿ ನುರಿತ ನಾದಸ್ವರ ಕಲಾವಿದರು ಮಂಗಳವಾದ್ಯ ನುಡಿಸಲಿದ್ದಾರೆ. ವಾದ್ಯ ತಂಡಗಳನ್ನು ಪ್ರಾಯೋಜಿಸಲು ಜಿಲ್ಲಾ ಉಸ್ತುವಾರಿ ಸಚಿವ ಎನ್. ಚಲುವರಾಯಸ್ವಾಮಿ ಅವರು ಕನ್ನಡ ಸಂಸ್ಕೃತಿ ಇಲಾಖೆ ನಿರ್ದೇಶಕರಿಗೆ ಪತ್ರ ಬರೆದು ಸೂಚಿಸಿದ್ದಾರೆ.

# ಬಾಗಿಲು ಮುಚ್ಚಿದ ಜನೌಷಧಿ ಕೇಂದ್ರ ರೋಗಿಗಳ ಪರದಾಟ

ಉದಯವಾಹಿನಿ ಶಿರಾ:

ನಗರದ ತಾಲ್ಲೂಕು ಆಸ್ಪತ್ರೆ ಆವರಣದಲ್ಲಿರುವ ಪ್ರಧಾನ ಮಂತ್ರಿ ಜನಔಷಧಿ ಕೇಂದ್ರ 15 ದಿನ ದಿಂದ ಬಾಗಿಲು ಮುಚ್ಚಿದ್ದು, ರೋಗಿಗಳು ಔಷಧಿಗಾಗಿ ಪರದಾಡುವಂತಾಗಿದೆ.ಎಂಎಸ್‌ಐಎಲ್‌ನಿಂದ ನಡೆಯುತ್ತಿರುವ ಜನೌಷಧಿ ಕೇಂದ್ರದಲ್ಲಿ ಕೆಲಸ ಮಾಡುತ್ತಿದ್ದ ಫಾರ್ಮಸಿಸ್ಟ್ ಅವರ ರಾಜೀನಾಮೆಯಿಂದಾಗಿ ಔಷಧಿ ಕೇಂದ್ರದ ಬಾಗಿಲು ಮುಚ್ಚಿದ್ದು, ಔಷಧಿಗಳಿಗಾಗಿ ರೋಗಿಗಳು ಪರದಾಡುವಂತಾಗಿದೆ.

ಶಿರಾ, ಚಿಕ್ಕನಾಯಕನಹಳ್ಳಿ, ಗುಬ್ಬಿ, ಮಧುಗಿರಿ ತಾಲ್ಲೂಕು ಸೇರಿದಂತೆ ಪಕ್ಕದ ಆಂಧ್ರಪ್ರದೇಶದಿಂದ ಸಹ ರೋಗಿಗಳು ಇಲ್ಲಿಗೆ ಬರುತ್ತಿದ್ದು ಜಿಲ್ಲೆಯಲ್ಲಿ ತುಮಕೂರು ಜಿಲ್ಲಾಸ್ಪತ್ರೆಯ ನಂತರ ಅತಿ ಹೆಚ್ಚು ರೋಗಿಗಳು ಶಿರಾ ಸಾರ್ವಜನಿಕ ಆಸ್ಪತ್ರೆಗೆ ಬರುತ್ತಿದ್ದಾರೆ.

ಕಡಿಮೆ ಬೆಲೆಗೆ ರೋಗಿಗಳಿಗೆ ಔಷಧಿಗಳನ್ನು ದೊರಕಿಸಿಕೊಡುವ ಉದ್ದೇಶದಿಂದ ಜನಔಷಧಿ ಕೇಂದ್ರಗಳನ್ನು ಸರ್ಕಾರ ಪ್ರಾರಂಭಿಸಿದೆ. ಸರ್ಕಾರಿ ಆಸ್ಪತ್ರೆಯಲ್ಲಿ ದೊರೆಯದ ಔಷಧಿಗಳನ್ನು ವೈದ್ಯರು ಇಲ್ಲಿಗೆ ಚೀಟಿ ಬರೆದು ಕಳುಹಿಸುತ್ತಿದ್ದರು. ಈಗ ಜನ ಔಷಧಿ ಕೇಂದ್ರ ಮುಚ್ಚಿರುವುದರಿಂದ ರೋಗಿಗಳು ಖಾಸಗಿ ಔಷಧಿ ಕೇಂದ್ರಗಳಲ್ಲಿ ದುಬಾರಿ ಹಣ ತೆತ್ತು ಔಷಧಿ ಖರೀದಿಸುವಂತಾಗಿದೆ.


ಉದಯವಾಹಿನಿ ಚಿತ್ರ

ರಾಜ್ಯದಲ್ಲಿ ಹೆಚ್ಚು ಔಷಧಿ ಮಾರಾಟವಾಗುವ ಜನ ಔಷಧಿ ಕೇಂದ್ರಗಳಲ್ಲಿ ಶಿರಾ ಸಹ ಒಂದಾಗಿದ್ದರೂ 15 ದಿನದಿಂದ ಬಾಗಿಲು ಮುಚ್ಚಿದೆ. ಪರ್ಯಾಯ ವ್ಯವಸ್ಥೆ ಮಾಡದಿರುವುದು ಶೋಚನೀಯ.

ಈ ಬಗ್ಗೆ ಸಾರ್ವಜನಿಕ ಆಸ್ಪತ್ರೆ ವೈದ್ಯಾಧಿಕಾರಿಗಳು ಎಂಎಸ್‌ಐಎಲ್ ಗಮನಕ್ಕೆ ತಂದಿದ್ದರೂ ಯಾವುದೇ ಪ್ರಯೋಜನವಾಗಿಲ್ಲ. ಫಾರ್ಮಸಿಸ್ಟ್ ಅವರು ರಾಜೀನಾಮೆ ನೀಡಿರುವುದರಿಂದ ಹೊಸದಾಗಿ ಫಾರ್ಮಸಿಸ್ಟ್ ಅವರನ್ನು ನೇಮಕ ಮಾಡಿಕೊಂಡ ನಂತರ ಜನ ಔಷಧಿ ಕೇಂದ್ರದ ಬಾಗಿಲು ತೆರೆಯುಲಾಗುವುದು ಎಂದು ಅಧಿಕಾರಿಗಳು ಹೇಳಿದ್ದಾರೆ.


# ಅನಧಿಕೃತ ಕಟ್ಟಡ ತೆರವುಗೊಳಿಸಲು ಆಗ್ರಹ

• ಉದಯವಾಹಿನಿ, ಮಂಡ್ಯ

ಜಿಲ್ಲೆಯ ಶ್ರೀರಂಗಪಟ್ಟಣ ಕಾವೇರಿ ನದಿ ಪಾತ್ರದಲ್ಲಿ ಅಕ್ರಮವಾಗಿ ಕಟ್ಟಡ ನಿರ್ಮಾಣ ಮಾಡಿರುವುದನ್ನು ತೆರವುಗೊಳಿಸಬೇಕು ಎಂದು ಆಗ್ರಹಿಸಿ ಕನ್ನಡ ಸೇನೆ ಸಂಘಟನೆಯ ಕಾರ್ಯಕರ್ತರು ಜಿಲ್ಲಾಧಿಕಾರಿ ಕಚೇರಿ ಎದುರು ಬುಧವಾರ ಪ್ರತಿಭಟನೆ ನಡೆಸಿದರು. ಜಿಲ್ಲಾಧಿಕಾರಿ ಕಚೇರಿಗೆ ಸಂಘಟನೆಯ ಜಿಲ್ಲಾ ಘಟಕದ ಅಧ್ಯಕ್ಷ ಎಚ್.ಸಿ. ಮಂಜುನಾಥ್ ನೇತೃತ್ವದಲ್ಲಿ ಕಾರ್ಯಕರ್ತರು ಕಚೇರಿ ಸಹಾಯಕಿ ರೋಹಿಣಿ ಅವರಿಗೆ ಮನವಿ ಪತ್ರ ನೀಡಿದರು.

**ನದಿ ಪಾತ್ರದಲ್ಲಿ ಅಕ್ರಮ ರೆಸಾರ್ಟ್**

ಕಾವೇರಿ ನದಿ ಪಾತ್ರದಲ್ಲಿ ಅಕ್ರಮ ಕಟ್ಟಡ ನಿರ್ಮಾಣ, ರೆಸಾರ್ಟ್, ಹೋಂ ಸ್ಟೇಗಳ ನಿರ್ಮಾಣ ಮಾಡುತ್ತಿದ್ದಾರೆ. ಯಾವುದೇ ಅನುಮತಿ ಪಡೆಯದೆ ಅಕ್ರಮವಾಗಿ ಕಟ್ಟಡ ನಿರ್ಮಾಣ ಮಾಡುತ್ತಿರುವ ಮಾಲೀಕರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು. ಈಗಾಗಲೇ ಅಕ್ರಮವಾಗಿ ಕಟ್ಟಡ ಕಾಮಗಾರಿಗಳ ಮಾಲೀಕರಿಗೆ ನೋಟಿಸ್ ನೀಡಿ, ಅಧಿಕಾರಿಗಳು ಸ್ಥಳಕ್ಕೂ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಆದರೆ ಯಾವುದೇ ಕ್ರಮ ಕೈಗೊಳ್ಳದೆ ನಿರ್ಲಕ್ಷ್ಯ ವಹಿಸಿದ್ದಾರೆ ಎಂದು ದೂರಿದರು.


ಉದಯವಾಹಿನಿ ಚಿತ್ರ

ಇಲ್ಲಿ ಅಕ್ರಮವಾಗಿ ನಿರ್ಮಾಣವಾಗಿರುವ ಕಟ್ಟಡಗಳನ್ನು ತೆರವುಗೊಳಿಸಬೇಕು. ಒತ್ತುವರಿ ಮಾಡಿಕೊಂಡು ಕಾಮಗಾರಿ ನಡೆಸುತ್ತಿದ್ದರೂ ಅಧಿಕಾರಿಗಳು ಕಂಡೂ ಕಾಣದಂತೆ ಇದ್ದಾರೆ. ನದಿಗೆ ಕಂಟಕವಾಗಿರುವ ಕಟ್ಟಡಗಳನ್ನು 15 ದಿನಗಳೊಳಗೆ ನೆಲಸಮ ಮಾಡಿ ಕಾವೇರಿ ನದಿ ಸಂರಕ್ಷಣೆ ಮಾಡಬೇಕು ಇಲ್ಲವಾದರೆ ಪ್ರತಿಭಟನೆ ತೀವ್ರಗೊಳಿಸಲಾಗುವುದು' ಎಂದು ಎಚ್ಚರಿಕೆ ನೀಡಿದರು. ಸಂಘಟನೆಯ ಮುಖಂಡರಾದ ಮಹಂತಪ್ಪ, ಪ್ರಸನ್ನ, ಸತೀಶ್, ಸೌಭಾಗ್ಯ, ಕುಮಾರ್, ರವಿ ಭಾಗವಹಿಸಿದ್ದರು.

ನದಿ ಪಾತ್ರದಲ್ಲಿ ಅಕ್ರಮ ರೆಸಾರ್ಟ್, ಹೋಂ ಸ್ಟೇ ಕ್ರಮ ಕೈಗೊಳ್ಳಲು ಅಧಿಕಾರಿಗಳ ಮೀನಮೇಷ 15 ದಿನಗಳಲ್ಲಿ ಅಕ್ರಮ ಕಟ್ಟಡ ತೆರವುಗೊಳಿಸಿ

ಪೇಪರ್ ಲೋಟ ನಿಷೇಧಕ್ಕೆ ಆಗ್ರಹ 'ರಾಸಾಯನಿಕದಿಂದ ತಯಾರಾಗುವ ಪೇಪರ್ ಲೋಟ ಆರೋಗ್ಯಕ್ಕೆ ಹಾನಿಕಾರಕವಾಗಿದೆ. ಹೀಗಾಗಿ ನದಿಯ ದಡದಲ್ಲಿ ಕಾಫಿ ಟೀಯನ್ನು ಪೇಪರ್ ಲೋಟ ಹಾಗೂ ಪ್ಲಾಸ್ಟಿಕ್ ಕವರ್‌ನಲ್ಲಿ ನೀಡುತ್ತಿರುವುದನ್ನು ನಿಷೇಧಿಸಬೇಕು. ಜಿಲ್ಲೆಯಾದ್ಯಂತ ಪೇಪರ್ ಲೋಟ ನಿಷೇಧ ಮಾಡಬೇಕು. ಗ್ರಾಮ ಪಂಚಾಯಿತಿ ಅಧಿಕಾರಿಗಳ ಮೂಲಕ ಆದೇಶ ಮಾಡಿ ಜಿಲ್ಲೆಯಾದ್ಯಂತ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು' ಎಂದು ಕನ್ನಡ ಸೇನೆ ಸಂಘಟನೆಯ ಕಾರ್ಯಕರ್ತರು ಆಗ್ರಹಿಸಿದರು.

ಬಹುತೇಕ ಗ್ರಾಮೀಣ ಪ್ರದೇಶದಲ್ಲಿ ಪ್ಲಾಸ್ಟಿಕ್ ರಾಸಾಯನಿಕ ಪೇಪರ್ ಲೋಟಗಳನ್ನೇ ಬಳಸುತ್ತಿದ್ದಾರೆ. ಇತ್ತೀಚಿನ ದಿನಗಳಲ್ಲಿ ಜಿಲ್ಲೆಯಾದ್ಯಂತ ಕ್ಯಾನ್ಸರ್ ಕಾಯಿಲೆ ಕೂಡ ಹೆಚ್ಚುತ್ತಿದೆ. ವೈದ್ಯಾಧಿಕಾರಿಗಳು ಈಗಾಗಲೇ ಪೇಪರ್ ಲೋಟಗಳಲ್ಲಿ ಕುಡಿಯಬಾರದು ಎಂದು ಎಚ್ಚರಿಕೆ ನೀಡಿದ್ದಾರೆ. ಅದನ್ನು ಲೆಕ್ಕಿಸದೇ ಹೋಟೆಲ್ ಮತ್ತು ಪಾರ್ಲರ್ ಮಾಲೀಕರು ಪೇಪರ್ ಲೋಟದಲ್ಲಿ ನೀಡುತ್ತಿರುವುದಕ್ಕೆ ಕಡಿವಾಣ ಹಾಕಬೇಕು ಎಂದು ಆಗ್ರಹಿಸಿದರು.

# ಎಚ್.ಎನ್.ವ್ಯಾಲಿ: ಅಂದು ಪ್ರಶಂಸೆ...ಇಂದು ಸಮಸ್ಯೆ

## ಜನರು ಅನಿವಾರ್ಯವಾಗಿ ಬೋರ್‌ವೆಲ್ ನೀರು ಅವಲಂಬಿಸಿದ್ದು, ಇದು ಇನ್ನಷ್ಟು ಆರೋಗ್ಯ ಸಮಸ್ಯೆಗಳಿಗೆ ಕಾರಣ

• ಉದಯವಾಹಿನಿ, ಚಿಕ್ಕಬಳ್ಳಾಪುರ

ನನ್ನ ಮತಕ್ಷೇತ್ರ ಚಿಕ್ಕಬಳ್ಳಾಪುರ, ಸುತ್ತಮುತ್ತಲಿನ ಭಾಗಕ್ಕೆ ಎಚ್.ಎನ್.ವ್ಯಾಲಿ, ಕೆ.ಸಿ.ವ್ಯಾಲಿ ಮೂಲಕ ನೀರು ನೀಡುತ್ತಿದ್ದರೂ, ಅದು ಸಂಪೂರ್ಣ ಶುದ್ಧವಾದ ನೀರಲ್ಲ. ಇದರಿಂದ ಜನರಿಗೆ ಕ್ಯಾನ್ಸರ್‌ನಂತಹ ಮಾರಕ ರೋಗಗಳು ಬರುತ್ತಿವೆ. ಮಾಲಿನ್ಯ ನಿಯಂತ್ರಣ ಮಂಡಳಿ ಈ ನೀರನ್ನು ಪರೀಕ್ಷಿಸಿ ಗುಣಮಟ್ಟದ ಬಗ್ಗೆ ಖಾತರಿ ನೀಡಿಲ್ಲ. ಇದರಿಂದಾಗಿ ಜನರು ಅನಿವಾರ್ಯವಾಗಿ ಬೋರ್‌ವೆಲ್ ನೀರು ಅವಲಂಬಿಸಿದ್ದು. ಇದು ಇನ್ನಷ್ಟು ಆರೋಗ್ಯ ಸಮಸ್ಯೆಗಳಿಗೆ ಕಾರಣವಾಗಿದೆ. ಇದು ಸಂಸದ ಡಾ.ಕೆ. ಸುಧಾಕರ್, ಕೇಂದ್ರ ಜಲಸಂಪನ್ಮೂಲ ಸಚಿವ ಸಿ.ಆರ್.ಪಾಟೀಲ್ ಅವರನ್ನು ಇತ್ತೀಚೆಗೆ ಭೇಟಿ ಮಾಡಿ ಬಯಲು ಸೀಮೆ ಜಿಲ್ಲೆಗಳಿಗೆ ಶಾಶ್ವತ ನೀರಾ ವರಿ ಸೌಲಭ್ಯ ಕಲ್ಪಿಸುವಂತೆ ಕೋರಿದ ವೇಳೆ ನೀಡಿದ ಮನವಿ ಪತ್ರ. ಸಂಸದರ ಮಾಧ್ಯಮ ಪ್ರತಿನಿಧಿ ಈ ಬಗ್ಗೆ ಪತ್ರಿಕಾ ಪ್ರಕಟಣೆಯನ್ನೂ ಹೊರಡಿಸಿದ್ದಾರೆ. ಈ ಹಿಂದೆ ಡಾ.ಕೆ.ಸುಧಾಕರ್ ಚಿಕ್ಕಬಳ್ಳಾಪುರ ಜಿಲ್ಲೆಗೆ ಎಚ್.ಎನ್.ವ್ಯಾಲಿ ನೀರಾವರಿ ಯೋಜನೆಯು ತಮ್ಮದೇ ಕೊಡುಗೆ. ಇದರಿಂದ ಅಂತರ್ಜಲ ಮಟ್ಟ ಹೆಚ್ಚಿದೆ.


ಉದಯವಾಹಿನಿ ಚಿತ್ರ

**ಸಂಪೂರ್ಣ ಶುದ್ಧವಾದ ನೀರಲ್ಲ**

ಕೊಳವೆ ಬಾವಿಗಳಲ್ಲಿ ಸಮೃದ್ಧವಾಗಿ ನೀರು ದೊರೆಯುತ್ತಿದೆ ಎಂದು ಎಚ್.ಎನ್.ವ್ಯಾಲಿ ನೀರಾವರಿ ಯೋಜನೆಯ ಕ್ರೆಡಿಟ್ ತಮ್ಮದು ಎನ್ನುತ್ತಿದ್ದರು. ಆದರೆ ಈಗ ಎಚ್.ಎನ್.ವ್ಯಾಲಿ, ಕೆ.ಸಿ.ವ್ಯಾಲಿ ನೀರು ಸಂಪೂರ್ಣ ಶುದ್ಧವಲ್ಲ. ಕ್ಯಾನ್ಸರ್‌ನಂತಹ ಮಾರಕ ರೋಗಗಳು ಬರುತ್ತಿವೆ ಎನ್ನುತ್ತಿದ್ದಾರೆ.

ಅಲ್ಲದೆ ಕೆ.ಸಿ.ವ್ಯಾಲಿ, ಎಚ್.ಎನ್.ವ್ಯಾಲಿ ವಿಚಾರವಾಗಿ ಹೋರಾಟ ನಡೆಸಿದ್ದವರ ವಿರುದ್ಧ ಟೀಕಾ ಪ್ರಹಾರ ನಡೆಸಿದ್ದರು. ಆದರೆ ಈಗ ಡಾ.ಕೆ. ಸುಧಾಕರ್ ನೀರಾವರಿ ಹೋರಾಟಗಾರರ ಮಾತುಗಳನ್ನು ಅನುಮೋದಿಸಿದಂತೆ ಈ ನೀರಿನಿಂದ ಅನಾರೋಗ್ಯ ಎನ್ನುತ್ತಿದ್ದಾರೆ. ಹೀಗೆ ಅಂದು ಪ್ರಶಂಸೆಯ ಕ್ರೆಡಿಟ್ ಪಡೆದ ಸುಧಾಕರ್, ಈಗ ಇದೇ ಯೋಜನೆಯಿಂದ ಅನಾ ರೋಗ್ಯ ಎನ್ನುತ್ತಿದ್ದಾರೆ. ಇದು ಜಿಲ್ಲೆಯ ನೀರಾವರಿ ಹೋರಾಟಗಾರರು ಮತ್ತು ನಾಗರಿಕರಲ್ಲಿ ಚರ್ಚೆಗೆ ಕಾರಣವಾಗಿದೆ.

ಭೂಮಿಪೂಜೆ ದಿನ ಶಾಸಕರ ಮಾತು 2017ರ ಸೆ.18ರಂದು ಎಚ್.ಎನ್.ವ್ಯಾಲಿ ನೀರಾವರಿ ಯೋಜನೆಗೆ ಚಿಕ್ಕಬಳ್ಳಾಪುರದಲ್ಲಿ ಅಂದು ಮುಖ್ಯಮಂತ್ರಿಯಾಗಿದ್ದ ಸಿದ್ದರಾಮಯ್ಯ ಭೂಮಿಪೂಜೆ ನೆರವೇರಿಸಿದ್ದರು. ಆಗ ಸಂದರ್ಭದಲ್ಲಿ ಶಾಸಕ ಡಾ.ಕೆ.ಸುಧಾಕರ್, ಇದು ಐತಿಹಾಸಿಕ ಕಾರ್ಯಕ್ರಮ. ಆದರೆ ಈ ನೀರಾವರಿ ಯೋಜನೆ ಬೇಡ ಎಂದು ಕೆಲವರು ಟೀಕೆ, ಪ್ರತಿಭಟನೆ ಮಾಡುತ್ತಿದ್ದಾರೆ. ಈ ಭಾಗದಲ್ಲಿ ಅಂತರ್ಜಲ ಪಾತಾಳಕ್ಕೆ ಕುಸಿದಿದೆ. ಹಿಂದೆ ಅಧಿಕಾರದಲ್ಲಿದ್ದವರು ನೀರಾವರಿ ಯೋಜನೆಗಳಿಗೆ ಒಂದೇ ಒಂದು ನಯಾ ಪೈಸೆ ತರುವ ಪ್ರಯತ್ನ ಮಾಡಿಲ್ಲ. ಆದರೆ ಇವತ್ತು ಅವರು ಯಾಕೆ ವಿರೋಧ ಮಾಡುತ್ತಿದ್ದಾರೆ ಕಳೆದ ನಾಲ್ಕೂವರೆ ವರ್ಷದಲ್ಲಿ ಎರಡು ಬೃಹತ್ ನೀರಾವರಿ ಯೋಜನೆಗಳನ್ನು ನಾವು ಅನುಷ್ಠಾನಕ್ಕೆ ತಂದಿದ್ದೇವೆ. ಅದಕ್ಕೆ ಇವರಿಗೆ ಹೊಟ್ಟೆಕಿಚ್ಚು ಎಂದು ಪ್ರಶ್ನಿಸಿದ್ದರು.

**ಸಿ.ಎಂ ಪ್ರಶಂಸೆ:** ಎಚ್.ಎನ್.ವ್ಯಾಲಿ ಯೋಜನೆಗೆ ಶಂಕುಸ್ಥಾಪನೆ ನೆರವೇರಿಸಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ, ಪಾತಾಳಕ್ಕೆ ಕುಸಿದ ಜಿಲ್ಲೆಯ ಅಂತರ್ ಜಲ ವೃದ್ಧಿಸಲು ನಾವು ಕೊಳಚೆ ನೀರು ಸಂಸ್ಕರಿಸಿ ಕೆರೆಗಳನ್ನು ತುಂಬಿಸಲು ಹೊರಟರೆ ಕೆಲ ಅಭಿವೃದ್ಧಿ ವಿರೋಧಿಗಳು ಈ ನೀರು ಹಾನಿಕಾರಕ, ಇದರಿಂದ ಆರೋಗ್ಯಕ್ಕೆ ತೊಂದರೆ ಆಗುತ್ತದೆ ಎಂದು ಅಪಪ್ರಚಾರ ಮಾಡುತ್ತಿದ್ದಾರೆ. ಅಧಿಕಾರವಿದ್ದಾಗ ಇಂತಹ ಜನಪರ ಚಿಂತನೆ ಮಾಡದಿದ್ದವರು ಇವತ್ತು ಹೊಟ್ಟೆಕಿಚ್ಚಿನಿಂದ ಅಪಪ್ರಚಾರ ಮಾಡುತ್ತಿದ್ದಾಯೇ ವಿನಾ ಅದರಲ್ಲಿ ಸತ್ಯಾಂಶವಿಲ್ಲ ಎಂದಿದ್ದರು.

**ಇಂದಿಗೂ ಅವರ ಕೂಗು ಸರ್ಕಾರವನ್ನು ಮುಟ್ಟಿಲ್ಲ**

**ಎಚ್.ಎನ್.ವ್ಯಾಲಿ ಮತ್ತು ಕೆ.ಸಿ.ವ್ಯಾಲಿ ನೀರು ಶುದ್ಧವಿಲ್ಲ. ಬೆಂಗಳೂರಿನ ಈ ಕೊಳಚೆ ನೀರನ್ನು ಮೂರು ಹಂತದಲ್ಲಿ ಶುದ್ಧೀಕರಿಸಿ ಕೆರೆಗಳಿಗೆ ಹರಿಸಬೇಕು. ಮೂರು ಹಂತದಲ್ಲಿ ನೀರು ಶುದ್ದೀಕರಿಸದಿದ್ದರೆ ಭವಿಷ್ಯದಲ್ಲಿ ಚಿಕ್ಕಬಳ್ಳಾಪುರ, ಕೋಲಾರ ಜಿಲ್ಲೆಗಳಿಗೆ ಆಪತ್ತು ಎಂದು ಅವಳಿ ಜಿಲ್ಲೆಯ ನೀರಾವರಿ ಹೋರಾಟಗಾರರು, ರೈತ ಸಂಘದ ಮುಖಂಡರು ಯೋಜನೆ ಆರಂಭದಿಂದ ಇಂದಿನವರೆಗೂ ಹೇಳುತ್ತಿದ್ದಾರೆ. ಮೂರು ಹಂತದಲ್ಲಿ ನೀರು ಶುದ್ದೀಕರಿಸಬೇಕು ಎಂದು ಒತ್ತಾಯಿಸುತ್ತಲೇ ಇದ್ದಾರೆ.**

## ಮಿನಿ ನ್ಯೂಸ್

### ರಾಜೇಂದ್ರ ಕೊಲೆ ಸಂಚು ಪ್ರಕರಣ: ಆರೋಪಿ ಪೊಲೀಸರಿಗೆ ಶರಣು

• ಉದಯವಾಹಿನಿ, ತುಮಕೂರು

ಸಹಕಾರ ಸಚಿವ ಕೆ.ಎನ್.ರಾಜಣ್ಣ ಪುತ್ರ, ವಿಧಾನ ಪರಿಷತ್ ಸದಸ್ಯ ಆರ್.ರಾಜೇಂದ್ರ ಕೊಲೆಗೆ ಸಂಚು ರೂಪಿಸಿದ ಪ್ರಕರಣದ ಪ್ರಮುಖ ಆರೋಪಿ, ರೌಡಿಶೀಟರ್ ಸೋಮ, ಎ-3 ಅಮಿತ್ ಬುಧವಾರ ಕ್ಯಾತ್ಸಂದ್ರ ಠಾಣೆ ಪೊಲೀಸರಿಗೆ ಶರಣಾಗಿದ್ದಾರೆ. ಕೊಲೆ ಸಂಚಿನ ವಿಷಯ ಹೊರ ಬಂದ ನಂತರ ಪ್ರಮುಖ ಆರೋಪಿ ಸೋಮ ತಲೆ ಮರೆಸಿಕೊಂಡಿದ್ದ. ಪ್ರಕರಣದ ತನಿಖೆಗೆ ರಚಿಸಿದ ವಿಶೇಷ ತಂಡ ಆರೋಪಿಗಳಾದ ಭರತ್, ಯತೀಶ್, ಪುಷ್ಪಾ ಮತ್ತು ಯಶೋದ ಎಂಬುವರನ್ನು ವಶಕ್ಕೆ ಪಡೆದು ವಿಚಾರಣೆಗೆ ಒಳಪಡಿಸಿತ್ತು. ಇದೀಗ ಸೋಮ. ಅಮಿತ್ ಕ್ಯಾತ್ಸಂದ್ರ ಠಾಣೆ ಪೊಲೀಸರ ಮುಂದೆ ಶರಣಾಗಿದ್ದಾರೆ.

ಪ್ರಮುಖ ಆರೋಪಿ ಸೋಮನಿಗೆ 5 ಲಕ್ಷ ಹಣ ವರ್ಗಾವಣೆ ಮಾಡಿದ ಆರೋಪದ ಮೇಲೆ ಮನು ಎಂಬುವರನ್ನು ಪೊಲೀಸರು ವಿಚಾರಣೆಗೆ ಒಳಪಡಿಸಿದ್ದಾರೆ. ನನ್ನನ್ನು ಕೊಲೆ ಮಾಡಲು 70 ಲಕ್ಷಕ್ಕೆ ಸುಪಾರಿ ನೀಡಲಾಗಿದೆ. ಮುಂಗಡವಾಗಿ 5 ಲಕ್ಷ ಕೊಡಲಾಗಿದೆ. ಈ ಬಗ್ಗೆ ಆಡಿಯೋ ಲಭ್ಯವಾಗಿದ್ದು, ಪರಿಶೀಲಿಸಿ ತನಿಖೆ ನಡೆಸಬೇಕು' ಎಂದು ಕೋರಿ ಆರ್.ರಾಜೇಂದ್ರ ಮಾರ್ಚ್ 29ರಂದು ಕ್ಯಾತ್ಸಂದ್ರ ಪೊಲೀಸ್ ಠಾಣೆಯಲ್ಲಿ ದೂರು ನೀಡಿದ್ದರು. ಸೋಮ, ಭರತ್, ಅಮಿತ್, ಗುಂಡಾ, ಯತೀಶ್ ಇತರರ ವಿರುದ್ಧ ಪ್ರಕರಣ ದಾಖಲಿಸಲಾಗಿತ್ತು.

### ಪೊಲೀಸ್ ಧ್ವಜ ಖರೀದಿಸಿ ಪೊಲೀಸ್ ಕಲ್ಯಾಣಕ್ಕೆ ಸಹಕರಿಸಿ

**ಕೆಜಿಎಫ್:** ಪೊಲೀಸ್ ಸೇವೆಯಲ್ಲಿರುವವರು ತಮ್ಮನ್ನು ತಾವು ಸಂಪೂರ್ಣವಾಗಿ ಇಲಾಖೆಯಲ್ಲಿ ತೊಡಗಿಸಿಕೊಳ್ಳುವ ಸಂಕಲ್ಪ ಮಾಡುವುದರ ಜೊತೆಗೆ ಪ್ರತಿ ವರ್ಷ ಧ್ವಜ ದಿನಾಚರಣೆಯಂದು ನಿವೃತ್ತರನ್ನು ಗೌರವಿಸುವ ಕೆಲಸ ಮಾಡಬೇಕು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ಎಂ.ಶಾಂತರಾಜು ಹೇಳಿದರು. ನಗರದ ಚಾಂಪಿಯನ್ ರೀಫ್ ಡಿಎಆರ್ ಮೈದಾನದಲ್ಲಿ ಬುಧವಾರ ನಡೆದ ಧ್ವಜ ದಿನಾಚರಣೆಯಲ್ಲಿ ಮಾತನಾಡಿದರು.

ಪೊಲೀಸ್ ಕಾಯ್ದೆ ಜಾರಿಗೆ ಬಂದ ದಿನವನ್ನು ಪೊಲೀಸ್ ಧ್ವಜ ದಿನಾಚರಣೆಯನ್ನಾಗಿ ಆಚರಿಸಲಾಗುವುದು. ಈ ಸಂದರ್ಭದಲ್ಲಿ ಪೊಲೀಸ್ ಧ್ವಜವನ್ನು ಬಿಡುಗಡೆ ಮಾಡಲಾಗಿದೆ. ಅದನ್ನು ಎಲ್ಲರೂ ಖರೀದಿಸಿ ಇಲಾಖೆಯ ಸಿಬ್ಬಂದಿಗೆ ಸಹಕರಿಸಬೇಕು. ಧ್ವಜವನ್ನು ಖರೀದಿ ಮಾಡುವುದು ಕಡ್ಡಾಯವಲ್ಲ, ಆದರೆ, ಧ್ವಜ ದಿನದಂದು ಬಂದ ಹಣವನ್ನು ಪೊಲೀಸರ ಕಲ್ಯಾಣಕ್ಕಾಗಿ ಉಪಯೋಗಿಸಲಾಗುವುದು ಎಂದು ಅವರು ಹೇಳಿದರು. ಕಳೆದ ಸಾಲಿನಲ್ಲಿ ಧ್ವಜ ಮಾರಾಟದಿಂದ 25.40 ಲಕ್ಷ ಹಣ ಕ್ರೋಢೀಕರಣವಾಗಿತ್ತು. 12.70 ಲಕ್ಷವನ್ನು ಕೇಂದ್ರ ಪೊಲೀಸ್ ಕಲ್ಯಾಣ ನಿಧಿಗೆ ನೀಡಲಾಗಿತ್ತು. ಉಳಿದ ಹಣವನ್ನು ಕೆಜಿಎಫ್ ಘಟಕದ ನಿವೃತ್ತ ಪೊಲೀಸ್ ಘಟಕಕ್ಕೆ ಜಮಾ ಮಾಡಲಾಗಿದೆ ಎಂದು ತಿಳಿಸಿದರು. ನಿವೃತ್ತ ಎಎಸ್‌ಐ ರಮೇಶ್ ಮುಖ್ಯ ಅತಿಥಿಗಳಾಗಿದ್ದರು. ಇದೇ ಸಂದರ್ಭದಲ್ಲಿ ನಿವೃತ್ತ ಪೊಲೀಸ್ ಸಿಬ್ಬಂದಿಯನ್ನು ಸನ್ಮಾನಿಸಲಾಯಿತು. ಆಕರ್ಷಕ ಪಥ ಸಂಚಲನ ನಡೆಯಿತು.

### ಬೈಕ್‌ಗೆ ಡಿಕ್ಕಿ ತಪ್ಪಿಸಲು ಹೋಗಿ ಹಳ್ಳಕ್ಕೆ ಬಿದ್ದ ಕಾರು

• ಉದಯವಾಹಿನಿ, ಗುಂಡ್ಲುಪೇಟೆ

ರಾಷ್ಟ್ರೀಯ ಹೆದ್ದಾರಿಯ ತಾಲ್ಲೂಕಿನ ತಗ್ಗಲೂರು ಗೇಟ್ ಬಳಿ ಬುಧವಾರ ಬೆಳಿಗ್ಗೆ ಬೈಕ್‌ಗೆ ಕಾರು ಡಿಕ್ಕಿ ಹೊಡೆಯುವುದನ್ನು ತಪ್ಪಿಸಲು ಹೋಗಿ ಚಾಲಕನ ನಿಯಂತ್ರಣ ತಪ್ಪಿ ಹಳ್ಳಕ್ಕೆ ಉರುಳಿದೆ. ಬೆಂಗಳೂರಿನಿಂದ ಊಟಿಗೆ ತೆರಳುತ್ತಿದ್ದ ಕಾರು ಸೇತುವೆ ಹೊಂದಿಕೊಂಡಿರುವ ಹಳ್ಳಕ್ಕೆ ಉರುಳಿದ್ದರಿಂದ ಕಾರಿನಲ್ಲಿದ್ದ ರಿಯಾಜ್, ಸುಲ್ತಾನ್, ಕೌಶಿಕ್, ಮಹಮ್ಮದ್ ರಿಯಾಜ್, ಹನೀಫ್, ಫಾತಿಯಾ ಸೇರಿದಂತೆ ಬೈಕ್ ಸವಾರ ಸುರೇಶ್‌ಗೆ ಸಣ್ಣಪುಟ್ಟ ಗಾಯಗಳಾಗಿದೆ. ಕಾರು ಸಂಪೂರ್ಣ ಜಖಂಗೊಂಡಿದೆ. ಅದೃಷ್ಟವಶಾತ್ ಎಲ್ಲರೂ ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಸುದ್ದಿ ತಿಳಿದ ಬೇಗೂರು ಠಾಣೆ ಪೊಲೀಸರು ಸ್ಥಳಕ್ಕೆ ಬಂದು ಗಾಯಾಳುಗಳನ್ನು ಬೇಗೂರು ಆಸ್ಪತ್ರೆಗೆ ರವಾನಿಸಿ ಪ್ರಥಮ ಚಿಕಿತ್ಸೆ ಕೊಡಿಸಿದ್ದಾರೆ. ನಂತರ ಹಳ್ಳಕ್ಕೆ ಉರುಳಿದ ಕಾರನ್ನು ಮೇಲಕ್ಕೆತ್ತಲಾಯಿತು. ಈ ಸಂಬಂಧ ಬೇಗೂರು ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

### ಸಂಸ್ಕಾರ, ವಿನಯತೆ ಮುಂದುವರೆಸಿ ಕೊಂಡು ಹೋಗಲು ಸಲಹೆ

• ಉದಯವಾಹಿನಿ, ಶನಿವಾರಸಂತೆ

ಪ್ರಾಥಮಿಕ ಶಾಲೆಯ ಕೊನೆಯ ಹಂತ ಏಳನೆ ತರಗತಿಯು ವಿದ್ಯಾರ್ಥಿ ಜೀವನದಲ್ಲಿ ಮೊದಲ ಮೆಟ್ಟಿಲಾಗುತ್ತದೆ ಎಂದು ದುಂಡಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಮುಖ್ಯ ಶಿಕ್ಷಕ ಎಚ್.ಆರ್.ಮಲ್ಲೇಶ್ ತಿಳಿಸಿದರು. ಬ್ಯಾಡಗೊಟ್ಟ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಬೆಂಬಳೂರು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ 2024-25ನೇ ಶೈಕ್ಷಣಿಕ ಸಾಲಿನ 7ನೇ ತರಗತಿ ವಿದ್ಯಾರ್ಥಿಗಳಿಗಾಗಿ ಹಮ್ಮಿಕೊಂಡಿದ್ದ ಬೀಳ್ಕೊಡುಗೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ವಿದ್ಯಾರ್ಥಿ ಜೀವನದಲ್ಲಿ ಪ್ರಾಥಮಿಕ ವಿದ್ಯಾಭ್ಯಾಸವು ಶಿಕ್ಷಣದ ಮೊದಲ ಮೆಟ್ಟಿಲಾಗಿರುವುದರಿಂದ ಪ್ರೌಢಶಾಲಾ ಹಂತಕ್ಕೆ ಶಿಕ್ಷಣ ಪಡೆಯಲು ಹೋಗುವ ವಿದ್ಯಾರ್ಥಿಗಳು ಪ್ರಾಥಮಿಕ ಶಾಲೆಯಲ್ಲಿ ಕಲಿತ ಸಂಸ್ಕಾರ, ವಿನಯತೆಯಲ್ಲಿ ಮುಂದುವರೆಸಿಕೊಂಡು ಹೋಗಬೇಕು. ಈ ದಿಸೆಯಲ್ಲಿ ವಿದ್ಯಾರ್ಥಿಗಳು ಪ್ರಾಥಮಿಕ ಶಾಲಾ ಹಂತದಲ್ಲಿ ಕಲಿಸಿದ ಗುರುಗಳನ್ನು ಸ್ಮರಿಸಬೇಕು. ಈ ಮೂಲಕ ವಿದ್ಯಾರ್ಥಿಗಳು ಮುಂದೆ ಸಮಾಜದಲ್ಲಿ ಉತ್ತಮ ವ್ಯಕ್ತಿಯಾಗಬೇಕು ಎಂದು ಸಲಹೆ ನೀಡಿದರು. ಶಾಲಾ ಮುಖ್ಯ ಶಿಕ್ಷಕ ಡಿ.ಎಲ್.ಮೂರ್ತಿ ಮಾತನಾಡಿ, 'ಮಾನವೀಯತೆ, ಸಂಸ್ಕಾರಗಳಂತಹ ಮೌಲ್ಯಗಳು ಪ್ರಾಥಮಿಕ ಶಾಲಾ ಹಂತದಲ್ಲಿ ವಿದ್ಯಾರ್ಥಿಗಳು ಕಲಿಯುತ್ತಾರೆ' ಎಂದು ಹೇಳಿದರು.

ಸಹ ಶಿಕ್ಷಕಿ ಬಿ.ಕೆ.ಕುಸುಮಾ, ಅತಿಥಿ ಶಿಕ್ಷಕಿ ಎಚ್.ಆರ್.ರಶ್ಮಿತಾ ಮಾತನಾಡಿದರು. ಈ ವೇಳೆ ಹಿರಿಯ ವಿದ್ಯಾರ್ಥಿಗಳು ತಮ್ಮ ಅನಿಸಿಕೆಗಳನ್ನು ಹಂಚಿಕೊಂಡರು, ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದವು.


ಉದಯವಾಹಿನಿ ಚಿತ್ರ


ಅಂತರಾಳದಿಂದ..
EDITORIAL

# ರೋಹಿತ್ ಕಾಯ್ದೆ ಜಾರಿಯಾಗಲು

## ಇನ್ನೆಷ್ಟು ರೋಹಿತ್‌ಗಳು ಬಲಿಯಾಗಬೇಕು?

ಒಂದೆಡೆ ಒಳಮೀಸಲಾತಿಗಾಗಿ ರಾಜ್ಯದ ದಲಿತ ಸಮುದಾಯ ಹೋರಾಟ ನಡೆಸುತ್ತಿರುವ ಹೊತ್ತಿಗೇ, ಎಪ್ರಿಲ್ 14ರೊಳಗೆ ರಾಜ್ಯದಲ್ಲಿ 'ರೋಹಿತ್ ಕಾಯ್ದೆ'ಯನ್ನು ಜಾರಿಗೊಳಿಸಬೇಕು ಎಂದು ದಲಿತ ವಿದ್ಯಾರ್ಥಿ ಸಂಘಟನೆಗಳು ಬೀದಿಗಿಳಿದಿವೆ. ಉನ್ನತ ಶಿಕ್ಷಣದಲ್ಲಿ ದಲಿತ ವಿದ್ಯಾರ್ಥಿಗಳ ಮೇಲೆ ನಡೆಯುತ್ತಿರುವ ದೌರ್ಜನ್ಯಗಳನ್ನು ತಡೆಯುವುದಕ್ಕಾಗಿ ರೋಹಿತ್ ಕಾಯ್ದೆಯನ್ನು ಜಾರಿಗೊಳಿಸಬೇಕು ಎನ್ನುವ ಆಗ್ರಹ ಕೆಲವು ವರ್ಷಗಳಿಂದ ಮಹತ್ವವನ್ನು ಪಡೆದುಕೊಳ್ಳುತ್ತಿದೆ. 2016ರಲ್ಲಿ ಹೈದರಾಬಾದ್ ಕೇಂದ್ರೀಯ ವಿಶ್ವವಿದ್ಯಾನಿಲಯದಲ್ಲಿ ರೋಹಿತ್ ವೇಮುಲಾ ಆತ್ಮಹತ್ಯೆ ದೇಶದ ವಿಶ್ವವಿದ್ಯಾನಿಲಯಗಳಲ್ಲಿ ದಲಿತ ವಿದ್ಯಾರ್ಥಿಗಳ ಹೀನಾಯ ಸ್ಥಿತಿಗತಿಗಳನ್ನು ಮುನ್ನೆಲೆಗೆ ತಂದಿತ್ತು. ರೋಹಿತ್ ವೇಮುಲಾ ಆತ್ಮಹತ್ಯೆ ವೈಯಕ್ತಿಕ ಪ್ರಕರಣವಾಗಿರಲಿಲ್ಲ. ಆತ ತನ್ನ ಆತ್ಮಹತ್ಯೆಗೆ ಮುನ್ನ ಬರೆದ ಪತ್ರದಲ್ಲಿ ದಲಿತ ವಿದ್ಯಾರ್ಥಿಗಳಿಗೆ, ವಿಶ್ವವಿದ್ಯಾಲಯ ಪ್ರವೇಶಿಸುವಾಗಲೇ ಆತ್ಮಹತ್ಯೆ ಮಾಡಿಕೊಳ್ಳಲು ಉಚಿತವಾಗಿ ವಿಷವನ್ನು ಹಂಚಿ ಎಂದು ಮನವಿ ಮಾಡಿದ್ದ ತಾನು ದಲಿತನಾದ ಕಾರಣಕ್ಕೇ ತನ್ನ ಮೇಲೆ ಕ್ರಿಮಿನಲ್ ಮೊಕದ್ದಮೆಯನ್ನು ದಾಖಲಿಸಲಾಗಿತ್ತು. ಅಷ್ಟೇ ಅಲ್ಲ, ಏಳು ತಿಂಗಳಿಂದ ಫೆಲೋಶಿಪ್ಪು ತಡೆಹಿಡಿಯಲಾಗಿತ್ತು ಎಂದು ಆತ ಬರೆದ ಪತ್ರವೊಂದರಲ್ಲಿ ತೋಡಿಕೊಂಡಿದ್ದಾನೆ. ಸಾಯುವ ಕೆಲವು ದಿನಗಳ ಮೊದಲು ತನ್ನ ಹಕ್ಕಿಗಾಗಿ ಆತ ಹಗಲು ರಾತ್ರಿಯೆನ್ನದೇ ಧರಣಿ ನಡೆಸಿದ್ದ ಆತನ್ನು ಹಂತಹಂತವಾಗಿ ಮಾನಸಿಕವಾಗಿ ಶೋಷಿಸಿ, ಆತ್ಮಹತ್ಯೆಗೆ ತಳ್ಳಲಾಗಿತ್ತು. ರೋಹಿತ್ ವೇಮುಲಾ ಆತ್ಮಹತ್ಯೆಯ ಬಳಿಕ, ಆತನಿಗಾದ ಅನ್ಯಾಯ ದೇಶಾದ್ಯಂತ ಚರ್ಚೆಗೊಳಗಾಯಿತು. ಸಂಸತ್ತಲ್ಲೂ ಈ ಆತ್ಮಹತ್ಯೆ ಪ್ರತಿಧ್ವನಿಸಿತು. ಈ ಸಂದರ್ಭದಲ್ಲಿ ಉನ್ನತ ಶಿಕ್ಷಣದಲ್ಲಿ ದಲಿತ ವಿದ್ಯಾರ್ಥಿಗಳ ಮೇಲೆ ನಡೆಯುತ್ತಿರುವ ದೌರ್ಜನ್ಯಗಳನ್ನು ತಡೆಯುವುದಕ್ಕಾಗಿ ರೋಹಿತ್ ಹೆಸರಿನಲ್ಲಿ ಪ್ರತ್ಯೇಕ ಕಾಯ್ದೆಯೊಂದನ್ನು ಜಾರಿಗೊಳಿಸಬೇಕು ಎನ್ನುವ ಒತ್ತಾಯ ಮುನ್ನೆಲೆಗೆ ಬಂತು. ಇತ್ತೀಚಿನ ದಿನಗಳಲ್ಲಿ ಕಾಲೇಜುಗಳಲ್ಲಿ, ವಿಶ್ವವಿದ್ಯಾನಿಲಯಗಳಲ್ಲಿ ನಡೆಯುತ್ತಿರುವ ರ್‍ಯಾಗಿಂಗ್ ಗಳು ಮಾಧ್ಯಮಗಳಲ್ಲಿ ಸುದ್ದಿಯಾಗುತ್ತಿವೆ. ಅತ್ಯಂತ ಸುಶಿಕ್ಷಿತ ರಾಜ್ಯವೆಂದು ಗುರುತಿಸಲ್ಪಡುವ ನೆರೆಯ ಕೇರಳದಲ್ಲೇ ಕೆಲವೇ ದಿನಗಳ ಅಂತರದಲ್ಲಿ ಇಬ್ಬರು ವಿದ್ಯಾರ್ಥಿಗಳು ರ್‍ಯಾಗಿಂಗ್‌ಗೆ ಬಲಿಯಾಗಿ ಆತ್ಮಹತ್ಯೆ ಮಾಡಿಕೊಂಡರು. ಹಿಂದೆ ಡ್ರಗ್ಸ್ ಮಾದಕ ಪದಾರ್ಥಗಳ ಕೈವಾಡವಿರಬಹುದು ಎಂದು ಸಂಶಯಿಸಲಾಗಿದೆ. ಆದರೆ ದಲಿತ ವಿದ್ಯಾರ್ಥಿಗಳ ಮೇಲೆ ನಡೆಯುವ ರ್‍ಯಾಗಿಂಗ್‌ಗಳ ಹಿಂದೆ, 'ಜಾತೀಯತೆ' ಎನ್ನುವ ವಿಷ ಕೆಲಸ ಮಾಡುತ್ತಿದೆ. ದಲಿತ ವಿದ್ಯಾರ್ಥಿಗಳು ಶಾಲಾ ಕಾಲೇಜುಗಳ ಮೆಟ್ಟಿಲು ತುಳಿಯುವುದನ್ನೇ ಅಸಹನೆಯಿಂದ ನೋಡುವ ಸಮಾಜ ಇಂದಿಗೂ ಜೀವಂತವಿದೆ. ಮೀಸಲಾತಿಯನ್ನು ಮುಂದಿಟ್ಟುಕೊಂಡು ದಲಿತ ವಿದ್ಯಾರ್ಥಿಗಳನ್ನು ವ್ಯಂಗ್ಯ ಮಾಡುವುದು, ಅವರನ್ನು ಸಾರ್ವಜನಿಕವಾಗಿ ಅವಮಾನಿಸುವುದು, ಅವರನ್ನು ಅನ್ಯರಂತೆ ಉಪಚರಿಸುವುದು ವಿಶ್ವವಿದ್ಯಾನಿಲಯಗಳಲ್ಲಿ ಸಾಮಾನ್ಯ ಎನ್ನುವಂತಾಗಿದೆ. ವಿದ್ಯಾರ್ಥಿಗಳು ಮಾತ್ರವಲ್ಲ, ಅಧ್ಯಾಪಕರೂ ದಲಿತರ ವಿರುದ್ಧದ ಈ ರ್‍ಯಾಗಿಂಗ್‌ನಲ್ಲಿ ಕೈ ಜೋಡಿಸುತ್ತಾರೆ. ವಿದ್ಯಾರ್ಥಿಗಳ ಕುರಿತಂತೆ ಪೂರ್ವಾಗ್ರಹ ಪೀಡಿತರಾಗುವುದು, ಅವರಿಗೆ ಸಿಗಬೇಕಾದ ಫೆಲೋಶಿಪ್ಪುಗಳನ್ನು ಕ್ಷುಲ್ಲಕ ನೆಪಗಳನ್ನು ಮುಂದಿಟ್ಟು ತಡೆಯುವುದು, ಹಾಸ್ಟೆಲ್‌ಗಳಲ್ಲಿ ಅವರಿಗೆ ಕಳಪೆ ಸೌಕರ್ಯಗಳನ್ನು ಒದಗಿಸುವುದು, ಶುಚಿತ್ವದ ಕೆಲಸಗಳನ್ನು ಅವರಿಗೆ ವಹಿಸುವುದು ಇತ್ಯಾದಿಗಳ ಮೂಲಕ ವಿದ್ಯಾರ್ಥಿಗಳು ಕೀಳರಿಮೆಯಿಂದ ಬದುಕುವಂತೆ ನೋಡಿಕೊಳ್ಳುತ್ತಾರೆ. ದಲಿತ ವಿದ್ಯಾರ್ಥಿಗಳು ಸಾಮಾನ್ಯ ವರ್ಗದವರಂತೆ ಬದುಕುವುದಕ್ಕೆ ಅನರ್ಹರು ಎಂದು ವ್ಯವಸ್ಥೆಯೇ ತೀರ್ಮಾನಿಸಿ ಬಿಟ್ಟಿರುತ್ತದೆ. ಉತ್ತರ ಭಾರತದ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಮೇಲಾತಿಯ ವಿದ್ಯಾರ್ಥಿಗಳ ಮುಂದೆ ದಲಿತ ವಿದ್ಯಾರ್ಥಿಗಳು ಆತ್ಮವಿಶ್ವಾಸದಿಂದ ಬದುಕಲು ಮುಂದಾದರೆ, ಅದು ಜಾತಿ ಕಲಹಕ್ಕೆ ಕಾರಣವಾಗುತ್ತದೆ. ಅಂತಿಮವಾಗಿ, ಅವರನ್ನು ಮಾನಸಿಕವಾಗಿ, ದೈಹಿಕವಾಗಿ ಬೆದರಿಸಿ ಅವರನ್ನು ಕಾಲೇಜು ತೊರೆಯುವಂತೆ ಮಾಡಲಾಗುತ್ತದೆ ಅಥವಾ ಪ್ರತಿರೋಧಿಸಿದ ವಿದ್ಯಾರ್ಥಿಗಳಿಗೆ ಆತ್ಮಹತ್ಯೆ ಅಂತಿಮ ಆಯ್ಕೆಯಾಗಿರುತ್ತದೆ. ಅಖಿಲ ಭಾರತ ವೈದ್ಯಕೀಯ ವಿಜ್ಞಾನ ಸಂಸ್ಥೆ (ಎಐಐಎಂಎಸ್)ಯಲ್ಲಿ ಜಾತಿತಾರತಮ್ಯ ಸುದ್ದಿಯಾಗಿರುವುದು ಇಂದು ನಿನ್ನೆಯಲ್ಲ. 2007ರಲ್ಲಿ ಥೋರಟ್ ಸಮಿತಿ ಸಲ್ಲಿಸಿದ ವರದಿಯಲ್ಲಿ ಇಲ್ಲಿರುವ ತಾರತಮ್ಯವು ಜಗಜ್ಜಾಹೀರಾಗಿತ್ತು. ಈ ವರದಿಯ ಪ್ರಕಾರ, ಶೇ. 69ರಷ್ಟು ವಿದ್ಯಾರ್ಥಿಗಳು ಶಿಕ್ಷಕರಿಂದ ಸೂಕ್ತ ಸಹಕಾರ ಸಿಗುತ್ತಿಲ್ಲ ಎಂದು ಆರೋಪಿಸಿದ್ದಾರೆ. ಇವರಲ್ಲಿ ಶೇ. 30ರಷ್ಟು ವಿದ್ಯಾರ್ಥಿಗಳು ಜಾತಿ ಹಿನ್ನೆಲೆಯೇ ಇದಕ್ಕೆ ಕಾರಣ ಎಂದು ಅನುಮಾನ ವ್ಯಕ್ತಪಡಿಸಿದ್ದಾರೆ. ಶೇ 84 ವಿದ್ಯಾರ್ಥಿಗಳು ವಿವಿಧ ರೀತಿಯ ದೌರ್ಜನ್ಯಗಳನ್ನು ಅನುಭವಿಸಿದ್ದಾರೆ. ವೈದ್ಯಕೀಯ ವಿಜ್ಞಾನ ಸಂಸ್ಥೆಯಲ್ಲೇ ಜಾತಿಯ ಹೊಲಸು ಇಷ್ಟೊಂದು ಹೆಪ್ಪುಗಟ್ಟಿರಬೇಕಾದರೆ, ಇನ್ನುಳಿದ ಶಿಕ್ಷಣ ಸಂಸ್ಥೆಗಳಲ್ಲಿ ದಲಿತ ವಿದ್ಯಾರ್ಥಿಗಳು ಎಂತಹ ಪರಿಸ್ಥಿತಿಯನ್ನು ಅನುಭವಿಸಿರಬೇಡ? ಇತ್ತೀಚೆಗೆ ಕರ್ನಾಟಕದಲ್ಲೇ ಒಂದು ಕಾಲೇಜಿನಲ್ಲಿ ಅಂಬೇಡ್ಕರನ್ನು ವ್ಯಂಗ್ಯವಾಡುವ ಪ್ರಹಸನವೊಂದನ್ನು ಶಾಲಾ ಸಾಂಸ್ಕೃತಿಕ ಸಮಾರಂಭದಲ್ಲಿ ವಿದ್ಯಾರ್ಥಿಗಳು ಅಭಿನಯಿಸಿ ತೋರಿಸಿದರು. ಇಲ್ಲಿ ಅಂಬೇಡ್ಕರನ್ನು ದಲಿತ ವಿದ್ಯಾರ್ಥಿಗಳ ಮೀಸಲಾತಿಯನ್ನು ಪರೋಕ್ಷವಾಗಿ ವ್ಯಂಗ್ಯವಾಡಲಾಗಿತ್ತು. ಇದನ್ನು ವೀಕ್ಷಿಸುವ ದಲಿತ ವಿದ್ಯಾರ್ಥಿಯ ಸ್ಥಿತಿ ಏನಾಗಬೇಡ ಆತ ಮಾನಸಿಕವಾಗಿ ಅದೆಷ್ಟು ಕುಗ್ಗಿರಬೇಕು ಮತ್ತು ಸಹವಿದ್ಯಾರ್ಥಿಗಳ ಮುಂದೆ ಅದೆಷ್ಟು ಕೀಳರಿಮೆಯನ್ನು ಅನುಭವಿಸಿರಬೇಕು 2021ರಲ್ಲಿ ಕೇಂದ್ರ ಶಿಕ್ಷಣ ಸಚಿವರು ನೀಡಿರುವ ಅಂಕಿ ಅಂಶದ ಪ್ರಕಾರ 2014ರಿಂದ 2021ರ ಅವಧಿಯಲ್ಲಿ ಐಐಟಿ, ಐಐಎಂ.ಎನ್‌ಐಟಿ ಮತ್ತು ಇತರ ಕೇಂದ್ರೀಯ ವಿಶ್ವವಿದ್ಯಾನಿಲಯಗಳಲ್ಲಿ 122 ವಿದ್ಯಾರ್ಥಿಗಳು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಹಾಗೆ ಆತ್ಮಹತ್ಯೆ ಮಾಡಿಕೊಂಡವರಲ್ಲಿ 68 ವಿದ್ಯಾರ್ಥಿಗಳು ದಲಿತ ಮತ್ತು ಹಿಂದುಳಿದ ವರ್ಗಗಳಿಗೆ ಸೇರಿದವರಾಗಿದ್ದಾರೆ.

**ಶೇ. 72ರಷ್ಟು ವಿದ್ಯಾರ್ಥಿಗಳು ಕಲಿಕೆಯ ಅವಧಿಯಲ್ಲಿ ಜಾತಿ ತಾರತಮ್ಯವನ್ನು ಎದುರಿಸಿದ್ದಾರೆ. ಶೇ. 85ರಷ್ಟು ದಲಿತ ವಿದ್ಯಾರ್ಥಿಗಳು ಉನ್ನತ ಜಾತಿಯ ವಿದ್ಯಾರ್ಥಿಗಳಿಗೆ ಹೋಲಿಸಿದರೆ ತಮ್ಮ ಬಗ್ಗೆ ತಾರತಮ್ಯದಿಂದ ವರ್ತಿಸುತ್ತಿರುವುದನ್ನು ಬಹಿರಂಗಪಡಿಸಿದ್ದಾರೆ. ಶೇ. 84ರಷ್ಟು ವಿದ್ಯಾರ್ಥಿಗಳು ಜಾತಿ ಕಾರಣದಿಂದಾಗಿ ತಮ್ಮ ಶ್ರೇಣಿಯ ಮೇಲೆ ದುಷ್ಪರಿಣಾಮವಾಗಿದೆ ಎನ್ನುವುದನ್ನು ತಿಳಿಸಿದ್ದಾರೆ.**



# ರಾಮಾಯಣ

## ಲಕ್ಷ್ಮಣನು ವನವಾಸಕ್ಕೆ ಬರುವುದನ್ನು ಶ್ರೀರಾಮನು ಒಪ್ಪಿದ್ದು

• ಹಿಂದಿನ ಸಂಚಿಕೆಯಿಂದ 78 ನೆಯ ಅಧ್ಯಾಯ

ಜನಕಚಕ್ರೇಶ್ವರನ ಯಾಗಕಾಲದಲ್ಲಿ ವರುಣನು ಕೊಟ್ಟಂಥ ದಿವ್ಯವಾದ ಬಿಲ್ಲನ್ನೂ ಅಕ್ಷಯವಾದ ಬತ್ತಳಿಕೆಯನ್ನೂ ಸೂರಮಂಡಲದಂತೆ ಬೆಳಗುವ ಎರಡು ಖಡ್ಗಗಳನ್ನೂ ನಮ್ಮ ಗುರುವಾದ ವಸಿಷ್ಠಮುನೀಶ್ವರನ ವಶದಲ್ಲಿಟ್ಟಿದ್ದೇನೆ. ನೀನು ಆತನ ಸಮೀಪಕ್ಕೆ ಹೋಗಿ ಆ ಬಿಲ್ಲು ಬತ್ತಳಿಕೆಗಳನ್ನೂ ಖಡ್ಗಗಳನ್ನೂ ತೆಗೆದುಕೊಂಡು ನಿನ್ನ ಸ್ನೇಹಿತರಿಗೂ ನಿನ್ನನ್ನು ಅನುಸರಿಸಿದವರಿಗೂ ಹೇಳಿ ಶೀಘ್ರದಲ್ಲಿ ಬಾ ಎಂದು ಹೇಳಿದನು. ಲಕ್ಷ್ಮಣನು ಮಹಾಪ್ರಸಾದವೆಂದು ಇಕ್ಷಾಕುವಂಶಕ್ಕೆ ಗುರುವಾದ ವಸಿಷ್ಠ ಮುನೀಶ್ವರನ ಸಮೀಪಕ್ಕೆ ಹೋಗಿ ಅಭಿವಂದಿಸಿ ಆತನ ಕೈಯಿಂದ ಬಿಲ್ಲು ಬತ್ತಳಿಕೆ ಖಡ್ಗಗಳನ್ನು ತೆಗೆದುಕೊಂಡು ಬಂದು ಶ್ರೀರಾಮನಿಗೆ ತೋರಿಸಿದನು. ಶ್ರೀರಾಮನು ಹರ್ಷದಿಂದ ಲಕ್ಷ್ಮಣ ನೀನು ಶೀಘ್ರದಲ್ಲಿ ಬಂದದ್ದು ಬಹಳ ಒಳ್ಳೆಯದಾಯಿತು. ನಾನು ನನ್ನಲ್ಲಿರುವ ವಸ್ತುಗಳನ್ನು ಬ್ರಾಹ್ಮಣರಿಗೆ ದಾನಮಾಡುವೆನು. ನಿನ್ನಲ್ಲಿರುವ ಸುವರ್ಣ ರತ್ನ ಮೊದಲಾದ ವಸ್ತುಗಳನ್ನು ಯೋಗ್ಯರಾದವರಿಗೆ ದಾನಮಾಡು. ನಿನ್ನನ್ನು ಆಶ್ರಯಸಿದ್ದವರಿಗೂ ಊಳಿಗದವರಿಗೂ ಬೇಕಾದ ವಸ್ತುಗಳನ್ನು ಕೊಡು. ವಸಿಷ್ಠ ಮುನೀಶ್ವರನ ಮಗನಾದ ಸುಯಜ್ಞ ಮುನಿಯನ್ನೂ ಆ ಮುನೀಶ್ವರನ ಶಿಷ್ಯರನ್ನೂ ಕರೆಸು. ನಾನು ಅವರಿಗೆ ಬೇಕಾದ ವಸ್ತುಗಳನ್ನು ದಾನಮಾಡುವೆನು ಎಂದು ನಿರೂಪಿಸಿದನು.

**ಸೀತಾರಾಮಲಕ್ಷ್ಮಣರು ದಾನ ಮಾಡಿದ್ದು**

ಆಮೇಲೆ ಲಕ್ಷ್ಮಣನು ಶ್ರೀರಾಮನ ಹಿತೋಪದೇಶವನ್ನು ಕೇಳಿ ಸುಯಜ್ಞ ಮುನೀಶ್ವರನ ಮನೆಗೆ ಹೋಗಿ ಅಗ್ನಿ ಹೋತ್ರದ ಮನೆಯಲ್ಲಿದ್ದ ಆತನಿಗೆ ನಮಸ್ಕರಿಸಿ ಸುಯಜ್ಞ ಮುನಿಗಳೆ, ನೀವು ಶ್ರೀರಾಮನ ಮನೆಗೆ ಬಂದು ಆತನ ದುಷ್ಕರಕರ್ಮವನ್ನು ನೋಡಿರಿ ಎಂದು ಹೇಳಿದನು. ಸುಯಜ್ಞಮುನೀಶ್ವರನು ಸಂಧ್ಯಾವಂದನ ಜಪಹೋಮಾದಿ ನಿತ್ಯಕರ್ಮಗಳನ್ನು ತೀರಿಸಿಕೊಂಡು ಲಕ್ಷ್ಮಣನ ಸಂಗಡ ಅನೇಕ ಸಂಪತ್ತುಗಳಿಂದ ರಮ್ಯವಾದ ಶ್ರೀರಾಮನ ಅರಮನೆ ಯನ್ನು ಪ್ರವೇಶಿಸಿದನು. ಶ್ರೀರಾಮನು ಸೀತಾದೇವಿಯೊಡನೆ ಎದುರ್ಗೊಂಡು ಯಜ್ಞಪುರುಷನಿಗೆ ನಮಸ್ಕಾರವನ್ನು ಮಾಡುವಂತೆ ತಪೋಜ್ವಾಲೆಯಿಂದ ಬೆಳಗುತ್ತಿದ್ದ ಆ ಮುನೀಶ್ವರನಿಗೆ ಪ್ರದಕ್ಷಿಣ ನಮಸ್ಕಾರಗಳನ್ನು ಮಾಡಿ ತನ್ನಲ್ಲಿದ್ದಂಥ ಸುವರ್ಣಮಯವಾದ ರತ್ನಖಚಿತವಾದ ಕುಂಡಲಗಳನ್ನೂ ಬಾಹುಪುರಿ ರತ್ನದ ಗೊಲುಸುಳ್ಳ ಉಡುದಾರ ಮೊದಲಾದ ಸಮಸ್ತ ಭೂಷಣಗಳನ್ನೂ ಕೊಟ್ಟನ್ನು ಮತ್ತು ಸೀತಾದೇವಿಯಿಂದ ಪ್ರೇರಿತನಾಗಿ ಸುಯಜ್ಞ ಮುನೀಶ್ವರ, ನಿಮ್ಮ ಪತ್ನಿಗೆ ಸೀತಾದೇವಿಯು ತನ್ನ ಆಭರಣಗಳನ್ನು ಕೊಡಲೆಣಿಸಿದ್ದಾಳೆ. ಸೀತೆಯು ಕೊಡುವ ಆಭರಣಗಳನ್ನು ತೆಗೆದುಕೊಂಡು ಹೋಗಿ ನಿಮ್ಮ ಪತ್ನಿಗೆ ಕೊಡಿರಿ ಎಂದನು. ಆಗ ಸೀತಾದೇವಿಯು ಚಿನ್ನದ ಕಿರುಗೆಜ್ಜೆಗಳುಳ್ಳ ಚಿನ್ನದ ಕಾಂಚೀದಾಮ ವಿಚಿತ್ರಗಳಾದ ರತ್ನದ ಕಡಗಗಳು ಹರಳೋಲೆಗಳು ಕಂಠಮಾಲೆ ಮೂಗುತಿ ಮೊದಲಾದ ಭೂಷಣಗಳನೂ ರತ್ನ ಖಚಿತವಾದ ಹಾಸುಮಂಚವನ್ನೂ ಹಂಸಪಕ್ಷಿಗಳ ತುಬುಟಗಳಿಂದ ಮಾಡಲ್ಪಟ್ಟ ಸುಪ್ಪತ್ತಿಗೆಗಳನ್ನೂ ಆತನ ಪತ್ನಿಗೆ ಕೊಡಹೇಳಿ ಸುಯಜ್ಞ ಮುನೀಶ್ವರನಿಗೆ ಕೊಟ್ಟಳು.

ಮುಂದುವರಿಯುವುದು...

# ಮುಗಿಯದ ಮುಸ್ಸಂಜೆ


☛ ವಿಶ್ವಾಸ್.ಡಿ.ಗೌಡ



ಕವಿತೆ ಯಾವಾಗ , ಯಾರನ್ನು ಹೇಗೆ ಅಪ್ಪಿಕೊಳ್ಳುತ್ತದೆ ಎಂದು ಹೇಳೋದು ಕಷ್ಟ. ವೃತ್ತಿಯಿಂದ ಕಾರ್ಪೆಂಟರ್ ಆಗಿರುವ ಗೆಳೆಯ ಪುರುಷೋತ್ತಮ್ ರವರ ಚೊಚ್ಚಲ ಕೃತಿ ಈ ಕವನ ಸಂಕಲನ.

ತನ್ನ ಸುತ್ತಲಿನ ಪ್ರತಿ ಹಾಗುಹೋಗುಗಳಿಗೆ ತೆರೆದ ಮನಸ್ಸು ಮತ್ತು ತೆರೆದ ಕಂಗಳಿಂದ ಪ್ರತಿಸ್ಪಂದಿಸುವ ಕವಿಗೆ ಕವಿತೆಗಳ ರಚನೆಗೆ ವಸ್ತುವೈವಿಧ್ಯದ ಕೊರತೆಯಾಗದು ಎಂಬುದಕ್ಕೆ ಇಲ್ಲಿನ ಕವನಗಳು ಸಾಕ್ಷಿಯಾಗಿವೆ. ಪ್ರೀತಿ-ಪ್ರೇಮದ ಕವನಗಳು ಸಂಖ್ಯೆಯಲ್ಲಿ ಮೇಲುಗೈ ಹೊಂದಿದ್ದರೂ ಸಹ ಇತರೆ ಕವನಗಳೂ ಸಹ ನಮ್ಮ ಗಮನಸೆಳೆಯುವಲ್ಲಿ ಗೆದ್ದಿವೆ.

ಮೊದಲ ಸಂಕಲನದಲ್ಲಿ ಕಾಣಬರುವ ಒಂದಷ್ಟು ಸಹಜ ತೊದಲು ನುಡಿಗಳನ್ನು ಹೊರತು ಪಡಿಸಿದರೆ ಪುರುಷೋತ್ತಮ್ ಮುಂದಿನ ದಿನಗಳಲ್ಲಿ ಉತ್ತಮ ಕವಿಯಾಗುವ ಭರವಸೆಯನ್ನು ಇಲ್ಲಿನ ಕವಿತೆಗಳು ತೋರುತ್ತವೆ. ಸಹಜವಾಗಿ ಹೊರಹೊಮ್ಮುವ ಭಾವನೆ ಗಳನ್ನು ಕವಿತಾ ರೂಪದಲ್ಲಿ ಕಟ್ಟಿಕೊಡುವಲ್ಲಿ ಕವಿ ದಿನನಿತ್ಯದ ಆಡುಭಾಷೆಯ ಪದಗಳನ್ನು ಬಳಸಿಕೊಳ್ಳುತ್ತಾರೆ. ಪ್ರಾಸಗಳಿಗೆ ಜೋತು ಬೀಳದೆ ಕವಿತ್ವ ಕಟ್ಟುವಲ್ಲಿ ಕವಿಯ ನಡೆ ಗಮನಾರ್ಹ. ಒಂದೆರಡು ಕವಿತೆಗಳಲ್ಲಿ ನುಸುಳುವ ಆಂಗ್ಲ ಪದಗಳು ಓದಿಗೆ ತ್ರಾಸವಾಗದಿದ್ದರೂ ಇಲ್ಲಿ ಕವಿ ಕನ್ನಡ' ನುಡಿಗಳನ್ನು ಬಳಸುವ ಸಾಧ್ಯತೆಯ ಕಡೆ ಮನಸ್ಸು ಮಾಡಬಹುದಿತ್ತು. ನಿರ್ದಿಷ್ಟ ಪ್ರಾಸ, ನಿರ್ದಿಷ್ಟ ಛಂಧ, ನಿರ್ದಿಷ್ಟ ಸಾಲುಗಳು ಹೀಗೆ ಚೌಕಟ್ಟುಗಳಿಗೆ ಒಳಪಡದೇ ಭಾವಗಳನ್ನು ಸ್ವಚ್ಛಂದವಾಗಿ ಹಾರುವಂತೆ ಇಲ್ಲಿನ ಕವಿತೆಗಳಿವೆ. ಎಲ್ಲರಂತಲ್ಲ ನಾನು, ನನ್ನದೇ ವಿಭಿನ್ನ ದಾರಿ ಎಂಬಂತೆ ಇಲ್ಲಿನ ಸಾಕಷ್ಟು ಕವಿತೆಗಳು ಉತ್ತಮ್ ರವರ ಕೌಶಲ್ಯವನ್ನು ಸಾಬೀತುಪಡಿಸುತ್ತವೆ. ಬಹು ಮುಖ್ಯವಾಗಿ ಆಕಾಡೆಮಿಕ್ ಶೈಲಿಯ ಕಾವ್ಯಪಥ್ಯ ಕಲಿಯದ ಮುಗ್ಧ ಯುವಕನ ಕವಿತೆಗಳಿವು. ಗೆಳೆಯರ ಸಹವಾಸದಲ್ಲಿ ಕವಿತೆಯ ಸಾಂಗತ್ಯಕ್ಕೆ ಬಿದ್ದು ಬರೆದ ಕವಿತೆಗಳಿವು. ಹಾಗೆ ಬರೆದ ಕವಿತೆಗಳು ಕವಿಯ ಭಾವನೆಗಳ ಮೂಸೆಯೊಳಗೆ ಹದವಾಗಿ ಅರಳಿ ಪುಸ್ತಕ ರೂಪದಲ್ಲಿ ಇಲ್ಲಿ ಒಟ್ಟುಗೂಡಿವೆ. ಕವಿ ತನ್ನ ಪೂರ್ವಸೂರಿಗಳನ್ನೊಮ್ಮೆ ಗಮನಿಸಿ, ಅವರ ಕಾವ್ಯಗಳನ್ನು ಓದಿ, ಅರಿತುಕೊಂಡು ಕವಿತಾರಚನೆಗೆ ತೊಡುಗುವ ಮೂಲಕ ಕನ್ನಡ ಸಾಹಿತ್ಯಕ್ಕೆ ಇನ್ನಷ್ಟು ಸೇವೆ ಸಲ್ಲಿಸುವ ಕೈಂಕರ್ಯದಲ್ಲಿ ತೊಡಗಲಿ ಎಂದು ಶುಭ ಹಾರೈಸುವೆ.







# ಮಕ್ಕಳಿಗಾಗಿ ವಚನಗಳು





ಓದುವ ಸಂಸ್ಕೃತಿಯನ್ನು ನಾಡಿನೆಲ್ಲೆಡೆ ಪಸರಿಸುವ ಸದುದ್ದೇಶದಿಂದ ಸ್ಥಾಪಿತವಾದ ಪರಿಚಯ ಪ್ರಕಾಶನ ಶ್ರೀಸಾಮಾನ್ಯರೆಡೆಗೆ ಪುಸ್ತಕಗಳನ್ನು ಕೊಂಡೊಯ್ಯುವ ಕೆಲಸವನ್ನು ನಿರಂತರವಾಗಿ ಮಾಡುತ್ತಾ ಬರುತ್ತಿದೆ. ಇದೀಗ ವಚನಗಳನ್ನು ಮಕ್ಕಳಿಗೆ ತಲುಪಿಸುವ ಉದ್ದೇಶದಿಂದ 'ಮಕ್ಕಳಿಗಾಗಿ ವಚನಗಳು ' ಪುಸ್ತಕವನ್ನು ಪ್ರಕಟಿಸಿದೆ. ಶತಮಾನಗಳ ಹಿಂದೆ ಸನ್ಮಾರ್ಗದಲ್ಲಿ ಮನುಕುಲ ಸಾಗಬೇಕಾದ ದಾರಿಗೆ ಅರಿವಿನ ಹಣತೆ ಹಚ್ಚಿದ ನಮ್ಮ ಕನ್ನಡನಾಡಿನ ಅಸ್ಮಿತೆ ಬಸವಣ್ಣನವರ 33 ವಚನಗಳನ್ನು ಆಯ್ಕೆ ಮಾಡಿಕೊಂಡು ಮಕ್ಕಳಿಗೆ ಅರ್ಥವಾಗುವ ಭಾಷೆಯಲ್ಲಿ ಸರಳ ವ್ಯಾಖ್ಯಾನಗಳನ್ನು ಲೇಖಕ ಶ್ರೀ ಹರ್ಷ ಸಾಲಿಮಠ ಇಲ್ಲಿ ಬರೆದಿದ್ದಾರೆ. ವಿಸ್ತಾರ ಅರ್ಥದ ವಚನಗಳಿಗೆ ಅತ್ಯಂತ ಕಡಿಮೆ ಪದಗಳಲ್ಲಿ ಅರ್ಥಪೂರ್ಣ ವ್ಯಾಖ್ಯಾನಗಳನ್ನು ಇಲ್ಲಿ ಕಟ್ಟಿಕೊಡಲಾಗಿದೆ. ಇದನ್ನೂ ಮೀರಿಸುವಂತೆ ನಾಡಿನ ಹೆಮ್ಮೆಯ ಕಲಾವಿದರಾದ ಮುರಳೀಧರ ರಾಥೋಡ್ ವಚನಗಳ ಸಾರವನ್ನು ತಮ್ಮ ರೇಖಾಚಿತ್ರಗಳ ಮೂಲಕ ಅನಾವರಣಗೊಳಿಸಿದ್ದಾರೆ. ಈ ಇಬ್ಬರು ಸೃಜನಶೀಲರ ಪರಿಶ್ರಮದಿಂದ ವಚನಗಳು ಮಕ್ಕಳ ಹೃದಯಕ್ಕೆ ಪ್ರವೇಶಿಕೆ ಪಡೆಯುತ್ತಿರುವುದು ಸಂತಸದ ಸಂಗತಿ. ಪರಿಚಯ ಪ್ರಕಾಶನದ ಹೊಸ ಪ್ರಯತ್ನಗಳನ್ನು ಸದಾ ತೆರೆದ ತೋಳುಗಳಿಂದ ಸ್ವಾಗತಿಸುವ ಸಹೃದಯಿ ಕನ್ನಡಿಗರು ಈ ಪುಟ್ಟ ಹಾಯಿ ದೋಣಿಯನ್ನು ಪ್ರೀತಿಯಿಟ್ಟು ಮುನ್ನಡೆಸಬೇಕೆಂದು ಕೋರುತ್ತೇನೆ. ಅಣ್ಣನ ವಚನಗಳ ಅರಿವಿನ ಹಣತೆ ನಮ್ಮ ಹೃದಯದಲ್ಲಿ ಸದಾ ಬೆಳಗುತ್ತಿರಲಿ. ಈ ಪುಸ್ತಕವನ್ನು ನಿಮ್ಮ ಮಕ್ಕಳಿಗೆ ಉಡುಗೊರೆಯನ್ನಾಗಿ ನೀಡಿ. ನಿಮ್ಮ ಮಕ್ಕಳಿಗೆ ಬೇಸಿಗೆ ರಜೆಯನ್ನು ಪುಸ್ತಕ ಓದುವುದರ ಮೂಲಕ ಸದುಪಯೋಗ ಪಡಿಸಿಕೊಳ್ಳುವಂತೆ ಅನುವು ಮಾಡಿಕೊಡಿ.



# ಘಿಬ್ಲಿ ಆರ್ಟ್ ಅಂದರೇನು? ಆರಂಭಿಸಿದ್ದು ಯಾರು?

ದಿನಕ್ಕೊಂದು ಆನ್‌ಲೈನ್ ಟ್ರೆಂಟ್ ಸೃಷ್ಟಿಯಾಗುವಂತೆ ಈಗ ಹೊಸದಾಗಿ ಇಡೀ ಸಾಮಾಜಿಕ ಜಾಲತಾಣಗಳಲ್ಲಿ ಹೊಸ ರೀತಿಯ ಫೋಟೋ ಟ್ರೆಂಡ್ ಒಂದು ಸಂಚಲನ ಮೂಡಿಸಿದೆ. ಅದೇ ಘಿಬ್ಲಿ ಸ್ಟುಡಿಯೋ ಫೋಟೋ ಟ್ರೆಂಡ್. ಓಪನ್ ಎಐ, ಚಾಟ್ ಜಿಪಿಟಿ ತನ್ನ ಎಐ ಮೊಡೆಲ್‌ನಲ್ಲಿ ಈ ಘಿಬ್ಲಿ ಸ್ಟುಡಿಯೋ ಫೋಟೋ ಎಫೆಕ್ಟ್ ನೀಡಿದೆ. ಜನರು ತಮ್ಮ ಫೋಟೋ ಅಪ್‌ಲೋಡ್ ಮಾಡಿ ಅದನ್ನು ಕಾರ್ಟೂನ್ ರೀತಿ ಬದಲಾಯಿಸಿ ನೀಡುವ ಹೊಸ ಟ್ರೆಂಡ್ ಇದಾಗಿದೆ.



ಈ ಟ್ರೆಂಡ್ ಹಿಂದೆ ಬಿದ್ದ ಕೋಟ್ಯಂತರ ಮಂದಿ ಫೋಟೋ ಹಂಚಿಕೊಂಡು ತಮ್ಮ ಸುಂದರ ಕಾರ್ಟೂನ್ ಫೋಟೋಗಳನ್ನು ತಮ್ಮ ಸಾಮಾಜಿಕ ಮಾಧ್ಯಮ ಖಾತೆಗಳಲ್ಲಿ ಹಂಚಿಕೊಳ್ಳುತ್ತಿರುವುದು ನೋಡಬಹುದು. ಅದರಲ್ಲೂ ಇಡೀ ಫ್ಯಾಮಿಲಿಯ ಫೋಟೋಗಳನ್ನು ಕೂಡ ಅವರು ಹಂಚಿಕೊಳ್ಳುತ್ತಿರುವುದು ನೋಡಬಹುದು. ಅದರಲ್ಲೂ ಬಹಳ ಸುಲಭವಾಗಿ ಈ ಆರ್ಟ್ ಮಾಡಿಕೊಳ್ಳಬಹುದಾಗಿರೋದ್ರಿಂದ ಎಲ್ಲು ನಾ ಮುಂದು ತಾ ಮುಂದು ಎಂದು ಹಂಚಿಕೊಳ್ಳುತ್ತಿರುವುದು ನೋಡಬಹುದು.

ಆದ್ರೆ ಇದಿಷ್ಟೇ ಆಗಿದ್ರೆ ಎಲ್ಲರಿಗೂ ಈ ಘಿಬ್ಲಿ ಆರ್ಟ್ ಖುಷಿ ನೀಡಬಹುದಿತ್ತು. ಆದ್ರೆ ಒಂದಿಷ್ಟು ಸಮುದಾಯ ಈ ಘಿಬ್ಲಿ ಆರ್ಟ್ ಡಿಜಿಟಲ್ ಆಗಿರೋದಕ್ಕೆ ಅಸಮಾಧಾನ ಹೊರಹಾಕುತ್ತಿದ್ದಾರೆ. ನಿಮಗೆ ಈ ರೀತಿ ಕೇಳಲು ಅಚ್ಚರಿ ಆಗಬಹುದು.

ಇದರ ಹಿಂದೆ ಎಂತಹ ಇತಿಹಾಸವಿದೆ. ಈ ಘಿಬ್ಲಿ ಆರ್ಟ್ ಎಂದರೆ ಏನು? ಇದರ ಹಿಂದೆ ದುಡಿದ ಕೈಗಳೆಷ್ಟು? ಈಗ ಚಾಟ್ ಜಿಪಿಟಿ ಈ ರೀತಿ ಆರ್ಟ್ ಬಳಸಿರೋ ಹಿಂದೆ ಇರುವ ತಂತ್ರವೇನು? ಈ ಎಲ್ಲಾ ವಿಚಾರ ನೀವು ತಿಳಿದರೆ ಒಮ್ಮೆ ಅಚ್ಚರಿ ಪಡುದುವು ಗ್ಯಾರಂಟಿ. ಮೊದಲು ಈ ಘಿಬ್ಲಿ ಎಂಬ ಪದದ ಅರ್ಥ ತಿಳಿದುಕೊಳ್ಳಿ ಜಪಾನಿನ ಅನಿಮೇಷನ್ ಸ್ಟುಡಿಯೋಗೆ ಬಳಸಲಾದ ಘಿಬ್ಲಿ ಎಂಬ ಹೆಸರು ಇಟಾಲಿಯನ್ ಪದ ಬಿಸಿ ಮರುಭೂಮಿ ಗಾಳಿಯಿಂದ ಹುಟ್ಟಿಕೊಂಡಿದೆ, ಇದು ಲಿಬಿಯಾದ ಅರೇಬಿಕ್ ಪದ ಗಿಬ್ಲಿ ಯಿಂದ ಬಂದಿದೆ. ಆದ್ರೆ ಈ ಆರ್ಟ್ ಹುಟ್ಟಿದ್ದು ಚಾಟ್ ಜಿಪಿಟಿಯಿಂದಲ್ಲ ದಶಕಗಳ ಹಿಂದೆಯೇ ಓರ್ವ ವ್ಯಕ್ತಿ ಘಬ್ಲಿ ಕಾರ್ಟೂನ್ ಸೃಷ್ಟಿಸಿದೆ.

# ಗುಲಾಬಿ ದಳಗಳಿಂದ

## ಕಾಂತಿಯುತ ತ್ವಚೆ

ಗುಲಾಬಿಯು ಉರಿಯೂತ ನಿವಾರಕ ಉತ್ಕರ್ಷಣ ನಿರೋಧಕ, ಬ್ಯಾಕ್ಟೀರಿಯಾ ವಿರೋಧಿ ಗುಣಗಳನ್ನು ಹೊಂದಿದ್ದು, ಚರ್ಮದ ಆರೈಕೆಯ ಶಕ್ತಿ ಕೇಂದ್ರವನ್ನಾಗಿ ಮಾಡುತ್ತದೆ. ಅವು ಚರ್ಮವನ್ನು ಶಮನಗೊಳಿಸಲು ಮತ್ತು ಶಾಂತಗೊಳಿಸಲು ಸಹಾಯ ಮಾಡುತ್ತದೆ. ಮತ್ತು ಆರೋಗ್ಯಕರ ಹೊಳೆಯುವ ಮತ್ತು ಕಾಂತಿಯುತ ತ್ವಚೆಯನ್ನು ಉತ್ತೇಜಿಸುತ್ತದೆ. ಗುಲಾಬಿ ಫೇಸ್ ಪ್ಯಾಕ್ ಅನ್ನು ತಯಾರಿಸುವುದು ಹೇಗೆ ನೋಡೋಣ.

ತ್ವಚೆಯ ಕಾಳಜಿವಹಿಸುವುದು ಸಾಮಾನ್ಯವಾಗಿ ಎಲ್ಲರೂ ಮಾಡುತ್ತಾರೆ . ಕೆಲವರು ಮಾರುಕಟ್ಟೆಯಲ್ಲಿ ಸಿಗುವ ಉತ್ಪನ್ನಗಳಿಗೆ ಮೊರೆ ಹೋದರೆ ಇನ್ನು ಹೆಚ್ಚಿನವರು ತ್ವಚೆಯ ವಿಷಯದಲ್ಲಿ ನೈಸರ್ಗಿಕ ಪರಿಹಾರಗಳನ್ನು ಕಂಡುಕೊಳ್ಳುವವರಿದ್ದಾರೆ. ನೈಸರ್ಗಿಕ ಪರಿಹಾರಗಳು ಚರ್ಮದ ಮೇಲೆ ಅಡ್ಡಪರಿಣಾಮಗಳನ್ನು ಉಂಟುಮಾಡುವ ಸಾಧ್ಯತೆಗಳು ಕಡಿಮೆ ಅಲ್ಲದೆ ನೈಸರ್ಗಿಕ ಚಿಕಿತ್ಸೆಯು ತ್ವಚೆಯನ್ನು ಹೊಳೆಯುವಂತೆ ಮಾಡುವಲ್ಲಿ ಮತ್ತು ಮೃದುತ್ವವನ್ನು ತರುವಲ್ಲಿ ಹೆಚ್ಚು ಸಹಾಯ ಮಾಡುತ್ತದೆ. ಈ ನೈಸರ್ಗಿಕ ಚಿಕಿತ್ಸೆಗಳಲ್ಲಿ ಗುಲಾಬಿಯ ಚಿಕಿತ್ಸೆಯೂ ಒಂದು. ಗುಲಾಬಿ ದಳಗಳ ಜೊತೆಗೆ ಕೆಲವು ನೈಸರ್ಗಿಕ ಸಾಮಗ್ರಿಗಳನ್ನು ಸೇರಿಸಿ ಫೇಸ್ ಪ್ಯಾಕ್ ತಯಾರಿಸುವು ದರಿಂದ ಇದು ತ್ವಚೆಯ ರಕ್ಷಣೆಯ ಜೊತೆಗೆ ಸನ್ ಬರ್ನ್ ನಂತಹ ತ್ವಚೆಯ ಸಮಸ್ಯೆಗಳಿಗೆ ಪರಿಹಾರ ನೀಡುತ್ತಾ ಆರೋಗ್ಯಯುತವಾದ ಚರ್ಮ ಮತ್ತು ತ್ವಚೆಯ ಸೌಂದರ್ಯವನ್ನು ಕಾಪಾಡುವಲ್ಲಿ ಸಹಾಯ ಮಾಡುತ್ತದೆ.

ಗುಲಾಬಿಗಳು ಇಂತಹ ಹಲವಾರು ಪ್ರಯೋಜನಕಾರಿ ಗುಣಗಳನ್ನು ಹೊಂದಿದ್ದು ಚರ್ಮದ ಆರೈಕೆಯಲ್ಲಿ ಉತ್ತಮ ಪಾತ್ರವಹಿಸುತ್ತವೆ. ಉತ್ಕರ್ಷಣ ನಿರೋಧಕ ಗಳು, ಜೀವಸತ್ವಗಳು ಮತ್ತು ಉರಿಯೂತದ ಸಂಯುಕ್ತ ಗಳಲ್ಲಿ ಸಮೃದ್ಧವಾಗಿರುವ ಗುಲಾಬಿಗಳು ಚರ್ಮವನ್ನು ಹೈಡ್ರೇಟ್ ಮಾಡುತ್ತವೆ. ಮತ್ತು ಶಮನಗೊಳಿಸುತ್ತದೆ ಮತ್ತು ಹೊಳಪು ನೀಡುತ್ತದೆ. ಮೃದುವಾದ , ನಯವಾದ ಮತ್ತು ಹೊಳೆಯುವ ಚರ್ಮವನ್ನು ಪಡೆಯಲು ನಿಮಗೆ ಪರಿಣಾಮಕಾರಿ ಗುಲಾಬಿ ಫೇಸ್ ಪ್ಯಾಕ್‌ಗಳನ್ನು ಹೇಗೆ ತಯಾರಿಸುವುದು ನೋಡೋಣ.

ಗುಲಾಬಿ ದಳಗಳು ಮತ್ತು ಜೇನುತುಪ್ಪ

ತಾಜಾ ಗುಲಾಬಿ ದಳಗಳನ್ನು ರೋಸ್ ವಾಟರ್ ನಲ್ಲಿ ನೆನೆಸಿ ಜೇನುತುಪ್ಪದೊಂದಿಗೆ ಮಿಶ್ರಣ ಮಾಡುವ ಮೂಲಕ ಹಿತವಾದ ಗುಲಾಬಿ ಫೇಸ್ ಪ್ಯಾಕ್ ಅನ್ನು ರಚಿಸಿ. ಈ ಮಿಶ್ರಣವನ್ನು 20-30 ನಿಮಿಷಗಳ ಕಾಲ ಫ್ರಿಜ್ ಮಾಡಿ ನಂತರ ಚರ್ಮಕ್ಕೆ ಹಚ್ಚಿ ಮಸಾಜ್ ಮಾಡಿ. 15-20 ನಿಮಿಷಗಳ ಕಾಲ ಹಾಗೆಯೇ ಬಿಡಿ ಮತ್ತು ನಂತರ ತೊಳೆಯಿರಿ, ಇದರಿಂದ ಚರ್ಮವು ಮೃದುವಾಗುತ್ತದೆ ಮತ್ತು ಪುನರ್ಯೌವನಗೊಳ್ಳುತ್ತದೆ.

**ಗುಲಾಬಿ ದಳಗಳ ಜೊತೆ ರೋಸ್ ವಾಟರ್ ಮತ್ತು ಅಲೊವೆರಾ ಜೆಲ್:** ಮುಖವನ್ನು ಸುಂದರ ಗೊಳಿಸುವಲ್ಲಿ ರೋಸ್ ಫೇಸ್ ಪ್ಯಾಕ್ ತಯಾರಿಸಲು ಎರಡು ತಾಜಾ ಗುಲಾಬಿಗಳನ್ನು ತೆಗೆದುಕೊಂಡು ಅವುಗಳ ದಳಗಳನ್ನು ತೆಗೆದುಕೊಳ್ಳಿ ಮತ್ತು ಇದನ್ನು ಎರಡು ಟೇಬಲ್ ಸ್ಪೂನ್ ಅಲೊವೆರಾ ಜೆಲ್ ಜೊತೆಗೆ ಮಿಶ್ರಣ ಮಾಡಿ. ನಯವಾದ ಪೇಸ್ಟ್ ತಯಾರಿಸಲು ಬೇಕಾದಲ್ಲಿ ರೋಸ್ ವಾಟರ್ ಬಳಸಿ. ಈ ಪೇಸ್ಟ್ ತಯಾರಿಸಿದ ನಂತರ ಇದನ್ನು ಮುಖ ಮತ್ತು ಕುತ್ತಿಗೆ ಭಾಗಗಳಿಗೆ ಅನ್ವಯಿಸಿ ಮತ್ತು ಇಪ್ಪತ್ತು ನಿಮಿಷಗಳ ಕಾಲ ಹಾಗೆ ಬಿಡಿ ನಂತರ ಇದನ್ನು ತೊಳೆಯಿರಿ ನಿಯಮಿತ ಬಳಕೆಯಿಂದ ಮೃದುವಾದ ಮತ್ತು ಹೊಳೆಯುವ ಚರ್ಮವನ್ನು ಪಡೆಯುವಿರಿ.

**ಗುಲಾಬಿ ದಳಗಳು ಮತ್ತು ಮೊಸರು:** ಹಿಸುಕಿದ





ಗುಲಾಬಿ ದಳಗಳನ್ನು ಎರಡು ಟೇಬಲ್ ಸ್ಪೂನ್ ತೆಗೆದುಕೊಂಡು ಇದಕ್ಕೆ ಒಂದು ಟೇಬಲ್ ಸ್ಪೂನ್ ಮೊಸರಿನೊಂದಿಗೆ ಸೇರಿಸಿ ಹಿತವಾದ ಫೇಸ್ ಮಾಸ್ಕ್ ತಯಾರಿಸಿ. ನಯವಾದ ಪೇಸ್ಟ್ ಅನ್ನು ಚೆನ್ನಾಗಿ ಮಿಶ್ರಣ ಮಾಡಿ ಚರ್ಮಕ್ಕೆ ಹಚ್ಚಿ. 15 ನಿಮಿಷಗಳ ನಂತರ ತಂಪಾದ ನೀರಿನಿಂದ ತೊಳೆಯಿರಿ ಮತ್ತು ತಾಜಾ ಚರ್ಮವನ್ನು ಪಡೆಯುವಿರಿ.

**ಗುಲಾಬಿ ದಳಗಳು, ಗಂಧದ ಪುಡಿ ಮತ್ತು ಹಸಿ ಹಾಲು:** ಎರಡು ತಾಜಾ ಗುಲಾಬಿ ದಳಗಳನ್ನು ಪುಡಿ ಮಾಡಿ ಇದನ್ನು 1-2 ಟೇಬಲ್ ಸ್ಪೂನ್ ಗಂಧದ ಪುಡಿ ಮತ್ತು ಹಸಿ ಹಾಲಿನೊಂದಿಗೆ ಮಿಶ್ರಣ ಮಾಡಿ ಪೇಸ್ಟ್ ತಯಾರಿಸಿಕೊಳ್ಳಿ. ನಂತರ ಈ ಪೇಸ್ಟ್ ಅನ್ನು ಮುಖ ಮತ್ತು ಕುತ್ತಿಗೆ ಭಾಗಗಳಿಗೆ ಹಚ್ಚಿ ಸ್ವಲ್ಪ ಸಮಯ ಹಾಗೆ ಒಣಗಲು ಬಿಡಿ ನಂತರ ನೀರಿನಿಂದ ತೊಳೆಯಿರಿ. ಈ ಹಿತವಾದ ಮಿಶ್ರಣವು ಚರ್ಮವನ್ನು ಶಾಂತಗೊಳಿಸುತ್ತದೆ ಮತ್ತು ಹೊಳೆಯುವಂತೆ ಮಾಡಲು ಸಹಾಯ ಮಾಡುತ್ತದೆ. ಗುಲಾಬಿ ದಳಗಳು, ಅರಶಿನ ಮತ್ತು ಹಾಲು ಇದನ್ನು ತಯಾರಿಸಲು 2 ಚಮಚ ಗುಲಾಬಿ ದಳದ ಪೇಸ್ಟ್, ಚಮಚ ಅರಿಶಿನ ಮತ್ತು 1 ಚಮಚ ಹಾಲು ಬೆರೆಸಿ ಫೇಸ್ ಮಾಸ್ಕ್ ತಯಾರಿಸಿ. ನಂತರ ಮುಖಕ್ಕೆ ಎಲ್ಲಾ ಕಡೆಗೂ ಸಮನಾಗಿ ಹರಡುವಂತೆ ಅನ್ವಯಿಸಿ . 10-15 ನಿಮಿಷಗಳ ಕಾಲ ಬಿಟ್ಟು ನಂತರ ಉಗುರು ಬೆಚ್ಚಗಿನ ನೀರಿನಿಂದ ತೊಳೆಯಿರಿ. ಈ ಹಿತವಾದ ಮಿಶ್ರಣವು ಚರ್ಮದ ಟೋನ್ ಅನ್ನು ಶಾಂತಗೊಳಿಸಲು ಸಹಾಯ ಮಾಡುವುದಲ್ಲದೆ, ಚರ್ಮಕ್ಕೆ ಹೊಳಪು ನೀಡಲು ಮತ್ತು ಸಮಗೊಳಿಸಲು ಸಹಾಯ ಮಾಡುತ್ತದೆ.

# ಹಿಪ್ಪುನೇರಳೆ ತಿನ್ನೋದ್ರಿಂದ ಮೂರು ಸಮಸ್ಯೆಗಳನ್ನು ನಿವಾರಿಸಬಹುದು ಅಂತಾರೆ ಬಾಬಾ ರಾಮ್‌ದೇವ್


ಹಿಪ್ಪುನೇರಳೆಯು ಒಂದು ಆರೋಗ್ಯಕರ ಹಣ್ಣಾಗಿದ್ದು, ಬೇಸಿಗೆಯಲ್ಲಿ ಇದನ್ನು ತಿನ್ನೋದ್ರಿಂದ ಹಲವಾರು ಪ್ರಯೋಜನಗಳನ್ನು ಪಡೆಯಬಹುದು ಎನ್ನುವುದನ್ನು ಬಾಬಾ ರಾಮ್‌ದೇವ್ ವಿಡಿಯೋ ಮೂಲಕ ವಿವರಿಸಿದ್ದಾರೆ.

ಹಿಪ್ಪುನೇರಳೆ ಹಣ್ಣನ್ನು ಯಾವತ್ತಾದರೂ ತಿಂದಿದ್ದೀರಾ? ಇದು ನೋಡಲೂ ಸುಂದರವಾಗಿದೆ ಜೊತೆಗೆ ಬೇಸಿಗೆಯಲ್ಲಿ ಇದನ್ನು ತಿನ್ನುವುದು ಆರೋಗ್ಯಕ್ಕೆ ಪ್ರಯೋಜನಕಾರಿ ಎನ್ನಲಾಗುತ್ತಿದೆ. ಇದನ್ನು ತಿನ್ನೋದ್ರಿಂದ ಮೂರು ಸಮಸ್ಯೆಗಳನ್ನು ಗುಣಪಡಿಸಬಹುದು ಎನ್ನುತ್ತಾರೆ

ಬಾಬಾ ರಾಮ್‌ದೇವ್. ನೀವು ಯಾವುದಾದರೊಂದು ಮರವನ್ನು ನೆಡಬೇಕೆಂದಿದ್ದರೆ ಹಿಪ್ಪು ನೇರಳೆಯ ಮರವನ್ನು ನೆಡುವುದು ಉತ್ತಮ, ಇದಕ್ಕೆ ಹೆಚ್ಚಿನ ಕಾಳಜಿಯ ಅಗತ್ಯವಿಲ್ಲ ಎನ್ನುತ್ತಾರೆ ಬಾಬಾ ರಾಮ್‌ದೇವ್. ಇವರು ಮರದ ಮೇಲೆ ಹತ್ತಿ ಹಿಪ್ಪುನೇರಳೆಯನ್ನು ಕೀಳುವ ವಿಡಿಯೋವೊಂದನ್ನು ಇನ್ಸ್ಟಾಗ್ರಾಮ್‌ನಲ್ಲಿ ಹಾಕಿದ್ದಾರೆ.



**ಬೇಸಿಗೆಯಲ್ಲಿ ಹಿಪ್ಪು ನೇರಳೆ ತಿನ್ನೋದು ಒಳ್ಳೆಯದು ಯಾಕೆ:** ಬೇಸಿಗೆಯಲ್ಲಿ ಇದನ್ನು ತಿನ್ನೋದ್ರಿಂದ ರಕ್ತ ಹೀನತೆ, ಮಲಬದ್ಧತೆ ಮತ್ತು ದೇಹದ ಉಷ್ಣತೆಗೆ ಪರಿಹಾರಗಳನ್ನು ಪಡೆಯಬಹುದು ಎಂದು ಅವರು ಹೇಳುತ್ತಾರೆ. ಈ ಎಲ್ಲಾ ಸಮಸ್ಯೆಗಳನ್ನು 100 ಗ್ರಾಂ ಹಿಪ್ಪು ನೇರಳೆ ತಿನ್ನುವುದರಿಂದ ಪರಿಹರಿಸಬಹುದು. ಬಾಬಾ



ರಾಮದೇವ್ ಈ ಕೆಂಪು-ಕಪ್ಪು ಬಣ್ಣದ ಹಣ್ಣಿನ ಗುಣಲಕ್ಷಣಗಳ ಬಗ್ಗೆ ಇಲ್ಲಿ ಹೇಳಿದ್ದಾರೆ.

**ದೇಹದೊಳಗಿನ ಶಾಖವನ್ನು ಕಡಿಮೆಮಾಡುತ್ತದೆ**

ಬೇಸಿಗೆ ಆರಂಭವಾಗಿದ್ದು ಈ ವರ್ಷ ಮೊದಲಿಗಿಂತ ಹೆಚ್ಚು ಬಿಸಿಲಿರುತ್ತದೆ ಎಂದು ನಿರೀಕ್ಷಿಸಲಾಗಿದೆ. ಅಂತಹ ಪರಿಸ್ಥಿತಿಯಲ್ಲಿ, ಹಿಪ್ಪುನೇರಳೆ ಹಣ್ಣು ತಿನ್ನುವ ಮೂಲಕ ಅದರ ಅಪಾಯಗಳನ್ನು ತಪ್ಪಿಸಬಹುದು. ಇದು ದೇಹದೊಳಗಿನ ಶಾಖವನ್ನು ಹೈಡ್ರೇಟ್ ಮಾಡಲು ಮತ್ತು ತಂಪಾಗಿಸಲು ಸಹಾಯ ಮಾಡುತ್ತದೆ.

**ನಿಮ್ಮ ಹೊಟ್ಟೆ ಬೇಗ ಶುದ್ಧವಾಗುತ್ತದೆ**

ಸ್ವಾಮಿ ರಾಮದೇವ್ ಅವರು ಮಲ್ಬರಿ ತಿನ್ನುವುದರಿಂದ ಮಲಬದ್ಧತೆ ನಿವಾರಣೆಯಾಗುತ್ತದೆ ಎಂದು ಹೇಳುತ್ತಾರೆ. ಮಲಬದ್ಧತೆ ಸಮಸ್ಯೆ ಕ್ರಮೇಣ ಹೆಚ್ಚಾದಂತೆ ನಾನಾ ರೀತಿಯ ಸಮಸ್ಯೆಗಳು ಕಾಣಿಸಿಕೊಳ್ಳಲಾರಂಭಿಸುತ್ತದೆ. ಆದರೆ ಇದರಿಂದಾಗಿ ನೀವು ಮೂಲವ್ಯಾಧಿ, ಫಿಸ್ತೂಲದಂತಹ ಅಪಾಯಕಾರಿ ಸಮಸ್ಯೆಗಳ ಅಪಾಯವನ್ನು ಹೆಚ್ಚಿಸಬಹುದು.

**ರಕ್ತಹೀನತೆಗೆ ಮನೆಮದ್ದುಗಳು:** ಚರ್ಮ, ಕಣ್ಣು ಮತ್ತು ಉಗುರುಗಳು ಹಳದಿ ಬಣ್ಣಕ್ಕೆ ತಿರುಗುತ್ತಿದ್ದರೆ ದೇಹವು ರಕ್ತವನ್ನು ಸರಿಯಾಗಿ ಉತ್ಪಾದಿಸಲು ಸಾಧ್ಯವಾಗುವುದಿಲ್ಲ ಎಂದರ್ಥ. ಇದನ್ನು ರಕ್ತಹೀನತೆ ಎಂದು ಕರೆಯಲಾಗುತ್ತದೆ. ಇದು ಆಯಾಸ ಮತ್ತು ದೌರ್ಬಲ್ಯವನ್ನು ಉಂಟುಮಾಡುತ್ತದೆ. ರಕ್ತಹೀನತೆಯನ್ನು ಹೋಗಲಾಡಿಸಲು, ಹಿಪ್ಪುನೇರಳೆ ಹಣ್ಣನ್ನು ತಿನ್ನುವುದು ಉತ್ತಮ ಎನ್ನುತ್ತಾರೆ ಬಾಬಾ ರಾಮ್‌ದೇವ್. **ಹಿಪ್ಪುನೇರಳೆ ತಿನ್ನುವುದು ಹೇಗೆ?:** ಹಿಪ್ಪುನೇರಳೆಯನ್ನು ಹಲವು ವಿಧಗಳಲ್ಲಿ ತಿನ್ನಬಹುದು. ಮೊದಲ ಮತ್ತು ಸುಲಭವಾದ ಮಾರ್ಗವೆಂದರೆ ಅದನ್ನು ಹಸಿಯಾಗಿ ತಿನ್ನುವುದು. ಅನೇಕ ಜನರು ಇದನ್ನು ಒಣಗಿಸಿ ಒಣದ್ರಾಕ್ಷಿಗಳಂತೆ ತಿನ್ನುತ್ತಾರೆ. ನೀವು ಅದರಿಂದ ಜಾಮ್, ಜೆಲ್ಲಿ ಮತ್ತು ಚಟ್ನಿಯನ್ನು ಸಹ ಮಾಡಿ ತಿನ್ನಬಹುದು.

**ಇದನ್ನು ತಿನ್ನುವಾಗ ತೆಗೆದುಕೊಳ್ಳಬೇಕಾದ ಎಚ್ಚರಿಕೆಗಳು**


**ಮಲ್ಬರಿ ತಿನ್ನುವಾಗ ಒಂದು ಮುನ್ನೆಚ್ಚರಿಕೆ ತೆಗೆದು ಕೊಳ್ಳಬೇಕು. ಜೀರ್ಣಕ್ರಿಯೆ ದುರ್ಬಲವಾಗಿರುವವರು ಈ ಹಣ್ಣನ್ನು ಹೆಚ್ಚು ತಿನ್ನುವುದನ್ನು ತಪ್ಪಿಸಬೇಕು ಎಂದು ಬಾಬಾ ರಾಮದೇವ್ ಹೇಳಿದರು. ಏಕೆಂದರೆ ಇದನ್ನು ಅತಿಯಾಗಿ ತಿನ್ನುವುದರಿಂದ ಅತಿಸಾರ ಉಂಟಾಗಬಹುದು ಮತ್ತು ನಿಮ್ಮ ಆರೋಗ್ಯ ಹದಗೆಡಬಹುದು.**

## ಅಂಬಿಗರ ಚೌಡಯ್ಯ ಭವನದ ನಿರ್ಮಾಣ ಕಾಮಗಾರಿಗೆ ಅಡಿಗಲ್ಲು
# ಶಿಕ್ಷಣದಿಂದ ಸಮಾಜದ ಅಭಿವೃದ್ಧಿ ಸಾಧ್ಯ: ಎಂ ವೈ ಪಾಟೀಲ

• **ಉದಯವಾಹಿನಿ ಕರಜಗಿ**

ಸಮಾಜದ ಸರ್ವಾಂಗೀಣ ಅಭಿವೃದ್ಧಿಗೆ ಶಿಕ್ಷಣದ ಪಾತ್ರ ಮಹತ್ವದಾಗಿದೆ. ಪ್ರತಿಯೊಬ್ಬರೂ ಶಿಕ್ಷಣ ಪಡೆಯಬೇಕು. ಒಂದು ಸಮಾಜ ಬದಲಾವಣೆ ಹೊಂದಬೇಕಾದರೆ ಸಮಾಜದಲ್ಲಿನ ಎಲ್ಲರೂ ಮೊದಲು ಶಿಕ್ಷಣ ಪಡೆಯಬೇಕು. ಶಿಕ್ಷಣದಿಂದ ಸಮಾಜದಲ್ಲಿ ಪರಿವರ್ತನೆ ಕಾಣಬಹುದು.ಎಂದು ಶಾಸಕ ಎಂ ವೈ ಪಾಟೀಲ ಹೇಳಿದರು.

ಅವರು ಅಫಜಲಪುರ ತಾಲ್ಲೂಕಿನ ಮಣ್ಣೂರ ಗ್ರಾಮದಲ್ಲಿ ಕೆ ಎನ್ ಎನ್ ಎಲ್ ಯೋಜನೆ ಅಡಿಯಲ್ಲಿ 50 ಲಕ್ಷ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲಾಗುವ ಅಂಬಿಗರ ಚೌಡಯ್ಯ ಭವನದ ನಿರ್ಮಾಣ ಕಾಮಗಾರಿಗೆ ಅಡಿಗಲ್ಲು ನೆರವೇರಿಸಿ ಮಾತನಾಡಿ ಕೋಲಿ ಸಮಾಜದ



☛ ಉದಯವಾಹಿನಿ ಚಿತ್ರ

ಬಾಂಧವರು ಆರ್ಥಿಕವಾಗಿ, ಸಾಮಾಜಿಕವಾಗಿ ಮುಂದೆ ಬರಬೇಕಾದರೆ ಪ್ರತಿಯೊಬ್ಬರು ಶಿಕ್ಷಣ ಪಡೆಯುವುದು ಅಗತ್ಯವಾಗಿದೆ.

ಮತಕ್ಷೇತ್ರದ ಸರ್ವಾಂಗೀಣ ಅಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡುವ ನಿಟ್ಟಿನಲ್ಲಿ ಸಮುದಾಯ ಭವನ, ಕುಡಿಯುವ ನೀರು ರಸ್ತೆ, ಚರಂಡಿ, ಸಿ.ಸಿ.ರಸ್ತೆ ಸೇರಿದಂತೆ ಇನ್ನಿತರ ಮೂಲಸೌಕರ್ಯ ಒದಗಿಸ

**ಸಮುದಾಯ ಭವನ ನಿರ್ಮಾಣ**

**ಪ್ರತಿಯೊಬ್ಬರೂ ಅಂಬಿಗರ ಚೌಡಯ್ಯ ಅವರ ತತ್ತ್ವಾದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಮುನ್ನಡೆದರೆ ಬದುಕು ಸಾರ್ಥಕವಾಗುತ್ತದೆ. ಸಮುದಾಯದ ಕಲ್ಯಾಣ ಕಾರ್ಯಕ್ರಮಗಳನ್ನು ಆಯೋಜಿಸಲು ಅನುಕೂಲವಾಗುವಂತೆ ಸಮುದಾಯ ಭವನ ನಿರ್ಮಾಣ ಮಾಡಲಾಗುತ್ತಿದೆ.**

ಲಾಗುವುದು. ಮುಂಬರುವ ದಿನಗಳಲ್ಲಿ ಮಣ್ಣೂರ ಗ್ರಾಮದ ಸರ್ವಾಂಗೀಣ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಲಾಗುವುದು ಎಂದು ಹೇಳಿದರು.

## ಆರೋಗ್ಯಯುತ ಜೀವನಕ್ಕೆ ನಿಯಮಿತ ವಾಕಿಂಗ್ ಅಗತ್ಯ

• **ಉದಯವಾಹಿನಿ ಕಲಬುರಗಿ**

ನಡಿಗೆ ಅಥವಾ ವಾಕಿಂಗ್ ಮಾಡುವುದರಿಂದ ದೇಹದ ಎಲ್ಲಾ ಭಾಗಗಳಿಗೆ ರಕ್ತ ಪರಿಚಲನೆಯಾಗಿ ಎಲ್ಲಾ ಅಂಗಗಳು ಸಕ್ರಿಯವಾಗಿ ಕಾರ್ಯನಿರ್ವಹಿಸುತ್ತವೆ. ಇದರಿಂದ ಯಾವುದೇ ಕಾಯಿಲೆ ಬರುವುದಿಲ್ಲ, ಈಗಾಗಲೇ ಯಾವುದಾದರೂ ಕಾಯಿಲೆ ಪೀಡಿತರಿಗೆ ಅದು ವಾಸಿಯಾಗಲು ಅಥವಾ ನಿಯತ್ರಣದಲ್ಲಿರಲು ನಿಯಮಿತವಾಗಿ ವಾಕಿಂಗ್ ಮಾಡುವುದು ಅಗತ್ಯವಾಗಿದೆ ಎಂದು ಆರೋಗ್ಯ ಸಂರಕ್ಷಣಾ ಜಾಗೃತಿದಾರ, ಸಮಾಜ ಸೇವಕ ಚಂದ್ರಕಾಂತ ಬಿರಾದಾರ ಅಭಿಮತಪಟ್ಟರು.

ನಗರದ ಆಳಂದ ರಿಂಗ್ ರಸ್ತೆಯ ಸಮೀಪವಿರುವ ಶುಕ್ಲಾ ಲೇಔಟ್‌ನಲ್ಲಿ 'ಬಸವೇಶ್ವರ ಸಮಾಜ ಸೇವಾ ಬಳಗ' ಮತ್ತು 'ಆಳಂದ ರಸ್ತೆ ವಾಕಿಂಗ್ ಗೆಳೆಯರ ಬಳಗದ ವತಿಯಿಂದ ಬುಧವಾರ ಬೆಳಿಗ್ಗೆ ಜರುಗಿದ ರಾಷ್ಟ್ರೀಯ ವಾಕಿಂಗ್ ದಿನಾಚರಣೆಯಲ್ಲಿ ಅವರು



☛ ಉದಯವಾಹಿನಿ ಚಿತ್ರ

ಮಾತನಾಡುತ್ತಿದ್ದರು.

ಮಾಜಿ ಯೋಧ ರೇಣುಕಾಚಾರ್ಯ ಸ್ಥಾವರ ಮಠ, ಸಮಾಜ ಸೇವಕ ಡಾ.ಸತೀಶ್ ಟಿ.ಸಣಮನಿ ಮಾತನಾಡುತ್ತಾ, ದೈಹಿಕ ಮತ್ತು ಮಾನಸಿಕವಾಗಿ ಆರೋಗ್ಯವಾಗಿರಲು ದಿನನಿತ್ಯ ವಾಕಿಂಗ್ ಮಾಡುವ ಹವ್ಯಾಸ ಬೆಳೆಸಿಕೊಳ್ಳಬೇಕು. ಆರೋಗ್ಯಕ್ಕಿಂತ ದೊಡ್ಡ ಸಂಪತ್ತು ಬೇರೊಂದಿಲ್ಲ. ಅಂತಹ ಸಂಪತ್ತು ಕಳೆದ ಕೊಂಡು, ಬೇರೆಲ್ಲ ಸಂಪತ್ತು ಗಳಿಸಿದರೆ ಯಾವುದೇ ಪ್ರಯೋಜನೆಯಿಲ್ಲ. ಅದಕ್ಕಾಗಿ ಪ್ರತಿಯೊಬ್ಬರು ತಮ್ಮ ಆರೋಗ್ಯದತ್ತ ಕಾಳಜಿ ವಹಿಸಬೇಕಾಗಿದೆ ಎಂದರು.

## ಮಿನಿ ನ್ಯೂಸ್

### ಮಾದಕ ವಸ್ತು ಪತ್ತೆ-ಇಬ್ಬರ ಬಂಧನ

• **ಉದಯವಾಹಿನಿ, ಪುತ್ತೂರು**

ಕಾರೊಂದರಲ್ಲಿ 'ಎಂಡಿಎಂಎ' ನಿಷೇಧಿತ ವಸ್ತು ಸಾಗಾಟ ಮಾಡುತ್ತಿದ್ದ ಪ್ರಕರಣವೊಂದನ್ನು ಪತ್ತೆ ಮಾಡಿರುವ ಪುತ್ತೂರು ನಗರ ಠಾಣೆಯ ಪೊಲೀಸರು ಪ್ರಕರಣಕ್ಕೆ ಸಂಬಂಧಿಸಿ ಇಬ್ಬರು ಆರೋಪಿಗಳನ್ನು ಬಂಧಿಸಿ ಪ್ರಕರಣ ದಾಖಲಿಸಿಕೊಂಡಿದ್ದಾರೆ. ಸಂಟ್ಯಾರು ನಿವಾಸಿ ಇಸುಬು ಫೈಝುಲ್ (30) ಮತ್ತು ದಾರಂದಕುಕ್ಕು ನಿವಾಸಿ ತಸ್ಲೀಫ್ (26) ಬಂಧಿತ ಆರೋಪಿಗಳು.

ಪುತ್ತೂರು ನಗರ ಪೊಲೀಸ್ ಠಾಣೆಯ ಇನ್‌ಸ್ಪೆಕ್ಟರ್ ಜಾನ್ಸನ್ ಡಿ.ಸೋಜಾ ಅವರು ಸಿಬ್ಬಂದಿಯೊಂದಿಗೆ ಬೆಳಿಗ್ಗೆ ನರಿಮೊಗರು ಗ್ರಾಮದ ಮುಕ್ವೆ ಎಂಬಲ್ಲಿ ಸುಬ್ರಹ್ಮಣ್ಯ-ಮಂಜೇಶ್ವರ ರಾಜ್ಯ ಹೆದ್ದಾರಿಯಲ್ಲಿನ ತಾತ್ಕಾಲಿಕ ಚೆಕ್ ಪಾಯಿಂಟ್‌ನಲ್ಲಿ ವಾಹನ ತಪಾಸಣೆ ನಡೆಸುತ್ತಿದ್ದ ವೇಳೆ ಸುಬ್ರಹ್ಮಣ್ಯ ಕಡೆಯಿಂದ ಬಂದ ಮಾರುತಿ ಸುಝುಕಿ ಆಲ್ಟೋ 800 ಕಾರನ್ನು ಪರಿಶೀಲಿಸಿದಾಗ ಕಾರಿನ ಡ್ಯಾಶ್ ಬೋರ್ಡ್‌ನಲ್ಲಿ ಮಾದಕ ವಸ್ತುಗಳನ್ನು ಸೇದುವ ಸಾಧನಗಳು, ತೂಕ ಮಾಪಕಗಳು ಕಂಡುಬಂದಿತ್ತು. ಈ ಹಿನ್ನಲೆಯಲ್ಲಿ ಪೊಲೀಸರು ಕಾರು ಚಾಲಕ ಹಾಗೂ ಕಾರಿನಲ್ಲಿದ್ದ ಮತ್ತೊಬ್ಬನನ್ನು ವಿಚಾರಿಸಿದಾಗ, ತಮ್ಮ ಬಳಿ ಎಂಡಿಎಂಎ ವಸ್ತು ಇರುವುದಾಗಿಯೂ, ಇದನ್ನು ಮಾರಾಟ ಮಾಡಲು ತೆರಳುತ್ತಿರುವುದಾಗಿ ಒಪ್ಪಿಕೊಂಡಿದ್ದರು. ಪೊಲೀಸರು ಪರಿಶೀಲಿಸಿದ ವೇಳೆ 25 ಗ್ರಾಂ ಎಂಡಿಎಂಎ ಪತ್ತೆಯಾಗಿದ್ದು, ಅದರ ಮೌಲ್ಯ ರೂ. 52ಸಾವಿರ ಎಂದು ಪೊಲೀಸರು ತಿಳಿಸಿದ್ದಾರೆ.

### ಯುವ ನಾಯಕತ್ವ ಶಿಬಿರ

• **ಉದಯವಾಹಿನಿ, ಬಳ್ಳಾರಿ**

ಈ ತಿಂಗಳ 5 ಮತ್ತು 6 ರಂದು ತುಮಕೂರು ಜಿಲ್ಲೆಯ ದೇವರಾಯನ ದುರ್ಗದಲ್ಲಿ ಕೆ.ಆರ್.ಎಸ್ ಪಕ್ಷದಿಂದ ಯುವ ನಾಯಕತ್ವ ಶಿಬಿರ ಹಮ್ಮಿಕೊಂಡಿದೆ. ಎಂದು ಪಕ್ಷದ ಪಕ್ಷದ ಜಿಲ್ಲಾ ಅಧ್ಯಕ್ಷ ವಿ.ಯುಗಂಧರ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪ್ರಕಾಶ್ ರೆಡ್ಡಿ ಕೊರ್ಲಗುಂದಿ ಹೇಳಿದ್ದಾರೆ. ಅವರು ಇಂದು ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ, ಈ ಶಿಬಿರವನ್ನು ಸಾರ್ವಜನಿಕರ

ದೇಣಿಗೆಯಿಂದಲೇ ಆಯೋಜನೆ ಮಾಡುತ್ತಿದೆ. ಶಿಬಿರಾರ್ಥಿಗಳಿಗೆ ಊಟ ವಸತಿ ಇರುತ್ತದೆ, ಮೂರು ನೂರು ರೂ ಪ್ರವೇಶ ಶುಲ್ಕ ನಿಗಧಿ ಮಾಡಿದೆ. ಇದರಲ್ಲಿ ಯಾರಾದರೂ ಪಾಲ್ಗೊಳ್ಳಬಹುದು. ಹೆಸರನ್ನು ನೋಂದಾಯಿಸಲು 7619353525, 8749065597 ಈ ನಂಬರ್‌ಗೆ ಸಂಪರ್ಕಿಸಬೇಕು.

ಶಿಬಿರದಲ್ಲಿ ಸ್ವ ಅರಿವು, ಸ್ವ ವಿಮರ್ಶೆ ಜೊತೆಗೆ ನಾನೇಕೆ ರಾಜಕೀಯ ಮುಂದಾಳತ್ವ ವಹಿಸಬೇಕು. ತನ್ನ ಸುತ್ತಮುತ್ತಲಿನ ಸಮಕಾಲೀನ ಸಮಸ್ಯೆಗಳನ್ನು ಮುಖಾಮುಖಿಯಾಗಿ ಎದುರಿಸುವುದು ಹೇಗೆ. ಪ್ರಸ್ತುತ ರಾಜಕೀಯ ಸಮಕಾಲೀನ ಚಿಂತನೆಗಳು, ಪ್ರಜ್ಞಾಪೂರ್ವಕವಾಗಿ ಪ್ರಾಮಾಣಿಕ ರಾಜಕೀಯ ಮಾಡುವುದು ಅಲ್ಲದೆ ನಾಯಕತ್ವ ಅರ್ಥ, ವಿಧಗಳು ಇತ್ಯಾದಿ ವಿಷಯಗಳನ್ನೊಳಗೊಂಡಿದ್ದು, ಭಾಷಣ ಹಾಗೂ ಸಾಮಾಜಿಕ ಜಾಲತಾಣಗಳ ಕೌಶಲ್ಯ ತರಬೇತಿಗಳನ್ನು ಒಳಗೊಂಡಿದೆ. ಹಿಂದಿನ ರಾಜಕೀಯ ಕ್ಷೇತ್ರದಿಂದ, ಈಗೀನ ರಾಜಕೀಯದವರೆಗೂ ಬೆರಳೆಣಿಕೆಯಷ್ಟೇ ಯುವ ರಾಜಕಾರಣಿಗಳು ಕಾಣಿಸುತ್ತಿರುವುದು. ಅವರ ಸಾಮರ್ಥ್ಯಕ್ಕೆ ಅನುಗುಣವಾಗಿ ಯಾವುದೇ ರೀತಿಯ ಅವಕಾಶಗಳಿಲ್ಲ.

## ಏಪ್ರಿಲ್ 09 ಸಚಿವ ಶಿವರಾಜ್ ತಂಗಡಗಿ ಗೃಹ ಕಚೇರಿಗೆ ಮುತ್ತಿಗೆ: ಶರಣಪ್ಪ ಕೊತ್ವಾಲ್
# ಏ.20ರವರೆಗೆ ನೀರು ಬಿಡಲು ಒತ್ತಾಯಿಸಿ, ಏ.08 ಗಂಗಾವತಿ ಕಾರಟಗಿ ಬಂದ್ ಕರೆ

• **ಉದಯವಾಹಿನಿ ಕಾರಟಗಿ, ಗಂಗಾವತಿ**

ಏಪ್ರಿಲ್ 20ರವರೆಗೆ ತುಂಗಭದ್ರಾ ಎಡದಂಡೆ ನಾಲೆಗೆ ಕಾಲುವೆ ಭಾಗದ ರೈತರ ಬೆಳೆಗಳ ಸಂರಕ್ಷಣೆಗಾಗಿ ಅಖಿಲ ಕರ್ನಾಟಕ ರಾಜ್ಯ ಅನ್ನದಾತ ರೈತ ಸಂಘ ನೇತೃತ್ವದಲ್ಲಿ ವಿವಿಧ ಸಂಘಟನೆಗಳ ಪದಾಧಿಕಾರಿಗಳೊಂದಿಗೆ ಗಂಗಾವತಿ ಎಪಿಎಂಸಿಯಲ್ಲಿ ಪೂರ್ವಭಾವಿ ಸಭೆ ನಡೆಸಲಾಯಿತು.

123ನೇ ನೀರಾವರಿ ಸಲಹಾ ಸಮಿತಿಯಲ್ಲಿ ಸರ್ಕಾರವು ಏಪ್ರಿಲ್ 10 ರವರೆಗೆ ಎಡದಂಡೆ ಕಾಲುವೆಗಳಿಗೆ ನೀರು ಹರಿಸಲು ನಿರ್ಧರಿಸಿ ಆದೇಶವನ್ನು ಹೊರಡಿಸಲಾಗಿತ್ತು, ಆದರೆ ಸರ್ಕಾರ ಇದೀಗ ಏಪ್ರಿಲ್ 05ರವರೆಗೆ ಮಾತ್ರ ನೀರು ಹರಿಸುವುದಾಗಿ ಮತ್ತೊಂದು ಆದೇಶ ನೀಡಿದ್ದು, ಅನ್ನದಾತರು ಕಂಗಾಲಾಗುವಂತೆ ಮಾಡಿದೆ.

ಕಲಬುರ್ಗಿಯ ವಿಭಾಗದ ಪ್ರಾದೇಶಿಕ ಆಯುಕ್ತರು ಅಧಿಕೃತವಾಗಿ ತುಂಗಭದ್ರಾ ಎಡ ದಂಡೆಯ ಮುಖ್ಯಕಾಲುವೆಗೆ ಕುಡಿಯುವ ನೀರು ಒಳಗೊಂಡಂತೆ ನಿಂತ ಬೆಳೆಗಳ ಸಂರಕ್ಷಣೆ ಸಲುವಾಗಿ 3800 ಕ್ಯೂಸೆಕ್ ನೀರನ್ನು ಏಪ್ರಿಲ್ 01 ರಿಂದ ಏಪ್ರಿಲ್ 05ರವರೆಗೆ ಹರಿಸಲಾಗುವುದು ಎಂದು ಆದೇಶ

**ಏಪ್ರಿಲ್ 8 2025 ರಂದು ಗಂಗಾವತಿ ಮತ್ತು ಕಾರಟಗಿ ಎರಡು ತಾಲ್ಲೂಕುಗಳನ್ನು ಸಂಪೂರ್ಣವಾಗಿ ಬಂದು ಮಾಡಲಾಗುತ್ತದೆ ಈ ಬಂದ್ ಕರೆಯಲ್ಲಿ ವಿವಿಧ ರೈತ ಪರ ಸಂಘಟನೆಗಳು ಸೇರಿದಂತೆ ಹಲವು ಸಂಘಟನೆಗಳು ಭಾಗವಹಿಸಲಿದ್ದು ಒಕ್ಕುರುಳ ಕೂಗಿನೊಂದಿಗೆ ರೈತರ ಬೆಳೆ ಸಂರಕ್ಷಣೆಗಾಗಿ ಆಗ್ರಹಿಸಿ ಸರ್ಕಾರದ ವಿರೋಧ ನೀತಿಯನ್ನು ಖಂಡಿಸಲಾಗುತ್ತದೆ, ಅಂಗಡಿ ಮುಂಗಟುಗಳು ಸ್ವಯಂ ಪ್ರೇರಿತವಾಗಿ ಬಂದ್ ಕರೆಯಲ್ಲಿ ಭಾಗವಹಿಸಲು ಕರೆ ನೀಡಲಾಗುತ್ತದೆ.**

ಮಾಡಿದ್ದಾರೆ. ಈ ಆದೇಶವು ಎಡ ದಂಡೆ ಭಾಗದ ರೈತರ ಪಾಲಿಗೆ ಮರಣಶಾಸನವಾಗಿ ಮಾರ್ಪದಲಿದ್ದು ರೈತರು ಬೆಳೆಗಳನ್ನು ಉಳಿಸಿಕೊಳ್ಳಲು ನೀರಿಗಾಗಿ ಹೋರಾಟ ಮಾಡುವುದು ಅನಿವಾರ್ಯವಾಗಿದೆ ಎಂದು ವಿವಿಧ ಸಂಘಟನೆಗಳ ಪದಾಧಿಕಾರಿಗಳು





☛ ಉದಯವಾಹಿನಿ ಚಿತ್ರ

ಅಭಿಪ್ರಾಯವನ್ನು ವ್ಯಕ್ತಪಡಿಸಿದರು,

**ಉಗ್ರರೂಪ ಹೋರಾಟಕ್ಕೆ ಎಡೆ ಮಾಡಿಕೊಟ್ಟ ಸರ್ಕಾರ ನಡೆ ;** ಮಾನ್ಯ ಕಲಬುರ್ಗಿ ವಿಭಾಗದ ಪ್ರಾದೇಶಿಕ ಆಯುಕ್ತರು ಹೊರಡಿಸಿರುವ ಆದೇಶದಲ್ಲಿ ಅಚ್ಚರಿಯ ಅಂಶಗಳು ಬೆಳಕಿಗೆ ಬಂದಿವೆ.

ಕರ್ನಾಟಕ ನೀರಾವರಿ ನಿಗಮ ನಿಯಮಿತ ನೀರಾವರಿ ಕೇಂದ್ರ, ವಲಯ ಮುನಿರಾಬಾದ್‌ನ ಮುಖ್ಯ ಇಂಜಿನಿಯರ್ ಅವರುಗಳು ಸಲ್ಲಿಸಿರುವ ವರದಿಯನಾಧರಿಸಿ ಕೊಪ್ಪಳ ಜಿಲ್ಲಾಧಿಕಾರಿಗಳು ಹಾಗೂ ರಾಯಚೂರು ಜಿಲ್ಲಾಧಿಕಾರಿಗಳು ದಿನಾಂಕ ಏಪ್ರಿಲ್

**ಜನಪ್ರತಿನಿಧಿಗಳೆ ನೇರ ಹೊಣೆ**

**ರಾಜ್ಯ ಸರ್ಕಾರ ರೈತರ ಪಾಲಿಗೆ ಇದ್ದು ಇಲ್ಲದಂತಾಗಿದೆ ಏಪ್ರಿಲ್ 10ರವರೆಗೆ ನೀರು ಕೊಡುತ್ತೇವೆ ಎಂದು ಭರವಸೆಯನ್ನು ನೀಡಿದ ರಾಜ್ಯ ಸರ್ಕಾರ ಮತ್ತು ಜನಪ್ರತಿನಿಧಿಗಳು ಕೊಟ್ಟ ಮಾತನ್ನು ತಪ್ಪಿದೆ ಏಪ್ರಿಲ್ 20ರವರೆಗೆ ನೀರನ್ನು ಕಡಾ ಖಂಡಿತವಾಗಿ ಬೆಳೆಗಳಿಗೆ ಹರಿಸಬೇಕು, ಎಡದಂಡೆ ಭಾಗದ ರೈತರ ಬೆಳೆಗಳು ಒಣಗಿದ್ದರೆ ಮತ್ತು ರೈತರ ಆರ್ಥಿಕ ಸಂಕಷ್ಟಕ್ಕೆ ಒಳಗಾದರೆ ಅದಕ್ಕೆ ರಾಜ್ಯ ಸರ್ಕಾರ ಮತ್ತು ಎಡದಂಡೆ ಭಾಗದ ಜನಪ್ರತಿನಿಧಿಗಳ ನೇರ ಹೊಣೆಯಾಗಲಿದ್ದಾರೆ**

ಒಂದರಿಂದ ಎಡದಂಡೆ ಕಾಲುವೆಗೆ ಕುಡಿಯುವ ನೀರು ಹಾಗೂ ನಿಂತ ಬೆಳೆಗಳ ಸಂರಕ್ಷಣೆಗಾಗಿ 3800 ಕ್ಯೂಸೆಕ್ಸ್‌ನಂತೆ ನೀರು ಹರಿಸುವುದಾಗಿ ಆದೇಶವನ್ನು ಹೊರಡಿಸಲಾಗಿದೆ.

ಈ ಆದೇಶದಲ್ಲಿ ನೀರಿಲ್ಲ ಲೆಕ್ಕಾಚಾರ ತಪ್ಪಾಗಿ ಸೂಚಿಸಿ ರೈತರ ಬೆಳೆಗಳಿಗೆ ಸಮರ್ಪಕ ನೀರು ನೀಡದೆ ಪರ್ಯಾಯವಾಗಿ ನೀರನ್ನು ಎಡದಂಡೆ ಭಾಗದ ರಾಜಕಾರಣಿಗಳು ಸ್ವಾರ್ಥಕ್ಕಾಗಿ ದುರುಪಯೋಗಪಡಿಸಿಕೊಳ್ಳುವುದು (ಫ್ಯಾಕ್ಟರಿಗಳಿಗೆ ಮಾರಾಟ) ಸ್ಪಷ್ಟವಾಗಿ ಮೇಲ್ನೋಟಕ್ಕೆ ಕಂಡು ಬಂದಿದೆ, ಸರ್ಕಾರದ ಈ ಲೆಕ್ಕಾಚಾರವನ್ನು ಅಖಿಲ ಕರ್ನಾಟಕ ರಾಜ್ಯ ರೈತ ಸಂಘ ಸಂಪೂರ್ಣವಾಗಿ ವಿರೋಧಿಸುತ್ತದೆ.

ಏಪ್ರಿಲ್ 9 2025 ರಂದು ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರಾದ ಶಿವರಾಜ್ ಎಸ್ ತಂಗಡಗಿ ಅವರ ಗೃಹ ಕಚೇರಿಗೆ ಸಾವಿರಾರು ಸಂಖ್ಯೆಯಲ್ಲಿ ರೈತರು ಮುತ್ತಿಗೆ ಹಾಕಿ ಪ್ರತಿಭಟಿಸಲಾಗುತ್ತದೆ ಎಂದು ಸಭೆಯಲ್ಲಿ ತಿಳಿಸಲಾಯಿತು, ಈ ಸಂದರ್ಭದಲ್ಲಿ ಅಖಿಲ ಕರ್ನಾಟಕ ರಾಜ್ಯ ಅನ್ನದಾತ ರೈತ ಸಂಘದ ರಾಜ್ಯಾಧ್ಯಕ್ಷರು ರಾಜ್ಯ ಉಪಾಧ್ಯಕ್ಷರು,ಅಖಿಲ ಭಾರತ ಕಿಸಾನ್ ಸಭಾ, ಕರ್ನಾಟಕ ಪ್ರಾಂತ ರೈತ ಸಂಘ, ಕನ್ನಡಪರ ಸಂಘಟನೆಗಳು, ಮತ್ತು ಎಐಟಿಯುಸಿ ಸೇರಿದಂತೆ ವಿವಿಧ ಸಂಘಟನೆಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

## ಪತ್ರಕರ್ತ ಜಗನ್ನಾಥ ಶೇರಿಕಾರ ಸೇರಿದಂತೆ ನಾಲ್ವರಿಗೆ ಚಂದನ ಸುಗಂಧ ಪ್ರಶಸ್ತಿ ಪ್ರದಾನ

• **ಉದಯವಾಹಿನಿ, ಚಿಂಚೋಳಿ**

ತಾಲ್ಲೂಕಿನ ಚಂದನಕೇರಾದ ಭೃಂಗಿ ಪಾಚೇಶ್ವರ ಮಠದ 10ನೇ ಜಾತ್ರಾ ಮಹೋತ್ಸವದಲ್ಲಿ ವಿವಿಧ ಕ್ಷೇತ್ರದಲ್ಲಿ ಸಾಧನೆಗೈದ ನಾಲ್ಕು ಜನ ಸಾಧಕರಿಗೆ ಚಂದನ ಸುಗಂಧ ಹಾಗೂ ಭೃಂಗಿ ಶ್ರೀ ಪ್ರಶಸ್ತಿಯನ್ನು ಮಠದ ಪೀಠಾಧಿಪತಿಗಳಾದ ಪರಮಪೂಜ್ಯ ಷ.ಬ್ರ.ಅಭಿನವ ರಾಚೋಟೇಶ್ವರ ಶಿವಾಚಾರ್ಯರ ನೇತೃತ್ವದಲ್ಲಿ ಪ್ರಧಾನ ಮಾಡಲಾಯಿತು.

ಪತ್ರಿಕಾ ರಂಗದಲ್ಲಿ ಉತ್ತಮ ಸೇವೆಗೈದ ಜಗನ್ನಾಥ ಡಿ.ಶೇರಿಕಾರ ಅವರಿಗೆ ಚಂದನ ಸುಗಂಧ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಸಾವಯುವ ಕೃಷಿ ಕ್ಷೇತ್ರದಲ್ಲಿ ಗುಂಡೇರಾಯ ಪಾಟೀಲ ಧೂಳಗೊಂಡ,ಇಎಸ್‌ಐಸಿ ಆಸ್ಪತ್ರೆಯ ವೈಧ್ಯಾಧಿಕಾರಿ ಡಾ.ದೀಪಕ್ ಸಿ.ಪಾಟೀಲ,ನಿವೃತ್ತ ಇಂಜಿನಿಯರ್ ರಾಜಶೇಖರ ಬಿರಾದಾರ ನಾಲ್ವರಿಗೂ



☛ ಉದಯವಾಹಿನಿ ಚಿತ್ರ

ಚಂದನ ಸುಂಗಧ ಹಾಗೂ ಭೃಂಗಿ ಶ್ರೀ ಪ್ರಶಸ್ತಿ ಪ್ರದಾನ ಮಾಡಿ ಸನ್ಮಾನಿಸಿ ಗೌರವಿಸಲಾಯಿತು.

ನಿಡಗುಂದಾದ ಕುಂಚಾಳಕುಂಟಿ ನಂದೀಶ್ವರ ಮಠದ ಪರಮಪೂಜ್ಯ ಷ.ಬ್ರ.ಕರುಣೇಶ್ವರ ಶಿವಾಚಾರ್ಯರು,ಅಖಿಲ ಭಾರತ ವೀರಶೈವ ಮಹಾಸಭಾ ತಾಲ್ಲೂಕಾಧ್ಯಕ್ಷ ಶರಣುಪಾಟೀಲ ಮೋತಕಪಳ್ಳಿ, ಉಮಾಪಾಟೀಲ, ಚಿಂತನ್ ಸುಭಾಷ್ ರಾಠೋಡ್,ಸುರೇಶ ದೇಶಪಾಂಡೆ,ಸೇರಿದಂತೆ ಅನೇಕರಿದ್ದರು.

## ಯತ್ನಾಳರ ಉಚ್ಚಾಟನೆಯಿಂದ ಯುವಕರು ಪಕ್ಷದಿಂದ ದೂರ: ಧರೇಪ್ಪ

• **ಉದಯವಾಹಿನಿ, ಅಥಣಿ**

ಬಸನಗೌಡ ಯತ್ನಾಳರನ್ನ ಪಕ್ಷದಿಂದ ಉಚ್ಚಾಟನೆ ಮಾಡಿರುವುದರಿಂದ ಯುವಕರು ಪಕ್ಷದಿಂದ ದೂರ ವಾಗುತ್ತಿದ್ದಾರೆ, ಪಕ್ಷದ ಹೈಕಮಾಂಡ್ ಶೀಘ್ರವಾಗಿ ಸಮಿತಿ ರಚಿಸಿ ಜನಾಭಿಪ್ರಾಯ ಸಂಗ್ರಹಿಸಬೇಕು. ಜನಾಭಿಪ್ರಾಯದ ವರದಿಯನ್ನು ಆದರಿಸಿ ಪಕ್ಷಕ್ಕೆ ಸೇರಿಸಿಕೊಳ್ಳಿ, ಇಲ್ಲವಾದರೆ ಪಕ್ಷಕ್ಕೆ ತುಂಬಲಾರದ ನಷ್ಟವಿದೆ ಎಂದು ಬಿಜೆಪಿ ಮುಖಂಡ ಧರೇಪ್ಪ ಠಕ್ಕಣ್ಣವರ ಹೇಳಿದರು.

ಪಟ್ಟಣದಲ್ಲಿ ಯತ್ನಾಳ ಉಚ್ಚಾಟನೆ ಖಂಡಿಸಿ ಮಂಗಳವಾರ ಹಿಂದೂ ಕಾರ್ಯಕರ್ತರು ಹಮ್ಮಿಕೊಂಡ ಪ್ರತಿಭಟನೆ ನೇತೃತ್ವ ವಹಿಸಿ ಮಾತನಾಡಿದ ಅವರು ಬಿಜೆಪಿಯನ್ನು ಯುವಕರು ಹಿಂದೂತ್ವಕ್ಕಾಗಿ ನೆಚ್ಚಿಕೊಂಡಿದ್ದಾರೆ. ಆದರೆ ಪಕ್ಷದವರು ಹಿಂದುತ್ವಕ್ಕಾಗಿ ಹೋರಾಟದ ಮಾಡುತ್ತಿರುವ ನಮ್ಮ ನಾಯಕರನ್ನ ಉಚ್ಚಾಟನೆ ಮಾಡುವದು ಎಷ್ಟು ಸರಿ , ಈಗಲೂ





☛ ಉದಯವಾಹಿನಿ ಚಿತ್ರ

ಕಾಲ ಮಿಂಚಿಲ್ಲಾ ವರಿಷ್ಠರು ಯತ್ನಾಳ ಅವರ ಬಗ್ಗೆ ತಿಳಿದುಕೊಳ್ಳಲು ಒಂದು ಸಮಿತಿ ರಚನೆ ಮಾಡಿ ವರದಿ ತರಸಿಕೊಳ್ಳಿ. ಖಂಡಿತವಾಗಿ ಅವರ ಪರವಾದ ವರದಿ ಬರುತ್ತದೆ ಆಗಲಾದರೂ ಅವರನ್ನು ಪಕ್ಷಕ್ಕೆ ಸೇರಿಸಿಕೊಳ್ಳಿ ಎಂದು ಹೇಳಿದರು. ವಿಜಯಪುರದ ಮುಖಂಡ ಡಾ.ಬಸವನಗೌಡ ಪಾಟೀಲ ಮಾತನಾಡಿ ವಾಜಪೇಯಿ ಅವರ ಅವದಿಯಲ್ಲಿ ಕೇಂದ್ರ ಸಚಿವರಾಗಿದ್ದ ಬಸವನಗೌಡ ಪಾಟೀಲ ಅವರ ಕರ್ನಾಟಕದಲ್ಲಿ ಹಿರಿಯ ನಾಯಕರು ಅವರು ಭ್ರಷ್ಟಾಚಾರ ರಹಿತ ಆಡಳಿತ ನೀಡಿದ ರಾಜಕಾರಣಿ. ಬಿಜೆಪಿ ಅದಿಕಾರಕ್ಕೆ

**ಹೊಂದಾಣಿಕೆ ಹಾಗೂ ಭ್ರಷ್ಟಾಚಾರ ರಹಿತ ಆಡಳಿತ ನೀಡಬೇಕು, ರಾಜ್ಯದಲ್ಲಿ ಹಿಂದುತ್ವಕ್ಕೆ ಹಿನ್ನಡೆಯಾದಾಗ ಹಿಂದುತ್ವಕ್ಕಾಗಿ ಎದ್ದು ನಿಂತವರು ಬಸವನಗೌಡ ಪಾಟೀಲ ಯತ್ನಾಳ್ ಅವರು ಕೋಟ್ಯಾಂತರ ಜನ ಹಿಂದೂ ಅಭಿಮಾನಿಗಳನ್ನ ಅವರು ಹೊಂದಿದ್ದಾರೆ, ಶೀಘ್ರವಾಗಿ ಅವರ ಉಚ್ಚಾಟನೆಯನ್ನ ಮರು ಪರಿಶೀಲಿಸಿ ಅವರನ್ನ ಪಕ್ಷಕ್ಕೆ ಸೇರ್ಪಡೆ ಮಾಡಿಕೊಳ್ಳಬೇಕೆಂದು ಆಗ್ರಹಿಸುತ್ತೇವೆ -ನಾಗರಾಳ ಹುಲಿ**

ಬರಲು ಕುಟುಂಬ ರಾಜಕಾರಣ ವಿರುದ್ಧ ಹೋರಾಟ ಮಾಡಿರುವುದು ಇದೆ, ಅದೆ ಒಂದು ಉದ್ದೇಶವನ್ನ ಯತ್ನಾಳ ಅವರು ಇಟ್ಟುಕೊಂಡು ಕರ್ನಾಟಕದಲ್ಲಿ ಕುಟುಂಬ ರಾಜಕಾರಣ ದೂರ ಮಾಡಬೇಕೆಂದು ಹೋರಾಟ ಮಾಡುತ್ತಾ ಬಂದಿದ್ದಾರೆ.

## ಉಚ್ಚಾಟನೆ ಖಂಡಿಸಿ ಪ್ರತಿಭಟನೆ

• **ಉದಯವಾಹಿನಿ, ನವಲಗುಂದ**

ಬಿಜೆಪಿ ಬಸನಗೌಡ ಪಾಟೀಲ ಯತ್ನಾಳ ಅವರ ಉಚ್ಚಾಟನೆಯನ್ನು ಖಂಡಿಸಿ ಅಖಿಲ ಭಾರತ ಲಿಂಗಾಯತ ಪಂಚಮಸಾಲಿ ಸಮಾಜದ ತಾಲ್ಲೂಕಾ ಘಟಕದ ಪದಾಧಿಕಾರಿಗಳು ಲಿಂಗರಾಜ್ ವೃತ್ತದಿಂದ ನೀಲಮ್ಮ ಜಲಾಶಯವರೆಗೂ ಕಾರ್ಯಕರ್ತರು ಹಾಗೂ ನೂರಾರು ಅಭಿಮಾನಿಗಳು ಪ್ರತಿಭಟನೆ ನಡೆಸಿದರು. ನಂತರ ಸದುಗೌಡ ಪಾಟೀಲ ಮಾತನಾಡಿ ಬಸನಗೌಡ ಪಾಟೀಲ್ ಯತ್ನಾಳ ಅವರು ನಮ್ಮ ಪಂಚಮಸಾಲಿ ಸಮಾಜದ ಹಿರಿಯ ಮುಖಂಡರು ಅಲ್ಲದೇ 2ಎ ಮೀಸಲಾತಿ ಹೋರಾಟದ ರಾಷ್ಟ್ರೀಯ ಗೌರವಾಧ್ಯಕ್ಷರು ಉತ್ತರ ಕರ್ನಾಟಕದ ಪ್ರಭಾವಿ ನಾಯಕರು ಇಂತವರನ್ನು ಅನಾವಶ್ಯಕವಾಗಿ ಉಚ್ಚಾಟನೆ ಮಾಡಿದ್ದು ಖಂಡನೀಯ. ಬಿಜೆಪಿ ಹೈಕಮಾಂಡ್ ತೆಗೆದುಕೊಂಡಿರುವ ನಿರ್ಧಾರ ತಪ್ಪು. ಹಿಂದೂಗಳ ರಕ್ಷಣೆ ಹಾಗೂ ಪಕ್ಷದ ಹಿತ ದೃಷ್ಟಿಯಿಂದ ಯತ್ನಾಳ ಅವರನ್ನು ಮತ್ತೆ ಪಕ್ಷಕ್ಕೆ ಗೌರವಯುತವಾಗಿ ಸ್ವಾಗತಿಸಬೇಕು. ಇಲ್ಲದಿದ್ದರೆ ಮುಂದಿನ ದಿನಗಳಲ್ಲಿ ಪರಿಣಾಮ ಎದುರಿಸಬೇಕಾಗುತ್ತದೆ ಎಂದರು.

## ಶಿಕ್ಷಣದಿಂದ ಸಮಾಜದ ಅಭಿವೃದ್ಧಿ

• **ಉದಯವಾಹಿನಿ, ಕರಜಗಿ**

ಸಮಾಜದ ಸರ್ವಾಂಗೀಣ ಅಭಿವೃದ್ಧಿಗೆ ಶಿಕ್ಷಣದ ಪಾತ್ರ ಮಹತ್ವದಾಗಿದೆ. ಪ್ರತಿಯೊಬ್ಬರೂ ಶಿಕ್ಷಣ ಪಡೆಯಬೇಕು.ಒಂದು ಸಮಾಜ ಬದಲಾವಣೆ ಹೊಂದಬೇಕಾದರೆ ಸಮಾಜದಲ್ಲಿನ ಎಲ್ಲರೂ ಮೊದಲು ಶಿಕ್ಷಣ ಪಡೆಯಬೇಕು.ಶಿಕ್ಷಣದಿಂದ ಸಮಾಜದಲ್ಲಿ ಪರಿವರ್ತನೆ ಕಾಣಬಹುದು.ಎಂದು ಶಾಸಕ ಎಂ ವೈ ಪಾಟೀಲ ಹೇಳಿದರು

ಅವರು ಅಫಜಲಪುರ ತಾಲ್ಲೂಕಿನ ಮಣ್ಣೂರ ಗ್ರಾಮದಲ್ಲಿ ಕೆ ಎನ್ ಎನ್ ಎಲ್ ಯೋಜನೆ ಅಡಿಯಲ್ಲಿ 50 ಲಕ್ಷ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲಾಗುವ ಅಂಬಿಗರ ಚೌಡಯ್ಯ ಭವನದ ನಿರ್ಮಾಣ ಕಾಮಗಾರಿಗೆ ಅಡಿಗಲ್ಲು ನೆರವೇರಿಸಿ ಮಾತನಾಡಿ ಕೋಲಿ ಸಮಾಜದ ಬಾಂಧವರು ಆರ್ಥಿಕವಾಗಿ, ಸಾಮಾಜಿಕವಾಗಿ ಮುಂದೆ ಬರಬೇಕಾದರೆ ಪ್ರತಿಯೊಬ್ಬರು ಶಿಕ್ಷಣ ಪಡೆಯುವುದು ಅಗತ್ಯವಾಗಿದೆ.

ಪ್ರತಿಯೊಬ್ಬರೂ ಅಂಬಿಗರ ಚೌಡಯ್ಯ ಅವರ ತತ್ತ್ವಾದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಮುನ್ನಡೆದರೆ ಬದುಕು ಸಾರ್ಥಕವಾಗುತ್ತದೆ.ಸಮುದಾಯದ ಕಲ್ಯಾಣ



☛ ಉದಯವಾಹಿನಿ ಚಿತ್ರ

ಕಾರ್ಯಕ್ರಮಗಳನ್ನು ಆಯೋಜಿಸಲು ಅನುಕೂಲವಾಗುವಂತೆ ಸಮುದಾಯ ಭವನ ನಿರ್ಮಾಣ ಮಾಡಲಾಗುತ್ತಿದೆ.

ಮತಕ್ಷೇತ್ರದ ಸರ್ವಾಂಗೀಣ ಅಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡುವ ನಿಟ್ಟಿನಲ್ಲಿ ಸಮುದಾಯ ಭವನ, ಕುಡಿಯುವ ನೀರು ರಸ್ತೆ, ಚರಂಡಿ, ಸಿ.ಸಿ.ರಸ್ತೆ ಸೇರಿದಂತೆ ಇನ್ನಿತರ ಮೂಲ ಸೌಕರ್ಯ ಒದಗಿಸಲಾಗುವುದು.ಮುಂಬರುವ ದಿನಗಳಲ್ಲಿ ಮಣ್ಣೂರ ಗ್ರಾಮದ ಸರ್ವಾಂಗೀಣ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಲಾಗುವುದು ಎಂದು ಹೇಳಿದರು.

## ನೂರಾರು ವರ್ಷಗಳಿಂದ ವಾಸವಾಗಿರುವ ಕೊರಗ ಸಮುದಾಯದ ಕುಟುಂಬಗಳನ್ನು ಬೀದಿಗೆ ತಳ್ಳುವ ಕೆಲಸ
# ಪಾಲಿಕೆ ಮತ್ತು ರಾಷ್ಟ್ರೀಯ ಹೆದ್ದಾರಿ ಇಲಾಖೆಯ ಧೋರಣೆ ಅಮಾನುಷ

• **ಉದಯವಾಹಿನಿ, ಮಂಗಳೂರು**

ಸಾಣೂರು-ಬಿಕರ್ನಕಟ್ಟೆ ಹೆದ್ದಾರಿ ಅಗಲೀಕರಣಕ್ಕಾಗಿ ವಾಮಂಜೂರಿನ ಮಂಗಳಜ್ಯೋತಿಯಲ್ಲಿ ನೂರಾರು ವರ್ಷಗಳಿಂದ ವಾಸವಾಗಿರುವ ಕೊರಗ ಸಮುದಾಯದ ಕುಟುಂಬಗಳನ್ನು ಬೀದಿಗೆ ತಳ್ಳುವ ಮಹಾನಗರ ಪಾಲಿಕೆ ಮತ್ತು ರಾಷ್ಟ್ರೀಯ ಹೆದ್ದಾರಿ ಇಲಾಖೆಯ ಧೋರಣೆ ಅಮಾನುಷ ಮತ್ತು ತೀವ್ರ ಕಂಡನಿಯ ಎಂದು ಕರ್ನಾಟಕ ಆದಿವಾಸಿ ಹಕ್ಕುಗಳ ಸಮನ್ವಯ ಸಮಿತಿಯ ರಾಜ್ಯ ಸಹ ಸಂಚಾಲಕರಾದ ಡಾ. ಕೃಷ್ಣಪ್ಪ ಕೊಂಚಾಡಿ ಹೇಳಿದರು.

ಅವರು ಮಂಗಳೂರು ಮಹಾನಗರ ಪಾಲಿಕೆಯ ಎದುರು ಭರವಸೆ ನೀಡಿ ಅದಕ್ಕೆ ವ್ಯತಿರಿಕ್ತವಾಗಿ ಬುಲ್ಡೋಜರ್ ಕಾರ್ಯಾಚರಣೆ ನಡೆಸಲು ಮುಂದಾಗಿರುವ ಮಂಗಳೂರು ಮಹಾನಗರ ಪಾಲಿಕೆಯ ಕಮಿಷನರ್ ಮತ್ತು ಹೆದ್ದಾರಿ ಇಲಾಖೆಯ ಅಧಿಕಾರಿಗಳ ಸರ್ವಾಧಿಕಾರಿ ಧೋರಣೆಯನ್ನು ಖಂಡಿಸಿ ನಡೆದ ಪ್ರತಿಭಟನಾ ಸಭೆಯನ್ನು ಉದ್ದೇಶಿಸಿ ಮಾತನಾಡುತ್ತಿದ್ದರು.

ಮುಂದುವರಿದು ಮಾತನಾಡಿದ ಅವರು ಕೇವಲ ಕೊರಗಜ್ಜ ಗುಡಿಗೆ ಮಾತ್ರ ನೋಟಿಸು ನೀಡಿ ಜುಜುಬಿ 5 ಲಕ್ಷ ಪರಿಹಾರವನ್ನು ಘೋಷಿಸಿರುವ



☛ ಉದಯವಾಹಿನಿ ಚಿತ್ರ

**ಏಕಾಏಕಿ ಬುಲ್ಡೋಜರ್ ಕಾರ್ಯಾಚರಣೆ**

ರಾಷ್ಟ್ರೀಯ ಹೆದ್ದಾರಿ ಇಲಾಖೆಯು ಉಳಿದಂತೆ ಅಲ್ಲಿ 70 ವರ್ಷಗಳಿಗಿಂತಲೂ ಹೆಚ್ಚು ಕಾಲದಿಂದ ವಾಸಿಸುತ್ತಿರುವ ಕೊರಗ ಕುಟುಂಬಗಳಿಗೆ ಯಾವುದೇ ನೋಟಿಸು , ಪರ್ಯಾಯ ವ್ಯವಸ್ಥೆ, ಪರಿಹಾರವನ್ನು ನೀಡದೆ, ಏಕಾಏಕಿ ಬುಲ್ಡೋಜರ್ ಕಾರ್ಯಾಚರಣೆಯನ್ನು ನಡೆಸಲು ಮುಂದಾಗಿರುವುದನ್ನು ತೀಕ್ಷ್ಣವಾಗಿ ಖಂಡಿಸಿದರು. ಈಗ ಮುನ್ಸಿಪಾಲ್ಟಿ ಹೆಸರಿನಲ್ಲಿರುವ ಜಾಗ ಮತ್ತು ಕೊರಗಜ್ಜ ಗುಡಿ ಇರುವ ಜಾಗ ವಾಸ್ತವಿಕವಾಗಿ ಕುದ್ಮುಲ್ ರಂಗರಾಯರ ಶಿಷ್ಯ ವೆಂಕೋಜಿ ರಾವ್ ಕೊರಗ ಸಮುದಾಯಕ್ಕೆ ಎಂದು 1933ರಲ್ಲಿ ನೀಡಿರುವ 8.94 ಎಕರೆ ಜಾಗದಲ್ಲಿ ಬರುತ್ತಿದ್ದು 1962ರಲ್ಲಿ ಆಗಿನ ಮುನ್ಸಿಪಾಲ್ಟಿಯು ಅಕ್ರಮವಾಗಿ ತನ್ನ

**ಕರಾವಳಿ ಕರ್ನಾಟಕದ ಮೂಲ ನಿವಾಸಿಗಳಾಗಿ ಅಳಿವಿನ ಅಂಚಿನಲ್ಲಿರುವ ಕೊರಗ ಸಮುದಾಯವನ್ನು ಸರ್ವನಾಶ ಮಾಡಲು ಹೊರಟಿರುವ ಕಮಿಷನರ್ ಮತ್ತು ಹೆದ್ದಾರಿ ಇಲಾಖೆಯ ವಿರುದ್ಧ ನಾಗರೀಕರೆಲ್ಲರೂ ತೀವ್ರವಾಗಿ ಪ್ರತಿಭಟಿಸಬೇಕು, ಕೊರಗಜ್ಜನ ಗುಡಿ ಮತ್ತು ಎಲ್ಲಾ ಮನೆಗಳಿಗೆ ಕನಿಷ್ಠ 15 ಲಕ್ಷ ರೂಪಾಯಿ ಪರಿಹಾರ ನೀಡಬೇಕೆಂದೂ ಅದಕ್ಕಾಗಿ ನಿರಂತರ ಹೋರಾಟ ನಡೆಸಬೇಕು**

**-ಸುನಿಲ್ ಕುಮಾರ್ ಬಜಾಲ್**
**ಜನಪರ ಹೋರಾಟಗಾರ**

ಹೆಸರಿಗೆ ಭೂ ಪರಿವರ್ತನೆ ಮಾಡಿ ಕೊರಗರಿಂದ ಭೂಮಿ ಲಪಟಾಯಿಸಿ ಈಗ ಕೊರಗರ ಬದುಕನ್ನೇ ಲಪಟಾಯಿಸಲು ಮುಂದಾಗಿದೆ ಎಂದು ಹೇಳಿದರು.

ಪ್ರತಿಭಟನಾಕಾರರನ್ನು ಉದ್ದೇಶಿಸಿ ಆದಿವಾಸಿ ಹಕ್ಕುಗಳ ಸಮನ್ವಯ ಸಮಿತಿಯ ರಾಜ್ಯ ಸಮಿತಿ ಸದಸ್ಯರಾದ ಕೃಷ್ಣ ಇನ್ನಾ, ಸಿಐಟಿಯು ದ.ಕ ಜಿಲ್ಲಾ ಮುಖಂಡರಾದ ವಸಂತ ಆಚಾರಿ ಡಿವೈಎಫ್ಐ

**ಕಮಿಷನರ್ ಮತ್ತು ಹೆದ್ದಾರಿ ಇಲಾಖೆ ಕೊಟ್ಟ ಮಾತಿಗೆ ವ್ಯತಿರಿಕ್ತವಾಗಿ ವಚನಭ್ರಷ್ಟತೆಯನ್ನು ತೋರಿ ನಮ್ಮ ಮನೆ ಉರುಳಿಸಲು ಬುಲ್ಡೋಜರ್ ಕಳುಹಿಸಿದೆ. ಬುಲ್ಡೋಜರ್ ಎಂಬುದು ಜಾಗತಿಕವಾಗಿ ಅನ್ಯಾಯ , ದೌರ್ಜನ್ಯ, ದಬ್ಬಾಳಿಕೆಗಳ ಸಂಕೇತ ಎಂದು ಹೇಳಿದರು. ಮಹಿಳೆಯರು ಮತ್ತು ಮಕ್ಕಳ ಮೇಲೆ ಹೆದ್ದಾರಿ ಇಲಾಖೆ ಅಧಿಕಾರಿಗಳು ದೌರ್ಜನ್ಯವೆಸಗಿದ್ದಾರೆ**

**-ಕರಿಯ.ಕೆ ಸ್ಥಳೀಯ ಘಟಕದ ಅಧ್ಯಕ್ಷರಾದ**

ಜಿಲ್ಲಾ ಅಧ್ಯಕ್ಷರಾದ ಬಿಕೆ ಇಂತಿಯಾಸ್ ಕರ್ನಾಟಕ ಪ್ರಾಂತ ರೈತ ಸಂಘದ ಅಧ್ಯಕ್ಷರಾದ ಕೆ ಯಾದವ ಶೆಟ್ಟಿ ಮೊದಲಾದವರು ಮಾತನಾಡಿದರು.

ಪ್ರಾರಂಭದಲ್ಲಿ ಕರ್ನಾಟಕ ಆದಿವಾಸಿ ಹಕ್ಕುಗಳ ಸಮನ್ವಯ ಸಮಿತಿಯ ಜಿಲ್ಲಾ ಮಾರ್ಗದರ್ಶಕರಾದ ಯೋಗೀಶ್ ಜಪ್ಪಿನಮೊಗರು ಪ್ರಾಸ್ತಾವಿಕವಾಗಿ ಮಾತನಾಡಿದರು ಪ್ರತಿಭಟನಾ ಸಭೆಯಲ್ಲಿ ದಲಿತ ಹಕ್ಕುಗಳ ಸಮಿತಿಯ ಮುಂದಾಳುಗಳು , ಅಖಿಲ ಭಾರತ ವಕೀಲರ ಸಂಘದ ಪದಾಧಿಕಾರಿಗಳು ಹಾಗೂ ಯುವಜನ ಸಂಘಟ ಡಿ ವೈ ಎಫ್ಐನ ಮುಖಂಡರು ಭಾಗವಹಿಸಿ ಬೆಂಬಲ ಸೂಚಿಸಿದರು.

## ಪರೀಕ್ಷಾ ಕರ್ತವ್ಯದಲ್ಲಿ ಲೋಪ ಎಸಗುವವರು ಶಿಕ್ಷಣಾಧಿಕಾರಿಗಳೇ ಆಗಿರಲಿ, ಶಿಕ್ಷಕರೇ ಆಗಿರಲಿ ಅವರ ಮೇಲೆ ಕ್ರಮ
# ಪರೀಕ್ಷಾ ಕರ್ತವ್ಯ ಲೋಪ ಮಾಡಿದರೆ ಕ್ರಮ ನಿಶ್ಚಿತ: ಡಿಸಿ ಭೂಬಾಲನ್

• **ಉದಯವಾಹಿನಿ ಮುದ್ದೇಬಿಹಾಳ**

ವಿಜಯಪುರ ಜಿಲ್ಲೆಯಲ್ಲಿ ನಡೆಯುತ್ತಿರುವ ಎಸ್ಎಸ್ಎಲ್‌ಸಿ ಪರೀಕ್ಷೆಯಲ್ಲಿ ವಿವಿಧ ತಾಲ್ಲೂಕುಗಳ ನಾಲ್ವರು ಪರೀಕ್ಷಾ ಸಿಬ್ಬಂದಿ ವಿರುದ್ಧ ಕರ್ತವ್ಯ ಲೋಪ ಆರೋಪ ಕೇಳಿ ಬಂದಿದ್ದು ಇವರಲ್ಲಿ ಇಬ್ಬರನ್ನು ಸಸ್ಪೆಂಡ್ ಮಾಡಲಾಗುತ್ತದೆ. ಪರೀಕ್ಷಾ ಕರ್ತವ್ಯದಲ್ಲಿ ಲೋಪ ಎಸಗುವವರು ಶಿಕ್ಷಣಾಧಿಕಾರಿಗಳೇ ಆಗಿರಲಿ, ಶಿಕಕರೇ ಆಗಿರಲಿ ಅವರ ಮೇಲೆ ಕ್ರಮ ಜಾರಿಯಾಗುವುದು ನಿಶ್ಚಿತ ಎಂದು ಜಿಲ್ಲಾಧಿಕಾರಿ ಟಿ.ಭೂಬಾಲನ್ ತಿಳಿಸಿದರು.

ಬುಧವಾರ ಪಟ್ಟಣದ ವಿವಿಧೆಡೆ ಭೇಟಿ ನೀಡಿ ಅಭಿವೃದ್ಧಿ ಕಾಮಗಾರಿಗಳ ಸ್ಥಳ ಪರಿಶೀಲಿಸಿ, ತಹಶೀಲ್ದಾರ್ ಕಚೇರಿಯಲ್ಲಿ ಸಿಬ್ಬಂದಿಗಳ ಆಂತರಿಕ ಸಭೆ ನಡೆಸಿ ನಂತರ ಸುದ್ದಿಗಾರರೊಂದಿಗೆ ಅವರು ಮಾತನಾಡಿದರು.

ಇದಕ್ಕೂ ಮುನ್ನ ಜಿಲ್ಲಾಧಿಕಾರಿಯವರು ಬಸವೇಶ್ವರ ವೃತ್ತದ ಹತ್ತಿರ ಪ್ರವಾಸಿ ಮಂದಿರ ಜಾಗೆಯಲ್ಲಿ ನಿರ್ಮಾಣಗೊಂಡಿರುವ ಇಂದಿರಾ ಕ್ಯಾಂಟೀನ್ ಪರಿಶೀಲಿಸಿ ಅಗತ್ಯ ಸರಂಜಾಮು ಪೂರೈಸಿ ಇದೇ ತಿಂಗಳೊಳಗೆ ಪ್ರಾರಂಭಿಸುವಂತೆ, ಗ್ರಾಮದೇವತೆ



☛ ಉದಯವಾಹಿನಿ ಚಿತ್ರ

**ಅಭಿವೃದ್ಧಿ ಕಾಮಗಾರಿ ವಿವಿಧಡೆ ಪರಿಶೀಲನೆ**

ಕಟ್ಟೆಯ ಹತ್ತಿರ 15 ಕೋಟಿ ಅನುದಾನದಲ್ಲಿ ನಿರ್ಮಾಣಗೊಳ್ಳಲಿರುವ ಮೆಘಾ ಮಾರ್ಕೆಟ್ ಕಟ್ಟಡದ ಸ್ಥಳಕ್ಕೆ ಭೇಟಿ ನೀಡಿ ನೀಲನಕ್ಷೆ ಪರಿಶೀಲಿಸಿ ಕೆಲ ಸಣ್ಣಪುಟ್ಟ ಬದಲಾವಣೆ ಮಾಡುವಂತೆ, ಇಂದಿರಾ ವೃತ್ತದಲ್ಲಿರುವ ದೊಡ್ಡ ಕೆರೆಗೆ ತೆರಳಿ ವಾಸ್ತವ ಸ್ಥಿತಿ ಅವಲೋಕಿಸಿ ಬೆಳಗಾವಿಯಿಂದ ತಜ್ಞರೊಬ್ಬರನ್ನು ಕರೆಸಿ ಕೆರೆ ಸ್ವಚ್ಚತೆ ಬಗ್ಗೆ ಕ್ರಮ ಕೈಕೊಳ್ಳಲು ಮತ್ತು ಕೆರೆಯಲ್ಲಿ ಕೊಳಚೆ ನೀರು ಸೇರಿ ಮಲೀನಗೊಳ್ಳದಂತೆ ಯೋಜನೆ ರೂಪಿಸಿ ಬೇಸಿಗೆ ಮುಗಿಯುವ ಎರಡು ತಿಂಗಳೊಳಗೆ ಕೆಲಸ ಪೂರ್ಣಗೊಳಿಸಲು, ತಹಶೀಲ್ದಾರ್ ಕಚೇರಿ ಇರುವ ಆಡಳಿತ

**ಬೇಸಿಗೆ ಪ್ರಾರಂಭಗೊಂಡಿದ್ದು ಇದುವರೆಗೂ ಮುದ್ದೇಬಿಹಾಳ ತಾಲೂಕು ಸೇರಿ ಜಿಲ್ಲೆಯಲ್ಲಿ ಎಲ್ಲಿಯೂ ಕುಡಿಯುವ ನೀರಿನ ಸಮಸ್ಯೆ ಗಂಭೀರವಾಗಿರುವುದು ಕಂಡುಬಂದಿಲ್ಲ. ಹಾಗೇನಾದರೂ ಕಂಡುಬಂದಲ್ಲಿ ತಕ್ಷಣ ಪರ್ಯಾಯ ಕ್ರಮಗಳ ಮೂಲಕ ಜನತೆಗೆ ನೀರು ಪೂರೈಸಿ ಸಮಸ್ಯೆ ಉಲ್ಬಣಗೊಳ್ಳದಂತೆ ನೋಡಿಕೊಳ್ಳಲು ತಹಶೀಲ್ದಾರ್‌ಗಳಿಗೆ ನಿರ್ದೇಶನ ನೀಡಲಾಗಿದೆ. ಜೆಜೆಎಂ ಕಾಮಗಾರಿ ಕಳಪೆ ಆರೋಪ ಕೇಳಿಬಂದಿದ್ದು ಪರಿಶೀಲಿಸಿ ಕ್ರಮ ಕೈಕೊಳ್ಳಲು ಜಿಲ್ಲಾ ಪಂಚಾಯತ್ ಸಿಇಓ ಅವರಿಗೆ ತಿಳಿಸಿದ್ದೇನೆ. ಆಸ್ತಿ ನೋಂದಣಿ ಕುರಿತಾದ ಬಿ ಖಾತಾ ವಿಳಂಬವಿಲ್ಲದೆ ನಿರ್ವಹಿಸಲು ಸಂಬಂಧಿಸಿದವರಿಗೆ ಸೂಚಿಸಿದ್ದು ವಿಳಂಬ ಕಂಡುಬಂದಲ್ಲಿ ಕ್ರಮ ಕೈಕೊಳ್ಳಲಾಗುತ್ತದೆ ಎಂದರು.**

ಸೌಧ ದುರಸ್ತಿಗೆ ಎಸ್ಟಿಮೇಟ್ ತಯಾರಿಸಿದ್ದು ಸರ್ಕಾರದಿಂದ ಅನುದಾನ ಬಂದ ಕೂಡಲೇ ಕೆಲಸ ಪ್ರಾರಂಭಿಸುವುದಾಗಿ ತಿಳಿಸಿದರು. ವಿಜಯಪುರ ರಸ್ತೆಯಲ್ಲಿರುವ ಎಫ್‌ಟಿಪಿ ಘಟಕಕ್ಕೂ ಭೇಟಿ ನೀಡಿ ಪರಿಶೀಲಿಸಿದರು. ವಿಜಯಪುರ ಉಪ ವಿಭಾಗಾಧಿಕಾರಿ ಗುರುನಾಥ ದಡ್ಡೆ, ನಗರ ಯೋಜನಾ ನಿರ್ದೇಶಕ ಬದ್ರುದ್ದೀನ್ ಸೌದಾಗರ, ಯೋಜನಾ ನಿರ್ದೇಶಕರ ಕಚೇರಿಯ ಕಾರ್ಯಪಾಲಕ ಅಭಿಯಂತರ ವಿದ್ಯಾಧರ ನ್ಯಾಮಗೊಂಡ, ತಹಶೀಲ್ದಾರ್ ಬಲರಾಮ ಕಟ್ಟಿಮನಿ, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ನಿಂಗಪ್ಪ ಮಸಳಿ, ಘನತ್ಯಾಜ್ಯ ನಿರ್ವಹಣೆಯ ಪರಿಣಿತೆ ಸ್ನೇಹಾ ನಾಯಕ, ಪುರಸಭೆ ಇಂಜಿನೀಯರ್ ಭೀಮನಗೌಡ ಬಗಲಿ, ಸ್ವಚ್ಚತಾ ವಿಭಾಗದ ಮಹಾಂತೇಶ ಕಟ್ಟಿಮನಿ, ಜಾವೀದ ನಾಯ್ಕೋಡಿ, ಮೆಘಾ ಮಾರ್ಕೆಟ್ ಗುತ್ತಿಗೆದಾರ ಶ್ರೀಶೈಲ ವಿಭೂತಿ, ಕಂದಾಯ ನಿರೀಕ್ಷಕರಾದ ಮಹಾಂತೇಶ ಮಾಗಿ, ವೆಂಕಟೇಶ ಅಂಬಿಗೇರ, ಪುರಸಭೆ ಅಧ್ಯಕ್ಷ ಮಹಿಬೂಬ ಗೊಳಸಂಗಿ, ಪುರಸಭೆ ಸದಸ್ಯರಾದ ಶಿವು ಶಿವಪೂರ, ವೀರೇಶ ಹಡಲಗೇರಿ, ನಾಮನಿರ್ದೇಶಿತ ಸದಸ್ಯ ಸಂತೋಷ ನಾಯ್ಕೋಡಿ ಇನ್ನಿತರರು ಇದ್ದರು.

## ಯತ್ನಾಳ್‌ಗೆ ರೇಣುಕಾಚಾರ್ಯ ಸವಾಲು

• **ಉದಯವಾಹಿನಿ, ದಾವಣಗೆರೆ**

ಮಾಜಿ ಸಚಿವ ಎಂ.ಪಿ. ರೇಣುಕಾಚಾರ್ಯ ಉಚ್ಚಾಟಿತ ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.

ಯತ್ನಾಳ್ ಹಿಂದೂ ಹುಲಿಯಲ್ಲ, ನಕಲಿ ಹಿಂದೂ. ಅವರು ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡಿ ಹೊಸ ಪಕ್ಷ ಸ್ಥಾಪಿಸಿ ಗೆದ್ದರೆ, ನಾವೇ ಹಿಂದೂ ಹುಲಿ ಎಂದು ಒಪ್ಪಿ ಗೌರವಿಸುತ್ತೇವೆ ಎಂದು ಶಾಸಕ ಯತ್ನಾಳ್ ಹೊಸ ಪಕ್ಷ ರಚಿಸುವ ಕುರಿತು ಪ್ರತಿಕ್ರಿಯಿಸಿದ್ದಾರೆ.



☛ ಉದಯವಾಹಿನಿ ಚಿತ್ರ

ಯತ್ನಾಳ್ ಒಂದು ಪಕ್ಷವನ್ನು ರಚಿಸಿದರೆ, ಅದು ಸಂತೋಷದ ಮತ್ತು ಸ್ವಾಗತಾರ್ಹ ವಿಷಯ. ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರನ್ನು ಟೀಕಿಸಿ ಅವರು ಮುಖ್ಯಮಂತ್ರಿಯಾಗುವ ಹಗಲುಗನಸು ಕಾಣುತ್ತಿದ್ದಾರೆ ಎಂದರ್ಥ. ಸರ್ವಾಧಿಕಾರಿ ಧೋರಣೆ ಕೈಬಿಡಬೇಕು. ನಾವು ಸ್ವಯಂ ಘೋಷಿತ ನಾಯಕರಾಗಬಾರದು, ಸಾರ್ವಜನಿಕರು ಮೆಚ್ಚುವ ನಾಯಕರಾಗಬೇಕು. ನೀವು ಭಾರತೀಯ ಜನತಾ ಪಕ್ಷದ ಚುನಾವಣಾ ಚಿಹ್ನೆಯ ಮೇಲೆ ನಿಂತು ಗೆದ್ದಿದ್ದೀರಿ. ನಿಮಗೆ ನಿಜವಾಗಿಯೂ ವರ್ಚಸ್ಸು ಇದ್ದರೆ, ನೀವು ನಿಜವಾಗಿಯೂ ಹಿಂದುತ್ವವಾದಿಯಾಗಿದ್ದರೆ ಮೊದಲು ನಿಮ್ಮ ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡಿ ಮತ್ತೆ ಚುನಾವಣೆಯಲ್ಲಿ ಗೆದ್ದರೆ, ನಾವು ನಿಮ್ಮನ್ನು ಅಭಿನಂದಿಸುತ್ತೇವೆ. ನಾವು ನಿಮ್ಮನ್ನು ಗೌರವಿಸುತ್ತೇವೆ ಎಂದು ಅವರು ಸವಾಲು ಹಾಕಿದ್ದಾರೆ. ಯತ್ನಾಳ್ ಠೇವಣಿ ಇಟ್ಟ ಮೊತ್ತವನ್ನು ಪಡೆಯಲು ಸಹ ಸಾಧ್ಯವಾಗುವುದಿಲ್ಲ. ಇನ್ನು ಹೊಸ ಪಕ್ಷ ಕಟ್ಟಿ 224 ಕ್ಷೇತ್ರಗಳಿಗೆ ಅಭ್ಯರ್ಥಿಗಳ ದೊರೆಯುವುದು ದೂರದ ಮಾತು.ಯತ್ನಾಳ್ ಅವರಿಗೆ ಯಾವುದೇ ಅಭ್ಯರ್ಥಿ ಸಿಗುದಿಲ್ಲ ಅವರು ಹಿಂದೂ ಪಕ್ಷವನ್ನು ರಚಿಸುವುದಾಗಿ ಹೇಳಿದ್ದಾರೆ. ಅವರು ತಮ್ಮನ್ನು ಹಿಂದೂ ಹುಲಿಗಳೆಂದು ಬಿಂಬಿಸಿಕೊಂಡಿದ್ದಾರೆ. ಸಮಯ ಬಂದಾಗ ಎಲ್ಲವೂ ಬಹಿರಂಗಗೊಳ್ಳುತ್ತದೆ ಎಂದು ಟೀಕಿಸಿದ್ದಾರೆ.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 01:30 ರಿಂದ 03:00 |
| ಗುಳಿಕ ಕಾಲ | ಬೆಳಿಗ್ಗೆ | 09:00 ರಿಂದ 10:30 |
| ಯಮಗಂಡ ಕಾಲ | ಬೆಳಿಗ್ಗೆ | 06:00 ರಿಂದ 07:30 |

**ಮೇಷ** ನೀವು ಹೆಚ್ಚೇನೂ ಮಾಡದೇ ಇತರರ ಗಮನ ಸೆಳೆಯಲು ಇಡೀದಿನ ಪರಿಪೂರ್ಣ ದಿನ. ನೀವು ನಿಮ್ಮ ಪ್ರೀತಿಪಾತ್ರರೊಂದಿಗೆ ಎಲ್ಲಿಗಾದರೂ ಹೊರಗೆ ಹೋಗುತ್ತಿದ್ದರೆ ಬಟ್ಟೆಗಳನ್ನು ಚಿಂತನಶೀಲವಾಗಿ ಧರಿಸಿ.

**ವೃಷಭ** ನಿಮ್ಮ ಹಾಸ್ಯದ ಪ್ರಕೃತಿ ನಿಮ್ಮ ಸುತ್ತಮುತ್ತಲಿನ ಪರಿಸರವನ್ನು ಬೆಳಗಿಸುತ್ತದೆ. ಪ್ರೀತಿಯಲ್ಲಿ ನಿರಾಶೆಯಾಗಬಹುದಾದರೂ ಪ್ರೇಮಿಗಳು ಯಾವತ್ತೂ ಮುಖಸ್ತುತಿ ಮಾಡುವವರಾದ್ದರಿಂದ ನೀವು ಧೃತಿಗೆಡಬೇಡಿ.

**ಮಿಥುನ** ನಿಮ್ಮ ಮನಸ್ಥಿತಿಯನ್ನು ಬದಲಾಯಿಸಲು ಯಾವುದಾದರೂ ಸಾಮಾಜಿಕ ಸಭೆಗೆ ಹಾಜರಾಗಿ. ಇಂದು ಯಾವುದೇ ಸಹಾಯವಿಲ್ಲದೆ, ನೀವು ಹಣವನ್ನು ಗಳಿಸುವಲ್ಲಿ ಸಾಮರ್ಥ್ಯರಾಗಿರುತ್ತೀರಿ.

**ಕರ್ಕಾಟಕ** ಆರೋಗ್ಯದ ಬಗ್ಗೆ ಸ್ವಲ್ಪ ಗಮನ ನೀಡಬೇಕು. ನೀವು ಸ್ವಲ್ಪ ಹೆಚ್ಚುವರಿ ಹಣ ಮಾಡಲು ಯೋಜಿಸುತ್ತಿದ್ದಲ್ಲಿ ಸುಭದ್ರ ಆರ್ಥಿಕ ಯೋಜನೆಗಳಲ್ಲಿ ಹೂಡಿಕೆ ಮಾಡಿ. ನಿಮ್ಮ ವಂಶಸ್ಥರಿಗೆ ಏನಾದರೂ ವಿಶೇಷವಾದದ್ದನ್ನು ಯೋಜಿಸಿ.

**ಸಿಂಹ** ಇಂದು ಹಿಂದಿನ ಕೆಟ್ಟ ನಿರ್ಧಾರಗಳು ಹತಾಶೆ ಮತ್ತು ಮಾನಸಿಕ ಪ್ರಕ್ಷುಬ್ಧತೆಗೆ ಕಾರಣವಾಗುತ್ತದೆ – ನೀವು ಮುಂದೇನು ಮಾಡಬೇಕೆಂದು ನಿರ್ಧರಿಸಲಾಗದೇ ಸಲುಕಿಕೊಂಡಿರಬಹುದು

**ಕನ್ಯಾ** ನೀವು ಇಂದು ಹಣ ಉಳಿಸುವುದು ಕಷ್ಟ. ನೀವು ಇಂದು ಅತಿಯಾಗಿ ಖರ್ಚು ಮಾಡುವ ಅಥವಾ ನಿಮ್ಮ ಪರ್ಸ್ ಕಳೆದುಕೊಳ್ಳುವ ಸಾಧ್ಯತೆಗಳಿವೆ ನಿರ್ಲಕ್ಷ್ಯತನದಿಂದ ಕೆಲವು ಸಮಸ್ಯೆಗಳು ಖಂಡಿತ.

**ತುಲಾ** ಅನಗತ್ಯ ಆಲೋಚನೆಗಳು ನಿಮ್ಮ ಮನಸ್ಸನ್ನು ಆವರಿಸಬಹುದು. ಖಾಲಿ ಮೆದುಳು ದೆವ್ವಗಳ ಕಾರ್ಖಾನೆಯಾಗಿರುವುದರಿಂದ ದೈಹಿಕ ವ್ಯಾಯಾಮದಲ್ಲಿ ನಿಮ್ಮನ್ನು ತೊಡಗಿಸಿಕೊಳ್ಳಲು ಪ್ರಯತ್ನಿಸಿ.

**ವೃಶ್ಚಿಕ** ನೀವು ಪ್ರಯಾಣಿಸಲು ತುಂಬಾ ದುರ್ಬಲರಾಗಿದ್ದೀರಿ ಹಾಗೂ ಇದು ಮತ್ತಷ್ಟು ನಿಮ್ಮನ್ನು ದುರ್ಬಲಗೊಳಿಸುತ್ತದೆ. ದೀರ್ಘ ಕಾಲ ಬಾಕಿಯಿದ್ದ ಬಾಕಿಗಳು ಕೊನೆಗೂ ದೊರಕುತ್ತವೆ.

**ಧನಸ್ಸು** ಒಂದು ಲಾಭಕರ ದಿನ ಮತ್ತು ನೀವು ದೀರ್ಘಕಾಲದ ಅನಾರೋಗ್ಯಕ್ಕೆ ಪರಿಹಾರ ಹುಡುಕಲು ಸಾಧ್ಯವಾಗಬಹುದು. ಇಂದು ಯಾವುದೇ ಸಹಾಯವಿಲ್ಲದೆ, ನೀವು ಹಣವನ್ನು ಗಳಿಸುವಲ್ಲಿ ಸಾಮರ್ಥ್ಯರಾಗಿರುತ್ತೀರಿ.

**ಮಕರ** ಯೋಗದ ಸಹಾಯ ತೆಗೆದುಕೊಳ್ಳಿ. ಇದು ನಿಮಗೆ ದೈಹಿಕವಾಗಿ, ಮಾನಸಿಕವಾಗಿ ಮತ್ತು ಆಧ್ಯಾತ್ಮಿಕವಾಗಿ ನಿಮ್ಮ ಮನೋಧರ್ಮವನ್ನು ಸುಧಾರಿಸುವ ಆರೋಗ್ಯಕರ ಜೀವನ ಕಲೆ ಕಲಿಸುತ್ತದೆ.

**ಕುಂಭ** ಕುಟುಂಬದ ಸದಸ್ಯರ ಅಗತ್ಯಗಳಿಗೆ ಆದ್ಯತೆ ನೀಡಿ. ನೀವು ಅವರ ಸಲುವಾಗಿ ಕಾಳಜಿ ತೆಗೆದುಕೊಳ್ಳುತ್ತೀರೆಂದು ಅವರಿಗೆ ಅರ್ಥವಾಗುವ ಹಾಗೆ ಅವರ ಸಂತೋಷವನ್ನು ಹಂಚಿಕೊಳ್ಳಿ.

**ಮೀನ** ಪ್ರಕೃತಿ ಇಂದು ಅನೇಕ ಸಂತೋಷದ ಕ್ಷಣಗಳನ್ನು ತರುತ್ತದೆ. ಇನ್ನೂ ಸಂಬಳ ಪಡೆಯದವರು, ಇಂದು ಅವರು ಹಣಕ್ಕಾಗಿ ತುಂಬಾ ಚಿಂತೆ ಮಾಡಬಹುದು ಮತ್ತು ನಿಮ್ಮ ಸ್ನೇಹಿತರಿಂದ ಸಾಲವನ್ನು ಕೇಳಬಹುದು.

## ಮಲ್ಲಿಕಾರ್ಜುನ ಲೋಣಿ ಇವರಿಗೆ ಎಂಎಲ್‌ಸಿ ಸ್ಥಾನ ನೀಡಲು ಗಾಣಿಗ ಸಮಾಜ ಒತ್ತಾಯ

• ಉದಯವಾಹಿನಿ ಇಂಡಿ

ವಿಜಯಪುರ ಜಿಲ್ಲೆಯ ಪ್ರಮುಖ ಗಾಣಿಗ ಸಮಾಜದ ನಾಯಕ ಮತ್ತು ಕಾಂಗ್ರೆಸ್ ಪಕ್ಷದ ಜಿಲ್ಲಾ ಅಧ್ಯಕ್ಷ ಸಂಘಟನಾ ಚತುರ ಮಲ್ಲಿಕಾರ್ಜುನ ಲೋಣಿ ಇವರನ್ನು ಎಂಎಲ್‌ಸಿ ಮಾಡಬೇಕೆಂದು ತಾಲ್ಲೂಕು ಗಾಣಿಗ ಸಮಾಜದ ಪರವಾಗಿ ತಾಲ್ಲೂಕಾ ಗಾಣಿಗ ಸಮಾಜದ ಅಧ್ಯಕ್ಷ ಎ.ಎಸ್.ಗಾಣಿಗೇರ ಆಗ್ರಹಿಸಿದರು.

ಪಟ್ಟಣದ ಖಾಸಗಿ ಹೋಟೆಲ್‌ನಲ್ಲಿ ಪತ್ರಿಕಾ ಗೋಷ್ಠಿಯಲ್ಲಿ ಮಾತನಾಡಿದ ಅವರು ಸದ್ಯದ ಮತ್ತು ಕಳೆದ ಬಾರಿಯ ವಿಧಾನಸಭೆ ಮತ್ತು ವಿಧಾನ ಪರಿಷತ್ತಿನಲ್ಲಿ ಗಾಣಿಗ ಸಮಾಜದ ಯಾರೂ ಆಯ್ಕೆಯಾಗಿಲ್ಲ. ವಿಜಯಪುರ ಜಿಲ್ಲೆ ಮತ್ತು ಇಂಡಿ


ಉದಯವಾಹಿನಿ ಚಿತ್ರ

ತಾಲ್ಲೂಕಿನಲ್ಲಿ ಗಾಣಿಗ ಸಮಾಜ ಜನಸಂಖ್ಯೆಯಲ್ಲಿ ಎರಡನೆಯ ಸ್ಥಾನದಲ್ಲಿದೆ. ಅದಲ್ಲದೆ ಮಲ್ಲಿಕಾರ್ಜುನ ಲೋಣಿಯವರು ಕಾಂಗ್ರೆಸ್ ಸೇರುವ ಮುಂಚೆ ಅವರಿಗೆ ಒಳ್ಳೆಯ ಸ್ಥಾನ ಮಾನ ನೀಡುವ ಭರವಸೆ ನೀಡಿದ್ದಾರೆ. ಅದಲ್ಲದೆ ಸಧ್ಯದ ಪರಿಸ್ಥಿತಿ ಒಳ್ಳೆಯ ಸಂದರ್ಭವಾಗಿದ್ದು ಸಮಾಜದ ಒಬ್ಬರಿಗೆ ಆಯ್ಕೆ ಮಾಡುವ ಅವಕಾಶವಿದೆ. ಮಲ್ಲಿಕಾರ್ಜುನ ಲೋಣಿ ಈ ಹಿಂದೆ ಎಂಎಲ್ಸಿ ಚುನಾವಣೆಗೆ ನಿಂತಾಗ ಅಲ್ಪಮತಗಳ ಅಂತರಿಂದ ಸೋಲಾಗಿದೆ. ಸಂಘಟನಾ ಶಕ್ತಿ ನಾಯಕತ್ವದ ಗುಣ ಇವರಲ್ಲಿ ಇರುವದರಿಂದ ಮುಂಬರುವ ತಾಲ್ಲೂಕಾ ಪಂಚಾಯತ, ಜಿಲ್ಲಾ ಪಂಚಾಯತ ಸ್ಥಳಿಯ ಚುನಾವಣೆಯಲ್ಲಿ ಹೆಚ್ಚಿನ ಸಂಖ್ಯೆಯ ಸ್ಥಾನ ಕಾಂಗ್ರೆಸ್ ಪಕ್ಷಕ್ಕೆ ಲಭಿಸಲಿದೆ ಆದ್ದರಿಂದ ಕೂಡಲೆ ಲೋಣಿಯವರಿಗೆ ಎಂಎಲ್ಸಿ ಮಾಡಿ ಸಮುದಾಯದ ಗೌರವ ಎತ್ತಿಹಿಡಿಯುವಿರೆಂದು ಗಾಣಿಗ ಸಮುದಾಯ ನೀರಿಕ್ಷಿಸುತ್ತದೆ ಎಂದರು. ಮಲ್ಲಿಕಾರ್ಜುನ ಲೋಣಿಯವರಿಗೆ ಎಂಎಲ್‌ಸಿ ಸ್ಥಾನ ನೀಡಿದರೆ ಬರುವ ಜಿಲ್ಲಾ ಪರಿಷತ್ತು ಮತ್ತು ತಾಲ್ಲೂಕು ಪಂಚಾಯತ ಚುನಾವಣೆಯಲ್ಲಿ ಪಕ್ಷ ಬಲಪಡಿಸಲು ಅವಕಾಶ ಕೊಟ್ಟಂತೆ ಆಗುತ್ತದೆ. ಕಾರಣ ಜಿಲ್ಲೆ ಕಾಂಗ್ರೆಸ್ ನಾಯಕರು, ಚುನಾಯಿತ ಪ್ರತಿನಿಧಿಗಳು ಲೋಣಿ ಪರ ಮುಖ್ಯಮಂತ್ರಿಗಳ ಮೇಲೆ ಒತ್ತಡ ತರಲು ಆಗ್ರಹಿಸಿದರು. ಪತ್ರಿಕಾಗೋಷ್ಠಿಯಲ್ಲಿ ಸಮಾಜದ ಕಾರ್ಯದರ್ಶಿ ಭಿಮನಗೌಡ ಪಾಟೀಲ, ಬಾಬು ಯಳಸಂಗಿ, ರಾಮ ಯಂಕಂಚಿ, ಅಣ್ಣಾರಾಯ ಬಬಲಾದ ಶಿವಯೋಗಪ್ಪ ಜನಗೊಂಡ ಮತ್ತಿತರಿದ್ದರು.

### ಅರ್ಥಪೂರ್ಣ ಆಚರಣೆಗೆ ನಿರ್ಧಾರ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅಧ್ಯಕ್ಷತೆಯಲ್ಲಿ ಪೂರ್ವಭಾವಿ ಸಭೆ

## ಡಾ.ಬಾಬು ಜಗಜೀವನರಾಂ, ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ

• ಉದಯವಾಹಿನಿ ಚಿತ್ರದುರ್ಗ

ಜಿಲ್ಲಾ ಕೇಂದ್ರದಲ್ಲಿ ಈ ಬಾರಿ ಡಾ.ಬಾಬು ಜಗಜೀವನರಾಂ ಹಾಗೂ ಡಾ.ಬಿ.ಆರ್.ಅಂಬೇಡ್ಕರ್ ರವರ ಜಯಂತಿಗಳನ್ನು ಅರ್ಥಪೂರ್ಣ ಹಾಗೂ ಅದ್ದೂರಿಯಾಗಿ ಆಚರಿಸಲಾಗುವುದು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಹೇಳಿದರು.

ಬರುವ ಏಪ್ರಿಲ್ 05 ರಂದು ಡಾ.ಬಾಬು ಜಗಜೀವನರಾಂ ಅವರ 118ನೇ ಜನ್ಮ ದಿನಾಚರಣೆ ಹಾಗೂ ಏಪ್ರಿಲ್ 14 ರಂದು ಡಾ.ಬಿ.ಆರ್. ಅಂಬೇಡ್ಕರ್ ಅವರ 134ನೇ ಜನ್ಮ ದಿನಾಚರಣೆ ಆಚರಿಸುವ ಕುರಿತು ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕೋವಿಡ್ ಹಾಗೂ ವಿಧಾನಸಭೆ ಮತ್ತು ಲೋಕಸಭೆ ಚುನಾವಣೆ ನೀತಿ ಸಂಹಿತೆಯ ಹಿನ್ನಲೆಯಲ್ಲಿ ಕಳೆದ ಮೂರು-ನಾಲ್ಕು ವರ್ಷಗಳಿಂದ ಉಭಯ ಮಹನೀಯರ ಜಯಂತಿಯನ್ನು ಸರಳವಾಗಿ ಆಚರಿಸಲಾಗಿದೆ. ಈ ಬಾರಿ ಮಹಾ ನಾಯಕರ ಜಯಂತಿಯನ್ನು ವಿಶೇಷ ರೀತಿಯಲ್ಲಿ ಹಾಗೂ ಮಾದರಿಯಾಗಿ ಆಚರಿಸಲು ಕ್ರಮ ವಹಿಸಲಾಗುವುದು. ಎಲ್ಲಾ ಅಧಿಕಾರಿಗಳು, ಸಿಬ್ಬಂದಿಗಳು ತಪ್ಪದೆ ಜಯಂತಿ ಕಾರ್ಯಕ್ರಮಗಳಿಗೆ ಹಾಜರಾಗುವಂತೆ ಸೂಚನೆ ನೀಡಲಾಗುವುದು. ಜಾತಿ ಬೇಧವಿಲ್ಲದೆ ಎಲ್ಲಾ ಸಮುದಾಯ, ಸಂಘಟನೆ, ಸಮಾಜದವರು ಉಭಯ ಮಹನೀಯರ ಜಯಂತಿಯಲ್ಲಿ ಪಾಲ್ಗೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳು ಇದೇ ಸಂದರ್ಭದಲ್ಲಿ ಮನವಿ ಮಾಡಿದರು.

ಏಪ್ರಿಲ್ 05ರಂದು ಡಾ.ಬಾಬು ಜಗಜೀವನರಾಂ ಅವರ 118ನೇ ಜನ್ಮ ದಿನಾಚರಣೆ ಅಂಗವಾಗಿ ಅಂದು ಬೆಳಿಗ್ಗೆ 9ಕ್ಕೆ ನಗರದ ನೀಲಕಂಠೇಶ್ವರ ದೇಗುಲದಿಂದ ಮೆರವಣಿಗೆಗೆ ಚಾಲನೆ ನೀಡಿ, ತರಾಸು ರಂಗಮಂದಿರದಲ್ಲಿ ವೇದಿಕೆ ಕಾರ್ಯಕ್ರಮ ಆಯೋಜಿಸಲಾಗುವುದು. ಏಪ್ರಿಲ್ 14ರಂದು ಡಾ. ಬಿ.ಆರ್.ಅಂಬೇಡ್ಕರ್ ಅವರ 134ನೇ ಜನ್ಮ ದಿನಾಚರಣೆ ಅಂಗವಾಗಿ ಅಂದು ಬೆಳಿಗ್ಗೆ 9ಕ್ಕೆ ನಗರದ ಹೊಳಲ್ಕೆರೆ ರಸ್ತೆಯ ಕನಕ ವೃತ್ತದಿಂದ ಮೆರವಣಿಗೆ ಪ್ರಾರಂಭವಾಗಲಿದ್ದು, ಮೆರವಣಿಗೆಯಲ್ಲಿ ವಿವಿಧ ಇಲಾಖೆಗಳ ಸ್ತಬ್ಧಚಿತ್ರಗಳು, ವೈವಿಧ್ಯಮಯ ಜಾನಪದ ಕಲಾತಂಡಗಳು ಭಾಗವಹಿಸಲಿವೆ. ನಗರದ ತರಾಸು ರಂಗಮಂದಿರದಲ್ಲಿ ವೇದಿಕೆ ಕಾರ್ಯಕ್ರಮ ನಡೆಯಲಿದ್ದು, ಮಹನೀಯರ ಕುರಿತು ಸಂಪನ್ಮೂಲ ವ್ಯಕ್ತಿಗಳಿಂದ ಉಪನ್ಯಾಸ ಹಾಗೂ ಗಾಯಕರಿಂದ ಕ್ರಾಂತಿಗೀತೆಗಳನ್ನು ಹಾಡಲು ಕ್ರಮವಹಿಸಲಾಗುವುದು ಎಂದರು.

ಮಹನೀಯರ ಜಯಂತಿ ಕಾರ್ಯಕ್ರಮಗಳು ಸಾಂಸ್ಕೃತಿಕ ಕಾರ್ಯಕ್ರಮದ ಮೆರವಣಿಗೆ ನಡೆಸುವ ಮೂಲಕ ಸಾರ್ವಜನಿಕವಾಗಿ ಮಹಾನಾಯಕರಿಗೆ ನಮನ ಸಲ್ಲಿಸುವ ಕೆಲಸವಾಗಬೇಕು. ಸಮಾಜಮುಖಿಯಾಗಿ ಹಾಗೂ ಹಬ್ಬದ ರೀತಿಯಲ್ಲಿ ಜಯಂತಿ ಆಚರಿಸಬೇಕು. ಎಲ್ಲಾ ಸಮುದಾಯಗಳು, ಸಂಘ ಸಂಸ್ಥೆಗಳು ಸೇರಿ ಅದ್ದೂರಿಯಾಗಿ ಆಚರಿಸಬೇಕು.

ಹೋರಾಟದ ಮಾಡಿದ ನಾಯಕರಿಗೆ ಜಿಲ್ಲಾ ಮಟ್ಟದಲ್ಲಿ ಅಂಬೇಡ್ಕರ್ ಹಾಗೂ ಜಗಜೀವನರಾಂ ಪ್ರಶಸ್ತಿ ನೀಡಿ, ಗುರುತಿಸುವ ಕೆಲಸವಾಗಬೇಕು. ಈ ಪ್ರಶಸ್ತಿ ಆಯ್ಕೆಗಾಗಿ ಆಯ್ಕೆ ಸಮಿತಿ ರಚಿಸಬೇಕು. ಚಿತ್ರದುರ್ಗ ನಗರದ ಎಲ್ಲ 35 ವಾರ್ಡ್‌ಗಳಲ್ಲಿಯೂ ಸಹ ಜಗಜೀವನರಾಂ ಹಾಗೂ ಅಂಬೇಡ್ಕರ್ ಅವರ ಹೆಸರಿನಲ್ಲಿ ಶುದ್ಧ ಕುಡಿಯುವ ನೀರು ಘಟಕ ಹಾಗೂ ಗ್ರಂಥಾಲಯ ಸ್ಥಾಪಿಸಬೇಕು.

ನಗರದ ಯಾವುದಾದರೂ ಒಂದು ವೃತ್ತದಲ್ಲಿ ಬಾಬು ಜಗಜೀವನರಾಂ ಪುತ್ಥಳಿ ಪ್ರತಿಷ್ಠಾಪಿಸಬೇಕು ಎಂದು ಸಲಹೆಗಳು ಕೇಳಿ ಬಂದವು.

ಸಭೆಯಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಜಗದೀಶ್ ಹೆಬ್ಬಳ್ಳಿ, ಡಿವೈಎಸ್ಪಿ ಪಿ.ಕೆ.ದಿನಕರ್ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು, ಸಮುದಾಯ ಮುಖಂಡರಾದ ನಗರಸಭೆ ಮಾಜಿ ಅಧ್ಯಕ್ಷ ನಿರಂಜನಮೂರ್ತಿ, ಜಯಣ್ಣ, ಬಿ.ರಾಜಪ್ಪ, ಕೆ.ಟಿ. ಶಿವಕುಮಾರ್, ಕೆ.ಕುಮಾರ್, ದುರುಗೇಶಪ್ಪ, ಪ್ರಸನ್ನ, ಗೌನಹಳ್ಳಿ ಗೋವಿಂದಪ್ಪ, ಮಹಂತೇಶ್, ಡಿ.ಎನ್.ಮೈಲಾರಪ್ಪ, ವೈ. ರಾಜಣ್ಣ, ಅವಿನಾಶ್, ನಾಗರಾಜಕಟ್ಟೆ, ವಕೀಲರ ಸಂಘದ ಅಧ್ಯಕ್ಷ ವೈ.ತಿಪ್ಪೇಸ್ವಾಮಿ, ಡಿ. ಗೋಪಾಲಸ್ವಾಮಿ ನಾಯಕ ಸೇರಿದಂತೆ ವಿವಿಧ ಸಂಘಟನೆಗಳ ಪದಾಧಿಕಾರಿಗಳು, ಮುಖಂಡರು, ಮತ್ತಿತರರು ಇದ್ದರು.

**ಸಮುದಾಯ ಭವನ ನಿರ್ಮಾಣ**

**ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗಾಗಿ ವಿವಿಧ ಇಲಾಖೆಗಳಲ್ಲಿ ಜಾರಿಯಲ್ಲಿರುವ ಯೋಜನೆಗಳು, ಯೋಜನೆಯ ಸೌಲಭ್ಯ ಪಡೆಯಲು ಇರುವ ಮಾನದಂಡಗಳು, ನೀಡಬೇಕಿರುವ ದಾಖಲೆಗಳು ಮುಂತಾದ ಸಮಗ್ರ ವಿವರಗಳನ್ನು ಒಳಗೊಂಡಂತೆ ಕಿರುಹೊತ್ತಿಗೆಯನ್ನು ತಯಾರಿಸಿ ವಿತರಿಸಲು ನಿರ್ಧರಿಸಲಾಗಿದೆ ಎಂದು ತಿಳಿಸಿದ ಜಿಲ್ಲಾಧಿಕಾರಿಗಳು, ಇದನ್ನು ಕೇವಲ ಜಯಂತಿ ಸಂದರ್ಭಕ್ಕಾಗಿ ಮಾತ್ರವಲ್ಲ, ಇತರೆ ಕಾರ್ಯಕ್ರಮಗಳಲ್ಲೂ ವಿತರಿಸಲು ಕ್ರಮ ವಹಿಸಲಾಗುವುದು. ಪರಿಶಿಷ್ಟ ಜಾತಿ ಮತ್ತು ಪಂಗಡದವರ ಕುಂದುಕೊರತೆಗಳಿಗೆ ಸಂಬಂಧಿಸಿದಂತೆ ಪ್ರತಿ ತಿಂಗಳಿಗೊಮ್ಮೆ ಸಭೆ ನಡೆಸಿ, ಅಹವಾಲು ಸ್ವೀಕರಿಸಲಾಗುವುದು ಎಂದರು.**


ಉದಯವಾಹಿನಿ ಚಿತ್ರ

**ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ ಅಂಗವಾಗಿ ಏಪ್ರಿಲ್ 13ರಂದು ನಗರದ ಚಳ್ಳಕೆರೆ ರಸ್ತೆಯಿಂದ ಕನಕ ವೃತ್ತದವರೆಗೂ ದೀಪಾಲಂಕಾರಕ್ಕೆ ವ್ಯವಸ್ಥೆ ಮಾಡಿ, ಹಬ್ಬದ ರೀತಿಯಲ್ಲಿ ನಗರವನ್ನು ಅಲಂಕರಿಸಿ, ಜಯಂತಿ ಆಚರಿಸಲಾಗುವುದು. ಸಮಾಜದ ಮುಖಂಡರ ಬೇಡಿಕೆಯಂತೆ ಹೋರಾಟಗಾರರಿಗೆ ಹಾಗೂ ರ‍್ಯಾಂಕ್ ಪಡೆದ, ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿಯಲ್ಲಿ ಅತಿ ಹೆಚ್ಚು ಅಂಕಗಳಿಸಿದ ವಿದ್ಯಾರ್ಥಿಗಳಿಗೆ ಜಿಲ್ಲಾ ಮಟ್ಟದಲ್ಲಿ ಪ್ರಶಸ್ತಿ ನೀಡಲಾಗುವುದು. ಪ್ರತಿ ತಾಲ್ಲೂಕುಗಳಿಂದಲೂ ಪ್ರಶಸ್ತಿಗಾಗಿ ಆಯ್ಕೆ ಮಾಡಲು ಜಿಲ್ಲಾ ಮಟ್ಟದಲ್ಲಿಯೇ ಅಧಿಕಾರಿಗಳು ಹಾಗೂ ಸಮುದಾಯದ ಮುಖಂಡರನ್ನು ಒಳಗೊಂಡಂತೆ ಸಮಿತಿಯನ್ನು ರಚಿಸಲಾಗುವುದು. ಸಮಿತಿ ನೀಡುವ ಶಿಫಾರಸ್ಸಿನಂತೆ ಪ್ರಶಸ್ತಿಗಾಗಿ ಆಯ್ಕೆ ಮಾಡಲಾಗುವುದು -ಜಿಲ್ಲಾಧಿಕಾರಿ**

**ಸಮಾಜದ ಮುಖಂಡರ ಸಲಹೆಗಳು**

**ಮಹನೀಯರ ಜಯಂತಿ ಅಂಗವಾಗಿ ಅರ್ಥಪೂರ್ಣವಾಗಿ ಜಯಂತಿ ಆಚರಿಸುವ ನಿಟ್ಟಿನಲ್ಲಿ ಸಮಾಜದ ಮುಖಂಡರು ಹಲವು ಸಲಹೆ-ಸೂಚನೆಗಳನ್ನು ನೀಡಿದರು.**

## ಮಕ್ಕಳ ಸರ್ವತೋಮುಖ ಬೆಳವಣಿಗೆಗೆ ಬೇಸಿಗೆ ಶಿಬಿರಗಳು ಉತ್ತಮ ವೇದಿಕೆ


ಉದಯವಾಹಿನಿ ಚಿತ್ರ

• ಉದಯವಾಹಿನಿ ಚಿತ್ರದುರ್ಗ

ಬೇಸಿಗೆ ಶಿಬಿರಗಳು ಮಕ್ಕಳ ವ್ಯಕ್ತಿತ್ವವನ್ನು ಅಭಿವೃದ್ಧಿಪಡಿಸಲು ಮತ್ತು ಅವರ ಜ್ಞಾನವನ್ನು ಹೆಚ್ಚಿಸಲು ಒಂದು ಉತ್ತಮ ಅವಕಾಶ. ಆದ್ದರಿಂದ, ಮಕ್ಕಳ ಆಸಕ್ತಿಗೆ ಅನುಗುಣವಾಗಿ ಮನೋರಂಜನಾತ್ಮಕವಾಗಿ ಕಲಿಕೆಯಲ್ಲಿ ತೊಡಗಿಸಿಕೊಳ್ಳುವಂತಾಗಬೇಕು ಎಂದು ಸಮಾಜಸೇವಕಿ ಶ್ರೀಮತಿ ರೂಪಸುರೇಶ್ ಹೊಳಲ್ಕೆರೆಯವರು ಅಭಿಪ್ರಾಯ ಪಟ್ಟಿದ್ದಾರೆ.

ಅವರು ಮಂಗಳವಾರ ಭಾರತೀಯ ಯೋಗ ಶಿಕ್ಷಣ ಸಂಸ್ಥೆ ವತಿಯಿಂದ ನಗರದ ತುರುವನೂರು ರಸ್ತೆಯ ಶ್ರೀ ಪ್ರಸನ್ನ ವೆಂಕಟೇಶ್ವರ ಸ್ವಾಮಿ ದೇವಾಲಯ ಆವರಣದಲ್ಲಿ ಆಯೋಜಿಸಿರುವ ಹತ್ತು ದಿನಗಳ ಮಕ್ಕಳ ಬೇಸಿಗೆ ಶಿಬಿರದ ಉದ್ಘಾಟನಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡುತ್ತಾ ಬೇಸಿಗೆ ರಜೆಯಲ್ಲಿ ಬೇಸಿಗೆ ಶಿಬಿರ ಹೆಸರಿನಲ್ಲಿ ಮಕ್ಕಳಿಗಾಗಿ ಮತ್ತೊಂದು ಶಾಲೆ ತೆರೆಯದೆ ಮಕ್ಕಳ ಮನೋವಿಕಾಸ, ಸ್ವದೇಶಿ ಭಾವ ಜಾಗೃತಿಮೂಡಿಸಿ ಮಕ್ಕಳನ್ನು ಮುಂದಿನ ಸತ್ಪ್ರಜೆಗಳನ್ನಾಗಿ ರೂಪಿಸುವಂತಾಗಬೇಕು ಎಂದು ಹೇಳಿದರು.

ಶ್ರೀಕೃಷ್ಣನ ಭಾವಚಿತ್ರಕ್ಕೆ ಪುಷ್ಪಾರ್ಚನೆಯೊಂದಿಗೆ ಪ್ರಾರಂಭವಾದ ಮಕ್ಕಳ ಶಿಬಿರದಲ್ಲಿ ಶಿಬಿರದ ಮುಖ್ಯ ಶಿಕ್ಷಕಿಯಾದ ಶ್ರೀಮತಿ ನಾಗಲತಾ ಮಾತಾಜೀ ಮಕ್ಕಳಿಗೆ ಶಿಬಿರದ ನಿಯಮಗಳನ್ನು ತಿಳಿಸುವುದರೊಂದಿಗೆ ಅಭಿನಯ ಗೀತೆ, ಪ್ರಾರ್ಥನೆ, ಶ್ಲೋಕಗಳನ್ನು ಹೇಳಿಕೊಟ್ಟರು.

ಶಿಬಿರ ಆಯೋಜಕರಾದ ಭಾರತೀಯ ಯೋಗ ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾದ ರವಿ ಕೆ.ಅಂಬೇಕರ್, ಗೌರವಾಧ್ಯಕ್ಷ ಸತ್ಯಣ್ಣ ಆರ್, ಹಿರಿಯ ಹಿರಿಯ ಯೋಗ ಸಾಧಕರಾದ ವನಜಾಕ್ಷಮ್ಮ, ರೇಣುಕಮ್ಮ, ಸಂಸ್ಥೆಯ ನಿರ್ದೇಶಕರಾದ ಮಲ್ಲಿಕಾರ್ಜುನ ಚಾರ್, ಬಾಲಗೋಕುಲ ಕಾರ್ಯಕ್ರಮಗಳ ಜಿಲ್ಲಾ ಸಂಯೋಜಕರಾದ ದೇವರಾಜ್ ಕೋಟ್ಲ, ಹಾಗೂ ಶಿಬಿರದ ಮಕ್ಕಳು ಪಾಲ್ಗೊಂಡಿದ್ದರು.

**ಬೇಸಿಗೆ ರಜೆಯಲ್ಲಿ ಪೋಷಕರು ತಮ್ಮ ಜವಾಬ್ದಾರಿಯನ್ನು ಕಳೆದುಕೊಳ್ಳಲು ಮಕ್ಕಳನ್ನು ಅಜ್ಜ-ಅಜ್ಜಿಯ ಊರಿಗೆ ಕಳಿಸುವುದು ವಾಡಿಕೆ ಅಜ್ಜ ಅಜ್ಜಿಯರ ಕಾಲಕಳೆಯಲು ಮಕ್ಕಳಿಗೂ ಇಷ್ಟ ಆದರೆ ಬೇಸಿಗೆ ಶಿಬಿರಗಳಿಲ್ಲಿ ದೊರಕುವ ಮಕ್ಕಳಲ್ಲಿ ಆತ್ಮವಿಶ್ವಾಸ, ಮಕ್ಕಳ ಮನೋವಿಕಾಸದ ವಾತಾವರಣ ಅಲ್ಲಿ ಸಿಗುವುದಿಲ್ಲ ಆದ್ದರಿಂದ ಮಕ್ಕಳನ್ನು ಸಾಧ್ಯವಾದಷ್ಟು ಮಕ್ಕಳ ಕಲಿಕೆ ವಯಸ್ಸನ್ನು ಹಾಳುಮಾಡದೆ ಉತ್ತಮ ಶಿಬಿರಕ್ಕೆ ಕಳುಹಿಸಿ ಮಕ್ಕಳ ಸರ್ವತೋಮುಖ ಬೆಳವಣಿಗೆಗೆ ಅವಕಾಶ ಮಾಡಿಕೊಡಬೇಕು**

**-ಶ್ರೀಮತಿ ಮಮತಬೇದ್ರೆ, ಭಾವಸಾರ ಕ್ಷತ್ರಿಯ ಮಹಿಳಾ ಮಂಡಳಿಯ ಅಧ್ಯಕ್ಷೆ**

## ಏಪ್ರಿಲ್ 8ರಂದು ಇಂಡಿಯಲ್ಲಿ ಬೃಹತ್ ಹೋರಾಟ

• ಉದಯವಾಹಿನಿ ಇಂಡಿ

ಹಿಂದೂಪರ ಹೋರಾಟಗಾರ, ಪ್ರಾಮಾಣಿಕ ರಾಜಕಾರಣಿ,ಬಡವರ ಬಂಧು, ಬಸನಗೌಡ ಪಾಟೀಲ್ ಯತ್ನಾಳ್ ಅವರನ್ನು ಬಿಜೆಪಿ ಪಕ್ಷದಿಂದ ಉಚ್ಚಾಟನೆಯನ್ನು ಖಂಡಿತ ಇದೆ ದಿನಾಂಕ 08-04-2025 ರಂದು ಇಂಡಿ ನಗರದಲ್ಲಿ ಬೃಹತ್ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ಇಂಡಿ ತಾಲ್ಲೂಕು ಪಂಚಮಸಾಲಿ ಸಮಾಜ ಘಟಕ ಅಧ್ಯಕ್ಷರಾದ ವಿ ಎಚ್ ಬಿರಾದಾರ ತಿಳಿಸಿದ್ದಾರೆ.

ನಗರದ ಶ್ರೀ ಶಾಂತೇಶ್ವರ ಮಂಗಲ ಕಾರ್ಯದಲ್ಲಿ ಬಸವನಗೌಡ ಪಾಟೀಲ್ ಯತ್ನಾಳ್ ಅವರನ್ನು ಬಿಜೆಪಿ ಪಕ್ಷದಿಂದ ಉಚ್ಚಾಟನೆ ಮಾಡಿರುವುದನ್ನು ರದ್ದುಗೊಳಿಸಬೇಕೆಂದು ಆಗ್ರಹಿಸುವ ಹೋರಾಟದ ಪೂರ್ವಭಾವಿ ಸಭೆಯನ್ನು ಉದ್ದೇಶಿಸಿ ಮಾತನಾಡಿದರು, ಈ ಹೋರಾಟದಲ್ಲಿ ಇಂಡಿ ತಾಲ್ಲೂಕಿನ ಹಿಂದೂ ಪರ ಹೋರಾಟಗಾರರು, ಸಮಾಜ ಬಾಂಧವರು ಹಾಗೂ ಬಸನಗೌಡ ಪಾಟೀಲ್ ಯತ್ನಾಳ್ ಅಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದರು. ಈ ಸಂದರ್ಭದಲ್ಲಿ


ಉದಯವಾಹಿನಿ ಚಿತ್ರ

ಮಾತನಾಡಿದ ಜನ ನಾಯಕ ಶ್ರೀ ದಯಸಾಗರ ಪಾಟೀಲ ಅವರು ಮಾತನಾಡಿ ಬಸನಗೌಡ ಪಾಟೀಲ್ ಯತ್ನಾಳ್ ಅವರು ರಾಜ್ಯದ ಪ್ರಾಮಾಣಿಕ ರಾಜಕಾರಣಿ ಅವರನ್ನು ಪಕ್ಷದಿಂದ ಉಚ್ಚಾಟನೆಯನ್ನು ನಮ್ಮ ಮನಸ್ಸಿಗೆ ಅತಿವ ನೋವುಂಟು ಮಾಡಿದೆ, ಇದನ್ನು ನಾನು ಖಂಡಿಸುತ್ತೇನೆ ಎಂದು ಹೇಳಿದರು, ಈ ಸಭೆಯಲ್ಲಿ ಇಂಡಿ ತಾಲ್ಲೂಕಿನ ಬಹುತೇಕ ಗ್ರಾಮಗಳಿಂದ ಹಿಂದೂ ಕಾರ್ಯಕರ್ತರು ಅಭಿಮಾನಿಗಳು ಆಗಮಿಸಿದರು. ಶಿವಾನಂದ ಚಾಳಿಕಾರ, ಸೋಮು ದೇವರ,ಗಿರಿಮಲ್ಲಗೌಡ ಬಿರಾದಾರ, ರಮೇಶ್ ಕಲ್ಯಾಣಿ ,ವಿನೋದ್ ಹದಗಲ್, ಅಕ್ಷಯ್ ಪಾಟೀಲ್, ಅಕ್ಷಯ್ ಹಿಬಾರೆ,ಆನಂದ್ ದೇವರ, ಪ್ರದೀಪ್ ಪವಾರ, ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಬ್ರಹ್ಮಾವರದಲ್ಲಿ ಅಪಘಾತ: ಚಿಕಿತ್ಸೆ ಫಲಕಾರಿಯಾಗದೆ ಶಾಲಾ ಬಾಲಕ ಸಾವು

• ಉದಯವಾಹಿನಿ ಉಡುಪಿ

ವೇಗವಾಗಿ ಬಂದ ಕಾರೊಂದು ಢಿಕ್ಕಿ ಹೊಡೆದ ಪರಿಣಾಮ ಶಾಲಾ ಬಾಲಕ ಸ್ಥಳದಲ್ಲೇ ಮೃತಪಟ್ಟ ಘಟನೆ ಬ್ರಹ್ಮಾವರದ ಮಹೇಶ್ ಆಸ್ಪತ್ರೆ ಜಂಕ್ಷನ್‌ನಲ್ಲಿ ನಡೆದಿದೆ.

ಮೃತ ವಿದ್ಯಾರ್ಥಿಯನ್ನು ವಂಶಿ ಜಿ ಶೆಟ್ಟಿ ಎಂದು ಗುರುತಿಸಲಾಗಿದೆ. ಬಾಲಕ ರಸ್ತೆ ದಾಟುತ್ತಿದ್ದಾಗ ಈ ಅಪಘಾತ ಸಂಭವಿಸಿದೆ. ತಕ್ಷಣ ಆತನನ್ನು ಮಹೇಶ್ ಆಸ್ಪತ್ರೆಗೆ ದಾಖಲಿಸಲಾಯಿತಾದರೂ, ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿದ್ದಾನೆ. ಘಟನೆಯ ಬಳಿಕ ಆಸ್ಪತ್ರೆಯ ಬಳಿ ದೊಡ್ಡ ಸಂಖ್ಯೆಯಲ್ಲಿ ಜನರು ಜಮಾಯಿಸಿದ್ದರು. ಮಹೇಶ್ ಆಸ್ಪತ್ರೆ ಜಂಕ್ಷನ್ ಅಪಘಾತ ವಲಯವಾಗಿದ್ದು, ಇಲ್ಲಿ ಈ ಹಿಂದೆ ಹಲವು ಮಾರಣಾಂತಿಕ ಅಪಘಾತಗಳು ಸಂಭವಿಸಿವೆ. ಈ ಜಂಕ್ಷನ್‌ನಲ್ಲಿ ಸುರಕ್ಷತೆಯನ್ನು ಹೆಚ್ಚಿಸಲು ಶಾಶ್ವತ ಪರಿಹಾರವನ್ನು ಒದಗಿಸುವಂತೆ ಸ್ಥಳೀಯರು ಒತ್ತಾಯಿಸಿದ್ದಾರೆ.

## ಪ್ರತ್ಯೇಕ ಅಪಘಾತ: ಇಬ್ಬರು ಮಹಿಳೆಯರ ಸಾವು

• ಉದಯವಾಹಿನಿ ಕಲಬುರಗಿ

ಸಂಚಾರಿ ಪೊಲೀಸ್ ಠಾಣೆ ವ್ಯಾಪ್ತಿಯ ಹಸನಾಪೂರ ಕ್ರಾಸ್ ಹತ್ತಿರ ಮತ್ತು ಫರಹತಾಬಾದ ಹಳ್ಳದ ಹತ್ತಿರ ನಡೆದ ಪ್ರತ್ಯೇಕ ರಸ್ತೆ ಅಪಘಾತದಲ್ಲಿ ಇಬ್ಬರು ಮಹಿಳೆಯರು ಮೃತಪಟ್ಟಿದ್ದಾರೆ. ಜೇವರ್ಗಿ-ಕಲಬುರಗಿ ರಸ್ತೆಯ ಹಸನಾಪೂರ ಕ್ರಾಸ್ ಹತ್ತಿರ ರಸ್ತೆ ದಾಟುವಾಗ ಅಪರಿಚಿತ ವಾಹನ ಡಿಕ್ಕಿ ಹೊಡೆದು ಸಿದ್ದಲಿಂಗಮ್ಮ ಎಂಬುವವರು ಮೃತಪಟ್ಟಿದ್ದು, ಕಡಣಿ ಗ್ರಾಮಕ್ಕೆ ಬೈಕ್ ಮೇಲೆ ಹೋಗುತ್ತಿದ್ದಾಗ ಫರಹತಾಬಾದ ಹಳ್ಳದ ಬಳಿ ಬೈಕ್ ಮೇಲಿಂದ ಬಿದ್ದು ಗುಂಡಮ್ಮ ಎಂಬುವವರು ಮೃತಪಟ್ಟಿದ್ದಾರೆ. ಈ ಬಗ್ಗೆ ಸಂಚಾರಿ ಪೊಲೀಸ್ ಠಾಣೆ-1ರಲ್ಲಿ ಪ್ರತ್ಯೇಕ ಪ್ರಕರಣ ದಾಖಲಾಗಿದ್ದು, ತನಿಖೆ ನಡೆದಿದೆ.

## ಕಮಲಾಪುರದಲ್ಲಿ ಸೇವಾಲಾಲ್ ಜಯಂತೋತ್ಸವ ಮರಿಯಮ್ಮದೇವಿಯ ಜಾತ್ರಾಮಹೋತ್ಸವ

• ಉದಯವಾಹಿನಿ ಹೊಸಪೇಟೆ

ಶ್ರೀ ಮರಿಯಮ್ಮದೇವಿ ಜಾತ್ರಮಹೋತ್ಸವ ಹಾಗೂ ಸೇವಾಲಾಲ್ ಜಯಂತೋತ್ಸವ ನಿಮತ್ತ ತಾಲ್ಲೂಕಿನ ಕಮಲಾಪುರದಲ್ಲಿ ಅದ್ದೂರಿ ಮೆರವಣಿಗೆ ನಡೆಯಿತು. ಭವ್ಯವಾದ ಶ್ರೀ ಸೇವಲಾಲ್ ಮಹಾರಾಜರ ಭಾವಚಿತ್ರ ಮೆರವಣಿಗೆ ಕಮಲಾಪುರ ಪುರಸಭೆ ಸದಸ್ಯೆ ಜ್ಯೋತಿಬಾಯಿ ಚಾಲನೆ ನೀಡಿ ಮಾತನಾಡಿ, ನೊಂದವರ ಕಣ್ಣೀರು ಒರೆಸಿ, ಆತ್ಮಸ್ಥೈರ್ಯ ತುಂಬುತ್ತಿದ್ದ ಸೇವಾಲಾಲ ಮಹಾರಾಜರು ಬಂಜಾರ ಸಮುದಾಯಕ್ಕೆ ಮಾತ್ರ ಸೀಮಿತವಾಗದೆ ಎಲ್ಲರಿಗೂ ಸೇವೆ ಸಲ್ಲಿಸುವ ಮೂಲಕ ಮಾನವೀಯತೆಯ ನೈಜ ಸೇವಕರಾಗಿದ್ದರು. ಅವರ ತತ್ವಗಳು ಮತ್ತು ಆದರ್ಶಗಳು ಸದಾ ನಮ್ಮೆಲ್ಲರಿಗೂ ಮಾರ್ಗದರ್ಶನವಾಗಿದೆ , ಹಾಗೂ ಬಂಜಾರ ಸಮಾಜದ ಶ್ರೇಷ್ಠ ದಾರ್ಶನಿಕರಾದ ಸೇವಾಲಾಲ ಮಹಾರಾಜರು, ತಮ್ಮ ಆದರ್ಶ ಮತ್ತು ತತ್ವಗಳ ಮೂಲಕ ಸಮಾಜದ ಸಮಗ್ರ ಅಭಿವೃದ್ಧಿಗೆ ಶ್ರೇಷ್ಠ ಕೊಡುಗೆ ನೀಡಿದ ಮಹಾನ್ ಪುರುಷರು. ಅವರ ಜೀವನ ಸಂದೇಶ ಸಹ ನಾವು ಕೈಗೊಳ್ಳಬೇಕಾದ ಮಾರ್ಗದರ್ಶನವಾಗಿದೆ ಎಂದರು.

ಜಯಂತೋತ್ಸವದಲ್ಲಿ ಯುವಕರು ಹೆಜ್ಜೆ ಹಾಕ್ಕಿದರು. ಕೋಟೆ ಆಂಜನೇಯ ದೇಗುಲದಿಂದ ಅಂಬೇಡ್ಕರ್ ವೃತ್ತ, ಕೃಷ್ಣಾ ದೇವಾರಾಯ ವೃತ್ತ, ಸೇವಾಲಾಲ್ ವೃತ್ತದ ಮಾರ್ಗವಾಗಿ ಕೆರೆತಾಂಡಾದ ಅವರೆಗೆ ಅದ್ದೂರಿ ಮೆರವಣಿಗೆ ನಡೆಯಿತು.



ಉದಯವಾಹಿನಿ ಚಿತ್ರ

## ಬಹುಗ್ರಾಮ ಯೋಜನೆ ಕಾಮಗಾರಿ ಎಡವಟ್ಟು

### ಚರಂಡಿ-ಮೋರಿಗೆ ಮಣ್ಣು ಮಳೆಗಾಲಕ್ಕೆ ಅಪಾಯ

• ಉದಯವಾಹಿನಿ ಪುತ್ತೂರು

ಬಹುಗ್ರಾಮ ಕುಡಿಯುವ ನೀರು ಯೋಜನೆಯ ಹಿನ್ನಲೆಯಲ್ಲಿ ರಸ್ತೆ ಬದಿಯಲ್ಲಿ ನಡೆಸುತ್ತಿರುವ ಪೈಪ್‌ಲೈನ್ ಅಳವಡಿಕೆಯ ಕಾಮಗಾರಿ ಅನೇಕ ಎಡವಟ್ಟುಗಳನ್ನು ಮಾಡುತ್ತಿದೆ. ಬನ್ನೂರು ಗ್ರಾಪಂ ವ್ಯಾಪ್ತಿಯ ಪಡ್ನೂರು ದೇವಿನಗರದ ಕಜೆ ಎಂಬಲ್ಲಿ ಮಳೆಗಾಲದ ನೀರು ಹೋಗುವ ಚರಂಡಿಗೆ ಮಣ್ಣು ತುಂಬಿಸಿ ಮತ್ತೊಂದು ಅವಾಂತರ ಸೃಷ್ಟಿ ಮಾಡಿದ್ದಾರೆ. ಜನತೆಯ ಶುದ್ಧ ಕುಡಿಯುವ ನೀರು ಕೊಡುವ ಮಹತ್ವಾಕಾಂಕ್ಷಿ ಯೋಜನೆ ಇದಾಗಿದ್ದು, ಇದರ ಕಾಮಗಾರಿ ವಹಿಸಿಕೊಂಡಿರುವ ಗುತ್ತಿಗೆದಾರರ ನಿರ್ಲಕ್ಷ್ಯದಿಂದ ಹಲವು ಕಡೆಗಳಲ್ಲಿ ಸಮಸ್ಯೆಗಳು ಉಂಟಾಗುತ್ತಿದೆ. ಲೋಕೋಪಯೋಗಿ ಇಲಾಖೆ


ಉದಯವಾಹಿನಿ ಚಿತ್ರ

ಹಾಗೂ ಪೈಪ್‌ಲೈನ್ ಹಾದುಹೋಗುವ ಗ್ರಾಪಂ ವ್ಯಾಪ್ತಿಗಳಲ್ಲಿ ರಸ್ತೆ ಬದಿಗಳಲ್ಲಿ ಪೈಪ್‌ಲೈನ್ ಅಳವಡಿಕೆ ಮಾಡಲು ಅನುಮತಿ ಪಡೆದುಕೊಳ್ಳಬೇಕಾಗಿರುತ್ತದೆ. ಆದರೆ ಈ ಗುತ್ತಿಗೆದಾರರು ಯಾವುದೇ ಅನುಮತಿಯನ್ನು ಪಡೆದುಕೊಳ್ಳದೆ ರಸ್ತೆ ಬದಿಯಲ್ಲಿ ಅಗೆತ ನಡೆಸುತ್ತಿದ್ದಾರೆ. ಈ ಬಗ್ಗೆ ಗಮನ ಹರಿಸದೆ ಬೇಕಾಬಿಟ್ಟಿ ಕಾಮಗಾರಿ ನಡೆಸಲಾಗುತ್ತಿದೆ.

**ಮಳೆಗಾಲದಲ್ಲಿ ಸಮಸ್ಯೆ**

**ಪೈಪ್‌ಲೈನ್‌ಗೆ ಆಳವಾದ ಚರಂಡಿ ತೆಗೆದು ಅದಕ್ಕೆ ಸಡಿಲ ಮಣ್ಣು ತುಂಬಿಸಿ ಬಿಡುವ ಈ ಕಾಮಗಾರಿಯಿಂದ ಮಳೆಗಾಲದಲ್ಲಿ ಮತ್ತೊಂದಷ್ಟು ಸಮಸ್ಯೆಗಳನ್ನು ಜನತೆ ಎದುರಿಸುವಂತಾಗುತ್ತದೆ. ಗ್ರಾಮೀಣ ಭಾಗದ ಕಾಂಕ್ರೀಟ್ ರಸ್ತೆಗಳ ಬದಿಯಲ್ಲಿಯೇ ಪೈಪ್‌ಲೈನ್‌ಗಾಗಿ ಚರಂಡಿ ಮಾಡಲಾಗಿದೆ. ಮಳೆಗಾಲದಲ್ಲಿ ಮಣ್ಣು ಸಿಂಕ್ ಆಗಿ ದ್ವಿಚಕ್ರ ವಾಹನಗಳು ಅಪಾಯಕ್ಕೆ ಸಿಲುಕುವ ಸಾಧ್ಯತೆ ಹೆಚ್ಚಾಗಿದೆ.**


## ದಾಸಿಮಯ್ಯ ವಚನ ಸರ್ವಕಾಲಿಕ : ಗುರಮಿಠಕಲ್

• ಉದಯವಾಹಿನಿ ಕಾಳಗಿ

ಆದ್ಯ ವಚನಕಾರ ದಾಸಿಮಯ್ಯನವರು 12ನೇ ಶತಮಾನದಲ್ಲಿ ಮೊಟ್ಟ ಮೊದಲು ಶರಣರ ಚಳವಳಿ ಕಟ್ಟುವ ಮೂಲಕ ಮಾನವೀಯ ಮೌಲ್ಯ ಬಿತ್ತಿದ ಶ್ರೇಷ್ಠ ವಚನಕಾರ ಎಂದು ದೇವಾಂಗ ಸಮಾಜದ ಮುಖಂಡ ಹಾಗೂ ಐದನೇ ವಾರ್ಡ್,ನ ಬಿಜೆಪಿ ಆಕಾಂಕ್ಷಿ ಶ್ರೀನಿವಾಸ್ ಗುರಮಿಠಕಲ್ ಹೇಳಿದರು.

ಪಟ್ಟಣದ ಬನಶಂಕರಿ ದೇವಸ್ಥಾನದಲ್ಲಿ ಬುಧವಾರ ದೇವಾಂಗ ಸಮಾಜದ ವತಿಯಿಂದ ನಡೆದ ದೇವರ ದಾಸಿಮಯ್ಯ ಜಯಂತಿಯಲ್ಲಿ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿದರು.

ವರ್ಗ, ವರ್ಣ, ಲಿಂಗ ಅಸಮಾನತೆ ಹೋಗಲಾಡಿಸಿ ಸಮಾನತೆ ತಂದವರು. ಬಸವಣ್ಣ ಸೇರಿದಂತೆ ಇತರೆ ವಚನಕಾರರಿಗೆ ದಾಸಿಮಯ್ಯ ಪ್ರೇರಕ ಶಕ್ತಿ ಆಗಿದ್ದರು. ಅವರ ವಚನಗಳು ಸಮಾಜಕ್ಕೆ


ಉದಯವಾಹಿನಿ ಚಿತ್ರ

ಅತ್ಯಂತ ಅವಶ್ಯ. ದಾಸಿಮಯ್ಯ ಪ್ರಥಮ ಶರಣ. ನೇಕಾರರು, ಹಟಗಾರರು, ಜೇಡರು ಹಾಗೂ ದೇವಾಂಗ ಜನಾಂಗ ವೃತ್ತಿಯಿಂದ ನೇಕಾರಿಕೆ ಮಾಡಿಕೊಂಡು ಬಂದಿದ್ದಾರೆ.

ಆ ಪರಂಪರೆ ಜೇಡರ ದಾಸಿಮಯ್ಯನಿಂದ ಫ.ಗು. ಹಳಕಟ್ಟಿ ಮತ್ತು ಪ್ರಥಮ ಆಧುನಿಕ ವಚನಕಾರ ಆದಿ ಮಾತೆಪ್ಪನವರು ಈ ಜನಾಂಗದ ಪ್ರಮುಖ ಶರಣರಾಗಿದ್ದಾರೆ. ಅವರ ವಚನಗಳು ಸಾರ್ವಕಾಲಿಕ ಎಂದು ಹೇಳಿದರು.

### ಹೊರ ದೇಶ ಹೊರ ರಾಜ್ಯಗಳಲ್ಲಿ ಉನ್ನತ ಸ್ಥಾನವನ್ನು ಪಡೆಯಲು ಇಂಗ್ಲಿಷ್ ಅನಿವಾರ್ಯ: ಮಹಾಂತಗೌಡ

## ಬಿಎಎಸ್ ಟ್ಯಾಲೆಂಟ್ ಅವಾರ್ಡ್ ಎಕ್ಸಾಂ 2025: 25 ಲಕ್ಷ ರೂ. ಶಿಷ್ಯವೇತನ ಗೆಲ್ಲುವ ಅವಕಾಶ

• ಉದಯವಾಹಿನಿ ಮುದ್ದೇಬಿಹಾಳ

ಮುದ್ದೇಬಿಹಾಳ ಪಟ್ಟಣ ಹೊರವಲಯದ ಆಲಮಟ್ಟಿ ರಸ್ತೆಯ ಹಡಲಗೇರಿ ಸೀಮೆಯಲ್ಲಿ ಬರುವ ಬಿಎಎಸ್ ಇಂಟರ್ನ್ಯಾಷನಲ್ ಸ್ಕೂಲ್ ನಲ್ಲಿ ಏಪ್ರಿಲ್ 6 ರವಿವಾರ ಬಿ ಎ ಎಸ್ ಟ್ಯಾಲೆಂಟ್ ಅವಾರ್ಡ್ ಎಕ್ಸಾಂ ಏರ್ಪಡಿಸಲಾಗಿದೆ ಎಂದು ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷ ಮಹಾಂತಗೌಡ ಬಿರಾದಾರ ತಿಳಿಸಿದರು.

ಬುಧುವಾರ ತಮ್ಮ ಬಿಎಎಸ್ ನೂತನ ಶಾಲೆಯಲ್ಲಿ ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿದರು ಬಿಎಎಸ್ ಎಂದರೆ ಬಿಲೀವ್ ಆಚೀವ್ ಸಕ್ಸಿಡ್ ಅಂತ ಅರ್ಥ ನಮ್ಮ ಉ.ಕ ಭಾಗದ ಮಕ್ಕಳಿಗೆ ಇಂಗ್ಲಿಷ್ ಎಂದರೆ ಕಬ್ಬಿಣದ ಕಡಲೆ ಇದ್ದಂತೆ ಹೀಗಾಗಿ ನಮ್ಮ ಭಾಗದ ಮಕ್ಕಳು ಇಂಗ್ಲಿಷ್ ಕಲಿಯಬೇಕು ಅವರು ಹೊರ ದೇಶ ಹೊರ ರಾಜ್ಯಗಳಲ್ಲಿ ಉನ್ನತ ಸ್ಥಾನವನ್ನು ಪಡೆಯಲು ಇಂಗ್ಲಿಷ್ ಅನಿವಾರ್ಯತೆ ಇದೆ ಎಂದು ಸಿಬಿಎಸ್ ಇಂಗ್ಲಿಷ್ ಮೀಡಿಯಂ ಶಾಲೆ ಆರಂಭಿಸುತ್ತಿದ್ದೇವೆ ಎಂದರು. ರವಿವಾರದಂದು ನಡೆಯುವ ಟ್ಯಾಲೆಂಟ್ ಅವಾರ್ಡ್ ಎಕ್ಸಾಂ ಕನ್ನಡ ಮತ್ತು ಆಂಗ್ಲ ಮಾಧ್ಯಮದ 48 ನೇ ತರಗತಿಯ ವಿದ್ಯಾರ್ಥಿಗಳು ಬರೆಯಬಹುದು ಮಕ್ಕಳಿಗೆ ಗುಣಾತ್ಮಕ ಶಿಕ್ಷಣದ ಪರಿಕಲ್ಪನೆ ನೀಡುವ ಉದ್ದೇಶದಿಂದ ಈ ಪರೀಕ್ಷೆ ಏರ್ಪಡಿಸಲಾಗಿದೆ ಪರೀಕ್ಷೆಯಲ್ಲಿ ರ?ಯಾಂಕ್ ಬಂದ ವಿದ್ಯಾರ್ಥಿಗಳಿಗೆ ಶಾಲಾ ಶುಲ್ಕದಲ್ಲಿ ವಿನಾಯಿತಿ ನೀಡಲಾಗುತ್ತದೆ ಎಂದು ಸಂಸ್ಥೆಯ ವ್ಯವಸ್ಥಾಪಕ ಬಿರಾದಾರ ಹಾಗೂ ಪ್ರಾಂಶುಪಾಲ ಶ್ರೀಮತಿ ಸುಪರ್ಣ ದಾಸ ಮತ್ತು ಶಿಕ್ಷಕ ಮಿಥುಬ್ ದಾಸ್ ಹೇಳಿದರು ಶಾಲೆಯಲ್ಲಿ ಹೊರಾಂಗಣ ಒಳಗಾಂಗಣ ಕ್ರೀಡಾ ಮೈದಾನ ಮತ್ತು ಸ್ಪರ್ಧಾತ್ಮಕ ಪರೀಕ್ಷೆ ತಯಾರಿ ಮತ್ತು ಯಾವ ಮಗು ಯಾವ ವಿಷಯದಲ್ಲಿ ಯಾವ ಕ್ರೀಡೆಯಲ್ಲಿ ಉತ್ಸುಕರಾಗಿದ್ದನ್ನು ಗುರುತಿಸಿ ಅದರಲ್ಲಿ ಸಾಧನೆ ಮಾಡುವ ಪ್ರೋತ್ಸಾಹ ನೀಡಲಾಗುತ್ತದೆ ಎಂದರು .

ಆಧುನಿಕತೆಯ ಸೌಲಭ್ಯಗಳನ್ನು ಹೊಂದಿರುವ ಬಿಎಎಸ್ ಇಂಟರ್ನ್ಯಾಷನಲ್ ಸ್ಕೂಲ್ ತನ್ನದೆಯಾದ ಶಾಲೆಯ ಆ್ಯಪ್ ರಚನೆ ಮಾಡಿಕೊಂಡಿದ್ದು ಶಾಲಾ ಕ್ಯಾಂಪಸ್ ನಲ್ಲಿ ಮಕ್ಕಳು ಬರುವ ಹಾಗೂ ಹೋಗುವ ಕುರಿತು ಮಾಹಿತಿ ಪಾಲಕರಿಗೆ ಸಂಸ್ಥೆಯಯವರಿಗೆ ನೀಡುತ್ತದೆ ಮತ್ತು ಶಾಲಾ ಬಸ್ ಎಲ್ಲಿದೆ ಎಂದು ಟ್ರ್ಯಾಕಿಂಗ್ ಮೂಲಕ ತಿಳಿಯಬಹುದು ಏನಾದರೂ ಅಡಚಣೆಯಾದರೆ ಪಾಲಕರ ಮೊಬೈಲ್ ಗೆ ವೈಸ್ ಮಸೇಜ್ ಬರುತ್ತದೆ ಇದೆ ರೀತಿಯಲ್ಲಿ ಶಾಲಾ ಶಿಕ್ಷಕರಿಂದ ಮಕ್ಕಳ ಹೋಮ್ ವರ್ಕ್ ತಿಳಿಯಬಹುದಾಗಿದೆ.



ಉದಯವಾಹಿನಿ ಚಿತ್ರ

**ನಾನು ಕಳದೆ 25 ವರ್ಷಗಳಿಂದ ಬೆಂಗಳೂರಿನಲ್ಲಿ ನೆಲೆನಿಂತು ಶಿಕ್ಷಣ ಸಂಸ್ಥೆಗಳಲ್ಲಿ ಹೆಚ್ಚು ಅನುಭವ ಹೊಂದಿರುವೆ ಹುಟ್ಟಿ ಬೆಳೆದ ಊರು ತಾಲ್ಲೂಕಿನಲ್ಲಿ ನನ್ನಿಂದಾಗುವ ಸೇವೆ ಸಲ್ಲಿಸಲು ಈ ಸಂಸ್ಥೆ ಆರಂಭಿಸಿದ್ದೇನೆ ಹೆಚ್ಚಿನ ಶುಲ್ಕ ಮಾಡಿಲ್ಲ ಎಐ ಟೆಕ್ನಾಲಜಿ ಯುಗದಲ್ಲಿ ಹೇಗೆ ಗುಣಮಟ್ಟದ ಶಿಕ್ಷಣ ನೀಡಬೇಕು ಎಂದು ಈ ಸಂಸ್ಥೆ ಮಾಡಿದ್ದೇವೆ -ಮಹಾಂತಗೌಡ ಬಿರಾದಾರ, ಅಧ್ಯಕ್ಷರು**

**ರ‍್ಯಾಂಕ್ ಬಂದ ವಿದ್ಯಾರ್ಥಿಗಳಿಗೆ ಪ್ರವೇಶಾತಿಯಲ್ಲಿ ವಿನಾಯಿತಿ**

**1 ರಿಂದ 10 ನೇ ರ‍್ಯಾಂಕ್ ಬಂದ ವಿದ್ಯಾರ್ಥಿಗಳಿಗೆ 20% ವಿನಾಯಿತಿ, 15 ರಿಂದ 25 ರ‍್ಯಾಂಕ್ ಬಂದ ವಿದ್ಯಾರ್ಥಿಗಳಿಗೆ 15% ವಿನಾಯಿತಿ, 25 ರಿಂದ 40 ರ‍್ಯಾಂಕ್ ಬಂದ ವಿದ್ಯಾರ್ಥಿಗಳಿಗೆ 10% ವಿನಾಯಿತಿ, 40 ರಿಂದ 60 ರ‍್ಯಾಂಕ್ ಬಂದ ವಿದ್ಯಾರ್ಥಿಗಳಿಗೆ 5% ರಿಯಾಯಿತಿ ಇರುತ್ತದೆ ಪರೀಕ್ಷೆ ಎಪ್ರಿಲ್ 6 ರವಿವಾರ ಬೆಳಿಗ್ಗೆ 10 ನಡೆಯುತ್ತವೆ.**

## ತವರಿನಲ್ಲಿ 4 ಟೆಸ್ಟ್, 3 ಏಕದಿನ ಮತ್ತು 5 ಟಿ20 ಪಂದ್ಯಗಳನ್ನು ಆಡಲಿದೆ ಟೀಂ ಇಂಡಿಯಾ



ಒಂದೆಡೆ ಭಾರತದಲ್ಲಿ ಮಿಲಿಯನ್ ಡಾಲರ್ ಟೂರ್ನಿ ಐಪಿಎಲ್‌ನ ಉತ್ಸಾಹ ಮುಗಿಲು ಮುಟ್ಟಿದ್ದರೆ, ಇನ್ನೊಂದೆಡೆ ಬಿಸಿಸಿಐ ಐಪಿಎಲ್ ಮುಗಿದ ನಂತರ 2025 ರಲ್ಲಿ ಟೀಂ ಇಂಡಿಯಾ ತನ್ನ ತವರಿನಲ್ಲಿ ಆಡುವ ಸರಣಿಗಳ ವೇಳಾಪಟ್ಟಿಯನ್ನು ಪ್ರಕಟಿಸಿದೆ. ಬಿಸಿಸಿಐ ಪ್ರಕಟಿಸಿರುವ ವೇಳಾಪಟ್ಟಿಯ ಪ್ರಕಾರ, ಟೀಂ ಇಂಡಿಯಾ 4 ಟೆಸ್ಟ್, 3 ಏಕದಿನ ಮತ್ತು 5 ಟಿ20 ಪಂದ್ಯಗಳನ್ನು ಆಡಲಿದೆ. ಬಿಸಿಸಿಐ 2025 ರ ದೇಶೀಯ ಸೀಸನ್ ವೇಳಾಪಟ್ಟಿಯನ್ನು ಬಿಡುಗಡೆ ಮಾಡಿದೆ. ಇದರ ಪ್ರಕಾರ ಟೀಂ ಇಂಡಿಯಾ ವೆಸ್ಟ್ ಇಂಡೀಸ್ ಮತ್ತು ದಕ್ಷಿಣ ಆಫ್ರಿಕಾ ವಿರುದ್ಧ ಟೆಸ್ಟ್, ಏಕದಿನ ಮತ್ತು ಟಿ20 ಪಂದ್ಯಗಳನ್ನು ಆಡಲಿದೆ. ಈ ಸೀಸನ್ ಅಕ್ಟೋಬರ್ 2 ರಿಂದ ಪ್ರಾರಂಭವಾಗಿ ಡಿಸೆಂಬರ್ 19 ರವರೆಗೆ ನಡೆಯಲಿದ್ದು, ಇದರಲ್ಲಿ ಪಂದ್ಯಗಳು ಅನೇಕ ಹೊಸ ಮತ್ತು ಸಾಂಪ್ರದಾಯಿಕ ಮೈದಾನಗಳಲ್ಲಿ ನಡೆಯಲಿವೆ.

**ವೆಸ್ಟ್ ಇಂಡೀಸ್ ತಂಡದ ಭಾರತ ಪ್ರವಾಸ:** ಭಾರತ ತಂಡದ ದೇಶೀ ಸೀಸನ್ ಟೆಸ್ಟ್ ಸರಣಿಯೊಂದಿಗೆ ಪ್ರಾರಂಭವಾಗಲಿದ್ದು, ಇದರಲ್ಲಿ ವೆಸ್ಟ್ ಇಂಡೀಸ್ ವಿರುದ್ಧ ಎರಡು ಟೆಸ್ಟ್ ಪಂದ್ಯಗಳು ನಡೆಯಲಿವೆ. ಮೊದಲ ಟೆಸ್ಟ್ ಅಕ್ಟೋಬರ್ 2 ರಿಂದ ಅಕ್ಟೋಬರ್ 6 ರವರೆಗೆ ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ನಡೆಯಲಿದ್ದು, ಎರಡನೇ ಟೆಸ್ಟ್ ಅಕ್ಟೋಬರ್ 10 ರಿಂದ ಅಕ್ಟೋಬರ್ 14 ರವರೆಗೆ ಕೋಲ್ಕತ್ತಾದ ಈಡನ್ ಗಾರ್ಡನ್ಸ್‌ನಲ್ಲಿ ನಡೆಯಲಿದೆ.

**ದಕ್ಷಿಣ ಆಫ್ರಿಕಾದ ಭಾರತ ಪ್ರವಾಸ:** ವೆಸ್ಟ್ ಇಂಡೀಸ್ ನಂತರ, ಭಾರತ ತಂಡವು ಮೂರು ಸ್ವರೂಪಗಳಲ್ಲಿ ದಕ್ಷಿಣ ಆಫ್ರಿಕಾ ವಿರುದ್ಧ ಕಣಕ್ಕಿಳಿಯಲಿದೆ. ಉಭಯ ತಂಡಗಳ ನಡುವೆ ಟೆಸ್ಟ್, ಏಕದಿನ ಮತ್ತು ಟಿ20 ಸರಣಿಗಳು ನಡೆಯಲ್ಲಿವೆ. ಎರಡೂ ತಂಡಗಳು 2 ಟೆಸ್ಟ್, 3 ಏಕದಿನ ಮತ್ತು 5 ಟಿ20 ಪಂದ್ಯಗಳನ್ನು ಆಡಲಿವೆ. ದಕ್ಷಿಣ ಆಫ್ರಿಕಾದ ಭಾರತ ಪ್ರವಾಸವು ನವೆಂಬರ್ 14 ರಿಂದ ಟೆಸ್ಟ್ ಸರಣಿಯೊಂದಿಗೆ ಪ್ರಾರಂಭವಾಗಲಿದೆ. ಮೊದಲ ಟೆಸ್ಟ್ ಪಂದ್ಯವು ನವೆಂಬರ್ 14 ರಂದು ದೆಹಲಿಯಲ್ಲಿ ನಡೆಯಲಿದೆ. ಎರಡನೇ ಮತ್ತು ಅಂತಿಮ ಪಂದ್ಯವು ನವೆಂಬರ್ 22 ರಿಂದ ಗುವಾಹಟಿಯಲ್ಲಿ ನಡೆಯಲಿದೆ. ಗುವಾಹಟಿಯಲ್ಲಿ ಟೆಸ್ಟ್ ಪಂದ್ಯ ನಡೆಯುತ್ತಿರುವುದು ಇದೇ ಮೊದಲು.

## ತವರಿನಲ್ಲೇ ಆರ್‌ಸಿಬಿಗೆ ಸೋಲು



ಗೆದ್ದು ಬೀಗಿದ ಗುಜರಾತ್ ಟೈಟನ್ಸ್!

ಐಪಿಎಲ್ 2025ರ ಟೂರ್ನಿಯಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು (ಖಅಃ) ಇಂದು ತವರಿನಲ್ಲಿ ಮೊದಲ ಪಂದ್ಯವನ್ನಾಡಿದ್ದು ಗುಜರಾತ್ ಟೈಟನ್ಸ್ ವಿರುದ್ಧ ಸೋಲು ಕಂಡಿದೆ.

ಎಂ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆದ ಈ ಪಂದ್ಯದಲ್ಲಿ, ಗುಜರಾತ್ ಟೈಟಾನ್ಸ್ ಟಾಸ್ ಗೆದ್ದು ಮೊದಲು ಬೌಲಿಂಗ್ ಆಯ್ಕೆ ಮಾಡಿಕೊಂಡಿತು. ಹೀಗಾಗಿ ಮೊದಲು ಬ್ಯಾಟಿಂಗ್ ಮಾಡಿದ ಆರ್ ಸಿಬಿ ಪರ ಲಿಯಾಮ್ ಲಿವಿಂಗ್‌ಸ್ಟೋನ್ ಅವರ ಅದ್ಭುತ ಅರ್ಧಶತಕದ ನೆರವಿನಿಂದ ಖಅಃ ಗುಜರಾತ್ ಟೈಟಾನ್ಸ್ ವಿರುದ್ಧ 169 ರನ್ ಪೇರಿಸಿತ್ತು. ತಂಡವು 20 ಓವರ್‌ಗಳಲ್ಲಿ ಎಂಟು ವಿಕೆಟ್‌ಗಳ ನಷ್ಟಕ್ಕೆ 169 ರನ್ ಗಳಿಸಿದ್ದು ಗುಜರಾತ್ ಟೈಟಾನ್ಸ್‌ಗೆ 170 ರನ್‌ಗಳ ಸ್ಪರ್ಧಾತ್ಮಕ ಗುರಿ ನೀಡಿತ್ತು. ಈ ಗುರಿ ಬೆನ್ನಟ್ಟಿದ ಟೈಟನ್ಸ್ ಗೆಲುವಿನ ನಗೆ ಬೀರಿದೆ.

ಆರಂಭಿಕ ಓವರ್‌ಗಳಲ್ಲಿ ಟೈಟನ್ಸ್ ಬೌಲರ್‌ಗಳಾದ ಅರ್ಷದ್ ಖಾನ್ ಮತ್ತು ಮೊಹಮ್ಮದ್ ಸಿರಾಜ್ ಆರ್‌ಸಿಬಿ ಬ್ಯಾಟಿಂಗ್ ಲೈನ್‌ಅಪ್ ಅನ್ನು ನಾಶಪಡಿಸಿದ್ದರು. ಮೊದಲು ವಿರಾಟ್ ಕೊಹ್ಲಿ 7 ರನ್ ಗಳಿಸಿ ಔಟಾದರು, ದೇವದತ್ ಪಡಿಕ್ಕಲ್ ಕೂಡ 4 ರನ್ ಗಳಿಸಿ ಔಟಾದರು. ಫಿಲ್ ಸಾಲ್ಟ್ ಮತ್ತು ನಾಯಕ ರಜತ್ ಪಾಟಿದಾರ್ ಸ್ವಲ್ಪ ಸಮಯ ಕ್ರೀಸ್‌ನಲ್ಲಿ ಇದ್ದರು, ಆದರೆ ಅವರು ಕೂಡ ಕ್ರಮವಾಗಿ 14 ಮತ್ತು 12 ರನ್ ಗಳಿಸಿ ಔಟಾದರು. ಆರ್‌ಸಿಬಿಯ ಸ್ಥಿತಿ ಎಷ್ಟು ಕೆಟ್ಟದಾಗಿತ್ತು ಎಂದರೆ ತಂಡದ ಮೊದಲ ನಾಲ್ವರು ಬ್ಯಾಟ್ಸ್‌ಮನ್‌ಗಳು 42 ರನ್‌ಗಳಿಗೆ ಔಟಾದರು. ವಿರಾಟ್ ಕೊಹ್ಲಿ ಮತ್ತು ರಜತ್ ಪಾಟಿದಾರ್ ಸೇರಿದಂತೆ ಎಲ್ಲಾ ಪ್ರಸಿದ್ಧ ಆಟಗಾರರು ವಿಫಲರಾದರು.

ಏತನ್ಮಧ್ಯೆ, ಲಿಯಾಮ್ ಲಿವಿಂಗ್‌ಸ್ಟೋನ್ ಜವಾಬ್ದಾರಿಯನ್ನು ವಹಿಸಿಕೊಂಡರು ಮತ್ತು ಜಿತೇಶ್ ಶರ್ಮಾ ಅವರೊಂದಿಗೆ 52 ರನ್‌ಗಳ ನಿರ್ಣಾಯಕ ಜೊತೆಯಾಟವಾಡಿದರು. ಜಿತೇಶ್ 33 ರನ್‌ಗಳ ಇನ್ನಿಂಗ್ಸ್ ಆಡಿದರು. ಒಂದೆಡೆ, ಲಿವಿಂಗ್‌ಸ್ಟೋನ್ 54 ರನ್‌ಗಳ ಇನ್ನಿಂಗ್ಸ್‌ನಲ್ಲಿ 1 ಬೌಂಡರಿ ಮತ್ತು 5 ಸಿಕ್ಸರ್‌ಗಳನ್ನು ಬಾರಿಸಿದರು. ಮತ್ತೊಂದೆಡೆ, ಟಿಮ್ ಡೇವಿಡ್ ಕೊನೆಯ ಓವರ್‌ನವರೆಗೂ ಕ್ರೀಸ್‌ನಲ್ಲಿಯೇ ಇದ್ದು 18 ಎಸೆತಗಳಲ್ಲಿ 32 ರನ್‌ಗಳ ಸ್ಫೋಟಕ ಇನ್ನಿಂಗ್ಸ್ ಆಡಿದರು.

ಆರ್‌ಸಿಬಿ ತಂಡದ ಮಾಜಿ ಆಟಗಾರ, ಈಗ ಗುಜರಾತ್ ಟೈಟಾನ್ಸ್ ಪರ ಆಡುತ್ತಿರುವ ಮೊಹಮ್ಮದ್ ಸಿರಾಜ್ ಬೌಲಿಂಗ್‌ನಲ್ಲಿ ಅಬ್ಬರಿಸಿದ್ದಾರೆ. ಅವರು 4 ಓವರ್‌ಗಳಲ್ಲಿ ಕೇವಲ 19 ರನ್‌ಗಳಿಗೆ 3 ವಿಕೆಟ್‌ಗಳನ್ನು ಪಡೆದರು. ಗುಜರಾತ್ ಪರ ಎರಡನೇ ಅತ್ಯಂತ ಯಶಸ್ವಿ ಬೌಲರ್ ಸಾಯಿ ಕಿಶೋರ್ ಆಗಿದ್ದರು. ಅವರು ಇಬ್ಬರು ಆರ್‌ಸಿಬಿ ಬ್ಯಾಟ್ಸ್‌ಮನ್‌ಗಳನ್ನು ಪೆವಿಲಿಯನ್‌ಗೆ ಕಳುಹಿಸಿದರು. ಅವರಲ್ಲದೆ, ಅರ್ಷದ್ ಖಾನ್, ಪ್ರಸಿದ್ಧ್ ಕೃಷ್ಣ ಮತ್ತು ಇಶಾಂತ್ ಶರ್ಮಾ ಕೂಡ ತಲಾ ಒಂದು ವಿಕೆಟ್ ಪಡೆದರು.

## ನಮ್ಮ ಟೆನ್ಷನ್ ರಿಷಭ್ ಪಂತ್‌ನ ಟ್ರೋಲ್ ಮಾಡಿದ ಪಂಜಾಬ್

13ನೇ ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ಲಕ್ನೋ ಸೂಪರ್ ಜೈಂಟ್ಸ್ ತಂಡವು 20 ಓವರ್‌ಗಳಲ್ಲಿ 7 ವಿಕೆಟ್ ಕಳೆದುಕೊಂಡು 171 ರನ್ ಕಲೆಹಾಕಿತು. ಈ ಗುರಿಯನ್ನು ಬೆನ್ನತ್ತಿದ ಪಂಜಾಬ್ ಕಿಂಗ್ಸ್ ತಂಡವು 16.2 ಓವರ್‌ಗಳಲ್ಲಿ 2 ವಿಕೆಟ್ ಕಳೆದುಕೊಂಡು 177 ರನ್ ಬಾರಿಸಿ 8 ವಿಕೆಟ್‌ಗಳ ಅಮೋಘ ಜಯ ಸಾಧಿಸಿದೆ.

ಇಂಡಿಯನ್ ಪ್ರೀಮಿಯರ್ ಲೀಗ್ ಸೀಸನ್-18ರ 13ನೇ ಪಂದ್ಯದಲ್ಲಿ ಪಂಜಾಬ್ ಕಿಂಗ್ಸ್ ತಂಡ ಭರ್ಜರಿ ಜಯ ಸಾಧಿಸಿದೆ. ಏಕಾನ ಸ್ಟೇಡಿಯಂನಲ್ಲಿ ನಡೆದ ಈ ಪಂದ್ಯದಲ್ಲಿ ಟಾಸ್ ಗೆದ್ದ ಪಂಜಾಬ್ ಪಡೆಯ ನಾಯಕ ಶ್ರೇಯಸ್ ಅಯ್ಯರ್ ಬೌಲಿಂಗ್ ಆಯ್ದುಕೊಂಡಿದ್ದರು. ಅದರಂತೆ ಮೊದಲು ಬ್ಯಾಟ್ ಮಾಡಿದ ಲಕ್ನೋ ಸೂಪರ್ ಜೈಂಟ್ಸ್ 20 ಓವರ್‌ಗಳಲ್ಲಿ 7 ವಿಕೆಟ್ ಕಳೆದುಕೊಂಡು 171 ರನ್ ಕಲೆಹಾಕಿದ್ದರು. 172 ರನ್‌ಗಳ ಗುರಿ ಬೆನ್ನತ್ತಿದ ಪಂಜಾಬ್ ಕಿಂಗ್ಸ್ ಪರ ಪ್ರಭ್‌ಸಿಮ್ರಾನ್ ಸಿಂಗ್ 69 ರನ್ ಬಾರಿಸಿದರೆ, ನಾಯಕ ಶ್ರೇಯಸ್ ಅಯ್ಯರ್ ಅಜೇಯ 52 ರನ್ ಸಿಡಿಸಿದರು. ಈ ಮೂಲಕ ಕೇವಲ 16.2 ಓವರ್‌ಗಳಲ್ಲಿ 177 ರನ್ ಬಾರಿಸಿ ಪಂಜಾಬ್ ಕಿಂಗ್ಸ್ ತಂಡವು 8 ವಿಕೆಟ್‌ಗಳ ಜಯ ಸಾಧಿಸಿದೆ.

ಪಂತ್ ನೀಡಿದ್ದ ಹೇಳಿಕೆಗೆ ಕಿಂಗ್ಸ್ ಉತ್ತರ

ಈ ಗೆಲುವಿನ ಬೆನ್ನಲ್ಲೇ ಪಂಜಾಬ್ ಕಿಂಗ್ಸ್, ಲಕ್ನೋ ಸೂಪರ್ ಜೈಂಟ್ಸ್ ತಂಡದ ನಾಯಕ ರಿಷಭ್ ಪಂತ್ ಅವರನ್ನು ಟ್ರೋಲ್ ಮಾಡಿರುವುದು ವಿಶೇಷ. ಸೋಷಿಯಲ್ ಮೀಡಿಯಾದಲ್ಲಿ, ನಮ್ಮ ಟೆನ್ಷನ್ ಐಪಿಎಲ್ ಹರಾಜಿನಲ್ಲಿಯೇ ಕೊನೆಗೊಂಡಿತ್ತು ಎನ್ನುವ ಪೋಸ್ಟ್ ಹಂಚಿಕೊಳ್ಳುವ ಮೂಲಕ ಪಂಜಾಬ್ ಕಿಂಗ್ಸ್ ಅಡ್ಮಿನ್ ಪಂತ್ ಅವರ ಕಾಲೆಳೆದಿದ್ದಾರೆ. ಇಂತಹದೊಂದು ಪೋಸ್ಟ್ ಹಂಚಿಕೊಳ್ಳಲು ಮುಖ್ಯ ಕಾರಣ ಈ ಹಿಂದೆ ರಿಷಭ್ ಪಂತ್ ನೀಡಿರುವ ಹೇಳಿಕೆ. ಐಪಿಎಲ್ ಮೆಗಾ ಹರಾಜಿನಲ್ಲಿ ಕಾಣಿಸಿಕೊಂಡಿದ್ದ ಪಂತ್ ಅವರನ್ನು ಲಕ್ನೋ ಸೂಪರ್ ಜೈಂಟ್ಸ್ ಫ್ರಾಂಚೈಸಿ ಖರೀದಿಸಿದ್ದರು. 27 ಕೋಟಿ ರೂ.ಗೆ ಲಕ್ನೋ ಸೂಪರ್ ಜೈಂಟ್ಸ್ ಪಾಲಾಗಿದ್ದ ಪಂತ್ ಸಂದರ್ಶನವೊಂದರಲ್ಲಿ, ಐಪಿಎಲ್ ಹರಾಜಿನಲ್ಲಿ ನನಗೆ ಒಂದೇ ಒಂದು ಟೆನ್ಷನ್ ಇತ್ತು. ಅದು ಪಂಜಾಬ್ ಎಂದು ನಗಾಡಿದ್ದರು. ಅಂದರೆ ಪಂಜಾಬ್ ಕಿಂಗ್ಸ್ ಫ್ರಾಂಚೈಸಿ ನನ್ನನ್ನು ಖರೀದಿಸುತ್ತಾರೆ ಎಂಬ ಭಯ ನನ್ನಲ್ಲಿತ್ತು ರಿಷಭ್ ಪಂತ್ ಹೇಳಿದ್ದರು. ಇದೀಗ ಲಕ್ನೋ ಸೂಪರ್ ಜೈಂಟ್ಸ್ ತಂಡವನ್ನು ಅವರ ತವರಿನಲ್ಲೇ ಮಣಿಸಿ ಪಂಜಾಬ್ ಕಿಂಗ್ಸ್ ಮೇಲುಗೈ ಸಾಧಿಸಿದೆ. ಇದರ ಬೆನ್ನಲ್ಲೇ ಶ್ರೇಯಸ್ ಅಯ್ಯರ್ ಅವರ ವಿಡಿಯೋವನ್ನು ಹಂಚಿಕೊಳ್ಳುವ ಮೂಲಕ ನಮ್ಮ ಟೆನ್ಷನ್ ಐಪಿಎಲ್ ಹರಾಜಿನಲ್ಲಿಯೇ ಕೊನೆಗೊಂಡಿತ್ತು ಎಂದು ಪಂಜಾಬ್ ಕಿಂಗ್ಸ್ ಸೋಷಿಯಲ್ ಮೀಡಿಯಾದಲ್ಲಿ ಪೋಸ್ಟ್ ಹಂಚಿಕೊಂಡಿದೆ. ಈ ಮೂಲಕ ಲಕ್ನೋ ಸೂಪರ್ ಜೈಂಟ್ಸ್ ತಂಡದ ನಾಯಕನಾದ ಬಳಿಕ ರಿಷಭ್ ಪಂತ್ ನೀಡಿದ್ದ ಹೇಳಿಕೆಗೆ ಪಂಜಾಬ್ ಕಿಂಗ್ಸ್ ಟ್ರೋಲ್ ಮೂಲಕ ಉತ್ತರ ನೀಡಿದ್ದಾರೆ.



## ಮುಂಬೈ ತಂಡವನ್ನು ತೊರೆಯಲಿರುವ ಯಶಸ್ವಿ ಜೈಸ್ವಾಲ್



ದೇಶೀಯ ಸೀಸನ್‌ನಲ್ಲಿ ಗೋವಾ ಪರ

ಟೀಮ್ ಇಂಡಿಯಾದ ಸ್ಟಾರ್ ಬ್ಯಾಟರ್ ಯಶಸ್ವಿ ಜೈಸ್ವಾಲ್ ಮುಂಬೈ ತಂಡವನ್ನು ತೊರೆದು, ಮುಂಬರುವ ದೇಶೀಯ ಸೀಸನ್‌ನಲ್ಲಿ ಗೋವಾ ಪರ ಕಣಕ್ಕಿಳಿಯಲು ನಿರ್ಧರಿಸಿದ್ದಾರೆ. ಇದರ ಮೊದಲ ಹೆಜ್ಜೆಯಾಗಿ ಈಗಾಗಲೇ ಅವರು ಮುಂಬೈ ಕ್ರಿಕೆಟ್ ಅಸೋಸಿಯೇಷನ್‌ಗೆ ಎನ್ ಒಸಿಗಾಗಿ ಪತ್ರ ಬರೆದಿದ್ದಾರೆ. ಭಾರತದ ಆಟಗಾರನಿಂದ ನಿರಾಕ್ಷೇಪಣಾ ಪ್ರಮಾಣಪತ್ರ ಕೋರಿ ಇಮೇಲ್ ಬಂದಿದೆ. ಅವರು ತಮ್ಮ ಇಮೇಲ್‌ನಲ್ಲಿ ವೈಯಕ್ತಿಕ ಕಾರಣಗಳಿಂದಾಗಿ ಮುಂಬರುವ ಸೀಸನ್‌ನಲ್ಲಿ ಗೋವಾ ರಾಜ್ಯ ತಂಡದ ಪರ ಕಣಕ್ಕಿಳಿಯುವುದಾಗಿ ತಿಳಿಸಿದ್ದಾರೆ ಎಂದು ಮುಂಬೈ ಕ್ರಿಕೆಟ್ ಅಸೋಸಿಯೇಷನ್‌ನ ಮೂಲಗಳು ತಿಳಿಸಿದ್ದಾರೆ. ಇತ್ತ ಗೋವಾ ಕ್ರಿಕೆಟ್ ಅಸೋಸಿಯೇಷನ್ ಅಧಿಕಾರಿಗಳು ಸಹ ಈ ಬೆಳವಣಿಗೆಯನ್ನು ದೃಢಪಡಿಸಿದ್ದಾರೆ. ನಾವು ಯಶಸ್ವಿ ಜೈಸ್ವಾಲ್ ಅವರೊಂದಿಗೆ ಮಾತನಾಡಿದ್ದೇವೆ. ಅವರು ಮುಂಬರುವ ದೇಶೀಯ ಸೀಸನ್‌ನಲ್ಲಿ ಗೋವಾ ಪರ ಆಡಲಿದ್ದಾರೆ ಎಂದು ತಿಳಿಸಿದ್ದಾರೆ.

ಇದಾಗ್ಯೂ ಅವರಿಗೆ ಮುಂಬೈ ಕ್ರಿಕೆಟ್ ಅಸೋಸಿಯೇಷನ್‌ನಿಂದ ನಿರಾಕ್ಷೇಪಣಾ ಪ್ರಮಾಣ ಪತ್ರ ಸಿಕ್ಕಿಲ್ಲ. ಎನ್‌ಒಸಿ ಲೆಟರ್ ಸಿಕ್ಕ ಬಳಿಕ ಅವರನ್ನು ಮುಂದಿನ ಸೀಸನ್‌ಗೆ ಗೋವಾ ತಂಡದಲ್ಲಿ ಸೇರಿಸಿಕೊಳ್ಳಲು ನಿರ್ಧರಿಸಿದ್ದೇವೆ ಎಂದು ಜಿಸಿಎ ಕಾರ್ಯದರ್ಶಿ ಶಂಬಾ ನಾಯಕ್ ದೇಸಾಯಿ ತಿಳಿಸಿದ್ದಾರೆ. ಇದಕ್ಕೂ ಮುನ್ನ ಮುಂಬೈ ಪರ ಕಣಕ್ಕಿಳಿದಿದ್ದ ಅರ್ಜುನ್ ತೆಂಡೂಲ್ಕರ್ ಅವರು ಗೋವಾ ಪರ ವಲಸೆ ಹೋಗಿದ್ದರು. ಇದೀಗ ಯಶಸ್ವಿ ಜೈಸ್ವಾಲ್ ಕೂಡ ಮುಂಬೈ ತಂಡವನ್ನು ತೊರೆಯಲು ನಿರ್ಧರಿಸಿದ್ದಾರೆ.

**ದೇಶೀಯ ವೃತ್ತಿಜೀವನ:** ಯಶಸ್ವಿ ಜೈಸ್ವಾಲ್ 2019 ರಲ್ಲಿ ಮುಂಬೈ ಪರ ಪಾದಾರ್ಪಣೆ ಮಾಡಿದ್ದರು. ಛತ್ತೀಸ್‌ಗಢ ವಿರುದ್ಧ ತಮ್ಮ ಮೊದಲ ಪ್ರಥಮ ದರ್ಜೆ ಪಂದ್ಯವಾಡಿದ್ದ ಅವರು, ಈವರೆಗೆ 36 ಪಂದ್ಯಗಳಲ್ಲಿ ಕಾಣಿಸಿಕೊಂಡಿದ್ದಾರೆ. ಈ ವೇಳೆ 60 ಕ್ಕಿಂತ ಹೆಚ್ಚಿನ ಸರಾಸರಿಯಲ್ಲಿ ಒಟ್ಟು 3712 ರನ್ ಗಳಿಸಿದ್ದಾರೆ. ಇನ್ನು ಮುಂಬೈ ಪರ ಯಶಸ್ವಿ ಜೈಸ್ವಾಲ್ ಬ್ಯಾಟ್‌ನಿಂದ 13 ಶತಕಗಳು ಹಾಗೂ 12 ಅರ್ಧಶತಕಗಳು ಮೂಡಿಬಂದಿವೆ. ಅಲ್ಲದೆ ಮುಂಬೈ ಪರ ಅಬ್ಬರಿಸುವ ಮೂಲಕವೇ ಯಶಸ್ವಿ ಟೀಮ್ ಇಂಡಿಯಾದಲ್ಲಿ ಅವಕಾಶಗಿಟ್ಟಿಸಿಕೊಂಡಿದ್ದರು. ಆದರೀಗ ವೈಯುಕ್ತಿಕ ಕಾರಣಗಳಿಂದಾಗಿ ಮುಂಬೈ ತಂಡವನ್ನು ತೊರೆದು ಗೋವಾ ಪರ ಕಣಕ್ಕಿಳಿಯಲು ನಿರ್ಧರಿಸಿದ್ದಾರೆ. ಸದ್ಯ ಯಶಸ್ವಿ ಜೈಸ್ವಾಲ್ ಐಪಿಎಲ್ ಆಡುತ್ತಿದ್ದು, ರಾಜಸ್ಥಾನ್ ರಾಯಲ್ ಪರ ಆರಂಭಿಕನಾಗಿ ಕಣಕ್ಕಿಳಿಯುತ್ತಿದ್ದಾರೆ. ಆದರೆ ಕಳೆದ ಮೂರು ಪಂದ್ಯಗಳಲ್ಲಿ ಆರಂಭಿಕನಾಗಿ ಬ್ಯಾಟ್ ಬೀಸಿರುವ ಜೈಸ್ವಾಲ್ ಕಡೆಯಿಂದ ನಿರೀಕ್ಷಿತ ಪ್ರದರ್ಶನ ಮೂಡಿಬಂದಿಲ್ಲ.

## ಅಭಿರ್ ಗುಲಾಲ್ ಎಂಎನ್‌ಎಸ್ ವಿರೋಧ



ಪಾಕಿಸ್ತಾನಿ ನಟ ಫವಾದ್ ಖಾನ್ ಮತ್ತೆ ಭಾರತೀಯ ಚಿತ್ರರಂಗಕ್ಕೆ ಮರಳಿದ್ದಾರೆ. ಫವಾದ್ ಖಾನ್ 'ಅಭಿರ್ ಗುಲಾಲ್' ಹಿಂದಿ ಸಿನಿಮಾದಲ್ಲಿ ನಟಿಸಿದ್ದು, ಸಿನಿಮಾದಲ್ಲಿ ವಾಣಿ ಕಪೂರ್ ನಾಯಕಿ. ಸಿನಿಮಾದ ಟೀಸರ್ ಇತ್ತೀಚೆಗಷ್ಟೆ ಬಿಡುಗಡೆ ಆಗಿದೆ. ಸಿನಿಮಾ ಬಿಡುಗಡೆ ದಿನಾಂಕವೂ ಹತ್ತಿರವೇ ಇದೆ. ಆದರೆ ಇದೀಗ ಸಿನಿಮಾ ಬಿಡುಗಡೆಗೆ ಅಡ್ಡಿ-ಆತಂಕ ಎದುರಾಗಿದೆ. ಎಂಎನ್‌ಎಸ್ ಈ ಸಿನಿಮಾದ ಬಿಡುಗಡೆಗೆ ಅವಕಾಶ ನೀಡುವುದಿಲ್ಲ ಎಂದಿದೆ. ಎಂಎನ್‌ಎಸ್‌ನ ಅಮೆಯ್ ಕೋಪ್ಕರ್ ಮಾತನಾಡಿ, 'ನಮಗೆ ಇತ್ತೀಚಗಷ್ಟೆ ಸಿನಿಮಾದ ಬಿಡುಗಡೆ ವಿಷಯ ತಿಳಿದು ಬಂತು. ನಾವು ಖಂಡಿತವಾಗಿಯೂ 'ಅಭಿರ್ ಗುಲಾಲ್' ಸಿನಿಮಾ ಮಹಾರಾಷ್ಟ್ರದಲ್ಲಿ ಬಿಡುಗಡೆ ಆಗಲು ಬಿಡುವುದಿಲ್ಲ. ಈ ಸಿನಿಮಾದ ಕುರಿತು ಇನ್ನಷ್ಟು ಮಾಹಿತಿಯನ್ನು ನಾವು ಕಲೆ ಹಾಕುತ್ತಿದ್ದೇವೆ. ಆ ನಂತರ ನಾವು ಈ ಸಿನಿಮಾ ಬಗ್ಗೆ ವಿವರವಾದ ಹೇಳಿಕೆ ನೀಡಲಿದ್ದೇವೆ' ಎಂದಿದ್ದಾರೆ. ಎಂಎನ್‌ಎಸ್ ಮಾತ್ರವೇ ಅಲ್ಲದೆ ಶಿವಸೇನಾ ಸಹ ಈ ಸಿನಿಮಾದ ಬಿಡುಗಡೆಗೆ ವಿರೋಧ ವ್ಯಕ್ತಪಡಿಸಿದೆ.

ಫವಾದ್ ಖಾನ್ ಪಾಕಿಸ್ತಾನದ ನಟರಾಗಿದ್ದು ಸುಮಾರು 10 ವರ್ಷದ ಬಳಿಕ ಅವರು ಭಾರತೀಯ ಚಿತ್ರರಂಗಕ್ಕೆ ಮರಳಿದ್ದಾರೆ. ಈ ಹಿಂದೆ ಫವಾದ್ ಖಾನ್, ಕರಣ್ ಜೋಹರ್ ನಿರ್ದೇಶನದ 'ಯೇ ದಿಲ್ ಹೇ ಮುಷ್ಕಿಲ್' ಸಿನಿಮಾನಲ್ಲಿ ನಟಿಸಿದ್ದರು. ಆ ಸಿನಿಮಾದ ಬಿಡುಗಡೆ ವೇಳೆ ಇದೇ ಎಂಎನ್‌ಎಸ್ ಮತ್ತು ಶಿವಸೇನೆ ಪ್ರತಿಭಟನೆಗಳನ್ನು ಮಾಡಿ, ಚಿತ್ರಮಂದಿರಕ್ಕೆ ಲಗ್ಗೆ ಇಟ್ಟು ಗಲಾಟೆ ಎಬ್ಬಿಸಿತ್ತು. ಅದಾದ ಬಳಿಕ ಪಾಕಿಸ್ತಾನಿ ನಟರು ಭಾರತೀಯ ಸಿನಿಮಾದಲ್ಲಿ ನಟಿಸದಂತೆ ಅನಧಿಕೃತ ನಿಷೇಧವೇ ಹೇರಲಾಗಿತ್ತು. ಆದರೆ 2023 ರಲ್ಲಿ ಪಾಕಿಸ್ತಾನಿ ನಟರು ಭಾರತದಲ್ಲಿ ನಟಿಸದಂತೆ ಹಾಗೂ ಪಾಕಿಸ್ತಾನಿ ಸಿನಿಮಾಗಳು ಭಾರತದಲ್ಲಿ ಬಿಡುಗಡೆ ಆಗದಂತೆ ನಿಷೇಧ ಹೇರುವಂತೆ ಸುಪ್ರೀಂಕೋರ್ಟ್‌ಗೆ ಅರ್ಜಿ ಸಲ್ಲಿಸಲಾಗಿತ್ತು. ಆದರೆ ಅರ್ಜಿಯನ್ನು ಸುಪ್ರೀಂ ತಳ್ಳಿ ಹಾಕಿತು. ಹೀಗಾಗಿ ಇತ್ತೀಚೆಗೆ ಪಾಕಿಸ್ತಾನಿ ಸಿನಿಮಾಗಳು ಭಾರತದಲ್ಲಿ ಬಿಡುಗಡೆ ಆಗುತ್ತಿವೆ. ಫಹಾದ್ ಖಾನ್ ಸಹ ಸುಮಾರು 10 ವರ್ಷದ ಬಳಿಕ ಭಾರತೀಯ ಸಿನಿಮಾ ರಂಗಕ್ಕೆ ರೀ ಎಂಟ್ರಿ ನೀಡಿದ್ದಾರೆ.



## ಬಿಂದಾಸ್ ಆಗಿ ಹೆಜ್ಜೆ ಹಾಕಿದ ಐಶ್ವರ್ಯಾ

ಬಾಲಿವುಡ್ ಬೆಡಗಿ ಐಶ್ವರ್ಯಾ ರೈ ಮತ್ತು ಅಭಿಷೇಕ್ ಬಚ್ಚನ್ ದಂಪತಿಯ ಡಿವೋರ್ಸ್ ವಿಚಾರ ಆಗಾಗ ಚರ್ಚೆಗೆ ಗ್ರಾಸವಾಗುತ್ತಲೇ ಇರುತ್ತದೆ. ಹೀಗಿರುವಾಗ ಡಿವೋರ್ಸ್ ಸುದ್ದಿ ಬಂದೇ ಇಲ್ಲ ಎಂಬಷ್ಟು ಹ್ಯಾಪಿಯಾಗಿ ಪತಿ ಅಭಿಷೇಕ್ ಜೊತೆ ಐಶ್ವರ್ಯಾ ಹೆಜ್ಜೆ ಹಾಕಿದ್ದಾರೆ. ಇತ್ತೀಚೆಗೆ ಪತ್ನಿ ಐಶ್ವರ್ಯಾ ಮತ್ತು ಪುತ್ರಿ ಆರಾಧ್ಯ ಜೊತೆ ಅಭಿಷೇಕ್ ಬಚ್ಚನ್ ಅವರು ಸಂಬಂಧಿಕರ ಮದುವೆಗೆ ಹಾಜರಿ ಹಾಕಿದ್ದರು. ಈ ವೇಳೆ, ಐಶ್ವರ್ಯಾ ಜೋಡಿ ಕಜರಾರೇ ಹಿಂದಿ ಹಾಡಿಗೆ ಮಸ್ತ್ ಆಗಿ ಡ್ಯಾನ್ಸ್ ಮಾಡಿದ್ದಾರೆ. ಅಭಿಷೇಕ್ ಮತ್ತು ಐಶ್ವರ್ಯಾ ಕಜರಾರೆ ಹಾಡಿನ ಹುಕ್ ಸ್ಟೆಪ್ಸ್ ಹಾಕ್ತಾ ಎಂಜಾಯ್ ಮಾಡಿದ್ದಾರೆ. ಇವರೊಂದಿಗೆ ಪುತ್ರಿ ಆರಾಧ್ಯ ಕೂಡ ಡ್ಯಾನ್ಸ್ ಮಾಡಿದ್ದಾರೆ. ಈ ಮೂಲಕ ಡಿವೋರ್ಸ್ ಸುದ್ದಿ ಹಬ್ಬಿಸುವವರ ಬಾಯಿ ಮುಚ್ಚಿಸಿದ್ದಾರೆ. ಈ ವಿಡಿಯೋ ನೋಡಿ ಫ್ಯಾನ್ಸ್ ಫುಲ್ ಖುಷಿಪಟ್ಟಿದ್ದಾರೆ. ಅಂದಹಾಗೆ, ಅಭಿಷೇಕ್ ಮತ್ತು ಐಶ್ವರ್ಯಾ ರೈ ಅವರು 2007ರಲ್ಲಿ ಮದುವೆಯಾದರು. ಮುದ್ದಾದ ಮಗಳು ಆರಾಧ್ಯ ಜೊತೆ ಈ ಜೋಡಿ ಖುಷಿಯಿಂದ ಜೀವನ ನಡೆಸುತ್ತಿದ್ದಾರೆ. ಹೊಸ ಪಾತ್ರಗಳ ಮೂಲಕ ಅಭಿಷೇಕ್ ಚಿತ್ರರಂಗದಲ್ಲಿ ಆಯಕ್ಟೀವ್ ಆಗಿದ್ದಾರೆ. ಐಶ್ವರ್ಯಾ ರೈ ಅವರು ಮದುವೆ ಬಳಿಕ ಕಮ್ಮಿ ಸಿನಿಮಾ ಮಾಡಿದ್ರೂ ಕೂಡ ವಿಭಿನ್ನ ಎಂದೆನಿಸುವ ಪಾತ್ರಗಳ ಮೂಲಕ ಬರುತ್ತಿದ್ದಾರೆ. ಅದಕ್ಕೆ 'ಪೊನ್ನಿಯನ್ ಸೆಲ್ವನ್ 1' ಮತ್ತು 'ಪೊನ್ನಿಯನ್ ಸೆಲ್ವನ್ 2' ಸಿನಿಮಾಗಳೇ ಸಾಕ್ಷಿ.



## ಸನ್ನಿ ಡಿಯೋಲ್ ಜೊತೆ ಸೊಂಟ ಬಳುಕಿಸಿದ ಊರ್ವಶಿ



ಕನ್ನಡದ 'ಐರಾವತ' ನಟಿ ಊರ್ವಶಿ ರೌಟೇಲಾ ಮತ್ತೆ ಸುದ್ದಿಯಲ್ಲಿದ್ದಾರೆ. ಬೋಲ್ಡ್ ಆಗಿ ಹೆಜ್ಜೆ ಹಾಕುವ ಮೂಲಕ ಇಂಟರ್‌ನೆಟ್‌ಗೆ ಬೆಂಕಿ ಹಚ್ಚಿದ್ದಾರೆ. ಬಾಲಿವುಡ್ ನಟ ಸನ್ನಿ ಡಿಯೋಲ್ ಸಿನಿಮಾದಲ್ಲಿ ನಟಿ ಸೊಂಟ ಬಳುಕಿಸಿದ್ದಾರೆ. ನಾಯಕಿಯಾಗಿ ಸಿನಿಮಾಗಳಲ್ಲಿ ಬ್ಯುಸಿ ಇರುವಾಗಲೇ ಐಟಂ ಹಾಡಿಗೆ ಊರ್ವಶಿ ಡ್ಯಾನ್ಸ್ ಮಾಡಿದ್ದಾರೆ. ಸನ್ನಿ ಡಿಯೋಲ್ ನಟನೆಯ 'ಜಟ್' ಸಿನಿಮಾದಲ್ಲಿ 'ಟಚ್ ಕಿಯಾ' ಹಾಡಿಗೆ ಅವರು ಸೊಂಟ ಬಳುಕಿಸಿದ್ದಾರೆ. ನಟಿಯು ಮಾದಕವಾಗಿ ಡ್ಯಾನ್ಸ್ ಮಾಡಿರೋದನ್ನು ನೋಡಿ ಪಡ್ಡೆಹುಡುಗರು ಫಿದಾ ಆಗಿದ್ದಾರೆ. ಸದ್ಯ ಈ ಸಾಂಗ್ ಯೂಟ್ಯೂಬ್‌ನಲ್ಲಿ ಟ್ರೆಂಡಿಂಗ್‌ನಲ್ಲಿದೆ. 'ಜಟ್' ಚಿತ್ರ ಜಬರ್‌ದಸ್ತ್ ಆಗಿರುವ ಆಕ್ಷನ್ಸ್ ಒಳಗೊಂಡಿರುವ ಸಿನಿಮಾ ಆಗಿದೆ. ಸನ್ನಿ ಡಿಯೋಲ್ ಜೊತೆ ರಣದೀಪ್ ಹೂಡಾ, ರೆಜಿನಾ, ಸೆಯಾಮಿ ಸೇರಿದಂತೆ ಅನೇಕರು ನಟಿಸಿದ್ದಾರೆ.

## ವೇದಿಕೆ ಮೇಲೆ ಗಿಟಾರ್‌ನಿಂದ ಹಲ್ಲೆ ಮಾಡಿದ ಕಾರ್ತಿಕ್

ಈ ವಿಡಿಯೋ ಲೀಕ್ ಆಗಿದೆ

ಬಾಲಿವುಡ್ ನಟ ಕಾರ್ತಿಕ್ ಆರ್ಯನ್ ಪ್ರಸ್ತುತ 'ಆಶಿಕಿ 3' ಸಿನಿಮಾದಲ್ಲಿ ಬ್ಯುಸಿಯಾಗಿದ್ದಾರೆ. ಇದರ ನಡುವೆ ಅವರ ವಿಡಿಯೋವೊಂದು ವೈರಲ್ ಆಗ್ತಿದೆ. ಶ್ರೀಲೀಲಾ ಎದುರೇ ವೇದಿಕೆ ಮೇಲೆ ಗಿಟಾರ್‌ನಿಂದ ವ್ಯಕ್ತಿಯೊಬ್ಬನ ಮೇಲೆ ಕಾರ್ತಿಕ್ ಹಲ್ಲೆ ಮಾಡಿರುವ ತುಣುಕು ಸೋಶಿಯಲ್ ಮೀಡಿಯಾದಲ್ಲಿ ವೈರಲ್ ಆಗಿದೆ. ಈ ವಿಡಿಯೋ ನೋಡಿ ಫ್ಯಾನ್ಸ್ ಶಾಕ್ ಆಗಿದ್ದಾರೆ. ಶ್ರೀಲೀಲಾಗೆ 'ನೀನೇ ನನ್ನ ಜೀವನ' ಎಂದ ಬಾಲಿವುಡ್ ನಟ ಕಾರ್ತಿಕ್ ಆರ್ಯನ್ 'ಆಶಿಕಿ 3' ಸಿನಿಮಾದಲ್ಲಿ ಕಾರ್ತಿಕ್ ಮತ್ತು ಶ್ರೀಲೀಲಾ ಜೋಡಿಯಾಗಿ ನಟಿಸುತ್ತಿದ್ದಾರೆ. ಈ ಸಿನಿಮಾದ ಚಿತ್ರೀಕರಣದ ವಿಡಿಯೋವೊಂದು ಲೀಕ್ ಆಗಿದೆ. ಶ್ರೀಲೀಲಾ ಎದುರು ವೇದಿಕೆಯಲ್ಲಿ ವ್ಯಕ್ತಿಯೊಬ್ಬನ ಮೇಲೆ ಕಾರ್ತಿಕ್ ಆರ್ಯನ್ ಗಿಟಾರ್‌ನಿಂದ ಹೊಡೆದಿದ್ದಾರೆ. ಬಳಿಕ ಆತನನ್ನು ವೇದಿಕೆಯಿಂದ ಒದ್ದು ಕೆಳಗೆ ಬೀಳಿಸಿದ್ದಾರೆ. ಶೂಟಿಂಗ್‌ನಲ್ಲಿ ಚಿತ್ರೀಕರಿಸಿದ ಈ ವಿಡಿಯೋ ಲೀಕ್ ಆಗಿದೆ. ಅನೇಕರು ಇದನ್ನು ನಿಜವಾಗಿ ನಡೆದಿದೆ ಎಂದು ಭಾವಿಸಿದ್ದಾರೆ. ಆದರೆ ಇದು 'ಆಶಿಕಿ 3' ಚಿತ್ರದ ವಿಡಿಯೋ ಆಗಿದೆ. ಪಶ್ಚಿಮ ಬಂಗಾಳದಲ್ಲಿ ಈ ಚಿತ್ರದ ಚಿತ್ರೀಕರಣ ಕಳೆದ ಒಂದು ವಾರಗಳಿಂದ ನಡೆಯುತ್ತಿದೆ. ಗಾಯಕನ ಪಾತ್ರದಲ್ಲಿ ನಟಿಸುತ್ತಿರೋ ಕಾರ್ತಿಕ್‌ಗೆ ಶ್ರೀಲೀಲಾ ಜೊತೆಯಾಗಿದ್ದಾರೆ.



## ಬದುಕು ಕೊಟ್ಟ ರೆಸ್ಟೋರೆಂಟ್‌ಗೆ ಶೈನ್ ಶೆಟ್ಟಿ ಗುಡ್ ಬೈ

ಫ್ಯಾನ್ಸ್‌ಗೆ ಬಹಿರಂಗ ಪತ ಬರೆದ ನಟ

ಶೈನ್ ಶೆಟ್ಟಿ ನಟನಾಗಿ ಮಾತ್ರವಲ್ಲ ಹೋಟೆಲ್ ಉದ್ಯಮ ಕ್ಷೇತ್ರದಲ್ಲಿಯೂ ಗುರುತಿಸಿಕೊಂಡವರು. ಇದೀಗ ಅವರು ಬದುಕು ಕೊಟ್ಟ ರೆಸ್ಟೋರೆಂಟ್‌ಗೆ ಗುಡ್ ಬೈ ಹೇಳಿದ್ದಾರೆ. ಈ ಕುರಿತು ಶೈನ್ ಬಹಿರಂಗವಾಗಿ ಪತ್ರ ಬರೆದಿದ್ದಾರೆ.

ಸೋಶಿಯಲ್ ಮೀಡಿಯಾ ಪೋಸ್ಟ್‌ನಲ್ಲಿ, ಜೀವನದ ಕೆಲವೊಂದು ಪ್ರಯಾಣ ನಮ್ಮ ಅಸ್ತಿತ್ವವನ್ನು ತೋರಿಸಿ ನಮ್ಮ ವ್ಯಕ್ತಿತ್ವವನ್ನು ಎತ್ತಿ ಹಿಡಿಯುತ್ತೆ ನನ್ನ ಲೈಫ್ ಅಲ್ಲಿ ಅದು ಗಲ್ಲಿ ಕಿಚನ್. ಜೀವನ ಸಾಗಿಸೋಕೆ ಅಂತ ಶುರು ಮಾಡಿದ ಒಂದು ಪುಟ್ಟ ದೋಸೆ ಕ್ಯಾಂಪ್ ನೀವೆಲ್ಲ ಇಷ್ಟಪಟ್ಟು ಕೊಂಡಾಡಿ ಎರಡು ಬ್ರಾಂಚ್‌ಗಳ ಹೋಟೆಲ್ ಮಟ್ಟಕ್ಕೆ ಪ್ರೀತಿಯಿಂದ ಬೆಳೆಸಿದ್ರಿ. ಆ ಪ್ರೀತಿ ವಿಶ್ವಾಸಕ್ಕೆ ನಾನು ಸದಾ ಚಿರಋಣಿ ಎಂದು ಶೈನ್ ಪತ್ರ ಬರೆದಿದ್ದಾರೆ. ಬೆಳೆಯುತ್ತಾ ಬೆಳಸ್ತಾ ಮುಂದಕ್ಕೆ ಸಾಗೋದೆ ಜೀವನ ಅಲ್ವಾ. ಹಾಗಾಗಿ, ಮುಂದೊಂದಿಷ್ಟು ಕೆಲಸ ಮಾಡೋದ್ ಇದೆ. ಅದಕ್ಕಾಗಿ ಹೊಸದೊಂದು ಪ್ರಯಾಣ ಶುರು ಮಾಡಬೇಕಾಗಿದೆ. ಹಾಗಾಗಿ 6 ವರ್ಷಗಳ 'ಗಲ್ಲಿ ಕಿಚನ್' ಪ್ರಯಾಣಕ್ಕೆ ವಿದಾಯ ಹೇಳೋ ಸಮಯ. ವಿದಾಯ ಹೇಳೋದು ಇಲ್ಲಿ ಬರದಷ್ಟು ಸುಲಭ ಅಲ್ಲ ನಿಮಗೂ ಗೊತ್ತು. ಆದರೆ ಜೀವನದಲ್ಲಿ ದಿಕ್ಕು ಮತ್ತು ಗುರಿ ಬದಲಾದಾಗ ಅದಕ್ಕೆ ಹೊಂದಿಕೊಂಡು ಹೋಗೋದು ಅನಿವಾರ್ಯ. ಗಲ್ಲಿ ಕಿಚನ್ ಅನ್ನು ನನ್ನಂತೆ ಆಸಕ್ತಿ ಇರೋ ಯುವ ಪ್ರತಿಭೆಗೆ ಹಸ್ತಾಂತರ ಮಾಡಿದ್ದೇನೆ ಎಂದು ತಿಳಿಸಿದ್ದಾರೆ. ಈ ಕನಸಿಗೆ ಹೊತ್ತಿದ್ದ ಜ್ವಾಲೆ ಇನ್ನು ಮುಂದೆ ಹೊಸ ಪಾಲುದಾರನ ಕೈಯಲ್ಲಿ ಹೊಸ ರೀತಿಯಲ್ಲಿ ಮುಂದುವರಿಯಲಿದೆ. ಶ್ರದ್ದೆ ಇಂದ ಜನರ ಪ್ರೀತಿನ ಉಳ್ಕೊಂಡು ಬೆಳಸ್ಕೊಂಡು ಹೋಗ್ಲಿ ಅಂತ ಆಶಿಸ್ತೀನಿ. ತಿಂದುಂಡು ಹೊಗಳಿದ, ತಪ್ಪಿದ್ದಲ್ಲಿ ತಿದ್ದಿದ ನನ್ನೆಲ್ಲ ಅಭಿಮಾನಿಗಳೇ, ಭೋಜನ ಪ್ರಿಯರೇ, ಗಲ್ಲಿ ಕಿಚನ್ ಕುಟುಂಬಸ್ಥರೆ, ಮತ್ತೊಂದು ಪ್ರಯತ್ನದೊಂದಿಗೆ ಮರಳಿ ಬರುವೆ, ಮತ್ತೊಮ್ಮೆ ನಿಮ್ಮೆಲ್ಲರ ಸಹಕಾರ ಪ್ರೀತಿ ಬೇಡುವೆ ಎಂದಿದ್ದಾರೆ.




Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news

ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966